24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 19 | ನವದೆಹಲಿ | ಬೆಲೆ ₹10 | ಜುಲೈ 15 2026, ಬುಧವಾರ

## ಒಳಪುಟಗಳಲ್ಲಿ

ಕ್ಷೇತ್ರ ಮರುವಿಂಗಡಣೆ ಮಸೂದೆಗಾಗಿ ಸಂಖ್ಯಾಬಲ ಹೆಚ್ಚಿಸಿಕೊಳ್ಳಲು ಮೋದಿ ಸರ್ಕಾರದ ಕಸರತ್ತು - ಪು.4

ಸಿಎಂ ಮಾಧ್ಯಮ ಕಾರ್ಯದರ್ಶಿ-3 ರಾಘವೇಂದ್ರ ಭಟ್ ನೇಮಕಾತಿ ಅಮಾನತಿನಲ್ಲಿರಿಸಿ ಸರ್ಕಾರ ಆದೇಶ - ಪು.5

# ಜು.20, 21ಕ್ಕೆ ರಾಜ್ಯ ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ?

**ನವದೆಹಲಿ, ಜು.14:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಈ ವಾರಾಂತ್ಯಕ್ಕಾಗುವ ಸಾಧ್ಯತೆಗಳಿದೆ. ಜುಲೈ 19ರಂದು ಹೈಕಮಾಂಡ್ ನಾಯಕರ ಜೊತೆಗೆ ದೆಹಲಿಯಲ್ಲಿ ಮಹತ್ವದ ಸಭೆ ನಡೆಯುವ ಸಾಧ್ಯತೆಗಳಿದೆ ಎಂದು ಕಾಂಗ್ರೆಸ್ ಉನ್ನತ ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ಜುಲೈ 18ರ ಸಂಜೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ತೆರಳಲಿದ್ದಾರೆ. ಜುಲೈ 19ರಿಂದ ಎರಡು ದಿನಗಳ ಕಾಲ ಕಾಂಗ್ರೆಸ್ ಹೈಕಮಾಂಡ್ ಜೊತೆ ಸರಣಿ ಮಾತುಕತೆ ನಡೆಯುವ ಸಾಧ್ಯತೆ ಇದ್ದು, ಸಭೆಯ

### ಜುಲೈ 19ರಂದು ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಸಭೆ

ಬಳಿಕ ಜುಲೈ 20 ಅಥವಾ 21ರಂದು ಹೊಸ ಸಚಿವರು ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆ ಇದೆ. ಸಚಿವ ಸಂಪುಟದಲ್ಲಿ ಇರುವ ಎಲ್ಲ ಖಾಲಿ ಸ್ಥಾನಗಳನ್ನು ಭರ್ತಿ ಮಾಡದೆ, ಮೂರು ಸ್ಥಾನಗಳನ್ನು ಖಾಲಿ ಉಳಿಸಿ ಉಳಿದ ಸ್ಥಾನಗಳನ್ನು ಭರ್ತಿ ಮಾಡುವ ಆಯ್ಕೆಯೂ ಹೈಕಮಾಂಡ್ ಪರಿಗಣನೆಯಲ್ಲಿದೆ ಎನ್ನಲಾಗಿದೆ.

ಪ್ರಾದೇಶಿಕ, ಜಾತಿ ಮತ್ತು ರಾಜಕೀಯ ಸಮತೋಲನವನ್ನು ಗಮನದಲ್ಲಿಟ್ಟುಕೊಂಡು ಅಂತಿಮ ಪಟ್ಟಿಯನ್ನು ರೂಪಿಸಲಾಗುತ್ತಿದೆ.

**ಸಚಿವಾಕಾಂಕ್ಷಿಗಳ ಲಾಬಿ:** ಸಂಪುಟ ವಿಸ್ತರಣೆಯ ಸುಳಿವಿನ ಬೆನ್ನಲ್ಲೇ ಸಚಿವ ಸ್ಥಾನಾಕಾಂಕ್ಷಿಗಳ ಚಟುವಟಿಕೆ ದೆಹಲಿಯಲ್ಲಿ ಚುರುಕುಗೊಂಡಿದೆ. ಹಲವು ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಈಗಾಗಲೇ ದೆಹಲಿಯಲ್ಲಿ ನೆಲೆಸಿದ್ದು, ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ತಮ್ಮ ಪರವಾಗಿ ಲಾಬಿ ನಡೆಸುತ್ತಿದ್ದಾರೆ.

ಶಾಸಕರಾದ ಶಿವರಾಜ್ ತಂಗಡಗಿ, ಎಸ್.ಎಸ್. ಮಲ್ಲಿಕಾರ್ಜುನ, ನರೇಂದ್ರಸ್ವಾಮಿ, ರಾಘವೇಂದ್ರ ಹಿಟ್ನಾಳ್, ಸಿ.ಎಸ್. ನಾಡಗೌಡ, ಎಂ.ಸಿ. ಸುಧಾಕರ್, ಟಿ.ಬಿ. ಜಯಚಂದ್ರ, ಎಚ್.ಆರ್. ಗವಿಯಪ್ಪ, ಶಿವಾನಂದ ಪಾಟೀಲ, ಹಂಪಯ್ಯ ನಾಯಕ, ಆರತಿ ಕೃಷ್ಣ, ಸುಧಾಮ ದಾಸ್, ಸಲೀಂ ಅಹ್ಮದ್, ಜೆ.ಟಿ. ಪಾಟೀಲ್, ರಾಜೇಂದ್ರ ರಾಜಣ್ಣ, ಎನ್.ಎಸ್. ಬೋಸರಾಜು, ಬಸವನಗೌಡ ಬಾದರ್ಲಿ, ಬಸನಗೌಡ ತುರ್ವಿಹಾಳ, ಬಸನಗೌಡ ಭಂಡಾರಿ, ಪುಟ್ಟಣ್ಣ, ಡಿ.ಟಿ. ಶ್ರೀನಿವಾಸ್, ಎ.ಎಸ್. ಪೊನ್ನಣ್ಣ ದೆಹಲಿಯಲ್ಲಿದ್ದಾರೆ.ಇದರ ಜೊತೆಗೆ ಲಕ್ಷ್ಮಣ ಸವದಿ, ಕೆ. ನಾರಾಯಣಸ್ವಾಮಿ ಹಾಗೂ ಜಮೀರ್ ಅಹ್ಮದ್ ಖಾನ್ ಕೂಡ ದೆಹಲಿಗೆ ಆಗಮಿಸಿ ಲಾಬಿ ನಡೆಸುವ ಸಾಧ್ಯತೆ ಇದೆ.

## ಇಂದು ದೆಹಲಿಯಲ್ಲಿ ಕಾವೇರಿ ನೀರು ನಿರ್ವಹಣಾ ಸಮಿತಿಯ ಸಭೆ

ನವದೆಹಲಿ, ಜು.14: ಕಾವೇರಿ ನದಿ ನೀರಿನ ಹಂಚಿಕೆ ಕುರಿತು ಮಹತ್ವದ ಬೆಳವಣಿಗೆಯಾಗಿ ಕಾವೇರಿ ನೀರು ನಿರ್ವಹಣಾ ಸಮಿತಿ ಸಭೆ ಬುಧವಾರ ದೆಹಲಿಯಲ್ಲಿ ನಡೆಯಲಿದ್ದು, ಕರ್ನಾಟಕ ಮತ್ತು ತಮಿಳುನಾಡು ರಾಜ್ಯಗಳು ತಮ್ಮ ವಾದಗಳನ್ನು ಮಂಡಿಸಲಿವೆ. ಈ ಬಾರಿ ರಾಜ್ಯದಲ್ಲಿ ಮುಂಗಾರು ಮಳೆ ತೀವ್ರ ಕೊರತೆಯಾಗಿರುವ ಹಿನ್ನೆಲೆಯಲ್ಲಿ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದು ಕರ್ನಾಟಕ ಸ್ಪಷ್ಟ ನಿಲುವು ತೆಗೆದುಕೊಳ್ಳಲಿದ್ದು, ಸಂಕಷ್ಟ ಸೂತ್ರ ಅನುಸರಿಸುವಂತೆ ಸಮಿತಿಗೆ ಮನವಿ ಮಾಡಲಿದೆ. ಮತ್ತೊಂದೆಡೆ, ಕಾವೇರಿ ನೀರು ಹಂಚಿಕೆ ವೇಳಾಪಟ್ಟಿಯಂತೆ ತನ್ನ ಪಾಲಿನ ನೀರನ್ನು ಬಿಡುಗಡೆ ಮಾಡಬೇಕೆಂದು ತಮಿಳುನಾಡು ಪಟ್ಟು ಹಿಡಿದಿದೆ. ಜೂನ್ ತಿಂಗಳಿಗೆ 9.19 ಟಿಎಂಸಿ ಹಾಗೂ ಜುಲೈ ತಿಂಗಳಿಗೆ 31.24 ಟಿಎಂಸಿ ಸೇರಿ ಒಟ್ಟು 40.43 ಟಿಎಂಸಿ ನೀರನ್ನು ಕರ್ನಾಟಕ ಹರಿಸಬೇಕೆಂಬುದು ತಮಿಳುನಾಡಿನ ವಾದವಾಗಿದೆ. ಆದರೆ ಕಳೆದ ಎರಡು ತಿಂಗಳಲ್ಲಿ ಕರ್ನಾಟಕದಿಂದ ತಮಿಳುನಾಡಿಗೆ ಕೇವಲ 4 ಟಿಎಂಸಿ ನೀರು ಮಾತ್ರ ಹರಿದಿದ್ದು, ಉಳಿದ ಪ್ರಮಾಣದ ನೀರನ್ನು ತಕ್ಷಣ ಬಿಡುಗಡೆ ಮಾಡುವಂತೆ ತಮಿಳುನಾಡು ಸಮಿತಿಯ ಮುಂದೆ ಒತ್ತಾಯಿಸಲಿದೆ. ಇದಕ್ಕೆ ಪ್ರತಿಯಾಗಿ, ರಾಜ್ಯದ ಕಾವೇರಿ ಜಲಾಶಯಗಳಲ್ಲಿ ನೀರಿನ ಸಂಗ್ರಹ ತೀವ್ರವಾಗಿ ಕುಸಿದಿದ್ದು, ಸದ್ಯ ಕುಡಿಯುವ ನೀರಿನ ಅಗತ್ಯಕ್ಕೆ ಮಾತ್ರ ನೀರು ಲಭ್ಯವಿದೆ ಎಂದು ಕರ್ನಾಟಕ ವಾದಿಸಲಿದೆ. ಕೃಷಿ ಉದ್ದೇಶಕ್ಕೂ ನೀರನ್ನು ಬಳಸುತ್ತಿಲ್ಲ. ಬೆಂಗಳೂರು ಸೇರಿದಂತೆ ದೊಡ್ಡ ನಗರಗಳಿಗೆ ಕುಡಿಯುವ ನೀರು ಪೂರೈಸುವುದೇ ಈಗ ಮೊದಲ ಆದ್ಯತೆ ಎಂದು ರಾಜ್ಯ ತನ್ನ ನಿಲುವು ಮಂಡಿಸಲಿದೆ. ಇನ್ನೂ ಮುಂದಿನ ದಿನಗಳಲ್ಲಿ ಸಮರ್ಪಕ ಮುಂಗಾರು ಮಳೆಯಾಗುವ ವಿಶ್ವಾಸವೂ ಇಲ್ಲ. ತಮಿಳುನಾಡಿಗೆ ಹಿಂಗಾರು ಮಳೆಯಿಂದ ನೀರಿನ ಲಭ್ಯತೆ ಸಾಧ್ಯವಾಗಲಿದ್ದು, ಕರ್ನಾಟಕಕ್ಕೆ ಮುಂಗಾರು ಕೈಕೊಟ್ಟಿರುವುದರಿಂದ ಈಗಿನ ಪರಿಸ್ಥಿತಿಯಲ್ಲಿ ನೀರು ಬಿಡಲು ಸಾಧ್ಯವಿಲ್ಲ ಎಂಬ ವಾದವನ್ನು ರಾಜ್ಯ ಮುಂದಿರಿಸಲಿದೆ. ಉಭಯ ರಾಜ್ಯಗಳ ವಾದಗಳನ್ನು ಆಲಿಸಿದ ಬಳಿಕ, ಪ್ರಸ್ತುತ ಪರಿಸ್ಥಿತಿಯಲ್ಲಿ ಕರ್ನಾಟಕ ತಮಿಳುನಾಡಿಗೆ ಎಷ್ಟು ಪ್ರಮಾಣದ ನೀರು ಬಿಡುಗಡೆ ಮಾಡಬೇಕು ಎಂಬ ಬಗ್ಗೆ ಕಾವೇರಿ ನೀರು ನಿರ್ವಹಣಾ ಸಮಿತಿ ಅಂತಿಮ ನಿರ್ಧಾರ ಕೈಗೊಳ್ಳಲಿದೆ.

## ಸಿಎಂ ಪ್ರಧಾನ ಸಲಹೆಗಾರರಾಗಿ ಜಿ.ಸಿ.ಚಂದ್ರಶೇಖರ್ ನೇಮಕ

**ಬೆಂಗಳೂರು, ಜು.14:** ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಅವರನ್ನು ಮುಖ್ಯಮಂತ್ರಿಯವರ ಪ್ರಧಾನ ಸಲಹೆಗಾರರನ್ನಾಗಿ ರಾಜ್ಯ ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ.



ಮುಖ್ಯ ಮಂತ್ರಿಯವರಿಗೆ ರಾಜಕೀಯ ವ್ಯವಹಾರಗಳು ಹಾಗೂ ಸಾರ್ವಜನಿಕ ಕುಂದುಕೊರತೆಗಳಿಗೆ ಸಂಬಂಧಿಸಿದ ವಿಷಯದಲ್ಲಿ ಸಹಾಯ ಮಾಡಲು ಚಂದ್ರಶೇಖರ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಖ್ಯಮಂತ್ರಿಯವರ ಪ್ರಧಾನ ಸಲಹೆಗಾರರನ್ನಾಗಿ ನೇಮಕ ಮಾಡಲಾಗಿದೆ. ಯಾವುದೇ ರೀತಿಯ ಸಂಭಾವನೆ, ಭತ್ಯೆ, ಗೌರವಧನ ಅಥವಾ ಇತರ ಯಾವುದೇ ಸೌಲಭ್ಯಗಳು ಅವರಿಗೆ ಇಲ್ಲದೆ, ಮುಖ್ಯಮಂತ್ರಿಯವರಿಗೆ ಚಂದ್ರಶೇಖರ್ ಅವರು ಸಲಹೆಗಾರರಾಗಿರುತ್ತಾರೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹೊರಡಿಸಿರುವ ಆದೇಶದಲ್ಲಿ ತಿಳಿಸಲಾಗಿದೆ.

## ಬೆಂಗಳೂರಿನಲ್ಲಿ ದೇಶದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ ವಿವಿ ಸ್ಥಾಪನೆ

**ಬೆಂಗಳೂರು, ಜು.14:** ಸಿಲಿಕಾನ್ ಸಿಟಿಯಲ್ಲಿ ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲಯ ಆರಂಭಿಸುವುದಾಗಿ ಸಿಎಂ ಡಿ.ಕೆ. ಶಿವಕುಮಾರ್ ಘೋಷಿಸಿದರು.

ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರದಲ್ಲಿ ನಡೆದ ಗೂಗಲ್ ಐಒ ಕನೆಕ್ಟ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಕರ್ನಾಟಕವನ್ನು ಎಐ-ನೇಟಿವ್ ರಾಜ್ಯವನ್ನಾಗಿ ರೂಪಿಸುವುದು ಮತ್ತು ಆಡಳಿತ ಹಾಗೂ ಸಾರ್ವಜನಿಕ ಸೇವೆಗಳ ವಿತರಣೆಯಲ್ಲಿ ಎಐ ತಂತ್ರಜ್ಞಾನವನ್ನು ಸಂಯೋಜಿಸುವುದು. ಎಐ ಪ್ರತಿಭೆಗಳನ್ನು ಅಭಿವೃದ್ಧಿಪಡಿಸಲು, ಸುಧಾರಿತ ಸಂಶೋಧನೆಯನ್ನು ಉತ್ತೇಜಿಸಲು ಮತ್ತು ಶಿಕ್ಷಣ ಸಂಸ್ಥೆಗಳು, ಉದ್ಯಮ ಹಾಗೂ ಸರ್ಕಾರದ ನಡುವೆ ಸಹಯೋಗವನ್ನು ಬೆಳೆಸಲು ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗುವುದು ಎಂದು ಹೇಳಿದರು. ಎಐ-ಸಹಾಯದ ಬೋಧನೆಯ ಮೂಲಕ ಶಿಕ್ಷಣ ಕ್ಷೇತ್ರ, ರೋಗಗಳ ಮುಂಚಿತ ಪತ್ತೆ ಮತ್ತು ಉತ್ತಮ ವೈದ್ಯಕೀಯ ಬೆಂಬಲದ ಮೂಲಕ ಆರೋಗ್ಯ ಕ್ಷೇತ್ರ, ರೈತರಿಗೆ ಎಐ-ಚಾಲಿತ ಸಲಹಾ ಸೇವೆಗಳ ಮೂಲಕ ಕೃಷಿ ಕ್ಷೇತ್ರ, ವೇಗದ ಮತ್ತು ಜನಸ್ನೇಹಿ ವಿತರಣೆಯ ಮೂಲಕ ಸರ್ಕಾರಿ ಸೇವೆಗಳು, ಎಐ ಪರಿಕರಗಳನ್ನು ಬಳಸಿಕೊಂಡು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವ ಮೂಲಕ ಸಣ್ಣ ಉದ್ಯಮಗಳಲ್ಲಿ ಬದಲಾವಣೆ ತರಲಾಗುವುದು ಎಂದು ತಿಳಿಸಿದರು.

ಭಾರತದ ನಾವೀನ್ಯತೆಯ ರಾಜಧಾನಿ ಮತ್ತು ವಿಶ್ವದ ಅತ್ಯಂತ ರೋಮಾಂಚಕ ತಂತ್ರಜ್ಞಾನ ಪರಿಸರ ವ್ಯವಸ್ಥೆಗಳಲ್ಲಿ ಒಂದಾದ ಬೆಂಗಳೂರಿನಲ್ಲಿ ನಡೆಯುತ್ತಿರುವ ಗೂಗಲ್ ಐ/ಓ ಕನೆಕ್ಟ್ ಇಂಡಿಯಾ 2026 ಕಾರ್ಯಕ್ರಮಕ್ಕೆ ನಿಮ್ಮನ್ನು ಸ್ವಾಗತಿಸಲು ನಾನು ಅತ್ಯಂತ ಹೆಮ್ಮೆಪಡುತ್ತೇನೆ. ಇಂತಹ ಒಂದು ಕಾರ್ಯಕ್ರಮವು ಇಷ್ಟು ಸಹಜವಾಗಿ ಮೂಡಿಬರಲು ವಿಶ್ವದಲ್ಲೇ ಕೆಲವೇ ಕೆಲವು ಸ್ಥಳಗಳಿವೆ. ಬೆಂಗಳೂರಿನಲ್ಲಿ ತಂತ್ರಜ್ಞಾನ ಎಂಬುದು



**ಸಿಎಂ ಡಿ.ಕೆ. ಶಿವಕುಮಾರ್ ಘೋಷಣೆ**

ದೈನಂದಿನ ಜೀವನದ ಭಾಗವಾಗಿದೆ ಎಂದರು.

ಪ್ರತಿ ಪೀಳಿಗೆಯೂ ಮಾನವ ನಾಗರಿಕತೆಯ ಹಾದಿಯನ್ನೇ ಬದಲಾಯಿಸುವ ಒಂದು ತಂತ್ರಜ್ಞಾನವನ್ನು ಬಳುವಳಿಯಾಗಿ ಪಡೆಯುತ್ತದೆ. ಸ್ಟೀಮ್ ಇಂಜಿನ್ ಕೈಗಾರಿಕಾ ರಂಗವನ್ನು ಕ್ರಾಂತಿಗೊಳಿಸಿತು. ವಿದ್ಯುತ್ ನಗರಗಳನ್ನು ಮಾರ್ಪಡಿಸಿತು. ಇಂಟರ್ನೆಟ್ ಸಂಪರ್ಕ ಮಾಧ್ಯಮವನ್ನೇ ಬದಲಾಯಿಸಿತು. ಮೊಬೈಲ್ ತಂತ್ರಜ್ಞಾನವು ಎಲ್ಲವನ್ನೂ ಸುಲಭವಾಗಿ ಲಭ್ಯವಾಗುವಂತೆ ಮಾಡಿತು. ಇಂದು, ಕೃತಕ ಬುದ್ಧಿಮತ್ತೆಯು ಸ್ವತಃ ಮಾನವ ಸಾಮರ್ಥ್ಯವನ್ನೇ ಮಾರ್ಪಡಿಸುವ ಭರವಸೆ ನೀಡುತ್ತಿದೆ. ನಾನು ಹೋದಲ್ಲೆಲ್ಲಾ ಜನರು ಕೇವಲ ಮತ್ತೊಂದು ತಂತ್ರಜ್ಞಾನವಾಗಿ ಮಾತ್ರವಲ್ಲದೆ, ಬಹುಶಃ ನಮ್ಮ ಪೀಳಿಗೆಯನ್ನು ವ್ಯಾಖ್ಯಾನಿಸುವ ಪ್ರಮುಖ ಶಕ್ತಿಯಾಗಿ ಬಗ್ಗೆ ಮಾತನಾಡುತ್ತಾರೆ ಎಂದರು.

ಇಂದು ಕರ್ನಾಟಕವು ಭಾರತದ ಸಾಫ್ಟ್‌ವೇರ್ ರಫ್ತಿನ 40%ರಷ್ಟು ಕೊಡುಗೆ ನೀಡುತ್ತಿದೆ. ಬೆಂಗಳೂರು 17,000ಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳಿಗೆ ನೆಲೆಯಾಗಿದೆ. ಇದು ಭಾರತದ ಸ್ಟಾರ್ಟ್‌ಅಪ್ ರಾಜಧಾನಿಯಾಗಿದೆ.

ಇಡೀ ಪ್ರಪಂಚಕ್ಕಾಗಿ ಉತ್ಪನ್ನಗಳನ್ನು ವಿನ್ಯಾಸಗೊಳಿಸಲು, ಇಂಜಿನಿಯರಿಂಗ್ ಮತ್ತು ಹೊಸ ಆವಿಷ್ಕಾರಗಳನ್ನು ಮಾಡಲು ಸಾವಿರಾರು ಜಾಗತಿಕ ಸಾಮರ್ಥ್ಯ ಕೇಂದ್ರಗಳು ಕರ್ನಾಟಕವನ್ನು ಆರಿಸಿಕೊಂಡಿವೆ ಎಂದು ಡಿ.ಕೆ. ಶಿವಕುಮಾರ್ ವಿವರಿಸಿದರು. ಈ ಪ್ರಯಾಣದಲ್ಲಿ ಗೂಗಲ್ ಅತ್ಯದ್ಭುತ ಪಾಲುದಾರನಾಗಿದೆ. ಕಳೆದ ಎರಡು ದಶಕಗಳಿಂದ, ಗೂಗಲ್ ಬೆಂಗಳೂರನ್ನು ಕೇವಲ ಒಂದು ಕಚೇರಿಯ ಸ್ಥಳವಾಗಿ ಮಾತ್ರವಲ್ಲದೆ, ಇಂಜಿನಿಯರಿಂಗ್, ಸಂಶೋಧನೆ ಮತ್ತು ನಾವೀನ್ಯತೆಗಾಗಿ ತನ್ನ ಅತ್ಯಂತ ಪ್ರಮುಖ ಜಾಗತಿಕ ಕೇಂದ್ರಗಳಲ್ಲಿ ಒಂದಾಗಿ ಆಯ್ಕೆ ಮಾಡಿಕೊಂಡಿದೆ. "ಭಾರತದಲ್ಲಿ ಗೂಗಲ್ 18 ಸಾವಿರ ಸಿಬ್ಬಂದಿ ಹೊಂದಿದ್ದು, ಅದರಲ್ಲಿ 12 ಸಾವಿರ ಸಿಬ್ಬಂದಿ ಬೆಂಗಳೂರಿನಲ್ಲಿದ್ದಾರೆ. ಇದರೊಂದಿಗೆ ಭಾರತದಲ್ಲಿ ಗೂಗಲ್ ನ ಸಿಬ್ಬಂದಿಯ 2/3 ಪ್ರಮಾಣ ಬೆಂಗಳೂರಿನಲ್ಲಿದೆ. ಇದು ನಮ್ಮ ನಗರದ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ. ನಮ್ಮ ಜೊತೆಗೆ ಇಷ್ಟು ಉತ್ತಮ ಸಂಬಂಧ ಹೊಂದಿರುವ ಗೂಗಲ್ ನಾಯಕರು, ನೀತಿ ರೂಪಕರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ" ಎಂದರು.

"ಗೂಗಲ್ ಜೊತೆಗಿನ ಈ ಸಂಬಂಧವನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ಯಲು, ಬಯಸುತ್ತೇವೆ. ಎಲ್ಲಾ ಸಹಕಾರ ನೀಡಲು ನಾವು ಬದ್ಧರಾಗಿದ್ದೇವೆ. ಎಐ ತಂತ್ರಜ್ಞಾನ ಮೂಲಕ ನಗರದ ಸಂಚಾರ ಸಮಸ್ಯೆಗಳನ್ನು ನಿವಾರಿಸೋಣ. 25 ವರ್ಷಗಳ ಹಿಂದೆ ಬೆಂಗಳೂರಿನಲ್ಲಿ 70 ಲಕ್ಷ ಜನಸಂಖ್ಯೆ ಇತ್ತು. ಈಗ 1.40 ಕೋಟಿಗೆ ಏರಿಕೆಯಾಗಿದೆ. ಹೀಗಾಗಿ ಸಂಚಾರ ದಟ್ಟಣೆ ಸಮಸ್ಯೆ ಇದ್ದು, ಇದನ್ನು ನಿವಾರಿಸಲು ಪರಿಹಾರ ಹುಡುಕುತ್ತಿದ್ದೇವೆ" ಎಂದರು. ಜತೆಗೂಡುವುದು ಆರಂಭ, ಜತೆಗೂಡಿ ಚರ್ಚಿಸುವುದು ಪ್ರಗತಿ, ಜತೆಗೂಡಿ ಕೆಲಸ ಮಾಡುವುದು ಯಶಸ್ಸು. ಹೀಗಾಗಿ ನಾವೆಲ್ಲರೂ ಒಟ್ಟಾಗಿ ಕರ್ನಾಟಕ ಹಾಗೂ ದೇಶದ ಪ್ರಗತಿಗೆ ಶ್ರಮಿಸೋಣ ಎಂದು ಡಿ.ಕೆ. ಶಿವಕುಮಾರ್ ಕರೆ ನೀಡಿದರು.

## ರಾಜ್ಯಕ್ಕೆ ಬರ ಅಧ್ಯಯನ ತಂಡ ನಿಯೋಜಿಸಿ: ಪ್ರಧಾನಿಗೆ ಸಿಎಂ ಮನವಿ

**ಬೆಂಗಳೂರು, ಜು.14:** ಎಲ್ ನೀನೋ ಪರಿಣಾಮದಿಂದಾಗಿ ಕರ್ನಾಟಕ ರಾಜ್ಯದಲ್ಲಿ ಶೇ. 30ರಷ್ಟು (ಜು.11ರ ಮಾಹಿತಿ)ಮಳೆ ಕೊರತೆಯಾಗಿದ್ದು, ರಾಜ್ಯದಲ್ಲಿನ ಬರ ಪರಿಸ್ಥಿತಿ ಅಧ್ಯಯನಕ್ಕೆ ತಂಡ ನಿಯೋಜಿಸುವಂತೆ ಪ್ರಧಾನಿ ಮೋದಿಗೆ ಸಿಎಂ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ. ಈ ಸಂಬಂಧ ಪ್ರಧಾನಿಗೆ ಪತ್ರ ಬರೆದು ರಾಜ್ಯದಲ್ಲಿನ ಮಳೆ ಕೊರತೆ ಪರಿಸ್ಥಿತಿ ವಿವರಿಸಿದ್ದಾರೆ.

ಕೇಂದ್ರ ಸರ್ಕಾರ ನಿಯೋಜಿತ ತಂಡದ ಭೇಟಿಯು ವಿಕೋಪಕ್ಕೆ ತಿರುಗುತ್ತಿರುವ ಬರ ಪರಿಸ್ಥಿತಿಯ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ರಾಜ್ಯ ಸರ್ಕಾರದ ಪ್ರಯತ್ನಗಳಿಗೆ ಬಲವನ್ನು ನೀಡುತ್ತದೆ"ಎಂದು ವಿವರಿಸಿದ್ದಾರೆ.

ಕರ್ನಾಟಕವು ತನ್ನ ಸ್ವಾಭಾವಿಕ ಕೃಷಿ-ಹವಾಮಾನ ಮತ್ತು ಜಲವಿಜ್ಞಾನದ ಗುಣಲಕ್ಷಣಗಳಿಂದಾಗಿ ದೇಶದಲ್ಲೇ ಅತ್ಯಂತ ಹೆಚ್ಚು ಬರಪೀಡಿತ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯವು 10 ವಿಭಿನ್ನ ಕೃಷಿ-ಹವಾಮಾನ ವಲಯಗಳನ್ನು ಹೊಂದಿದ್ದು, ಅದರ ಭೌಗೋಳಿಕ ಪ್ರದೇಶದ ಸುಮಾರು ಶೇ.77ರಷ್ಟು ಭಾಗವು ಶುಷ್ಕ ಮತ್ತು ಅರೆ-ಶುಷ್ಕ ಪ್ರದೇಶಗಳ ವ್ಯಾಪ್ತಿಗೆ ಬರುತ್ತದೆ. ರಾಜ್ಯವು ಸುಮಾರು 84.79 ಲಕ್ಷ ಹೆಕ್ಟೇರ್ ಮಳೆ ಆಶ್ರಿತ ಕೃಷಿ ಭೂಮಿ ಹೊಂದಿದ್ದು, ಇದು ರಾಜಸ್ಥಾನದ ನಂತರ ದೇಶದಲ್ಲೇ ಎರಡನೇ ಸ್ಥಾನದಲ್ಲಿದೆ. ಈ ಕಾರಣದಿಂದಾಗಿ ಇಲ್ಲಿನ ಕೃಷಿ ಉತ್ಪಾದನೆಯು ಮುಂಗಾರು ಮಳೆಯನ್ನೇ ಹೆಚ್ಚು ಅವಲಂಬಿಸಿದೆ ಎಂದು ಹೇಳಿದ್ದಾರೆ.

**18 ಜಿಲ್ಲೆ, 141 ತಾಲ್ಲೂಕುಗಳಲ್ಲಿ ತೀವ್ರ ಮಳೆ ಕೊರತೆ:** 2026ರ ನೈಋತ್ಯ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಲಿದೆ ಎಂಬ ಹವಾಮಾನ ಇಲಾಖೆ ಮುನ್ಸೂಚನೆಯಂತೆ ರಾಜ್ಯದಲ್ಲಿ ಮಳೆ ಕೊರತೆ ಕಂಡುಬಂದಿದೆ. ಜೂನ್ 20ರ ವೇಳೆಗೆ ಮುಂಗಾರು ರಾಜ್ಯ ವ್ಯಾಪಿಸಿತ್ತಾದರೂ ಜು.11ರ ವೇಳೆಗೆ ಒಟ್ಟು 31 ಜಿಲ್ಲೆಗಳಲ್ಲಿ 18 ಜಿಲ್ಲೆಗಳು ತೀವ್ರ ಕೊರತೆ ಎದುರಿಸಿವೆ. ಎಂದು ತಿಳಿಸಿದ್ದಾರೆ.

**ಬೇಳೆಕಾಳು ಉತ್ಪಾದನೆ ಮೇಲೆ ಪರಿಣಾಮ:** ಮಳೆಯ ಖಾತರಿ ಇಲ್ಲದ ಕಾರಣ, ರೈತರು ಬಿತ್ತನೆಗೆ ಹಿಂಜರಿಯುತ್ತಿದ್ದು ತೀವ್ರ ಅನಿಶ್ಚಿತತೆಯನ್ನು ಎದುರಿಸುತ್ತಿದ್ದಾರೆ. ಕರ್ನಾಟಕವು ದೇಶದಲ್ಲಿ ಬೇಳೆಕಾಳುಗಳನ್ನು ಉತ್ಪಾದಿಸುವ ಪ್ರಮುಖ ರಾಜ್ಯಗಳಲ್ಲಿ ಒಂದಾಗಿದೆ. ಪ್ರಸ್ತುತ ಬರಗಾಲದ ಪರಿಸ್ಥಿತಿಯಿಂದಾಗಿ ಉತ್ಪಾದನೆಯಲ್ಲಿ ಯಾವುದೇ ಗಮನಾರ್ಹ ಕುಸಿತ ಉಂಟಾದರೂ, ಅದು ರಾಷ್ಟ್ರೀಯ ಮಟ್ಟದಲ್ಲಿ ಬೇಳೆಕಾಳುಗಳ, ವಿಶೇಷವಾಗಿ ತೊಗರಿಬೇಳೆ ಲಭ್ಯತೆ ಮತ್ತು ಬೆಲೆಗಳ ಮೇಲೆ ವ್ಯಾಪಕ ಪರಿಣಾಮ ಬೀರಲಿದೆ ಎಂದು ಹೇಳಿದ್ದಾರೆ.

"ರಾಜ್ಯ ಸರ್ಕಾರವು ಉದ್ಭವಿಸುತ್ತಿರುವ ಪರಿಸ್ಥಿತಿಯನ್ನು ನಿಭಾಯಿಸಲು ಅಗತ್ಯವಿರುವ ಎಲ್ಲಾ ಸಂಭಾವ್ಯ ಕ್ರಮಗಳನ್ನು ಕೈಗೊಂಡಿದೆ. ಎಂದು ತಿಳಿಸಿದ್ದಾರೆ.

## ಹೈಕಮಾಂಡ್ ಬೇಡಿಕೆ ಈಡೇರಿಕೆಗೆ ಬಿಡದಿ ಭೂಮಿ ಮೇಲೆ ಕಣ್ಣು



**ಬೆಂಗಳೂರು, ಜು.14:** ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಸಿಎಂ ಡಿ.ಕೆ. ಶಿವಕುಮಾರ್ ವಿರುದ್ಧ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಕುರ್ಚಿಯಿಂದ ಕೆಳಗಿಳಿಸಲು ಮತ್ತು ಕಾಂಗ್ರೆಸ್ ಹೈಕಮಾಂಡ್ ಅನ್ನು ಒಲಿಸಿಕೊಳ್ಳಲು ಡಿ.ಕೆ. ಶಿವಕುಮಾರ್ ಕೊಟ್ಟ ಭರವಸೆ ಉಳಿಸಿಕೊಳ್ಳಲು ಹೊರಟಿದ್ದಾರೆ. ಚುನಾವಣಾ ಫಂಡ್ ಆಶ್ವಾಸನೆ ಈಡೇರಿಸಿಕೊಳ್ಳಲು ಬಿಡದಿಯ 7 ಸಾವಿರ ಎಕರೆ ಜಾಗವನ್ನು ನಿವೇಶನ ಮಾಡಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಹೈಕಮಾಂಡ್‌ಗೆ ಕೊಟ್ಟ ಆಶ್ವಾಸನೆ ಈಡೇರಿಸಲು ಬಡ ರೈತರ ಹೊಟ್ಟೆಯ ಮೇಲೆ ಹೊಡೆಯಬೇಡಿ ಎಂದು ಗುಡುಗಿದರು.

- **ಮುಖ್ಯಮಂತ್ರಿ ವಿರುದ್ಧ ಮಾಜಿ ಪ್ರಧಾನಿ ದೇವೇಗೌಡ ಆರೋಪ**
- **ಯೋಜನೆ ಕೈಬಿಡದಿದ್ದರೆ ವಿಧಾನಸೌಧದ ಎದುರು ಧರಣಿ ಎಚ್ಚರಿಕೆ**

ಈ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಒಪ್ಪಿದ್ದಾರೆ ಎಂದು ಡಿಕೆಶಿ ಸುಳ್ಳು ಪ್ರಸ್ತಾಪ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ದೇವೇಗೌಡರು, ಈ ಯೋಜನೆಯನ್ನು ತಕ್ಷಣವೇ ರದ್ದು ಮಾಡುವಂತೆ ಸಿಎಂ ಶಿವಕುಮಾರ್ ಅವರಿಗೆ 11 ಪುಟಗಳ ಸುದೀರ್ಘ ಪತ್ರ ಬರೆದಿದ್ದೇನೆ. ಒಂದು ವೇಳೆ ಸರ್ಕಾರ ಈ ಯೋಜನೆಯನ್ನು ಕೈಬಿಡದಿದ್ದರೆ ವಿಧಾನಸೌಧದ ಗಾಂಧಿ ಪ್ರತಿಮೆ ಮುಂದೆ ಧರಣಿ ಕೂರಬೇಕಾಗುತ್ತದೆ ಎಂದು ಎಚ್ಚರಿಸಿದರು.

**ರೈತರ ಪರ ಮಾಜಿ ಪ್ರಧಾನಿ ಬ್ಯಾಟಿಂಗ್:** ಯೋಜನಾ ವ್ಯಾಪ್ತಿಯಲ್ಲಿರುವ ಸಣ್ಣ ಹಿಡುವಳಿದಾರರ ಪರ ಬ್ಯಾಟ್ ಬೀಸಿದ ದೇವೇಗೌಡರು, ಭೂಮಿ ಕಳೆದುಕೊಳ್ಳುತ್ತಿರುವ ರೈತರ ನಿಖರ ವಿವರಗಳನ್ನು ಬಿಡುಗಡೆ ಮಾಡಿದರು. ಈ ಭಾಗದಲ್ಲಿ 2,555 ರೈತರಿಗೆ ಕೇವಲ 1ರಿಂದ 5 ಗುಂಟೆ ಜಾಗವಿದ್ದರೆ, 1,653 ರೈತರಿಗೆ 10ರಿಂದ 20 ಗುಂಟೆ ಜಾಗವಿದೆ. ಹಾಗೆಯೇ 2,257 ರೈತರಿಗೆ 20ರಿಂದ 40 ಗುಂಟೆ ಹಾಗೂ 1,342 ರೈತರಿಗೆ 1ರಿಂದ 2 ಎಕರೆ ಜಾಗವಿದೆ. ಇಷ್ಟೊಂದು ಬಡ ರೈತರನ್ನು ಒಕ್ಕಲೆಬ್ಬಿಸಿ ಎಲ್ಲಿಗೆ ಕಳುಹಿಸುತ್ತೀರಾ ಎಂದು ದೇವೇಗೌಡರು ಪ್ರಶ್ನಿಸಿದರು. ಭೂಮಿ ಕೊಡಲು ಒಪ್ಪಿರುವವರು ಹಳ್ಳಿಯಲ್ಲಿಲ್ಲ, ಬೆಂಗಳೂರಿನಲ್ಲಿದ್ದಾರೆ ಮತ್ತು ಅವರದ್ದು ಕೇವಲ 17 ಎಕರೆ ಜಾಗ ಮಾತ್ರ. ಆದರೆ 500 ಎಕರೆ ಇರೋ ನಿಜವಾದ ರೈತರ ಜಾಗಕ್ಕೆ ಇವರು ಹೋಗೇ ಇಲ್ಲ. ಉಳಿದಿದ್ದು ಸರ್ಕಾರಿ ಗೋಮಾಳವಾಗಿದ್ದು, ಅಲ್ಲಿ ಹೆಣ್ಣುಮಕ್ಕಳು ಹಸು ಸಾಕಿ, ದಿನಕ್ಕೆ 60 ಸಾವಿರ ಲೀಟರ್ ಹಾಲು ಕರೆದು ಜೀವನ ಮಾಡುತ್ತಿದ್ದಾರೆ ಎಂದು ಸರ್ಕಾರದ ನೀತಿಯನ್ನು ತರಾಟೆಗೆ ತೆಗೆದುಕೊಂಡರು.

### ಬಿಡಿಎ ಸೈಟುಗಳೇ ಖಾಲಿ, ಟೌನ್‌ಶಿಪ್ ಏಕೆ?

ಸರ್ಕಾರ ಈಗಾಗಲೇ ಮಾಡಿರುವ ಕೆಂಪೇಗೌಡ ಲೇಔಟ್ ಹಾಗೂ ಶಿವರಾಮ ಕಾರಂತ ಬಡಾವಣೆಗಳಲ್ಲಿ ಅಭಿವೃದ್ಧಿಪಡಿಸಿದ ಸುಮಾರು 40 ಸಾವಿರ ನಿವೇಶನಗಳನ್ನು ಕೊಳ್ಳುವವರೇ ಇಲ್ಲದೆ ಖಾಲಿ ಬಿದ್ದಿವೆ. ಸ್ವತಃ ಸಚಿವ ಜಾರಕಿಹೋಳಿಯವರೇ ಬಿಡಿಎ ಸೈಟುಗಳು ಖಾಲಿ ಇವೆ ಎನ್ನುತ್ತಾರೆ. ಹೀಗಿರುವಾಗ ಬೇರೆ ಕಡೆ ಜಾಗ ಇದ್ದರೂ ಬಿಡದಿಯ ಈ ಜಮೀನಿನ ಮೇಲೆಯೇ ಕಣ್ಣು ಯಾಕೆ ಎಂದು ದೇವೇಗೌಡರು ಪ್ರಶ್ನಿಸಿದರು. ಸರ್ವೆ ಕಾರ್ಯದಲ್ಲಿ ಬಂದೋಬಸ್ತ್‌ಗೆ ಬಂದ ಬಂದ ಪೊಲೀಸರಿಗೆ ಆಸ್ಪತ್ರೆಗೆ ದಾಖಲಾಗುವ ದೊಡ್ಡ ಗಾಯಗಳೇನೂ ಆಗಿಲ್ಲ, ಹೀಗಾಗಿ ಸರ್ಕಾರ ಮಹಿಳೆಯರ ನೋವನ್ನು ಅರ್ಥ ಮಾಡಿಕೊಳ್ಳಬೇಕು. ರೈತರ ಮೇಲೆ ಎಫ್‌ಐಆರ್ ಹಾಕಿ ಬಂಧಿಸಿದರೆ ಹಸುಗಳಿಂದ ಹಾಲು ಕರೆಯುವವರು ಯಾರು. ಕೂಡಲೇ ಎಫ್‌ಐಆರ್ ವಾಪಸ್ ಪಡೆಯಬೇಕು ಎಂದು ದೇವೇಗೌಡ ಆಗ್ರಹಿಸಿದರು.

# ಮಂಡಹಳ್ಳಿ ಘಟನೆ ಸರ್ಕಾರದ ಪೂರ್ವಯೋಜಿತ ಸಂಚು: ಎಚ್.ಡಿ.ಕುಮಾರಸ್ವಾಮಿ ಆರೋಪ

**ನವದೆಹಲಿ, ಜು.14:** ಬಿಡದಿಯ ಮಂಡಹಳ್ಳಿ ಗ್ರಾಮದ ರೈತರ ಮೇಲೆ ಎಫ್‌ಐಆರ್ ಮಾಡಿರುವ ಪೊಲೀಸರ ಕ್ರಮವನ್ನು ತೀವ್ರವಾಗಿ ಖಂಡಿಸಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು; ನಾಡಿದ್ದು ಆ ಗ್ರಾಮಕ್ಕೆ ಹೋಗುತ್ತೇನೆ, ತಾಕತ್ತಿದ್ದರೆ ನನ್ನ ವಿರುದ್ಧ ಎಫ್‌ಐಆರ್ ಮಾಡಿ ಎಂದು ಸವಾಲು ಹಾಕಿದ್ದಾರೆ.

ನವದೆಹಲಿಯಲ್ಲಿ ಸೋಮವಾರ ತುರ್ತು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಬಂಧವಿಲ್ಲದವರು ಕೊಟ್ಟ ದೂರಿನ ಮೇಲೆ ವಿನಾಕಾರಣ ರೈತರ ಮೇಲೆ ಎಫ್‌ಐಆರ್ ಹಾಕಿದ್ದಾರೆ. ಅಕ್ರಮವಾಗಿ ಜಮೀನಿಗೆ ಬಂದು ಸರ್ವೆ ಮಾಡಲು ಬಂದರೆ ರೈತರು ಸಹಜವಾಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಸರ್ಕಾರದ ಚಿತಾವಣೆಯಿಂದಲೇ ಅಧಿಕಾರಿಗಳು ಸರ್ವೆಗೆ ಬಂದಿದ್ದಾರೆ. ಮುಖ್ಯಮಂತ್ರಿಗೆ ಇಷ್ಟೊಂದು ಹಠ ಏಕೆ ಎಂಬುದೇ ಅರ್ಥವಾಗುತ್ತಿಲ್ಲ. ರೈತರ ಮೇಲೆ ಎರಡು ಎಫ್‌ಐಆರ್ ಹಾಕಿದ್ದಾರೆ. ನಾನೇ ಚಿತಾವಣೆ ಮಾಡುತ್ತಿದ್ದೇನೆ ಎಂದು ಕೆಲವರು ಹೇಳುತ್ತಿದ್ದಾರೆ. ಧೈರ್ಯವಿದ್ದರೆ ನನ್ನನ್ನೇ ಎ1 ಎಂದು ಹಾಕಿಕೊಳ್ಳಿ ಎಂದು ಸವಾಲು ಹಾಕಿದರು.

ಊರಿನಲ್ಲಿ ಇಲ್ಲದವರ ವಿರುದ್ಧ ಕೇಸ್ ದಾಖಲು ಮಾಡಿದ್ದಾರೆ. ದೆಹಲಿಗೆ ಬಂದಿದ್ದವರ ಮೇಲೆಯೂ

### ರೈತರು, ರೈತ ಮಹಿಳೆಯರ ಮೇಲೆ ಎಫ್‌ಐಆರ್ ಹಾಕಿದ್ದು ಕೂಡ ಸಂಚು
### ದೂರು ಕೊಟ್ಟವರ ಸಾಚಾತನ ಪ್ರಶ್ನಿಸಿದ ಎಚ್‌ಡಿಕೆ



ಪ್ರಕರಣ ದಾಖಲಿಸಿ ಎಫ್‌ಐಆರ್ ಮಾಡಿದ್ದಾರೆ. ಇಂತಹ ಬೆದರಿಕೆ ಮತ್ತು ಕೇಸುಗಳಿಗೆ ಹೆದುರುವ ಪ್ರಶ್ನೆ ಇಲ್ಲ. ರೈತರೇ ಶಾಂತಿಯುವಾಗಿ ನಿಮ್ಮ ಪ್ರತಿಭಟನೆ ಮುಂದುವರೆಸಿ. ನ್ಯಾಯಾಲಯದ ಮುಂದೆ ಹೋರಾಟ ಮಾಡೋಣ. ನಾನು ನಿಮ್ಮ ಬೆಂಬಲಕ್ಕೆ ನಿಲ್ಲುತ್ತೇನೆ ಎಂದು ಸಚಿವರು ರೈತರನ್ನು ಉದ್ದೇಶಿಸಿ ಹೇಳಿದರು.

**ದುರುದ್ದೇಶಪೂರಿತ ದೂರು:** ಮುರಳಿ ಎನ್ನುವ ಇನ್ಸ್‌ಪೆಕ್ಟರ್ ಒಬ್ಬರ ಕಡೆಯಿಂದ ದೂರು ಪಡೆದುಕೊಂಡಿದ್ದಾರೆ. ಇವರ ದೂರಿನ ಮೇಲೆ ಹಾಕಿರುವ ಎಫ್‌ಐಆರ್‌ನಲ್ಲಿ ಯಾರು ಹೆಸರನ್ನು ಉಲ್ಲೇಖ ಮಾಡಿಲ್ಲ. ಇದರಲ್ಲಿ ಎ1 ಆರೋಪಿ ಸಾಮಾನ್ಯ ವ್ಯಕ್ತಿ ಎಂದು ಬರೆಯಲಾಗಿದೆ. ಇನ್ನೊಬ್ಬ ಚಾಲಕ ವೃತ್ತಿ ಮಾಡುವ ಮೊಹಮ್ಮದ್ ಸಮೀರ್ ಎನ್ನುವವನ ಕಡೆಯಿಂದ ಒಂದು ದೂರು ಕೊಡಿಸಿದ್ದಾರೆ. ಈ ವ್ಯಕ್ತಿ ವಾಸ ಇರುವುದು ರಾಮನಗರದಲ್ಲಿ. ಮಂಡಹಳ್ಳಿಗೂ ಈತನಿಗೂ ಯಾವುದೇ ಸಂಬಂಧ ಇಲ್ಲ. ಈತ 11 ಜನರ ಮೇಲೆ ದೂರು ನೀಡಿದ್ದಾನೆ. ಈತನ ದೂರನ್ನು ನೋಡಿದರೆ ದುರುದ್ದೇಶಪೂರ್ವಕವಾಗಿ ಪೂರ್ವ ನಿಯೋಜಿತವಾಗಿ ಯಾರ ಯಾರ ಮೇಲೆ ದೂರು ಕೊಡಬೇಕು ಎಂದು ಮಾಡಿ ದೂರು ಬರೆಸಿದ ಹಾಗಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಹೇಳಿದರು. ಎ1 ಆರೋಪಿಯಾಗಿರುವ ಪ್ರಕಾಶ ಎನ್ನುವ ವ್ಯಕ್ತಿ 500 ದಿನಗಳಿಂದ ಶಾಂತಿಯುತವಾಗಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ. ಮೊದಲಿಂದಲೂ ಈ ಯೋಜನೆಯನ್ನು ವಿರೋಧಿಸಿಕೊಂಡು ಬಂದಿದ್ದ. ಘಟನೆ ನಡೆದ ಸಂದರ್ಭದಲ್ಲಿ ಈತ ಪೊಲೀಸ್ ಅಧಿಕಾರಿಗಳ ಜೊತೆ ಚರ್ಚೆ ಮಾಡುತ್ತಿದ್ದ. ಹೀಗಿದ್ದ ಮೇಲೆ ಯಾವ ಆಧಾರದ ಮೇಲೆ ಈತನನ್ನು ಎ1 ಮಾಡಿದರು ಎಂದು ಸಚಿವ ಕುಮಾರಸ್ವಾಮಿ ಅವರು ಪ್ರಶ್ನಿಸಿದರು.

ವಿಚಿತ್ರವೆಂದರೆ ಪೊಲೀಸ್ ಇನ್ಸ್‌ಪೆಕ್ಟರ್ ಮತ್ತು ಕಾರು ಚಾಲಕನ ದೂರುಗಳ ಒಕ್ಕಣೆ ಹೆಚ್ಚು ಕಮ್ಮಿ ಒಂದೇ ರೀತಿಯಲ್ಲಿದೆ. ಕಾಪಿ ಪೇಸ್ಟ್ ಮಾಡಿದ್ದಾರೆ. ಅಲ್ಲಿಗೆ ಪೂರ್ವ ನಿಯೋಜಿತವಾಗಿ ಸಂಚು ರೂಪಿಸಿ ರೈತರನ್ನು ಸಂಕಷ್ಟಕ್ಕೆ ದೂಡಬೇಕು ಎನ್ನುವ ಷಡ್ಯಂತ್ರವನ್ನು ಸರ್ಕಾರವೇ ನಡೆಸಿದೆ ಎಂದಾಯಿತು ಕೇಂದ್ರ ಸಚಿವರು ಗಂಭೀರ ಅನುಮಾನ ವ್ಯಕ್ತಪಡಿಸಿದರು. ಬಿಡದಿ ಉಪನಗರ ಯೋಜನೆಯನ್ನು ಕೈಬಿಡುವ ಪ್ರಶ್ನೆಯೇ ಇಲ್ಲ ಎಂದು ಸರ್ಕಾರ ಹೇಳುತ್ತಿದ್ದೀಯಲ್ಲ.. ಅದಕ್ಕೆ ಏನು ಮಾಡುತ್ತೀರಿ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು; ನಾವು ಬಿಡುವ ಪ್ರಶ್ನೆಯೇ ಇಲ್ಲ. ಮುಂದೆ ಏನೇನಾಗುತ್ತದೆ ನೋಡೋಣ, ಎಲ್ಲಕ್ಕೂ ಸಿದ್ಧವಾಗಿಯೇ ಇದ್ದೇವೆ ಎಂದು ಮಾರ್ಮಿಕವಾಗಿ ಹೇಳಿದರು.

ಸರ್ವೆ ಮಾಡಲು ಬಂದ ಅಧಿಕಾರಿಗಳು ರಕ್ಷಣೆ ಕೊಡಿ ಎಂದು ಕೇಳಿದರು. ಅದಕ್ಕಾಗಿ ಅವರಿಗೆ ರಕ್ಷಣೆ ನೀಡಿದ್ದೇವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಳಿದ್ದಾರೆ.

...4ನೇ ಪುಟಕ್ಕೆ

### ಮಂಡಹಳ್ಳಿಗೆ ಎಚ್‌ಡಿಕೆ ನಾಳೆ ಭೇಟಿ

ದೆಹಲಿಯಿಂದ ರಾಜ್ಯಕ್ಕೆ ಬಂದ ಮೇಲೆ ಗುರುವಾರ ಬೆಳಗ್ಗೆ ಮಂಡಹಳ್ಳಿಗೆ ಭೇಟಿ ಕೊಡುತ್ತೇನೆ. ರೈತರ ಪರ ನಾನು ನಿರ್ಭಯವಾಗಿ ನಿಲ್ಲುತ್ತೇನೆ ಎಂದು ಸರ್ಕಾರಕ್ಕೆ ಸ್ಪಷ್ಟ ಎಚ್ಚರಿಕೆ ನೀಡಿದರು ಸಚಿವ ಕುಮಾರಸ್ವಾಮಿ ಅವರು; ನಾನು ನೇರವಾಗಿ ಮುಖ್ಯಮಂತ್ರಿ ಅವರಿಗೆ ಸ್ಪಷ್ಟವಾಗಿ ಹೇಳಲು ಬಯಸುತ್ತೇನೆ. ಎಸ್ಎಂ ಕೃಷ್ಣ ಅವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ನೀವು ಕೂಡ ಸಚಿವರಾಗಿದ್ದೀರಿ. ಒಂದು ದಿನ ಬೆಳಗ್ಗೆಯೇ ಚನ್ನಪಟ್ಟಣದಲ್ಲಿ ಗೋಲಿಬಾರ್ ನಡೆದಿತ್ತು. ಇಬ್ಬರು ರೈತರು ಬಲಿಯಾಗಿದ್ದರು. ರೈತರು ಮೃತಪಟ್ಟವರ ದೇಹಗಳನ್ನು ತೆಗೆಯಲು ಬಿಡುವುದಿಲ್ಲ. ಸಂಜೆಯಾದರೂ ಆ ಮಂತ್ರಿ ಬರುವುದಿಲ್ಲ. ಆಗಲೂ ನನ್ನ ಮೇಲೆ ಮತ್ತು ದೇವೇಗೌಡರ ಮೇಲೆ ಕಾಂಗ್ರೆಸ್‌ನವರು ಆರೋಪ ಮಾಡಿದರು, ಮೃತದೇಹವನ್ನು ಇಟ್ಟುಕೊಂಡು ರಾಜಕಾರಣ ಮಾಡುತ್ತಾರೆ ಎಂದು ನಮ್ಮನ್ನು ಟೀಕಿಸಿದರು. ಅಂದು ನಾನು ಮತ್ತು ದೇವೇಗೌಡರು ಸ್ಥಳಕ್ಕೆ ಹೋಗದೆ ಇದ್ದಿದ್ದರೆ ಈ ಅಂದಿನ ಸರ್ಕಾರಕ್ಕೆ ಪರಿಸ್ಥಿತಿಯನ್ನು ನಿಯಂತ್ರಣ ಮಾಡುವುದೇ ಸಾಧ್ಯವಾಗುತ್ತಿರಲಿಲ್ಲ. ಅಂದಿನ ಘಟನೆಯನ್ನು ಸ್ವಲ್ಪ ನೆನಪು ಮಾಡಿಕೊಳ್ಳಿ ಎಂದು ಈ ಮುಖ್ಯಮಂತ್ರಿಗೆ ಹೇಳಬಯಸುತ್ತೇನೆ ಎಂದು ಕುಮಾರಸ್ವಾಮಿ ಅವರು ಹೇಳಿದರು.

## ನಿತ್ಯ ಪಂಚಾಂಗ 15.07.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ,
ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ

ಆಷಾಢ ಶುದ್ಧ, ಪಾಡ್ಯ,
ಪುಷ್ಯ ನಕ್ಷತ್ರ, ಚಂದ್ರದರ್ಶನ, ಪುರಿ ಜಗನ್ನಾಥ ರಥಯಾತ್ರೆ,
ಕ್ಯಾಲಕೊಂಡ ಶಂಕರಭಾರತಿ ಆರಾಧನೆ,
ವಾಸುದೇವಾನಂದ ಸ್ವಾಮಿ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20–9.04 | 10.30–12.00 | 1.30– 12.00 |
| ಮಂಗಳ | ಮ. 3.25–4.59 | 9.00–10.30 | 12.00– 1.30 |
| ಬುಧ | ಮ.12.16–1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42– 12.16 | 3.00– 4.30 | 7.30– 9.00 |
| ಶನಿ | ಬೆ. 9.07– 10.41 | 1.30– 3.00 | 6.00– 7.30 |

# ಸಂಪುಟ ವಿಸ್ತರಣೆ: ದೆಹಲಿ ಪ್ರವಾಸಕ್ಕೂ ಮುನ್ನ ಡಿಸಿಎಂ ಭೇಟಿ ಮಾಡಿದ ಸಿಎಂ

**ಬೆಂಗಳೂರು, ಜು.14:** ರಾಜ್ಯ ಕಾಂಗ್ರೆಸ್‌ನಲ್ಲಿ ಸಚಿವ ಸಂಪುಟ ವಿಸ್ತರಣೆ ವಿಚಾರ ತೀವ್ರಗೊಳ್ಳುತ್ತಿರುವ ಬೆನ್ನಲ್ಲೇ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರ ನಿವಾಸಕ್ಕೆ ಮಂಗಳವಾರ ದಿಢೀರ್ ಭೇಟಿ ನೀಡಿ ಮಾತುಕತೆ ನಡೆಸಿದ್ದು ತೀವ್ರ ಕುತೂಹಲ ಮೂಡಿಸಿದೆ.

ಜಿ. ಪರಮೇಶ್ವರ್ ಅವರೊಂದಿಗಿನ ಈ ಭೇಟಿಯಲ್ಲಿ ಸಂಪುಟಕ್ಕೆ ಯಾರನ್ನು ಸೇರಿಸಿಕೊಳ್ಳಬೇಕು, ಪ್ರಾದೇಶಿಕ ಸಮತೋಲನವನ್ನು ಹೇಗೆ ಕಾಯ್ದುಕೊಳ್ಳಬೇಕು ಮತ್ತು ವಿವಿಧ ಸಮುದಾಯಗಳಿಗೆ ಹೇಗೆ ಪ್ರಾತಿನಿಧ್ಯ ನೀಡಬೇಕು ಎಂಬ ಸೂಕ್ಷ್ಮ ಲೆಕ್ಕಾಚಾರಗಳ ಕುರಿತು ಗಹನ ಚರ್ಚೆ ನಡೆದಿದೆ ಎನ್ನಲಾಗುತ್ತಿದೆ.

ರಾಜ್ಯ ಕಾಂಗ್ರೆಸ್‌ನ ಹಿರಿಯ ಹಾಗೂ ಪ್ರಭಾವಿ ನಾಯಕರಾಗಿರುವ ಜಿ. ಪರಮೇಶ್ವರ್ ಅವರ ಸಲಹೆಗಳು ಹೈಕಮಾಂಡ್ ಮಟ್ಟದಲ್ಲಿ ಪ್ರಮುಖ ಪಾತ್ರ ವಹಿಸಲಿವೆ. ಹೀಗಾಗಿ ದೆಹಲಿ ಪ್ರವಾಸಕ್ಕೂ ಮುನ್ನವೇ ಸಿಎಂ ಡಿ.ಕೆ.ಶಿವಕುಮಾರ್ ಅವರು ಉಪಮುಖ್ಯಮಂತಿಯೊಂದಿಗೆ ಮುಖಾಮುಖಿಯಾಗಿ ಪಕ್ಷದ ಆಂತರಿಕ ಭಿನ್ನಾಭಿಪ್ರಾಯಗಳನ್ನು ನಿವಾರಿಸಲು ಹಾಗೂ ಸಂಭಾವ್ಯ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲು ಸಮಾಲೋಚನೆ ನಡೆಸಿದ್ದಾರೆ ಎನ್ನಲಾಗಿದೆ.

ದೆಹಲಿ ಪ್ರವಾಸಕ್ಕೆ ಸಜ್ಜಾಗುತ್ತಿರುವ ಬೆನ್ನಲ್ಲೇ ಮುಖ್ಯಮಂತ್ರಿಗಳು ಕೈಗೊಂಡ ಈ ಭೇಟಿಯು, ಬಾಕಿ ಉಳಿದಿರುವ ಸಚಿವ ಸ್ಥಾನಗಳ ಭರ್ತಿ ಹಾಗೂ ಸಂಪುಟ ಪುನಾರಚನೆಯ ಸಿದ್ಧತೆಗಳ ಕುರಿತಾದ ಜಂಟಿ ಕಸರತ್ತು ಎಂಬ ಮಾತುಗಳು ಕೇಳಿಬರುತ್ತಿವೆ. ಸುಮಾರು ನಲವತ್ತು ದಿನಗಳ ಆಡಳಿತ ಪೂರೈಸಿದ್ದರೂ ಸಂಪುಟ ವಿಸ್ತರಣೆಯಾಗದ ಕಾರಣ ಆಕಾಂಕ್ಷಿ ಶಾಸಕರಲ್ಲಿ ತಳಮಳ ಹೆಚ್ಚಾಗಿದೆ. ಸದ್ಯ 15ಕ್ಕೂ ಹೆಚ್ಚು ಸಚಿವ ಸ್ಥಾನಗಳು ಖಾಲಿ ಇದ್ದು, ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರಾದ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗುವ ಮುನ್ನ ರಾಜ್ಯದ ಹಿರಿಯ ನಾಯಕರೊಂದಿಗೆ ಒಮ್ಮತ ಮೂಡಿಸಿಕೊಳ್ಳಲು ಸಿಎಂ ಮುಂದಾಗಿದ್ದಾರೆ ಎನ್ನಲಾಗಿದೆ.



ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಮೈಸೂರು ವಕೀಲರ ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಮಂಗಳವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ ಎ.ಜಿ.ಶ್ರೀಧರ್ ಹಾಗೂ ಜಿ.ಎಸ್.ಶಿವಸ್ವಾಮಿ ಅವರು ಹಾಜರಿದ್ದರು.

### ಪ್ರಕಟಣೆ

## ಬೆಂಗಳೂರಿನ ಫುಟ್ಬಾಲ್ ಪ್ರಿಯರಿಗಾಗಿ ಸರ್ಕಾರದ ಸಂತಸದ ಸುದ್ದಿ

ಫಿಫಾ ವಿಶ್ವಕಪ್ ಪಂದ್ಯಗಳ ಹಿನ್ನೆಲೆಯಲ್ಲಿ ಪಂದ್ಯ ನಡೆಯುವ ಮೂರು ದಿನಗಳ ಕಾಲ ಮಧ್ಯರಾತ್ರಿ 3.30ರವರೆಗೆ ಹೊಟೇಲ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಆಹಾರ ಸೇವೆಗೆ ಸರ್ಕಾರ ಅವಕಾಶ ಕಲ್ಪಿಸಿದೆ.

ಭಾರತ ರಾಷ್ಟ್ರೀಯ ರೆಸ್ಟೋರೆಂಟ್ ಸಂಸ್ಥೆ ಮನವಿ ಹಿನ್ನೆಲೆಯಲ್ಲಿ ವಿಶ್ವಕಪ್ ಪಂದ್ಯಗಳು ನಡೆಯಲಿರುವ ಜು. 14, 15ಹಾಗೂ 19ರಂದು ಈ ಆದೇಶ ಅನ್ವಯವಾಗುವಂತೆ ಸರ್ಕಾರ ಈ ತೀರ್ಮಾನ ತೆಗೆದುಕೊಳ್ಳಲಾಗಿದೆ.

ಕರ್ನಾಟಕ ಪೊಲೀಸ್ ಕಾಯ್ದೆ ಅನ್ವಯ ತಡರಾತ್ರಿ ಪಂದ್ಯ ಪ್ರದರ್ಶನಕ್ಕೆ ಬೆಂಗಳೂರು ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್ ಅವರು ಆದೇಶಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ನೇಮಕ

ಬೆಂಗಳೂರು, ಜು.14: ರಾಜ್ಯದ ಅಭಿವೃದ್ಧಿ ಯೋಜನೆಗಳ ಜಾರಿ, ಪರಿಶೀಲನೆ ಹಾಗೂ ಅಹವಾಲುಗಳ ವಿಚಾರಣೆಗಾಗಿ ಹೊಸ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳನ್ನು ನೇಮಿಸಲಾಗಿದೆ. ಈ ಆದೇಶವನ್ನು ಸರ್ಕಾರದ ಅಧೀನ ಕಾರ್ಯದರ್ಶಿ ಎಸ್. ಕಲ್ಪನಾ ಅವರು ಪ್ರಕಟಿಸಿದ್ದಾರೆ.

**ಉಸ್ತುವಾರಿಗಳ ವಿವರ:**

ಕಲಬುರಗಿ: ಸುಬೋದ್ ಯಾದವ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲ ಮತ್ತು ಜೀವನೋಪಾಯ ಇಲಾಖೆ ಕಾರ್ಯದರ್ಶಿ,

ಕೋಲಾರ: ಸಲ್ಮಾ ಕೆ. ಫಾಹಿಮ್, ಕಾರ್ಮಿಕ ಇಲಾಖೆ ಕಾರ್ಯದರ್ಶಿ

ಚಿಕ್ಕಮಗಳೂರು: ಆರ್.ಗಿರೀಶ್, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಕಾರ್ಯದರ್ಶಿ

# ಪ್ರಜಾತಂತ್ರದ ಯಶಸ್ಸಿನಲ್ಲಿ ಮಾಧ್ಯಮಗಳ ಪಾತ್ರ ಹಿರಿದು: ಸಚಿವ ರಾಮಲಿಂಗಾರೆಡ್ಡಿ

### ರೋಟರಿ ಇಂಟರ್‌ನ್ಯಾಷನಲ್ ಜಿಲ್ಲೆ 3191 ಹಾಗೂ ಬೆಂಗಳೂರು ಪ್ರೆಸ್‌ಕ್ಲಬ್‌ನಿಂದ ಪ್ರಥಮ ರೋಟರಿ ಮೀಡಿಯಾ ಫಾಲ್ಕನ್ ಅವಾರ್ಡ್ಸ್ 2026: ಜಲಸಂರಕ್ಷಣಾ ಅಭಿಯಾನಕ್ಕೆ ಚಾಲನೆ

**ಬೆಂಗಳೂರು, ಜು.14:** ಪ್ರಜಾಪ್ರಭುತ್ವದ ಯಶಸ್ಸಿನಲ್ಲಿ ಮಾಧ್ಯಮದ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಸಮಾಜದ ಹಿತಾಸಕ್ತಿಗಾಗಿ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವ ಆರ್. ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ರೋಟರಿ ಇಂಟರ್‌ನ್ಯಾಷನಲ್ ಜಿಲ್ಲೆ 3191 ಹಾಗೂ ಬೆಂಗಳೂರು ಪ್ರೆಸ್ ಕ್ಲಬ್ ನಿಂದ ಪ್ರಥಮ ಬಾರಿಗೆ ಆಯೋಜಿಸಲಾದ ರೋಟರಿ ಮೀಡಿಯಾ ಫಾಲ್ಕನ್ ಅವಾರ್ಡ್ಸ್ 2026 ಸಮಾರಂಭದಲ್ಲಿ ಮಾಧ್ಯಮ ಕ್ಷೇತ್ರದ ಗಣ್ಯರು ಹಾಗೂ ಕಾರ್ಪೊರೇಟ್ ಸಂವಹನ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವವರಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಸೇವೆಗೆ ಮತ್ತೊಂದು ಹೆಸರು ರೋಟರಿ ಸಂಸ್ಥೆ. ಪೋಲೀಯೋ ವಿಚಾರದಲ್ಲಿ ರೋಟರಿ ಸಂಸ್ಥೆ ಮಾಡಿದ ಕೆಲಸ ಬೇರೆ ಯಾವುದೇ ಸಂಸ್ಥೆ ಮಾಡಿಲ್ಲ. ಶಿಕ್ಷಣ ಕ್ಷೇತ್ರಕ್ಕೂ ಸಹ ಬಹುದೊಡ್ಡ ಕೊಡುಗೆ ನೀಡಿದೆ. ನೂರಾರು ವರ್ಷಗಳಿಂದ ರೋಟರಿ ಸಂಸ್ಥೆ ಸೇವೆ ಸಲ್ಲಿಸುತ್ತಿದ್ದು, ಜಗತ್ತಿನಲ್ಲಿ ಮಾದರಿಯಾಗಿದೆ ಎಂದರು.

ರೋಟರಿ ಜಿಲ್ಲಾ ಗವರ್ನರ್ ಡಾ. ಅನಿಲ್ ಗುಪ್ತ ಮಾತನಾಡಿ, ರೋಟರಿ ಕೈಗೊಂಡ ಸೇವಾ ಕಾರ್ಯಗಳು ಜನರಿಗೆ ತಲುಪಿದಾಗ ಅದರ ಪ್ರಭಾವ ಸಾವಿರಾರು ಜನರ ಬದುಕಿನಲ್ಲಿ ಬದಲಾವಣೆ ತರುತ್ತಿದೆ. ಪೋಲಿಯೊ ನಿರ್ಮೂಲನೆ ಸೇರಿದಂತೆ ರೋಟರಿಯ ಅನೇಕ ಸಾಮಾಜಿಕ ಸೇವೆಗಳು ಮಾಧ್ಯಮದ ಬೆಂಬಲದಿಂದಲೇ ವಿಶ್ವದಾದ್ಯಂತ ಯಶಸ್ಸು ಕಂಡಿವೆ. ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರುವಲ್ಲಿ ಪತ್ರಕರ್ತರ ಪಾತ್ರ ಅಮೂಲ್ಯವಾಗಿದೆ ಎಂದು ತಿಳಿಸಿದರು.




ಬೆಂಗಳೂರು ಪ್ರೆಸ್ ಕ್ಲಬ್ ಅಧ್ಯಕ್ಷ ಆರ್. ಶ್ರೀಧರ ಮಾತನಾಡಿ, ಸತ್ಯನಿಷ್ಠೆ, ಜವಾಬ್ದಾರಿ ಮತ್ತು ಸಮಾಜಮುಖಿ ಪತ್ರಿಕೋದ್ಯಮವನ್ನು ಉತ್ತೇಜಿಸುವ ಉದ್ದೇಶದಿಂದ ರೋಟರಿ ಜಿಲ್ಲೆ 3191ರೊಂದಿಗೆ ಕೈಜೋಡಿಸಿರುವುದು ಹೆಮ್ಮೆಯ ಸಂಗತಿ. ಮಾಧ್ಯಮ ಕ್ಷೇತ್ರದ ಸಾಧಕರನ್ನು ಗುರುತಿಸಿ ಗೌರವಿಸುವ ಈ ಕಾರ್ಯಕ್ರಮ ಮಾದರಿಯಾಗಿದೆ ಎಂದರು.

ರೋಟರಿಯಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲದಿಂದ ಸೇವೆ ಸಲ್ಲಿಸಿದ ಹಿರಿಯ ರೋಟೇರಿಯನ್ ಆರ್‌ಟಿಎನ್. ಕೆ.ಎ. ಕುಂಜಾ ಅವರಿಗೆ ಜೀವಮಾನ ಸಾಧನಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಕಲ್ ಕಾ ಸಪ್ನಾ ಒನ್ ಬಿಲಿಯನ್ ಲೀಟರ್ ಪಾನಿ ಹೋ ಅಪ್ನಾ ಎಂಬ ರೋಟರಿ ಜಿಲ್ಲೆ 3191ರ ಮಹತ್ವಾಕಾಂಕ್ಷೆಯ ಜಲ ಸಂರಕ್ಷಣಾ ಯೋಜನೆಗೆ ಚಾಲನೆ ನೀಡಲಾಯಿತು. ರಾಜ್ಯದಲ್ಲಿ 100 ಕೋಟಿ ಲೀಟರ್ ನೀರು ಸಂರಕ್ಷಿಸುವ ಗುರಿಯೊಂದಿಗೆ, 20 ಕೆರೆಗಳ ಪುನಶ್ಚೇತನ, ಸುಸ್ಥಿರ ಜಲ ನಿರ್ವಹಣೆ ಹಾಗೂ ರೈತರಿಗೆ ನೀರಿನ ಭದ್ರತೆ ಕಲ್ಪಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ.

ರೋಟರಿ ಇಂಟರ್‌ನ್ಯಾಷನಲ್ ನಿರ್ದೇಶಕ ಆರ್‌ಟಿಎನ್. ಕೆ.ಪಿ. ನಾಗೇಶ್ ಮಾತನಾಡಿ, ಸೇವೆ ಎಂದರೆ ಸಮಾಜದ ಭವಿಷ್ಯವನ್ನು ಸುರಕ್ಷಿತಗೊಳಿಸುವುದಾಗಿದೆ. ರಾಜ್ಯದಲ್ಲಿ ನೀರಿನ ಭದ್ರತೆ ಅತ್ಯಂತ ಪ್ರಮುಖ ಸವಾಲಾಗಿದ್ದು, ಈ ಯೋಜನೆ ರೈತರು ಹಾಗೂ ಮುಂದಿನ ಪೀಳಿಗೆಗೆ ಶಾಶ್ವತ ನೀರಿನ ಸಂರಕ್ಷಣೆ ಒದಗಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

ಚಲನಚಿತ್ರ ನಿರ್ದೇಶಕ, ಸಾಹಿತಿ ಹಾಗೂ ಅಂಕಣಕಾರ ಡಾ. ನಾಗತಿಹಳ್ಳಿ ಚಂದ್ರಶೇಖರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಪ್ರೆಸ್ ಕ್ಲಬ್ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಬೆಳ್ಳಿ ತಟ್ಟೆ ಹಾಗೂ ರೋಟರಿ ಜಿಲ್ಲಾ 3191ರ ಜಿಲ್ಲಾ ಗವರ್ನರ್ ಆರ್‌ಟಿಎನ್. ಡಾ. ಅನಿಲ್ ಗುಪ್ತ ಮತ್ತಿತರರು ಉಪಸ್ಥಿತರಿದ್ದರು.

**ಪ್ರಶಸ್ತಿ ಪುರಸ್ಕೃತರು**

ಮೋಹನ್ ಜಿ.ಎನ್., ಡಾ. ವೆಂಕಟೇಶ್ ಎಂ. ರಾವ್, ಶ್ಯಾಮಸುಂದರ್ ವಟ್ಟಂ, ಚಿದಾನಂದ ಪಟೇಲ್, ವೀರೇಶ್ ಕೆ.ಎಂ., ವೀರಮಣಿ, ಶ್ರೀನಿವಾಸ್, ರಾಕೇಶ್ ಎಂ.ಆರ್., ಪುಣ್ಯಾವತಿ ಎಚ್.ಪಿ., ಪೀರ್ ಪಾಷಾ ಖಾದ್ರಿ, ರಾಮು ಪಾಟೀಲ್, ರಮೇಶ್ ಪಾಳ್ಯ, ವನಿತಾ, ಪ್ರಕಾಶ್ ಎಚ್.ಟಿ., ನಾ. ವಿನಯ್, ರಾಜಶೇಖರ್‌ಮೂರ್ತಿ, ಚೇತನಾ ಬೆಳಗೆರೆ, ಮಿಶೆಲ್ ಕುಮಾರ್, ಕಿಶನ್ ಚೆರಂಡ, ಹಂಸವೇಣಿ ಎನ್., ಭಾರತೀಶ ಹೊನ್ನಾಳಿ, ಆರ್‌ಟಿಎನ್. ಎಂ. ಸುರೇಂದ್ರನ್ ಉನ್ನಿ, ಡಾ. ಅನುಭಾ ಜೈನ್, ಪಿ. ರಾಮಕೃಷ್ಣ ಉಪಾಧ್ಯ, ಅರ್ಚನಾ ರವಿಕುಮಾರ್, ರವಿ ಎಸ್. ಹಾಗೂ ಫೆಹ್ಮಿ ಮೊಹಮ್ಮದ್ ಮತ್ತು ಸೃಷ್ಟಿ ಕುಕ್ರೇಜಾ ಅವರಿಗೆ ರೋಟರಿ ಮೀಡಿಯಾ ಫಾಲ್ಕನ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

# ಕೈ ಕಾರ್ಯಕರ್ತರಿಗೆ ಭಾರತ್ ಜೋಡೋ ಹೆಸರಲ್ಲಿ ಗಂಜಿಕೇಂದ್ರ: ಅಶೋಕ್ ಕಿಡಿ

**ಬೆಂಗಳೂರು, ಜು.14:** ಭಾರತ್ ಜೋಡೋ ಯುವ ಸಂಘಗಳ ಹೆಸರಲ್ಲಿ ಕಾಂಗ್ರೆಸ್ ತನ್ನ ಕಾರ್ಯಕರ್ತರಿಗೆ ಗಂಜಿ ಕೇಂದ್ರಗಳನ್ನು ನಿರ್ಮಿಸಲು ಮುಂದಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು.

ರೈತರಿಗೆ, ವೃದ್ಧರಿಗೆ, ಅನಾಥರಿಗೆ, ವಿಧವೆಯರಿಗೆ ಪಿಂಚಣಿ ಫಲಾನುಭವಿಗಳಿಗೆ ಸಹಾಯಧನ ನೀಡದೆ ತಡೆಹಿಡಿದಿರುವ ಸರ್ಕಾರ, ಕಾಂಗ್ರೆಸ್ ಕಾರ್ಯಕರ್ತರಿಗೆ ಮಾತ್ರ ರಾಜ್ಯದ ತೆರಿಗೆದಾರರ ಹಣದಲ್ಲಿ ಪುನರ್ವಸತಿ ಕಲ್ಪಿಸುತ್ತಿದೆ ಎಂದು ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಹರಿಹಾಯ್ದರು.

ಗೃಹಲಕ್ಷ್ಮಿಯ 5,000 ಕೋಟಿ ರೂ. ಅನ್ನಭಾಗ್ಯದ 750 ಕೋಟಿ ಹಣವನ್ನು ಇನ್ನೂ ನೀಡಿಲ್ಲ. ಆಗಿನ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಬೆಳಗಾವಿ ಅಧಿವೇಶನದಲ್ಲಿ ಕಣ್ಣೀರು ಹಾಕಿ ಸತ್ಯ ಒಪ್ಪಿಕೊಂಡರು. ಆದರೂ ಇನ್ನೂ ಫಲಾನುಭವಿಗಳಿಗೆ ಹಣ ತಲುಪಿಲ್ಲ. ಆದರೆ ಕಾಂಗ್ರೆಸ್ ಪುಢಾರಿ ಕಾರ್ಯಕರ್ತರಿಗೆ ಮಾತ್ರ ದಿನಕ್ಕೊಂದು ಯೋಜನೆ ಕೊಡುತ್ತಿದ್ದಾರೆ. ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ.ರೇವಣ್ಣ ಅವರಿಗೆ 58 ಲಕ್ಷ ರೂ. ವಸತಿ ಭತ್ಯೆ ನೀಡಲಾಗುತ್ತಿದೆ. ವೇತನ, ಇತರೆ ಭತ್ಯೆ, ಸೌಲಭ್ಯಗಳು, ಅವರಿಗೆ 12 ಸಿಬ್ಬಂದಿ ಕೂಡ ಇದ್ದಾರೆ. ಎಲ್ಲ ಸೇರಿ 2 ಕೋಟಿ ರೂ.ವರೆಗೆ ವೆಚ್ಚವಾಗುತ್ತಿದೆ. ಪ್ರತಿಪಕ್ಷದ ನಾಯಕನಾದ ನನಗೆ ಸರ್ಕಾರದಿಂದ ಇನ್ನೂ ಮನೆ ನೀಡಿಲ್ಲ. ಆದರೆ ಸಮಿತಿಯ ಉಪಾಧ್ಯಕ್ಷರಿಗೆ ಸರ್ಕಾರಿ ಮನೆ ನೀಡಿ 58 ಲಕ್ಷ ರೂ. ಖರ್ಚು ಮಾಡಲಾಗಿದೆ. ಜಿಲ್ಲಾ, ತಾಲ್ಲೂಕು ಸಮಿತಿ ಅಧ್ಯಕ್ಷರಿಗೆ ಪ್ರತಿ ತಿಂಗಳು ಸಂಬಳ ನೀಡಲಾಗುತ್ತಿದೆ. ಸದಸ್ಯರಿಗೆ ಭತ್ಯೆ ನೀಡಲಾಗುತ್ತಿದೆ, ಜಿಲ್ಲೆಗಳಲ್ಲಿ ಕಚೇರಿ ವೆಚ್ಚ ಎಲ್ಲ ಸೇರಿದರೆ ಪ್ರತಿ ತಿಂಗಳು 150 ಕೋಟಿ ರೂಗಳಿಗೂ ಹೆಚ್ಚು ಹಣ ವೆಚ್ಚವಾಗುತ್ತದೆ ಎಂದರು. ರಾಹುಲ್ ಗಾಂಧಿ ಕಾಂಗ್ರೆಸ್ ಪಕ್ಷದ ಬ್ಯಾನರ್ ಕೆಳಗೆ ನಡೆಸಿದ ಭಾರತ್ ಜೋಡೋ ಹೆಸರಲ್ಲಿ ಸಂಘಗಳನ್ನು ರಚಿಸಿ ಕಾಂಗ್ರೆಸ್‌ನ ನಿರುದ್ಯೋಗಿ ಕಾರ್ಯಕರ್ತರಿಗೆ ಉದ್ಯೋಗ ನೀಡಲಾಗುತ್ತಿದೆ. ಪ್ರತಿ ಸಮಿತಿಗೆ ತರಬೇತುದಾರರನ್ನು ನೇಮಿಸಿ 24,000 ರೂ.ವೇತನ ನಿಗದಿ ಮಾಡಲಾಗುತ್ತಿದೆ. ಈ ಯೋಜನೆಗೆ ಒಟ್ಟು 1,010 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ. ಇದು ತೆರಿಗೆದಾರರ ಬೆವರಿನ ಹಣದ ದುರ್ಬಳಕೆಯಾಗಿದೆ ಎಂದು ಟೀಕಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿ, ಸಿಬ್ಬಂದಿಗಳಿಲ್ಲ. ಇದೇ ಹಣವನ್ನು ಅಲ್ಲಿಗೆ ಕೊಟ್ಟಿದ್ದರೆ ಸಹಾಯವಾಗುತ್ತಿತ್ತು. ಕರ್ನಾಟಕ ಬಾಣಂತಿಯರಿಗೆ ಸುರಕ್ಷಿತವಲ್ಲ ಎಂದು ಸಾಬೀತಾಗಿದೆ. ಧರಣಿ ಮಾಡುತ್ತಿರುವ ಆಶಾ ಕಾರ್ಯಕರ್ತರಿಗೆ ಗೌರವಧನ ಹೆಚ್ಚಿಸಿಲ್ಲ. ಪಿಂಚಣಿ ಫಲಾನುಭವಿಗಳಿಗೆ ಮೂರು ತಿಂಗಳಿಂದ ಪಿಂಚಣಿ ಕೊಟ್ಟಿಲ್ಲ. ಅನಾಥ ಮಕ್ಕಳಿಗೆ ಎಂಟು ತಿಂಗಳ ಬಾಕಿ 78 ಕೋಟಿ ರೂ. ನೀಡಬೇಕಿದೆ. ಯುವ ಸಬಲೀಕರಣ ಇಲಾಖೆಗೆ ನೀಡುವ ಇದೇ ಹಣದಿಂದ ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಕ್ರೀಡಾಂಗಣ ನಿರ್ಮಿಸಬಹುದಿತ್ತು.

1ಇದನ್ನು ಬಿಟ್ಟು ಲೂಟಿ ಮಾಡಲು ಹೊರಟಿದ್ದಾರೆ ಎಂದರು. ಎಲ್ಲ ತಾಲೂಕುಗಳಲ್ಲಿ ಕ್ರೀಡಾ ಇಲಾಖೆಯ ಕಚೇರಿ ಇದೆ. ಆದರೆ ಇದಕ್ಕೆ ಪ್ರತ್ಯೇಕವಾಗಿ ಸಮಿತಿ ರಚಿಸಿ ಕಾಂಗ್ರೆಸ್ ಪುಢಾರಿಗಳನ್ನು ನೇಮಕ ಮಾಡಲಾಗುತ್ತಿದೆ. ಮುಂದೆ ಒಂದೂವರೆ ವರ್ಷದಲ್ಲಿ ಚುನಾವಣೆ ಇರುವುದರಿಂದ ಕಾಂಗ್ರೆಸ್ ಕಾರ್ಯಕರ್ತರಿಗಾಗಿ ಗಂಜಿ ಕೇಂದ್ರ ತೆರೆಯಲಾಗಿದೆ. ಕಾಂಗ್ರೆಸ್ ಪಕ್ಷದಿಂದ ಆರಂಭಿಸಿದ ಅಭಿಯಾನದ ಹೆಸರು ಇಟ್ಟುಕೊಂಡು ಜನರ ತೆರಿಗೆಯನ್ನು ಲೂಟಿ ಮಾಡಲಾಗುತ್ತಿದೆ. ಇದು ಅತೃಪ್ತ ಕಾಂಗ್ರೆಸ್ಸಿಗರ ಪುನರ್ವಸತಿ ಕೇಂದ್ರವಾಗಿದೆ ಎಂದು ಲೇವಡಿ ಮಾಡಿದರು.

ಸರ್ಕಾರದ ಹಣ ಕಾಂಗ್ರೆಸ್‌ನ ಹಣವಲ್ಲ, ಇದು ಜನರ ಬೆವರಿನ ಶ್ರಮದ ಹಣವಾಗಿದೆ. ಸಂಘಗಳನ್ನು ರಚಿಸುವ ಮೊದಲು ಬಡವರ ಯೋಜನೆಗಳನ್ನು ಮರು ಆರಂಭಿಸಿ ಎಂದು ಆಗ್ರಹಿಸಿದರು.

ನೀರಿಲ್ಲದೆ ರೈತರಿಗೆ ಬೆಳೆ ನಷ್ಟವಾದರೂ ಪರಿಹಾರ ನೀಡಿಲ್ಲ. ಎನ್‌ಡಿಆರ್‌ಎಫ್ ಹಣ ಬರಬೇಕೆಂದು ಕೇಳುತ್ತಿರುವ ಸರ್ಕಾರ ಕೇಂದ್ರ ಈಗಾಗಲೇ ಕೊಟ್ಟಿರುವ ಎಸ್‌ಡಿಆರ್‌ಎಫ್ ಹಣವನ್ನು ಏನು ಮಾಡಿದೆ ಎಂದು ತಿಳಿಸಬೇಕು. ಆ ಹಣವನ್ನೂ ಕಾಂಗ್ರೆಸ್ ಕಾರ್ಯಕರ್ತರಿಗೆ ಖರ್ಚು ಮಾಡಲಾಗುತ್ತಿದೆ ಎಂಬ ಅನುಮಾನ ಬಂದಿದೆ. ಆಸಿಡ್ ದಾಳಿಗೊಳಗಾದವರು, ವೃದ್ಧರು ಮೊದಲಾದ ಅಶಕ್ತರಿಗೆ ಕಾಲಕಾಲಕ್ಕೆ ಪಿಂಚಣಿ ನೀಡುತ್ತಿಲ್ಲ. ಆದರೆ ಗ್ಯಾರಂಟಿ ಸಮಿತಿ, ಭಾರತ್ ಜೋಡೋ ಸಂಘಕ್ಕೆ ಮಾತ್ರ ಸುಲಭವಾಗಿ ಹಣ ನೀಡಲಾಗುತ್ತಿದೆ. ನೀರಿಲ್ಲದೆ ಬೆಳೆ ಒಣಗುತ್ತಿರುವ ಕಡೆಗಳಿಗೆ ಜಿಲ್ಲಾಧಿಕಾರಿಗಳನ್ನು ಕಳುಹಿಸಿ ರೈತರಿಗೆ ತಾತ್ಕಾಲಿಕ ಪರಿಹಾರಕ್ಕೆ ವ್ಯವಸ್ಥೆ ಮಾಡಬೇಕು. ಹಳ್ಳಿಗಳಲ್ಲಿ ಸಂತ್ರಸ್ತರಿಗೆ ಗಂಜಿ ಕೇಂದ್ರಗಳನ್ನು ನಿರ್ಮಿಸದೆ ಕಾಂಗ್ರೆಸ್ ಕಾರ್ಯಕರ್ತರಿಗೆ ಗಂಜಿ ಕೇಂದ್ರ ನೀಡಲಾಗುತ್ತಿದೆ ಎಂದು ದೂರಿದರು

# ಪಕ್ಷನಿಷ್ಠ, ಸೈದ್ಧಾಂತಿಕ ರಾಜಕಾರಣಿ, ಹಿರಿಯ ನಾಯಕ ರಾಮಚಂದ್ರಗೌಡ ನಿಧನ



**ಬೆಂಗಳೂರು, ಜು.14:** ಪಕ್ಷದ ಸಿದ್ಧಾಂತಕ್ಕೆ ಬದ್ಧರಾಗಿಯೇ ಇತರರಿಗೂ ಮಾದರಿಯಾಗಿದ್ದ ಮಾಜಿ ಸಚಿವ, ಸಂಘ ಪರಿವಾರದ ಕಟ್ಟಾಳು ಹಿರಿಯ ನಾಯಕ ರಾಮಚಂದ್ರಗೌಡ(88) ಅವರು ಅನಾರೋಗ್ಯದ ಹಿನ್ನೆಲೆಯಲ್ಲಿ ಮಂಗಳವಾರ ನಿಧನರಾದರು. ಅವರ ನಿಧನದಿಂದ ರಾಜ್ಯ ಬಿಜೆಪಿಯ ಹಿರಿಯ ತಲೆಮಾರಿನ ಕೊಂಡಿಯೊಂದು ಕಳಚಿದಂತಾಗಿದೆ.

ಕಳೆದ ಹಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ರಾಮಚಂದ್ರಗೌಡ ಅವರು ಚಂದ್ರ ಲೇಔಟ್‌ನಲ್ಲಿರುವ ಗುರುಶ್ರೀ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಬೆಳಿಗ್ಗೆ 6.05 ನಿಮಿಷಕ್ಕೆ ಅವರ ಆರೋಗ್ಯದಲ್ಲಿ ಏರುಪೇರು ಉಂಟಾಗಿ ಕೊನೆ ಉಸಿರುಳಿದರೆಂದು ಕುಟುಂಬದ ಮೂಲಗಳು ತಿಳಿಸಿವೆ.


ಮೃತರು ಪತ್ನಿ ಶ್ರೀಯ, ಪುತ್ರ ಸಪ್ತಗಿರಿ ಗೌಡ, ಪುತ್ರಿ ಕವಿತಾ ಸೇರಿದಂತೆ ಅಪಾರ ಅಭಿಮಾನಿಗಳನ್ನು ಬಿಟ್ಟು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸಂಜೆ ಕಾಮಾಕ್ಷಿಪಾಳ್ಯದಲ್ಲಿರುವ ಪೇಟೆ ಚೆನ್ನಪ್ಪ ಎಸ್ಟೇಟ್‌ನಲ್ಲಿ ಒಕ್ಕಲಿಗ ಸಂಪ್ರದಾಯದಂತೆ ವಿಧಿ ವಿಧಾನಗಳೊಂದಿಗೆ ನೆರವೇರಿತು. ಬಸವೇಶ್ವರ ನಗರದಲ್ಲಿರುವ ಅವರ ನಿವಾಸದಲ್ಲಿ ಸಂಜೆ 4ವರೆಗೆ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು.

**ಕಂಬನಿ:**

ರಾಮಚಂದ್ರಗೌಡ ಅವರ ನಿಧನಕ್ಕೆ ಆದಿಚುಂಚನಗಿರಿ ಪೀಠದ ಪೀಠಾಧ್ಯಕ್ಷ ಡಾ. ನಿರ್ಮಲಾನಂದನಾಥ ಸ್ವಾಮೀಜಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್, ಪ್ರಧಾನಮಂತ್ರಿ ನರೇಂದ್ರ ಮೋದಿ, ಬಿಜೆಪಿ ಹಿರಿಯ ನಾಯಕ ಎಲ್.ಕೆ. ಅಡ್ವಾಣಿ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜ್‌ನಾಥ್ ಸಿಂಗ್, ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು, ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ ಪರಮೇಶ್ವರ್, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಪಲ್ಹಾದ್ ಜೋಶಿ, ವಿ ಸೋಮಣ್ಣ, ಮಾಜಿ ಮುಖ್ಯಮಂತ್ರಿಗಳಾದ ಬಿಎಸ್ ಯಡಿಯೂರಪ್ಪ, ಸಿದ್ದರಾಮಯ್ಯ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್ ಅಶೋಕ್ ಸೇರಿದಂತೆ ಅನೇಕ ಗಣ್ಯರು ತೀವ್ರ ಕಂಬನಿ ಮಿಡಿದಿದ್ದಾರೆ.

## ಹಿರಿಯ ಬಿಜೆಪಿ ನಾಯಕ ರಾಮಚಂದ್ರ ಗೌಡರ ನಿಧನಕ್ಕೆ ಬಸವರಾಜ ಬೊಮ್ಮಾಯಿ ಸಂತಾಪ

**ನೂರಾರು ಯುವಕರಿಗೆ ರಾಜಕೀಯ, ಸಾಮಾಜಿಕ ಕ್ಷೇತ್ರದಲ್ಲಿ ಬೆಳವಣಿಗೆಗೆ ಪ್ರೇರಣೆಯಾಗಿದ್ದರು: ಬೊಮ್ಮಾಯಿ**



ಬೆಂಗಳೂರು, ಜು.14: ಭಾರತೀಯ ಜನತಾ ಪಕ್ಷದ ಅತ್ಯಂತ ಹಿರಿಯ ಹಾಗೂ ನಿಷ್ಠಾವಂತ ನಾಯಕ ರಾಮಚಂದ್ರ ಗೌಡ ಅವರು, ಸುದೀರ್ಘ ಜೀವನದಲ್ಲಿ ನೂರಾರು ಯುವಕರಿಗೆ ರಾಜಕೀಯ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಮಾರ್ಗದರ್ಶನ ನೀಡುವ ಮೂಲಕ ಅವರ ಬೆಳವಣಿಗೆಗೆ ಪ್ರೇರಣೆಯಾಗಿದ್ದರು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಸಂತಾಪ ಸೂಚಿಸಿದ್ದಾರೆ

ಈ ಕುರಿತು ಎಕ್ಸ್ ಮಾಡಿರುವ ಅವರು, ರಾಮಚಂದ್ರ ಗೌಡರು ಬೆಂಗಳೂರಿನ ಮುನ್ಸಿಪಲ್ ಕೌನ್ಸಿಲರ್ ಆಗಿ ತಮ್ಮ ರಾಜಕೀಯ ಜೀವನವನ್ನು ಆರಂಭಿಸಿ, ತದನಂತರ ವಿಧಾನ ಪರಿಷತ್ ಸದಸ್ಯರಾಗಿ (ಎಂಎಲ್‌ಸಿ) ದೀರ್ಘಕಾಲ ಸೇವೆ ಸಲ್ಲಿಸಿದ್ದರು. ಬೆಂಗಳೂರಿನ ಸರ್ವತೋಮುಖ ಅಭಿವೃದ್ಧಿಯಲ್ಲಿ ಅವರ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದ್ದಾರೆ.

ಯುವಕರಿಗೆ ಮಾರ್ಗದರ್ಶಕ

ಕೇವಲ ರಾಜಕೀಯಕ್ಕೆ ಸೀಮಿತವಾಗದ ರಾಮಚಂದ್ರ ಗೌಡರು, ಅತ್ಯಂತ ಮೇಧಾವಿ ಹಾಗೂ ಸದಾ ಅಧ್ಯಯನಶೀಲ ವ್ಯಕ್ತಿಯಾಗಿದ್ದರು. ಸಾಹಿತ್ಯಾಸಕ್ತರಾಗಿದ್ದ ಅವರು ಅಪಾರ ಜ್ಞಾನವನ್ನು ಹೊಂದಿದ್ದರು. ತಮ್ಮ ಸುದೀರ್ಘ ಜೀವನದಲ್ಲಿ ನೂರಾರು ಯುವಕರಿಗೆ ರಾಜಕೀಯ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಮಾರ್ಗದರ್ಶನ ನೀಡುವ ಮೂಲಕ ಅವರ ಬೆಳವಣಿಗೆಗೆ ಪ್ರೇರಣೆಯಾಗಿದ್ದರು. ಅವರೊಬ್ಬ ಅಪರೂಪದ ವ್ಯಕ್ತಿತ್ವದ ನಾಯಕರಾಗಿದ್ದರು ಎಂದು ತಿಳಿಸಿದ್ದಾರೆ.

ಅವರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಸ್ಥರಿಗೆ ನೀಡಲಿ ಎಂದು ಪ್ರಾರ್ಥಿಸುತ್ತೇವೆ ಎಂದು ಸಂತಾಪದಲ್ಲಿ ತಿಳಿಸಿದ್ದಾರೆ.

**ರಾಜಕೀಯದ ಹಾದಿ**

ವಿಧಾನ ಪರಿಷತ್ ಸದಸ್ಯರಾಗಿ ಬೆಂಗಳೂರು ಪದವೀಧರ ಕ್ಷೇತ್ರದಿಂದ ಸತತ 5 ಅವಧಿಗೆ (25 ವರ್ಷಗಳು) ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿ ಸುದೀರ್ಘ ಸೇವೆ ಸಲ್ಲಿಸಿದರು. 1988ರಲ್ಲಿ ಮೊದಲ ಬಾರಿಗೆ ಆಯ್ಕೆಯಾದ ಇವರು ನಂತರ 1994, 2000, 2006 ಮತ್ತು 2012ರ ಚುನಾವಣೆಯಲ್ಲಿ ಮರು ಆಯ್ಕೆಯಾದರು. ಜೆಡಿಎಸ್–ಬಿಜೆಪಿ ಸಮಿಶ್ರ ಸರ್ಕಾರದಲ್ಲಿ ಸಣ್ಣ ಉಳಿತಾಯ, ಲಾಟರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆಗಳ ಸಚಿವರಾಗಿದ್ದರು. ಬಿ.ಎಸ್. ಯಡಿಯೂರಪ್ಪ ಅವರ ಸರ್ಕಾರದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರಾಗಿ ಸೇವೆ ಸಲ್ಲಿಸಿದರು. ಇವರು ಲಾಟರಿ ಸಚಿವರಾಗಿದ್ದ ಅವಧಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಸಂಪೂರ್ಣವಾಗಿ ಲಾಟರಿ ವ್ಯವಸ್ಥೆಯನ್ನು ನಿಷೇಧಿಸುವ ಮಹತ್ವದ ನಿರ್ಧಾರ ಕೈಗೊಂಡರು.

ದೀರ್ಘಕಾಲದವರೆಗೆ ಬಿಜೆಪಿ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದರು.



ಯುವ ನಾಯಕರಿಗೆ ದಾರಿ ಮಾಡಿಕೊಡುವ ಉದ್ದೇಶದಿಂದ, ಜೂನ್ 2018ರಲ್ಲಿ ತಮ್ಮ ಐದನೇ ಅವಧಿ ಮುಗಿದ ನಂತರ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಸ್ವಯಂಪ್ರೇರಿತರಾಗಿ ಚುನಾವಣಾ ರಾಜಕೀಯದಿಂದ ದೂರ ಸರಿದರು. ಕರ್ನಾಟಕದ ಬಿಜೆಪಿಯ ಮುಂಚೂಣಿ ನಾಯಕರಾದ ಬಿ.ಎಸ್. ಯಡಿಯೂರಪ್ಪ ಅವರಿಗೆ ಹೆಗಲಿಗೆ ಹೆಗಲು ಕೊಟ್ಟು ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದ ರಾಮಚಂದ್ರಗೌಡ ಶುದ್ಧ ಹಸ್ತದ ಮುತ್ಸದ್ದಿ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದರು.

**ಸಿಎಂ ಕಂಬನಿ**

ಯಾವುದೇ ಪಕ್ಷವಾದರೂ ನಿಷ್ಠುರ, ನೀತಿ, ಸಿದ್ಧಾಂತದ ಮೇಲೆ ರಾಜಕಾರಣ ಮಾಡುತ್ತಿದ್ದ ಅವರು, ಯಾರನ್ನೂ ವೈಯಕ್ತಿಕವಾಗಿ ದ್ವೇಷಿಸುತ್ತಿರಲಿಲ್ಲ. ಸಮಾಜದ ಹಿತಕ್ಕೆ ಪೂರಕವಾದ ವಿಚಾರಗಳನ್ನು ನೇರವಾಗಿ ಹೇಳುತ್ತಿದ್ದರು. ವಿಧಾನ ಪರಿಷತ್ ನಲ್ಲಿ ಅವರ ಭಾಷಣ ಯುವ ಪೀಳಿಗೆಗೆ ಮಾದರಿ, ಸರಳ ಸಜ್ಜನಿಕೆಯ ರಾಜಕಾರಣಿ ಎಂದು ಸಿ.ಎಂ. ಡಿ.ಕೆ. ಶಿವಕುಮಾರ್ ಗುಣಗಾನ ಮಾಡಿದರು. ರಾಮಚಂದ್ರಗೌಡರು ತಮಗೆ ಹತ್ತಿರದ ಸಂಬಂಧಿಕರು. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಕಾರ್ಯಕ್ರಮಕ್ಕೆ ವ್ಹೀಲ್ ಚೇರ್‌ನಲ್ಲಾದರೂ ಕರೆದುಕೊಂಡು ಹೋಗಿ ಎಂದು ಸಂಬಂಧಿಕರ ಬಳಿ ಹೇಳಿದ್ದರು ಎಂದು ಕೇಳಿದ್ದೆ. ಎರಡು ದಿನಗಳ ಹಿಂದೆ ಅವರನ್ನು ಭೇಟಿ ಮಾಡಬೇಕು ಎಂಬ ಆಸೆ ನನ್ನದಾಗಿತ್ತು. ಅದರೆ ಅದು ಆಗಲಿಲ್ಲ. ಇಂದು ಸರ್ಕಾರದ ಗೌರವದೊಂದಿಗೆ ಅವರನ್ನು ಭೇಟಿ ಮಾಡುವ ಸಂದರ್ಭದಲ್ಲಿ ನಿಂತಿದ್ದೇನೆ ಎಂದು ವಿಷಾದಿಸಿದರು. ಮಂಗಳವಾರ ಬೆಳಗ್ಗೆ ನಿಧನರಾದ ಮಾಜಿ ಸಚಿವ ರಾಮಚಂದ್ರಗೌಡರ ಅಂತ್ಯಕ್ರಿಯೆ ಸರಕಾರಿ ಗೌರವಗಳೊಂದಿಗೆ ಬೆಂಗಳೂರಿನ ಕಾಮಾಕ್ಷಿಪಾಳ್ಯದ ಸ್ವಂತ ಜಮೀನಿನಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರ ಸಮಕ್ಷಮದಲ್ಲಿ ಮಂಗಳವಾರ ಸಂಜೆ ನೆರವೇರಿತು. ಸರಕಾರಿ ಗೌರವ ಪ್ರದಾನದ ಭಾಗವಾಗಿ ಸಿಎಂ ಅವರು ರಾಮಚಂದ್ರಗೌಡರ ಪತ್ನಿ ಯಶೋಧಾ ಅವರಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು.

Chief reporter : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com
Published from: K10,‘A’/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363



ಯುನೈಟೆಡ್ ಕೊಡವ ಸಂಸ್ಥೆ ಅಧ್ಯಕ್ಷ ಕೊಕ್ಕಲೆ ಮಾಡ ಮಂಜು ಚಿಕ್ಕಣ್ಣ ಅವರ ನೇತೃತ್ವದ ನಿಯೋಗವು ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಡಿ. ಕೆ. ಶಿವಕುಮಾರ್ ಅವರನ್ನು ಮಂಗಳವಾರ ಭೇಟಿ ಮಾಡಿತ್ತು. ಅಪ್ಪರಂಡ ವೇಣು ಪೊನ್ನಪ್ಪ, ಕಲ್ಲಿಚಂಡ ರಾಬಿನ್ ಸುಬ್ಬಯ್ಯ ಮತ್ತಿತರರುಇದ್ದರು.

## ಬಿಜೆಪಿ, ಸಂಘ ಪರಿವಾರದ ಸ್ವಾರ್ಥ ಸಾಧನೆಗೆ ಬಲಿಯಾಗಿದ್ದು ಬಡ ಮಕ್ಕಳು: ಪ್ರಿಯಾಂಕ್ ಖರ್ಗೆ ಆರೋಪ

**ಬೆಂಗಳೂರು, ಜು.14:** ಬಿಜೆಪಿ ಮತ್ತು ಸಂಘ ಪರಿವಾರದ ಸ್ವಾರ್ಥ ಸಾಧನೆಗೆ ಬಡವರ ಮನೆಯ ಮಕ್ಕಳ ಜೀವಗಳಷ್ಟೇ ಅಲ್ಲ, ಬದುಕುಗಳೂ ಬಲಿಯಾಗಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ಈ ಕುರಿತು ತಮ್ಮ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, "ಧರ್ಮ ರಕ್ಷಣೆಯ ಹೆಸರಲ್ಲಿ ಸತ್ತವರದ್ದು ಒಂದು ಕತೆಯಾದರೆ ಬದುಕಿರುವ ಒಬ್ಬೊಬ್ಬರದ್ದೂ ಒಂದೊಂದು ಕರುಣಾಜನಕ ಕತೆಗಳು ಹೊರಬರುತ್ತಿವೆ. ವೇದಿಕೆ ಮೇಲೆ ಪ್ರಚೋದನೆಯ ಭಾಷಣ ಮಾಡಿದವರಿಗೆ ಐಷಾರಾಮಿ ಬದುಕು, ವೇದಿಕೆ ಕೆಳಗೆ ನಿಂತು ಶಿಳ್ಳೆ-ಚಪ್ಪಾಳೆ ಹಾಕಿದವರದ್ದು ಶೋಚನೀಯ ಬದುಕು ಎಂದು ಹೇಳಿದ್ದಾರೆ.

ಬಡ ಮತ್ತು ತಳ ಸಮುದಾಯದ ಯುವಕರು ಬದುಕು ಕಟ್ಟಿಕೊಳ್ಳುವ ಮತ್ತು ಜೀವನದ ದಾರಿ ಕಂಡುಕೊಳ್ಳುವ ವಯಸ್ಸಿನಲ್ಲಿ ಅವರನ್ನು ಪ್ರಚೋದನಾತ್ಮಕ ಭಾಷಣಗಳಿಂದ ದಿಕ್ಕು ತಪ್ಪಿಸಿ, ತ್ರಿಶೂಲ ದೀಕ್ಷೆ ನೀಡಿ, ಬೀದಿಗಿಳಿಸಿ ಅವರ ಜೀವನದೊಂದಿಗೆ ಚೆಲ್ಲಾಟವಾಡುವ ವೇದಿಕೆ ಭಾಷಣಕಾರರು ಒಂದು ದಿನವೂ ಈ ಬಡವರ ಮಕ್ಕಳ ಬದುಕಿನ ಸ್ಥಿತಿಗತಿಗಳ ಬಗ್ಗೆ ಕನಿಕರ ವ್ಯಕ್ತಪಡಿಸಿಲ್ಲ, ನೆರವು ನೀಡಿಲ್ಲ. ಈ ವೇದಿಕೆ ಭಾಷಣಕಾರರು ಒಂದು ದಿನವೂ ಬಂಧನಕ್ಕೆ ಒಳಪಟ್ಟಿಲ್ಲ, ಇವರ ಮನೆಯ ಮಕ್ಕಳು ಒಂದು ದಿನವೂ ಧರ್ಮ ರಕ್ಷಣೆಗೆ ಬೀದಿಗಿಳಿದಿಲ್ಲ. ಬಡವರ ಮಕ್ಕಳು ಕೇಸ್ ಹಾಕಿಸಿಕೊಂಡು ಕೋರ್ಟಿಗೆ ಅಲೆಯುವಾಗ ಕಾನೂನು ನೆರವು ನೀಡಿಲ್ಲ, ಆರ್ಥಿಕ ನೆರವಂತೂ ಇಲ್ಲವೇ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ಹಾಗೂ ಆರ್‌ಎಸ್‌ಎಸ್ ನೀಡಿದ ಧರ್ಮ ರಕ್ಷಣೆ ನಶೆಯನ್ನು ತಲೆಗೇರಿಸಿಕೊಂಡವರು ಈಗ ಪಶ್ಚಾತ್ತಾಪ ಪಡುತ್ತಿದ್ದಾರೆ, ತಮ್ಮ ಬದುಕು ಕಳೆದುಕೊಂಡಿದ್ದಕ್ಕೆ ಮರುಗುತ್ತಿದ್ದಾರೆ. ತೀರಿ ಹೋದವರ ಕುಟುಂಬದವರೂ ಸಹ ತಮ್ಮ ಮಕ್ಕಳನ್ನು ಕಳೆದುಕೊಂಡ ನೋವಿನಲ್ಲಿ ಶೋಕಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ. ತಳ ಸಮುದಾಯಗಳ ಯುವ ಸಮುದಾಯಕ್ಕೆ ಇವರೆಲ್ಲರ ನೋವಿನ ಮಾತುಗಳು ಸರಿ ದಾರಿತೋರಲಿ ಎಂದು ಪ್ರಿಯಾಂಕ್ ಖರ್ಗೆ ಆಶಿಸಿದ್ದಾರೆ.

## ಆ.15ರೊಳಗೆ ಪಂಚಾಯಿತಿಗಳಿಗೆ ಮಹಾತ್ಮಾಗಾಂಧಿ ಹೆಸರಿಡಲು ಗಡುವು ಸಚಿವ ಈಶ್ವರ ಖಂಡ್ರೆ



**ಬೆಂಗಳೂರು, ಜು.14:** ಆಗಸ್ಟ್ 15ರ ಸ್ವಾತಂತ್ರ್ಯ ದಿನದೊಳಗೆ ರಾಜ್ಯದ ಎಲ್ಲ 5927 ಗ್ರಾಮ ಪಂಚಾಯ್ತಿಗಳಿಗೆ ಮಹಾತ್ಮಾ ಗಾಂಧೀ ಪಂಚಾಯತಿ ಎಂದು ನಾಮಕರಣ ಮಾಡಲು ಗಡುವು ನೀಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಇಲಾಖೆಯ ಆಯುಕ್ತಾಲಯ ದಲ್ಲಿಂದು ಪಿಡಿಓ, ಕಾರ್ಯದರ್ಶಿ ಮತ್ತು ಲೆಕ್ಕ ಸಹಾಯಕರ ವರ್ಗಾವಣೆ ಕೌನ್ಸೆಲಿಂಗ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಷ್ಟ್ರಪಿತ ಮಹಾತ್ಮಾ ಗಾಂಧೀ ಹೆಸರನ್ನು ಚಿರಸ್ಥಾಯಿಗೊಳಿಸಲು 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 279ರಲ್ಲಿ ಘೋಷಣೆ ಮಾಡಿರುವಂತೆ ಎಲ್ಲ ಪಂಚಾಯ್ತಿಗಳ ಹೆಸರು ಬದಲಾವಣೆ ಮಾಡಲು ಸ್ಪಷ್ಟ ಸೂಚನೆ ನೀಡಲಾಗಿದೆ ಎಂದರು.

ಯುಪಿಎ ಕಾರ್ಯಕಾಲದಲ್ಲಿ ಗ್ರಾಮ ಸ್ವರಾಜ್ಯದ ಪ್ರತಿಪಾದಕರಾಗಿದ್ದ ರಾಷ್ಟ್ರಪಿತ ಗಾಂಧೀ ಗೌರವಾರ್ಥ ಮಹಾತ್ಮಾಗಾಂಧೀ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ -ಮನ್ರೇಗಾ ಎಂದು ಹೆಸರಿಡಲಾಗಿತ್ತು. ಆದರೆ, ಕೇಂದ್ರ ಸರ್ಕಾರ ಜುಲೈ 1ರಿಂದ ಜಾರಿಗೆ ತಂದಿರುವ ವಿಬಿ ಜಿ ರಾಮ್ ಜಿಯಲ್ಲಿ ಮಹಾತ್ಮಾ ಗಾಂಧೀ ಹೆಸರನ್ನೇ ತೆಗೆದು ಹಾಕಿದೆ. ಹೀಗಾಗಿ ರಾಜ್ಯ ಸರ್ಕಾರ ಎಲ್ಲ ಪಂಚಾಯತಿಗಳಿಗೆ ಗಾಂಧೀ ಹೆಸರಿಡಲು ತೀರ್ಮಾನಿಸಿದೆ ಎಂದರು.

ತಾವು ಕಳೆದ ತಿಂಗಳು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಸಮಾವೇಶದಲ್ಲಿ ದೇಶದಲ್ಲಿರುವ ಎಲ್ಲ 2.68 ಕೋಟಿ ಗ್ರಾಮ ಪಂಚಾಯತಿಗಳಿಗೂ ಮಹಾತ್ಮಾ ಗಾಂಧೀ ಹೆಸರಿಡುವಂತೆ ಆಗ್ರಹಿಸಿದ್ದಾಗಿ ತಿಳಿಸಿದರು.ಅದೇ ರೀತಿ ವಿಬಿಜಿ ರಾಮ್‌ಜಿ ಹೆಸರಿನ ಮುಂದೆ ಗಾಂಧೀ ಹೆಸರಿಟ್ಟು ಮಹಾತ್ಮಾ ಗಾಂಧೀ ವಿಬಿ ಜಿ ರಾಮ್ ಜಿ ಎಂದು ಮರುನಾಮಕರಣ ಮಾಡುವಂತೆ ಒತ್ತಾಯಿಸಿದ್ದಾಗಿಯೂ ಈಶ್ವರ ಖಂಡ್ರೆ ತಿಳಿಸಿದರು.

## ಅಪಾರ್ಟ್‌ಮೆಂಟ್ ಮಾಲೀಕತ್ವ ನಿರ್ವಹಣೆಗೆ ಕಠಿಣ ಕಾನೂನು

### ಜನರ ಬೇಡಿಕೆ ಹಿನ್ನೆಲೆಯಲ್ಲಿ ಕಾಯ್ದೆ ತಿದ್ದುಪಡಿಗೆ ಸರ್ಕಾರ ಚಿಂತನೆ: ಸಚಿವ ಕೃಷ್ಣಬೈರೇಗೌಡ



**ಬೆಂಗಳೂರು, ಜು.14:** ರಾಜಧಾನಿ ಬೆಂಗಳೂರಿನಲ್ಲಿ ಫುಟ್‌ಪಾತ್ ಒತ್ತುವರಿ ತೆರವು ಮತ್ತು ಬೀದಿಬದಿ ವ್ಯಾಪಾರಿಗಳ ಸ್ಥಳಾಂತರ ಕಾರ್ಯಾಚರಣೆ ಮೂಲಕ ಜನಮನ್ನಣೆ ಗಳಿಸಿರುವ ಗ್ರೇಟರ್ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಇದೀಗ ಬಹುದಿನಗಳ ಬೇಡಿಕೆಗೆ ಸ್ಪಂದಿಸಲು ಮುಂದಾಗಿದ್ದಾರೆ.

ಬೆಂಗಳೂರಿನಲ್ಲಿರುವ ಅಪಾರ್ಟ್‌ಮೆಂಟ್‌ಗಳ ನಿರ್ವಹಣೆ ಮತ್ತು ಮಾಲೀಕತ್ವಕ್ಕೆ ಚಾಲ್ತಿಯಲ್ಲಿರುವ ಕಾನೂನುಗಳು ಸಮರ್ಪಕವಾಗಿಲ್ಲ. ಒಂದು ರೀತಿ ತಂತಿ ಮೇಲಿನ ನಡಿಗೆಯಂತೆ ಅಪಾರ್ಟ್‌ಮೆಂಟ್ ವಾಸಿಗಳು ಜೀವಿಸುತ್ತಿದ್ದಾರೆ. ಗೊಂದಲಗಳಿಂದಾಗಿಯೇ ಬೆಂಗಳೂರಿನಲ್ಲಿ ನಿವೇಶನ ಖರೀದಿ ದುಬಾರಿಯಾದರೂ ಅಪಾರ್ಟ್‌ಮೆಂಟ್ ಫ್ಲಾಟ್‌ಗಳ ಖರೀದಿಯತ್ತ ಹೆಚ್ಚು ಜನ ಆಸಕ್ತಿ ವಹಿಸುತ್ತಿಲ್ಲ. ಅಪಾರ್ಟ್‌ಮೆಂಟ್‌ಗಳ ಮಾಲೀಕತ್ವ ಹಾಗೂ ನಿರ್ವಹಣೆ ವಿಷಯವಾಗಿ ಕರಾರುವಕ್ಕಾದ ಕಾನೂನು ರೂಪುಗೊಳ್ಳಬೇಕು ಎಂಬ ಬೇಡಿಕೆ ಬಹಳ ದಿನಗಳಿಂದ ಕೇಳಿ ಬರುತ್ತಿದೆ. ಅದಕ್ಕೆ ಸ್ಪಂದಿಸಲು ಸಚಿವ ಕೃಷ್ಣ ಬೈರೇಗೌಡ ಇದೀಗ ಮುಂದಾಗಿದ್ದಾರೆ.

ಈ ಬಗ್ಗೆ ವಿಡಿಯೋ ಸಂದೇಶದಲ್ಲಿ ಸಚಿವ ಕೃಷ್ಣಬೈರೇಗೌಡ, ಅಪಾರ್ಟ್‌ಮೆಂಟ್ ಮಾಲೀಕರು ತಮ್ಮ ಮಾಲೀಕತ್ವ, ಆಡಳಿತ ಮತ್ತು ನಿರ್ವಹಣೆಗೆ ಸಂಬಂಧಿಸಿದ ಅಗತ್ಯಗಳನ್ನು ಉತ್ತಮವಾಗಿ ಪರಿಹರಿಸುವ ಹೊಸ ಕಾಯ್ದೆಗಾಗಿ ಹಲವು ವರ್ಷಗಳಿಂದ ಒತ್ತಾಯಿಸುತ್ತಿದ್ದಾರೆ. ನಮ್ಮ ಸರ್ಕಾರವು ನಾಗರಿಕರ ಈ ಬೇಡಿಕೆಗಳನ್ನು ಗಮನದಲ್ಲಿಟ್ಟುಕೊಂಡು ಕಾಯ್ದೆ ತಿದ್ದುಪಡಿಗೆ ಮುಂದಾಗಿದೆ ಎಂದು ತಿಳಿಸಿದ್ದಾರೆ.

### ಅಭಿಪ್ರಾಯ, ಸಲಹೆ ಪಡೆಯಲು ಇಂದು ಸಭೆ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ, ಸರ್ಕಾರವು ಕರಡು ವಿಧೇಯಕವನ್ನು ಸಿದ್ಧಪಡಿಸಿದೆ. ಇದನ್ನು ಮುಂದುವರಿಸುವ ಮುನ್ನ, ನಾವು ಎಲ್ಲಾ ಪಾಲುದಾರರ ಅಭಿಪ್ರಾಯಗಳು ಮತ್ತು ಸಲಹೆಗಳನ್ನು ಪಡೆಯಲು ಬಯಸುತ್ತೇವೆ. ಅದಕ್ಕಾಗಿ ಜುಲೈ 15ರ ಬುಧವಾರದಂದು ಪೂರ್ವಾಹ್ನ 11 ಗಂಟೆಗೆ ಜವಾಹರಲಾಲ್ ನೆಹರು ತಾರಾಲಯದ ಸಭಾಂಗಣದಲ್ಲಿ ಭಾಧ್ಯಸ್ಥರ ಸಮಾಲೋಚನಾ ಸಭೆಯನ್ನು ಆಯೋಜಿಸಲಾಗಿದೆ. ಈ ಸಮಾಲೋಚನಾ ಸಭೆಯಲ್ಲಿ ಮುಖ್ಯಮಂತ್ರಿಗಳು ಉಪಸ್ಥಿತರಿರಲಿದ್ದಾರೆ. ಈ ಪ್ರಮುಖ ಶಾಸನವನ್ನು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗುವುದು, ನಂತರ ವಿಧಾನ ಮಂಡಲದಲ್ಲಿ ಅಂಗೀಕಾರ ಪಡೆಯಲಾಗುವುದು. ಉತ್ತಮ ಶಾಸನ ರೂಪಿಸಲು ಸಂಬಂಧಪಟ್ಟವರು ತಮ್ಮ ಸಲಹೆ ಹಾಗೂ ಸಹಕಾರ ನೀಡಬೇಕು. ಈ ನಿಟ್ಟಿನಲ್ಲಿ ಆಯೋಜಿಸಿರುವ ಸಭೆಯಲ್ಲಿ ಭಾಗವಹಿಸುವಂತೆ ಆಹ್ವಾನಿಸಿದ್ದಾರೆ.

## ಡಾ. ಫ.ಗು.ಹಳಕಟ್ಟಿ ಕನ್ನಡ ವಚನ ಸಾಹಿತ್ಯದ ಸಂರಕ್ಷಣೆ ಮೂಲಕ ಕನ್ನಡವನ್ನು ಕರ್ನಾಟಕಕ್ಕೆ ಮತ್ತು ವಿಶ್ವಕ್ಕೆ ಪರಿಚಯಿಸಿದ ಅಪ್ಪಟ ಕನ್ನಡ ಪ್ರೇಮಿ



**ನವದೆಹಲಿ, ಜು.14:** ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕ (12.07.26) ಭಾನುವಾರ ಸಂಜೆ ದೆಹಲಿ ಕರ್ನಾಟಕ ಸಂಘದ ವಿಚಾರ ಸಂಕಿರಣ ಸಭಾಂಗಣದಲ್ಲಿ ಆಯೋಜಿಸಿದ್ದ

ವಚನ ಸಾಹಿತ್ಯ ಪಿತಾಮಹ ಡಾ.ಫ ಗು ಹಳಕಟ್ಟಿ ಅವರ ಜಯಂತ್ಯುತ್ಸದ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಆಶೀರ್ವಚನ ನೀಡಿದ ನವದೆಹಲಿಯ ಸಾಕೇತನಲ್ಲಿರುವ ಸುತ್ತೂರು ಸಾಂಸ್ಕೃತಿಕ ಭವನದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಅವರು ಹಳಕಟ್ಟಿ ಅವರು ಕನ್ನಡ ವಚನ ಸಾಹಿತ್ಯದ ಸಂರಕ್ಷಣೆ ಮೂಲಕ ಕನ್ನಡ ಕರ್ನಾಟಕಕ್ಕೆ ವಿಶ್ವಕ್ಕೆ ಪರಿಚಯಿಸಿದ ಅಪ್ಪಟ ಕನ್ನಡ ಪ್ರೇಮಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

12ನೇ ಶತಮಾನದಲ್ಲಿ ನಡೆದ ಬಸವಾದಿ ಶರಣರ ಸಾಮಾಜಿಕ ಕ್ರಾಂತಿಯ ನಂತರ ಹರಿದು ಹಂಚಿ ಹೋಗಿದ್ದ ವಚನ ಸಾಹಿತ್ಯವನ್ನು ಡಾ. ಫ ಗು ಹಳಕಟ್ಟಿ ಅವರು ಕಷ್ಟ ಪಟ್ಟು ಸಂಗ್ರಹಿಸಿ ಸಂಸ್ಕರಣೆ ಮಾಡಿ ಮುದ್ರಿಸಿದರು. ಅಷ್ಟೇ ಅಲ್ಲದೆ ಅವರು ಬಿಜಾಪುರ ಜಿಲ್ಲೆಯು ಭೀಕರ ಬರಗಾಲ ಎದುರಿಸುತ್ತಿರುವ ಸಮಯದಲ್ಲಿ ಮೈಸೂರು ರಾಜರ ಅಪ್ಪಣೆ ಪಡೆದು ಸರ್, ಎಂ ವಿಶ್ವೇಶ್ವರಯ್ಯ ಅವರನ್ನು ಕರೆಸಿ ಬಿಜಾಪುರ ಜಿಲ್ಲೆಯಲ್ಲಿ ಅನೇಕ ಕೆರೆಗಳನ್ನು ನಿರ್ಮಿಸುವ ಮೂಲಕ ಸಾಮಾಜಿಕ ಕಾರ್ಯಗಳನ್ನು ಸಹ ಮಾಡಿದ್ದರು, ಜೊತೆಗೆ ಮುಂಬೈ ಪ್ರಾಂತ್ಯದಲ್ಲಿ ಮರಾಠಿ ಭಾಷೆಯ ಪ್ರಭಾವವನ್ನು ಅರಿತ ಅವರು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಲು ಅನೇಕ ಕನ್ನಡ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಮುಖಾಂತರ ಕನ್ನಡ ಪ್ರೇಮವನ್ನು ಮೆರೆದರು. 12ನೆ ಶತಮಾನದಲ್ಲಿ ಕಠಿಣವಾದಂತಹ ವೇದೋಪನಿಷತ್ ಗಳನ್ನು ಸುಲಿದ ಬಾಳೆ ಹಣ್ಣಿನಂತೆ ಸರಳವಾಗಿ ಸುಲಭವಾಗಿ ನುಂಗಲು ಮಾಡಿದಂತಹ ಸಾಹಿತ್ಯ, ವಚನ ಸಾಹಿತ್ಯ. ಇಂತಹ ಸಾಹಿತ್ಯ ಇಂದು ನಾವು ಬೇರೆ ಬೇರೆ ಭಾಷೆಗಳಲ್ಲಿ ಓದುತ್ತಿರುವುದಕ್ಕೆ ಕಾರಣವೇ ಫ.ಗು ಹಳಕಟ್ಟಿ ಅವರು ಎಂದು ಅವರ ಕಾರ್ಯ ವೈಖರಿಯನ್ನು ಸ್ಲಾಘಿಸಿದರು....

ಈ ಕಾರ್ಯಕ್ರಮವು 11.07.2026ರಂದು ನಿಧನರಾದ ಸಂಗೀತ ಸಾಮ್ರಾಜ್ಞಿ ಎಸ್. ಜಾನಕಿ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸುವುದರ ಮೂಲಕ ಆರಂಭವಾಗಿ ಅತಿಥಿ ಗಣ್ಯರಿಂದ ದೀಪ ಬೆಳಗಿಸಿ ವಚನ ಪ್ರಾರ್ಥನ ಗೀತೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ತದನಂತರ ಕೆಲವು ಮಕ್ಕಳು ಡಾ. ಫ ಗು ಹಳಕಟ್ಟೆಯವರು ವಚನ ಸಾಹಿತ್ಯ ಹಾಗೂ ಕನ್ನಡ ಭಾಷೆ ಮತ್ತು ಸಾಹಿತ್ಯಕ್ಕಾಗಿ ತಮ್ಮ ಇಡೀ ಬದುಕನ್ನು ಹೇಗೆ ಸಮರ್ಪಿಸಿಕೊಂಡರು ಎನ್ನುವುದನ್ನು ಅತ್ಯಂತ ಸ್ಪಷ್ಟವಾಗಿ ಎಳೆ ಎಳೆಯಾಗಿ ಹೇಳುವುದರ ಜೊತೆಗೆ ಬಸವಣ್ಣ, ಅಕ್ಕ ಮಹಾದೇವಿಯವರಂತಹ ಶರಣರ ಚಿಂತನೆಗಳನ್ನು ಕುರಿತಾಗಿ ಮಾತನಾಡಿದರು. ಕೆಲವು ಹಿರಿಯರು ವಚನ ಗಾಯನವೂ ಕೂಡ ಮಾಡಿದರು.

ತದನಂತರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಚಂದ್ರಶೇಖರ್ ಅವರು ಮಾತನಾಡಿ ಯಾವ ರೀತಿ ಫ. ಗು.ಹಳಕಟ್ಟೆಯವರು ಸ್ವತಂತ್ರ ಪೂರ್ವದಲ್ಲಿ ಬರಪೀಡಿತ ಪ್ರದೇಶವಾದ ಬಿಜಾಪುರದ ಅಭಿವೃದ್ಧಿಗಾಗಿ ಕೆಲಸ ಮಾಡುವುದರ ಜೊತೆಗೆ, ಮರಾಠಿಮಯವಾಗಿದ್ದ ಆ ಪ್ರದೇಶ ಕನ್ನಡ ಮಾಯವನ್ನಾಗಿ ಮಾಡಿದ್ದುನ್ನು ಹೇಳುತ್ತಾ ನಮ್ಮ ಪರಿಷತ್ತು ಅದೇ ಹಾದಿಯಲ್ಲಿ ಪ್ರಯತ್ನ ಮಾಡುತ್ತಿದೆ ಎಂದರು

ಮುಖ್ಯ ಅತಿಥಿಯಾಗಿದ್ದ ಸರ್ವೋಚ್ಚ ನ್ಯಾಯಾಲಯ ನ್ಯಾಯವಾದಿ **ಕಿರೀತ್ ಜವಳಿ** ಮಾತನಾಡಿ ತಂದೆ ಶ್ರೀಶರತ್ ಜವಳಿ ಅವರಿಂದ ವಚನ ಸಾಹಿತ್ಯದ ಬಗ್ಗೆ ಅಲ್ಪ ಸ್ವಲ್ಪ ತಿಳಿದು ಕೊಂಡಿದ್ದೇವೆ ಹಾಗೂ ಈಗಿನ ಪೀಳಿಗೆಯಲ್ಲಿ ವಚನಗಳ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ, ಈ ಕಾರ್ಯವನ್ನು ಅವರ ಪೋಷಕರು ಮಾಡಬೇಕು ಎಂದು ಬಯಸಿದರು. ಅಭಾಶಸಾ ಪರಿಷತ್ತು ದೆಹಲಿ ಘಟಕದ ಕಾರ್ಯವನ್ನು ಸ್ಲಾಘಿಸಿದರು, ಮತ್ತು ಅವರನ್ನು ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳನ್ನಾಗಿ ಆಹ್ವಾನಿಸಿದಕ್ಕೆ ಹರ್ಷ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾಗಿ ಉಪಸ್ಥಿತರಿದ್ದ ಇನ್ನೊಬ್ಬರು ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ಆರ್. ರೇಣುಕುಮಾರ ಅವರು ಮಾತನಾಡಿ, ಫ .ಗು ಹಳಕಟ್ಟಿ ಅವರು ವಚನಗಳ ಸಂರಕ್ಷಣೆಗಾಗಿ ಮಾಡಿದ ಕಾರ್ಯ ಸಾಧನೆಗಳ ಬಗ್ಗೆ ಹೇಳುತ್ತಾ, ಹಳಕಟ್ಟಿಯಂತಹ ಸಾಧಕರ ಸಾಧನೆ ಯಾವಾಗಲೂ ಒಗಟಾಗಿ ಉಳಿಯದೆ ಒಗಟಿನ ಉತ್ತರವಾದಾಗ ಮಾತ್ರ ಅದು ಸಮಾಜಕ್ಕೆ ತಲುಪಲು ಸಾಧ್ಯ ಎಂದು ಹೇಳುತ್ತಾ ನಮ್ಮ ಘಟಕದ ಕಾರ್ಯವನ್ನು ಕುರಿತು ಪ್ರಶಂಸಿದರು.

ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಸುಜಾತ ನಿಂಬಾಳ ಅವರು ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ದೆಹಲಿ ಘಟಕವು ಬೆಳೆದು ಬಂದ ಪರಿಯನ್ನು ವಿವರಿಸಿದರು. ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಶಿವಪ್ಪ ಎಂ. ಅವರು ಸ್ವಾಗತಿಸಿದರೆ ಪರಿಷತ್ತಿನ ಉಪಾಧ್ಯಕ್ಷ ರಾಜಕುಮಾರ ನೀಲೂರ ಅವರು ನಿರೂಪಿಸಿದರು, ಜಂಟಿ ಕಾರ್ಯದರ್ಶಿ ಎಚ್.ಎಸ್.ತೇಲಿ ಅವರು ವಂದಿಸಿದರು, ತಾಂತ್ರಿಕ ನಿರ್ವಹಣೆಯನ್ನು ಪರಿಷತ್ತಿನ ಕೋಶಾಧ್ಯಕ್ಷ ರಾಜಶೇಖರ ಪಾಟೀಲ ಅವರು ನಿರ್ವಹಿಸಿದರು, ಕಾರ್ಯಕ್ರಮದ ನಂತರದ ದಾಸೋಹ ಪ್ರಸಾದವನ್ನು ವ್ಯವಸ್ಥೆ ಮಾಡಲಾಗಿತ್ತು. ಈ ಕಾರ್ಯಕ್ರಮದಲ್ಲಿ ಪರಿಷತ್ತಿನ ಪದಾಧಿಕಾರಿಗಳು ಹಾಗೂ ದೆಹಲಿ ಕರ್ನಾಟಕ ಸಂಘದ ಪದಾಧಿಕಾರಿಗಳು ಮತ್ತು ಅನೇಕ ದೆಹಲಿ ಎನ್‌ಸಿಆರ್‌ನಲ್ಲಿನ ಕನ್ನಡಿಗರು, ಮಕ್ಕಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು...



ನವದೆಹಲಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಗಳವಾರ ICLS ಪ್ರೊಬೇಷನರ್‌ಗಳೊಂದಿಗೆ ಸಂವಾದ ನಡೆಸಿದರು.

## ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಕ್ರಾಂತಿಕಾರಿ ಬದಲಾವಣೆಗೆ ಸರ್ಕಾರ ಬದ್ಧ

### ನಗರ ಮಟ್ಟಕ್ಕೆ ಸಮನಾದ ಗುಣಮಟ್ಟದ ಶಿಕ್ಷಣ ಒದಗಿಸಲು ಕ್ರಮ: ಸಚಿವ ಡಾ.ಶರಣಪ್ರಕಾಶ್ ಪಾಟೀಲ್




**ಸೇಡಂ, ಜು.14:** ಗ್ರಾಮೀಣ ವಿದ್ಯಾರ್ಥಿಗಳಿಗೆ ನಗರ ಪ್ರದೇಶದ ಮಟ್ಟಕ್ಕೆ ಸಮನಾದ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಮತ್ತು ಹಳ್ಳಿಗಳ ಸರ್ಕಾರಿ ಶಾಲೆಗಳಲ್ಲಿ ಕ್ರಾಂತಿಕಾರಿ ಬದಲಾವಣೆ ತರಲು ಕಾಂಗ್ರೆಸ್ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದರು.

ನಗರದಲ್ಲಿಂದು ಪಂಚಾಯತ ರಾಜ್ ಇಂಜಿನಿಯರಿಂಗ್ ಇಲಾಖೆ2024-25ನೇ ಸಾಲಿನ ಡಿ.ಡಿ.ಪಿ.ಐ. ಯೋಜನೆ ಅಡಿಯಲ್ಲಿ 72.50 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ವಿದ್ಯಾನಗರ 2 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 5 ಕೋಣೆಗಳು ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಶಾಲೆಗಳಲ್ಲಿ ಸುಸಜ್ಜಿತ ಕಟ್ಟಡ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮುಂತಾದ ಮೂಲಸೌಕರ್ಯಗಳನ್ನು ಒದಗಿಸಲು ಕೆಕೆಆರ್‌ಡಿಬಿ ವಿಶೇಷ ಅನುದಾನ ಮೀಸಲಿಡಲಾಗಿದೆ ಎಂದರು.

ಈ ವೇಳೆಯಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಶರಣರೆಡ್ಡಿ ಪಾಟೀಲ್, ನಗರ ಪ್ರಾಧಿಕಾರದ ಅಧ್ಯಕ್ಷರಾದ ವಿಶ್ವನಾಥ ಪಾಟೀಲ ಬೊಮ್ಮನಹಳ್ಳಿ, ಕ್ಷೇತ್ರ ಶಿಕ್ಷಣಾಧಿಕಾರಿ ಮಾರುತಿ ಹುಜುರಾತಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗದ ಎಇಇ ವಿಶ್ವನಾಥ ಮಾವಿನಗಿಡ, ಗುತ್ತಿಗೆದಾರ ಚಂದ್ರಯ್ಯ ಮಠಪತಿ, ಸತೀಶ್ ರೆಡ್ಡಿ ಪಾಟೀಲ್ ರಂಜೋಳ, ಹಾಜಿ ನಾಡೇಪಲ್ಲಿ, ಜಗನ್ನಾಥ ಚಿಂತಪಳ್ಳಿ, ಬಸವರಾಜ ಸಾಗರ, ಅಂಬರೀಶ್ ಊಡಗಿ, ನಗರ ಸಭೆ ಪೌರಾಯುಕ್ತ ಶರಣಯ್ಯ ಸ್ವಾಮಿ, ಜೀನಜಾನಿ ಜಾಗೀರದಾರ ಹಾಗೂ, ರಾಜು ಚವ್ಹಾಣ,ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷ ಭೀಮರಾಯ ದೊಡ್ಡಮನಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಎಮ್.ಡಿ ಸೈಯ್ಯದ್, ಶಾಲಾ ಮುಖ್ಯೋಪಾಧ್ಯಾಯನಿ ಚಂದುಬಾಯಿ ಕುಲಕರ್ಣಿ, ಲಲಿತಾ ಬಾಯಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಭೂಮಾಫಿಯಾ, ಉದ್ಯಮಿಗಳ ಹಿತಾಸಕ್ತಿಗಾಗಿ ರೈತರಿಂದ ಬಲವಂತವಾಗಿ ಸ್ವಾಧೀನ

### ಕಾಂಗ್ರೆಸ್ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿ ವಾಗ್ದಾಳಿ



**ಬೆಂಗಳೂರು, ಜು.14:** ರಾಮನಗರ ಜಿಲ್ಲೆಯ ಬಿಡದಿ ರೈತರ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿರುವುದು ರಾಜಕೀಯ ಕದನಕ್ಕೆ ಕಾರಣವಾಗಿದೆ. ಈ ಕುರಿತು ಟ್ವಿಟರ್‌ನಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ರೈತರ ಭೂಮಿಯನ್ನು ಬಲವಂತವಾಗಿ ಕಸಿದುಕೊಳ್ಳುತ್ತಿರುವ ಸರ್ಕಾರದ ಧೋರಣೆಯನ್ನು ತೀವ್ರವಾಗಿ ಖಂಡಿಸಿದ್ದಾರೆ.

ಕೇಂದ್ರ ಸರ್ಕಾರದ ಕೃಷಿ ಕಾಯ್ದೆಗಳನ್ನು ವಿರೋಧಿಸಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ನಿಲುವನ್ನು ಉಲ್ಲೇಖಿಸಿರುವ ವಿಜಯೇಂದ್ರ, ಅಂದು ರೈತರಿಗೆ ನೆರವಾಗುವ ಕಾಯ್ದೆಗಳನ್ನು ವಿರೋಧಿಸಿದ ಕಾಂಗ್ರೆಸ್, ಇಂದು ಬಿಡದಿ ಭಾಗದಲ್ಲಿ ಭೂಮಾಫಿಯಾ ಮತ್ತು ಉದ್ಯಮಿಗಳ ಹಿತಾಸಕ್ತಿಗಾಗಿ ಬಡ ರೈತರ ಫಲವತ್ತಾದ ಕೃಷಿ ಭೂಮಿಯನ್ನು ಬಲವಂತವಾಗಿ ಕಸಿದುಕೊಳ್ಳುತ್ತಿದೆ ಎಂದು ಆರೋಪಿಸಿದ್ದಾರೆ. ಈ ದೌರ್ಜನ್ಯ ನಡೆಯುತ್ತಿದ್ದರೂ ರಾಹುಲ್ ಗಾಂಧಿ ಮಾತ್ರ ಎಲ್ಲೂ ಕಾಣಿಸಿಕೊಳ್ಳುತ್ತಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಅಭಿವೃದ್ಧಿಯ ಹೆಸರಿನಲ್ಲಿ ಏಕೈಕ ಜೀವನೋಪಾಯವಾಗಿರುವ ಕೃಷಿ ಭೂಮಿಯನ್ನು ಕಳೆದುಕೊಳ್ಳಲು ಸಿದ್ಧರಿಲ್ಲದ ರೈತರು ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದಾರೆ. ಆದಾಗ್ಯೂ, ರೈತರ ಇಚ್ಛೆಗೆ ವಿರುದ್ಧವಾಗಿ ಪೊಲೀಸ್ ಬಂದೋಬಸ್ತ್‌ನೊಂದಿಗೆ ಅಧಿಕಾರಿಗಳು ಜಮೀನು ಸಮೀಕ್ಷೆ ನಡೆಸಲು ಮುಂದಾಗಿದ್ದಾರೆ. ಸರ್ಕಾರದ ಈ ಸರ್ವಾಧಿಕಾರಿ ಧೋರಣೆ ಮತ್ತು ಭೂಸ್ವಾಧೀನ ಪ್ರಕ್ರಿಯೆಯ ಹಿಂದೆ ರಿಯಲ್ ಎಸ್ಟೇಟ್ ಮಾಫಿಯಾದ ಕೈವಾಡವಿದೆ ಎಂಬುದು ಸ್ಪಷ್ಟವಾಗಿ ಕಾಣಿಸುತ್ತಿದೆ ಎಂದು ವಿಜಯೇಂದ್ರ ಆಪಾದಿಸಿದ್ದಾರೆ.

ತಮ್ಮ ಸ್ವಂತ ನೆಲದಲ್ಲೇ ರೈತರನ್ನು ಬೀದಿಪಾಲು ಮಾಡಲು ಕಾಂಗ್ರೆಸ್ ಸರ್ಕಾರ ಸಂಚು ರೂಪಿಸಿದೆ. ಸರ್ಕಾರದ ಹಠಮಾರಿ ಧೋರಣೆಯಿಂದಾಗಿ ಆಕ್ರೋಶಗೊಂಡ ಬಡ ರೈತ ಮಹಿಳೆಯರು ಅಧಿಕಾರಿಗಳ ವಿರುದ್ಧ ಪೊರಕೆ ಹಿಡಿದು ಆಕ್ರೋಶ ವ್ಯಕ್ತಪಡಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ತಕ್ಷಣವೇ ತನ್ನ ಭೂಸ್ವಾಧೀನ ಆದೇಶವನ್ನು ಹಿಂಪಡೆಯದಿದ್ದರೆ, ಇದೇ ಜನಾಕ್ರೋಶದ ಬಿಸಿ ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ನಾಯಕರಿಗೆ ತಟ್ಟಲಿದೆ ಎಂದು ವಿಜಯೇಂದ್ರ ಎಚ್ಚರಿಸಿದ್ದಾರೆ.

## ಅನ್ನದಾತರ ವಿರುದ್ಧ ಸೇಡಿನ ರಾಜಕಾರಣ ನಿಲ್ಲಿಸಿ: ಆರ್.ಅಶೋಕ್

**ಬಿಡದಿ ಟೌನ್‌ಶಿಪ್ ಹೋರಾಟಗಾರರ ವಿರುದ್ಧದ ಪ್ರಕರಣ ಹಿಂಪಡೆಯುವಂತೆ ಆಗ್ರಹ**

**ಸರ್ಕಾರಕ್ಕೆ 48 ಗಂಟೆಗಳ ಗಡುವು**



**ಬೆಂಗಳೂರು, ಜು.14:** ಬಿಡದಿ ಸೂಪರ್ ಸಿಟಿ ಟೌನ್‌ಶಿಪ್ ಯೋಜನೆಗಾಗಿ ನಡೆಯುತ್ತಿರುವ ಭೂಸ್ವಾಧೀನ ಪ್ರಕ್ರಿಯೆಯು ಇದೀಗ ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷ ಬಿಜೆಪಿ ನಡುವೆ ಬೃಹತ್ ರಾಜಕೀಯ ಸಂಘರ್ಷಕ್ಕೆ ನಾಂದಿ ಹಾಡಿದೆ.

ಟೌನ್‌ಶಿಪ್ ಹೆಸರಿನಲ್ಲಿ ರಾಜ್ಯ ಸರ್ಕಾರವು ಅನ್ನದಾತರ ಜಮೀನಿನ ಮೇಲೆ ದಬ್ಬಾಳಿಕೆ ನಡೆಸುತ್ತಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದು, ಸರ್ಕಾರದ ನಡೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ರೈತರಿಗೆ ಯಾವುದೇ ಪೂರ್ವ ಮಾಹಿತಿ ಅಥವಾ ಮುನ್ಸೂಚನೆ ನೀಡದೆ ಏಕಾಏಕಿ ಅವರ ಕೃಷಿ ಭೂಮಿಗೆ ನುಗ್ಗಿ ಜಂಟಿ ಸರ್ವೇ ನಡೆಸಲು ಅಧಿಕಾರಿಗಳು ಮುಂದಾಗಿರುವುದನ್ನು ಖಂಡಿಸಿದ್ದಾರೆ. ಸರ್ಕಾರದ ಈ ಅನಧಿಕೃತ ನಡವಳಿಕೆಯನ್ನು ಪ್ರಶ್ನಿಸಿದ ಅಮಾಯಕ ರೈತರ ಮೇಲೆಯೇ ಸುಳ್ಳು ಎಫ್‌ಐಆರ್ ದಾಖಲಿಸಿ, ಜೈಲಿಗಟ್ಟುವ ಮೂಲಕ ಬೆದರಿಕೆ ತಂತ್ರ ಅನುಸರಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ರೈತರ ಹಿತರಕ್ಷಣೆ ಮಾಡಬೇಕಾದ ಸರ್ಕಾರವೇ ಪೊಲೀಸ್ ಬಲವನ್ನು ಬಳಸಿಕೊಂಡು ಶಾಂತಿಯುತ ಪ್ರತಿಭಟನೆಯನ್ನು ಹತ್ತಿಕ್ಕಲು ಯತ್ನಿಸುತ್ತಿರುವುದು ಪ್ರಜಾಪ್ರಭುತ್ವ ವಿರೋಧಿ ಕೃತ್ಯ ಎಂದು ಅವರು ಕರೆಯುದ್ದಕ್ಕೂ ತರಾಟೆಗೆ ತೆಗೆದುಕೊಂಡಿದ್ದಾರೆ. ನೇರವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೆಸರನ್ನು ಪ್ರಸ್ತಾಪಿಸಿರುವ ಆರ್. ಅಶೋಕ್, "ಅನ್ನದಾತರ ವಿರುದ್ಧ ಹೂಡಿರುವ ಸೇಡಿನ ರಾಜಕಾರಣವನ್ನು ತಕ್ಷಣವೇ ನಿಲ್ಲಿಸಬೇಕು" ಎಂದು ಆಗ್ರಹಿಸಿದ್ದಾರೆ. ಅಷ್ಟೇ ಅಲ್ಲದೆ, ಸರ್ಕಾರಕ್ಕೆ 48 ಗಂಟೆಗಳ ಗಡುವು ನೀಡಿರುವ ಅವರು, ಈ ಅವಧಿಯೊಳಗೆ ರೈತರ ಮೇಲಿನ ಎಲ್ಲಾ ಸುಳ್ಳು ಪ್ರಕರಣಗಳನ್ನು ಬೇಷರತ್ತಾಗಿ ಹಿಂಪಡೆಯಬೇಕು ಮತ್ತು ವಶಕ್ಕೆ ಪಡೆದಿರುವ ಅಮಾಯಕರನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಒಂದು ವೇಳೆ ಸರ್ಕಾರ ಈ ಗಡುವಿಗೆ ಸ್ಪಂದಿಸದಿದ್ದರೆ, ಇಡೀ ರಾಜ್ಯದ ರೈತರನ್ನು ಸಂಘಟಿಸಿ ಬಿಜೆಪಿ ಬೀದಿಗಿಳಿಯಲಿದ್ದು, ಸರ್ಕಾರದ ವಿರುದ್ಧ ಉಗ್ರ ಹೋರಾಟ ರೂಪಿಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರದ ಈ ರೈತ ವಿರೋಧಿ ಮತ್ತು ದಬ್ಬಾಳಿಕೆಯ ನೀತಿಗೆ ಕರ್ನಾಟಕದ ಜನತೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಅಶೋಕ್ ಟ್ವೀಟ್ ಮೂಲಕ ಆಕ್ರೋಶ ಹೊರಹಾಕಿದ್ದಾರೆ.

## ಪ್ರತಿಭಟನೆ ಹೆಸರಲ್ಲಿ ಅಧಿಕಾರಿಗಳ ಮೇಲೆ ಹಲ್ಲೆ ಒಪ್ಪಲು ಸಾಧ್ಯವಿಲ್ಲ

### ಶಾಂತಿಯುಂತ ಹೋರಾಟ ಎಲ್ಲರ ಹಕ್ಕು: ಕಾನೂನು ಕ್ರಮದ ಎಚ್ಚರಿಕೆ ನೀಡಿದ ಸಚಿವ ಡಾ.ಜಿ. ಪರಮೇಶ್ವರ್



**ಬೆಂಗಳೂರು, ಜು.14:** ಶಾಂತಿಯುತ ಪ್ರತಿಭಟನೆ ನಡೆಸುವುದು ಎಲ್ಲರ ಹಕ್ಕು ಮತ್ತು ಅದಕ್ಕೆ ಸರ್ಕಾರದ ವಿರೋಧವಿಲ್ಲ. ಆದರೆ ಪ್ರತಿಭಟನೆಯ ಹೆಸರಿನಲ್ಲಿ ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆ ನಡೆಸುವುದು, ಕಲ್ಲು ತೂರಾಟ ನಡೆಸುವುದು ಹಾಗೂ ಕಾನೂನು ಕೈಗೆತ್ತಿಕೊಳ್ಳುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ನಡೆಯುತ್ತಿರುವ ರೈತರ ಪ್ರತಿಭಟನೆ ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ಅವರು, ಇಂತಹ ಘಟನೆಗಳ ವಿರುದ್ಧ ಕಾನೂನು ಪ್ರಕಾರವೇ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಸರ್ವೇ ಅಧಿಕಾರಿಯೊಬ್ಬರ ಮೇಲೆ ಪೊರಕೆಯಿಂದ ಹಲ್ಲೆ ನಡೆಸಲಾಗಿದೆ. ಕಲ್ಲು ತೂರಾಟವೂ ನಡೆದಿದೆ. ಈ ಸಂಬಂಧ ರೈತರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಬಿಡದಿಯಲ್ಲಿ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತವಾಗುತ್ತಿರುವುದು ಗೊತ್ತಿದೆ. ಕಾನೂನುಬದ್ಧವಾಗಿ ಜನರು ಶಾಂತಿಯುತವಾಗಿ ಪ್ರತಿಭಟನೆ ನಡೆಸಿದರೆ ಯಾರೂ ಅದನ್ನು ವಿರೋಧಿಸುವುದಿಲ್ಲ. ಆದರೆ, ರಾಜಕೀಯ ಕಾರಣಗಳಿಂದ ಅಥವಾ ರಾಜಕೀಯ ಒತ್ತಡದ ಮೇರೆಗೆ ಪ್ರತಿಭಟನೆ ನಡೆಸಿ ಹಿಂಸಾಚಾರಕ್ಕೆ ಮುಂದಾದರೆ, ಸರ್ಕಾರ ಅಗತ್ಯವಿರುವ ಕಾನೂನು ಕ್ರಮವನ್ನು ಖಂಡಿತ ಕೈಗೊಳ್ಳುತ್ತದೆ ಎಂದು ಹೇಳಿದ್ದಾರೆ.

ಸಚಿವ ಸಂಪುಟ ವಿಸ್ತರಣೆ ಕುರಿತು ಮಾತನಾಡಿದ, ಶೀಘ್ರದಲ್ಲೇ ವಿಧಾನಮಂಡಲ ಅಧಿವೇಶನ ನಡೆಯುವ ಸಾಧ್ಯತೆ ಇದೆ. ಆದರೆ, ಸಚಿವ ಸಂಪುಟ ವಿಸ್ತರಣೆ ಇನ್ನೂ ಆಗಿಲ್ಲ. ರಾಜ್ಯದಾದ್ಯಂತ ಕೆಲವು ರಾಜಕೀಯ ಬೆಳವಣಿಗೆಗಳು ನಡೆಯಬಹುದು. ಅವೆಲ್ಲವನ್ನೂ ನಾವು ಸಮರ್ಥವಾಗಿ ಎದುರಿಸುತ್ತೇವೆ" ಎಂದು ತಿಳಿಸಿದರು.

ಸಚಿವ ಸಂಪುಟದಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ ಪ್ರತಿಕ್ರಿಯಿಸಿ, "ಸಂಪುಟದಲ್ಲಿ ಇನ್ನೂ 20 ಸಚಿವ ಸ್ಥಾನಗಳು ಖಾಲಿ ಇವೆ. ಅವುಗಳನ್ನು ಭರ್ತಿ ಮಾಡುವ ಕುರಿತು ಪಕ್ಷದ ಹೈಕಮಾಂಡ್ ಈಗಾಗಲೇ ಚರ್ಚೆ ನಡೆಸುತ್ತಿದೆ. ರಾಹುಲ್ ಗಾಂಧಿ ಕೂಡ ವಿದೇಶ ಪ್ರವಾಸದಿಂದ ಮರಳಿದ್ದಾರೆ. ಹೀಗಾಗಿ ಮುಂದಿನ ಕೆಲ ದಿನಗಳಲ್ಲಿ ಈ ಬಗ್ಗೆ ನಿರ್ಧಾರವಾಗುವ ಸಾಧ್ಯತೆ ಇದೆ ಎಂದರು.

# ಕ್ಷೇತ್ರ ಮರುವಿಂಗಡಣೆ ಮಸೂದೆಗಾಗಿ ಸಂಖ್ಯಾಬಲ ಹೆಚ್ಚಿಸಿಕೊಳ್ಳಲು ಮೋದಿ ಸರ್ಕಾರದ ಕಸರತ್ತು

**ನವದೆಹಲಿ, ಜು.14:** ಲೋಕಸಭೆಯ ಒಟ್ಟು ಸದಸ್ಯ ಬಲವನ್ನು ಪ್ರಸ್ತುತ ಇರುವ 543 ರಿಂದ 850 ಕ್ಕೆ ಗಣನೀಯವಾಗಿ ಏರಿಸಲು ನರೇಂದ್ರ ಮೋದಿ ಸರ್ಕಾರವು ಸಕಲ ಸಿದ್ಧತೆ ನಡೆಸುತ್ತಿದೆ. ಮಹಿಳಾ ಮೀಸಲಾತಿಯನ್ನು ಜಾರಿಗೊಳಿಸುವ ಜನಪ್ರಿಯ ನೆಪದಲ್ಲಿ, ಕ್ಷೇತ್ರ ಮರುವಿಂಗಡಣೆಗೆ ಅವಕಾಶ ಮಾಡಿಕೊಡುವ ಸಂವಿಧಾನದ 131ನೇ ತಿದ್ದುಪಡಿ ಮಸೂದೆಯನ್ನು ಜಾರಿಗೆ ತರುವುದು ಸರ್ಕಾರದ ಪ್ರಮುಖ ಉದ್ದೇಶವಾಗಿದೆ. ಆದರೆ, ಇತ್ತೀಚೆಗೆ ವಿರೋಧ ಪಕ್ಷಗಳು ಪ್ರದರ್ಶಿಸಿದ ಒಗ್ಗಟ್ಟಿನಿಂದಾಗಿ ಈ ಮಸೂದೆಯು ಲೋಕಸಭೆಯಲ್ಲಿ ಸೋಲುಂಡಿತ್ತು.

ಸಂವಿಧಾನ ತಿದ್ದುಪಡಿ ಮಸೂದೆ ಅಂಗೀಕಾರವಾಗಲು ನಿಯಮದಂತೆ ಕಡ್ಡಾಯವಾಗಿ ಮೂರನೇ ಎರಡರಷ್ಟು (2/3) ಬಹುಮತದ ಅಗತ್ಯವಿರುತ್ತದೆ. ಇತ್ತೀಚೆಗೆ ನಡೆದ ಮತದಾನ ಪ್ರಕ್ರಿಯೆಯ ವೇಳೆ ಸದನದಲ್ಲಿ ಒಟ್ಟು 528 ಸದಸ್ಯರು ಹಾಜರಿದ್ದರು. ಈ ಪೈಕಿ 298 ಸದಸ್ಯರು ಮಸೂದೆಯ ಪರವಾಗಿ ಮತ್ತು 230 ಸದಸ್ಯರು ಮಸೂದೆಯ ವಿರುದ್ಧವಾಗಿ ಮತ ಚಲಾಯಿಸಿದ್ದರು. ಮಸೂದೆ ಅಂಗೀಕಾರಕ್ಕೆ 352 ಮತಗಳ (ಮ್ಯಾಜಿಕ್ ಸಂಖ್ಯೆ) ಅಗತ್ಯವಿದ್ದ ಕಾರಣ, ಸರ್ಕಾರಕ್ಕೆ ಅಗತ್ಯ ಸಂಖ್ಯಾಬಲದ ಕೊರತೆಯಾಗಿ ಮಸೂದೆಯು ಬಿದ್ದುಹೋಗಿತ್ತು.

ಇದೀಗ ಮುಂಬರುವ ಮಳೆಗಾಲದ ಅಧಿವೇಶನದಲ್ಲಿ ಇದೇ ಮಸೂದೆಯನ್ನು ಮತ್ತೆ ಮಂಡಿಸಲು ಮೋದಿ ಸರ್ಕಾರವು ಹೊಸ ತಂತ್ರಗಾರಿಕೆ ರೂಪಿಸುತ್ತಿದೆ. ಮಸೂದೆಗೆ ಅಗತ್ಯವಿರುವ ಮೂರನೇ ಎರಡರಷ್ಟು ಬಹುಮತವನ್ನು ಹೇಗಾದರೂ ಸಂಪಾದಿಸಲು ಆಡಳಿತ ಪಕ್ಷವು ಕಸರತ್ತು ನಡೆಸುತ್ತಿದೆ. ಇದರ ಭಾಗವಾಗಿ, ಮಸೂದೆ ಪಾಸು ಮಾಡುವಾಗ ಸದನದಲ್ಲಿ ಇರದೆ ಗೈರು ಹಾಜರಾಗುವಂತೆ ಡಿಎಂಕೆ ಹಾಗೂ ಶರದ್ ಪವಾರ್ ನೇತೃತ್ವದ ಎನ್‌ಸಿಪಿ ಪಕ್ಷಗಳ ನಾಯಕರ ಮನವೊಲಿಸುವ ತೀವ್ರ ಯತ್ನಗಳು ತೆರೆಮರೆಯಲ್ಲಿ ಸಾಗಿವೆ. 2011ರ ಜನಗಣತಿಯ ಆಧಾರದ ಮೇಲೆ ಲೋಕಸಭಾ ಕ್ಷೇತ್ರಗಳನ್ನು ಮರುವಿಂಗಡಣೆ ಮಾಡುವುದು ಹಾಗೂ 2029ರ ಸಾರ್ವತ್ರಿಕ ಚುನಾವಣೆಯ ವೇಳೆಗೆ ಮಹಿಳಾ ಮೀಸಲಾತಿಯನ್ನು ಜಾರಿ ಮಾಡುವುದು ಈ ಮಸೂದೆಯ ಗುರಿ ಎಂದು ಕೇಂದ್ರ ಸರ್ಕಾರ ಸುಳ್ಳನ್ನು ಸಮರ್ಥಿಸಿಕೊಂಡಿದೆ.ಆದರೆ, ವಿರೋಧ ಪಕ್ಷಗಳು ಸರ್ಕಾರದ ಈ ನಡೆಯನ್ನು ಕಟುವಾಗಿ ಟೀಕಿಸಿವೆ. ಮಹಿಳಾ ಮೀಸಲಾತಿಯನ್ನು ಕೇವಲ ಒಂದು ಗುರಾಣಿಯಾಗಿ ಬಳಸಿಕೊಂಡು ದೇಶದ ಚುನಾವಣಾ ನಕ್ಷೆಯನ್ನು ತಮಗೆ ಬೇಕಾದಂತೆ ಬದಲಾಯಿಸುವ ಹುನ್ನಾರ ಇದಾಗಿದೆ ಎಂದು ವಿಪಕ್ಷ ನಾಯಕರು ಆರೋಪಿಸಿದ್ದಾರೆ. ಮಹಿಳಾ ಮೀಸಲಾತಿಯನ್ನು ಕ್ಷೇತ್ರ ಮರುವಿಂಗಡಣೆಯ ಷರತ್ತಿನಿಂದ ಪ್ರತ್ಯೇಕಿಸಿ, ತಕ್ಷಣವೇ ಸ್ವತಂತ್ರವಾಗಿ ಜಾರಿಗೊಳಿಸುವಂತೆ ಪ್ರತಿಪಕ್ಷಗಳು ಪಟ್ಟು ಹಿಡಿದಿದ್ದು, ಸರ್ಕಾರವು ಈ ಬೇಡಿಕೆಯನ್ನು ತಿರಸ್ಕರಿಸಿದೆ. ಕ್ಷೇತ್ರ ಮರುವಿಂಗಡಣೆ ಮತ್ತು ಮಹಿಳಾ ಮೀಸಲಾತಿ ಮಸೂದೆಯು ಆಡಳಿತ ಹಾಗೂ ವಿರೋಧ ಪಕ್ಷಗಳ ನಡುವಿನ ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದೆ. ಮುಂಬರುವ ಮಳೆಗಾಲದ ಅಧಿವೇಶನದಲ್ಲಿ ಈ ಮಸೂದೆಯು ಮರುಮಂಡನೆಯಾಗಲಿದ್ದು, ಬಹುಮತ ಸಾಬೀತುಪಡಿಸಲು ಆಡಳಿತ ಪಕ್ಷ ನಡೆಸುತ್ತಿರುವ ರಾಜಕೀಯ ತಂತ್ರಗಾರಿಕೆಗಳು ಹಾಗೂ ವಿಪಕ್ಷಗಳ ಒಗ್ಗಟ್ಟಿನ ಪ್ರತಿರೋಧವು ದೇಶದ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ.




ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ರಾಷ್ಟ್ರೀಯ ಯುದ್ಧ ಸ್ಮಾರಕದಿಂದ ಕಾರ್ಗಿಲ್ ಯುದ್ಧ ಸ್ಮಾರಕದವರೆಗಿನ ಮೋಟಾರ್‌ಸೈಕಲ್ ಯಾತ್ರೆಯಾದ 'ಶೌರ್ಯ ವಿಜಯ ಯಾತ್ರೆ'ಗೆ ಚಾಲನೆ ನೀಡಿದರು.

# ಇರಾನ್ ಸಂಘರ್ಷ: ಎಲ್‌ಪಿಜಿ ದಕ್ಷತೆ ನೀತಿ ಜಾರಿಗೆ ಕೇಂದ್ರಕ್ಕೆ ಪ್ರಸ್ತಾವನೆ

**ನವದೆಹಲಿ, ಜು.14:** ಮಧ್ಯಪ್ರಾಚ್ಯದಲ್ಲಿ ಅಮೆರಿಕ ಮತ್ತು ಇರಾನ್ ನಡುವೆ ಹೆಚ್ಚುತ್ತಿರುವ ಯುದ್ಧದ ಆತಂಕದಿಂದಾಗಿ ಜಾಗತಿಕ ಇಂಧನ ಬೆಲೆಗಳು ಗಗನಕ್ಕೇರುತ್ತಿರುವ ಬೆನ್ನಲ್ಲೇ, ದೇಶೀಯ ಮಾರುಕಟ್ಟೆಯಲ್ಲಿ ಎಲ್ಪಿಜಿ ಬಳಕೆಯ ದಕ್ಷತೆಯನ್ನು ಹೆಚ್ಚಿಸಲು ವಿಶೇಷ ನೀತಿಯನ್ನು ಜಾರಿಗೆ ತರುವಂತೆ ಭಾರತೀಯ ಇಂಧನ ಕಂಪನಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ.



ಪುಣೆ ಗ್ಯಾಸ್ ಕಂಪನಿಯು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯಕ್ಕೆ ಈ ಕುರಿತು ಪತ್ರ ಬರೆದಿದ್ದು, ಭಾರತದ ಮೊಟ್ಟಮೊದಲ ಎಲ್‌ಪಿಜಿ ದಕ್ಷತೆ ನೀತಿ ಚೌಕಟ್ಟು ರೂಪಿಸುವಂತೆ ಕೋರಿದೆ. ಇರಾನ್ ಬಿಕ್ಕಟ್ಟಿನಿಂದಾಗಿ ಜಾಗತಿಕ ಎಲ್‌ಪಿಜಿಮಾರುಕಟ್ಟೆಯಲ್ಲಿ ಅನಿಶ್ಚಿತತೆ ಮೂಡಿದ್ದು, ವಾಣಿಜ್ಯ ಬಳಕೆಯ ಎಲ್‌ಪಿಜಿ ದರಗಳು ತೀವ್ರವಾಗಿ ಏರಿಕೆಯಾಗುತ್ತಿರುವುದು ಈ ಪ್ರಸ್ತಾವನೆಗೆ ಮುಖ್ಯ ಕಾರಣವಾಗಿದೆ.

ವರ್ಷದ ಆರಂಭದಲ್ಲಿ ಸುಮಾರು 1,884 ರೂ.ನಷ್ಟಿದ್ದ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯು ಜಾಗತಿಕ ಪೂರೈಕೆ ವ್ಯತ್ಯಯದಿಂದಾಗಿ ಪ್ರಸ್ತುತ 3,100 ರೂ.ಗಳಿಗೆ ಏರಿಕೆಯಾಗಿದೆ. ಈ ಭಾರಿ ದರ ಏರಿಕೆಯು ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಆಸ್ಪತ್ರೆಗಳು, ಆಹಾರ ಸಂಸ್ಕರಣಾ ಘಟಕಗಳು, ಲಾಂಡ್ರಿಗಳು ಹಾಗೂ ಎಲ್‌ಪಿಜಿ ಇಂಧನವನ್ನೇ ಹೆಚ್ಚಾಗಿ ಅವಲಂಬಿಸಿರುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಮೇಲೆ ತೀವ್ರ ಆರ್ಥಿಕ ಹೊರೆಯನ್ನು ಹೊರಿಸಿದೆ. ಕೇಂದ್ರ ಸರ್ಕಾರವು ಸದ್ಯಕ್ಕೆ ಎಲ್‌ಪಿಜಿ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಯಶಸ್ವಿಯಾಗಿ ನಿರ್ವಹಿಸುತ್ತಿದ್ದರೂ, ಮುಂದಿನ ದಿನಗಳಲ್ಲಿ ಇಂಧನ ಭದ್ರತೆಯನ್ನು ಬಲಪಡಿಸಲು ಎಲ್‌ಪಿಜಿ ಬಳಕೆಯಲ್ಲಿನ ಅಪವ್ಯಯವನ್ನು ತಡೆಯುವುದು ಅನಿವಾರ್ಯವಾಗಿದೆ ಎಂದು ಕಂಪನಿ ವಾದಿಸಿದೆ.

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರಿಗೆ ಸಲ್ಲಿಸಲಾದ ಈ ಪ್ರಸ್ತಾವನೆಯಲ್ಲಿ ಪ್ರಮುಖವಾಗಿ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗಳಲ್ಲಿ ಎಲ್‌ಪಿಜಿ ವ್ಯರ್ಥವಾಗುವುದನ್ನು ತಡೆಯಲು ಮತ್ತು ಗುಣಮಟ್ಟವನ್ನು ಕಾಯ್ದುಕೊಳ್ಳಲು ಹಲವು ಕ್ರಮಗಳನ್ನು ಸೂಚಿಸಲಾಗಿದೆ. ವಾಣಿಜ್ಯ ವಲಯದಲ್ಲಿ 47.5 ಕೆಜಿಯ ಎಲ್‌ಓಟಿ ಸಿಲಿಂಡರ್‌ಗಳ ಬಳಕೆಯನ್ನು ಉತ್ತೇಜಿಸುವಂತೆ ತೈಲ ಮಾರುಕಟ್ಟೆ ಕಂಪನಿಗಳಿಗೆ ಸರ್ಕಾರ ಸೂಚಿಸಬೇಕು ಎಂದು ಕೋರಲಾಗಿದೆ.

ದೊಡ್ಡ ಸಿಲಿಂಡರ್‌ಗಳ ಬಳಕೆಯಿಂದ ಗ್ಯಾಸ್ ಸೋರಿಕೆ ಮತ್ತು ವ್ಯರ್ಥವಾಗುವುದನ್ನು ತಡೆಯಬಹುದು ಹಾಗೂ ಸುರಕ್ಷತೆಯನ್ನು ಹೆಚ್ಚಿಸಬಹುದು ಎಂದು ತಿಳಿಸಲಾಗಿದೆ. ಇದರೊಂದಿಗೆ ದೇಶಾದ್ಯಂತ ಎಲ್ಪಿಜಿ ಉಳಿತಾಯದ ಕುರಿತು ಜಾಗೃತಿ ಅಭಿಯಾನಗಳನ್ನು ನಡೆಸುವುದು ಮತ್ತು ದಕ್ಷ ವ್ಯವಸ್ಥೆಗಳನ್ನು ಅಳವಡಿಸಿಕೊಳ್ಳುವ ಕೈಗಾರಿಕೆಗಳಿಗೆ ಪ್ರೋತ್ಸಾಹಕಗಳನ್ನು ನೀಡುವುದು ಪ್ರಸ್ತಾವನೆಯಲ್ಲಿದೆ.

# ಜಿಬಿಎ ಚುನಾವಣೆ ಮುಂದೂಡಿಕೆ ಅರ್ಜಿ ಜು.17ರಂದು ಸುಪ್ರೀಂನಲ್ಲಿ ವಿಚಾರಣೆ

ನವದೆಹಲಿ, ಜು.14: ಜಿಬಿಎ ಚುನಾವಣೆ ನಡೆಸಲು ಡಿಸೆಂಬರ್ 31ರವರೆಗೆ ಕಾಲಾವಕಾಶ ನೀಡುವಂತೆ ಕರ್ನಾಟಕ ಸರ್ಕಾರ ಹಾಗೂ ಗ್ರೇಟರ್ ಬೆಂಗಳೂರು ಅಥಾರಿಟಿ ಸಲ್ಲಿಸಿರುವ ಅರ್ಜಿಯನ್ನು ಸುಪ್ರೀಂಕೋರ್ಟ್ ಜುಲೈ 17ರಂದು ವಿಚಾರಣೆಗೆ ಕೈಗೆತ್ತಿಕೊಳ್ಳಲಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠದ ಮುಂದೆ ಜಿಬಿಎ ಪರ ಹಿರಿಯ ವಕೀಲ ಕಪಿಲ್ ಸಿಬಲ್ ಅರ್ಜಿಯನ್ನು ಉಲ್ಲೇಖಿಸಿ, ಜುಲೈ 17ರಂದು ನಿಗದಿಯಾಗಿರುವ ವಿಚಾರಣೆಯನ್ನು ಪಟ್ಟಿಯಿಂದ ಕೈಬಿಡದಂತೆ ಮನವಿ ಮಾಡಿದರು. ಇದಕ್ಕೆ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್ಮಲ್ಯ ಬಾಗ್ಚಿ ಹಾಗೂ ವಿ. ಮೋಹನ ಅವರನ್ನೊಳಗೊಂಡ ಪೀಠ ಸಮ್ಮತಿಸಿದ್ದು, ಶುಕ್ರವಾರ ಪ್ರಕರಣವನ್ನು ವಿಚಾರಣೆ ನಡೆಸುವುದಾಗಿ ತಿಳಿಸಿದೆ.



ಕರ್ನಾಟಕ ಸರ್ಕಾರ ಮತ್ತು ಜಿಬಿಎ ತಮ್ಮ ಅರ್ಜಿಯಲ್ಲಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿರುವುದರಿಂದ ಆಡಳಿತಾತ್ಮಕ ಸವಾಲುಗಳು ಎದುರಾಗಿವೆ. ಮನೆಮನೆಗೆ ತೆರಳಿ ಮತದಾರರ ವಿವರ ಪರಿಶೀಲಿಸುವ ಕಾರ್ಯದಲ್ಲಿ ಸಿಬ್ಬಂದಿ ನಿರತರಾಗಿರುವ ಕಾರಣ, ಅದೇ ಸಮಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಅಗತ್ಯವಿರುವ ಭಾರೀ ಪ್ರಮಾಣದ ಸಿಬ್ಬಂದಿಯನ್ನು ನಿಯೋಜಿಸುವುದು ಸಾಧ್ಯವಾಗುತ್ತಿಲ್ಲ ಎಂದು ವಾದಿಸಿವೆ.

ಬೆಂಗಳೂರು ನಗರದಲ್ಲೇ ಸುಮಾರು 1.03 ಕೋಟಿ ಮತದಾರರು ಹಾಗೂ 40 ಲಕ್ಷ ಮನೆಗಳಿದ್ದು, ಐದು ನಗರ ಪಾಲಿಕೆಗಳ ಚುನಾವಣೆಗೆ ಮತದಾನದ ದಿನ ಮಾತ್ರವೇ ಭದ್ರತಾ ಸಿಬ್ಬಂದಿಯನ್ನು ಹೊರತುಪಡಿಸಿ ಸುಮಾರು 60 ಸಾವಿರ ಸಿಬ್ಬಂದಿ ಅಗತ್ಯವಿದೆ. ಹೀಗಾಗಿ ಎರಡೂ ಪ್ರಕ್ರಿಯೆಗಳನ್ನು ಏಕಕಾಲದಲ್ಲಿ ನಿರ್ವಹಿಸುವುದು ಅತ್ಯಂತ ಕಷ್ಟಕರವಾಗಿದೆ ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

# ಲಾಲೂಪ್ರಸಾದ್ ಜಾಮೀನು ರದ್ದುಗೊಳಿಸಲು ಸುಪ್ರೀಂ ನಕಾರ

**ನವದೆಹಲಿ, ಜು.14:** ಮೇವು ಹಗರಣದಲ್ಲಿ ಬಿಹಾರದ ಮಾಜಿ ಸಿಎಂ ಲಾಲು ಪ್ರಸಾದ್ ಯಾದವ್‌ಗೆ ನೀಡಿರುವ ಜಾಮೀನು ರದ್ದು ಮಾಡಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಅಲ್ಲದೇ ಆರು ವರ್ಷಗಳ ಬಳಿಕ ಅವರ ಸ್ವಾತಂತ್ರ್ಯದಲ್ಲಿ ಹಸ್ತಕ್ಷೇಪ ಮಾಡುವುದು ಸೂಕ್ತವಲ್ಲ ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ. ನ್ಯಾಯಮೂರ್ತಿಗಳಾದ ಎಂ.ಎಂ. ಸುಂದರೇಶ್ ಮತ್ತು ಪಿಬಿ ವರಳೆ ಅವರ ಪೀಠದ ಮುಂದೆ ಈ ಅರ್ಜಿ ಬಂದಿತು. ಸಿಬಿಐ ಪರವಾಗಿ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ. ರಾಜು ಮತ್ತು ಯಾದವ್ ಪರವಾಗಿ ಹಿರಿಯ ವಕೀಲರಾದ ಕಪಿಲ್ ಸಿಬಲ್ ವಾದ ಮಂಡಿಸಿದರು.

ಯಾದವ್ ಅವರಿಗೆ ಜಾಮೀನು ನೀಡಿ ಎಂಟು ವರ್ಷಗಳಾಗಿವೆ ಎಂದು ಗಮನಿಸಿದ ಪೀಠ, ಹೈಕೋರ್ಟ್ ಹೊರಡಿಸಿದ ಆದೇಶದಲ್ಲಿ ಮಧ್ಯಪ್ರವೇಶಿಸಲು ತಮಗೆ ಆಸಕ್ತಿಯಿಲ್ಲ ಎಂದು ತಿಳಿಸಿದೆ. ಆದರೆ, ವಿಚಾರಣಾ ನ್ಯಾಯಾಲಯದ ತೀರ್ಪಿನ ವಿರುದ್ಧ ಯಾದವ್ ಮತ್ತು ಸಿಬಿಐ ಸಲ್ಲಿಸಿರುವ ಮುಖ್ಯ ಮೇಲ್ಮನವಿಗಳ (ಶಿಕ್ಷೆಯ ವಿರುದ್ಧ ಯಾದವ್ ಅವರ ಮೇಲ್ಮನವಿ ಹಾಗೂ ಶಿಕ್ಷೆ ಹೆಚ್ಚಿಸುವಂತೆ ಕೋರಿ ಸಿಬಿಐ ಸಲ್ಲಿಸಿದ ಮೇಲ್ಮನವಿ) ವಿಚಾರಣೆಯನ್ನು ತ್ವರಿತಗೊಳಿಸುವಂತೆಯೂ ಇದೇ ವೇಳೆ ಸೂಚಿಸಿತು.ಜಾಮೀನು ಆದೇಶದಲ್ಲಿ ನಾವು ಮಧ್ಯಪ್ರವೇಶಿಸಲು ಇಚ್ಛಿಸುವುದಿಲ್ಲ. ಈ ಮೇಲ್ಮನವಿಯು 2018ನೇ ಸಾಲಿನದ್ದಾಗಿದೆ ಎಂದಿರುವ ಪೀಠ, ಆದರೆ, ಶಿಕ್ಷೆಯನ್ನು ಪ್ರಶ್ನಿಸಿ ಲಾಲೂ ಪ್ರಸಾದ್ ಯಾದವ್ ಸಲ್ಲಿಸಿರುವ ಮೇಲ್ಮನವಿಯ ವಿಚಾರಣೆಯನ್ನು ತ್ವರಿತವಾಗಿ ನಡೆಸುವಂತೆ ಹೈಕೋರ್ಟ್‌ಗೆ ಸೂಚಿಸಿತು. ವಿಚಾರಣೆ ಸಂದರ್ಭದಲ್ಲಿ ವಾದ ಮಂಡಿಸಿದ ಸಾಲಿಸಿಟರ್ ಜನರಲ್, ಶಿಕ್ಷೆಯನ್ನು ಅಮಾನತುಗೊಳಿಸುವ ಮನವಿಯನ್ನು ಎರಡು ಬಾರಿ ಅರ್ಹತೆಯ ಆಧಾರದ ಮೇಲೆ ತಿರಸ್ಕರಿಸಲಾಗಿದೆ. ಯಾದವ್ ಅವರು ತಮ್ಮ ಶಿಕ್ಷೆಯ ಅವಧಿಯ ಶೇ. 50 ರಷ್ಟನ್ನು ಈಗಾಗಲೇ ಪೂರೈಸಿದ್ದಾರೆ ಎಂಬ ಕಾರಣದ ಮೇಲೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ. ಆದರೆ, ಇದು ವಾಸ್ತವಿಕವಾಗಿ ತಪ್ಪಾಗಿದೆ. ಅವರ ಕಾರಾಗೃಹ ವಾಸದ ಲೆಕ್ಕಾಚಾರದಲ್ಲಿ ತಪ್ಪಾಗಿದೆ ಎಂದು ವಾದಿಸಿದರು.

# ದೆಹಲಿಗೂ ಹಬ್ಬಿದ ಗೋವಾದ ಪಣಜಿ ವಿಲಾಸಿ ಟೌನ್‌ಶಿಪ್ ವಿರುದ್ಧದ ಪ್ರತಿಭಟನೆ

**ನವದೆಹಲಿ, ಜು.14:** ಗೋವಾದ ಪಣಜಿಯಲ್ಲಿ ವಿಲಾಸಿ ಟೌನ್‌ಶಿಪ್ ನಿರ್ಮಿಸಲು ಅಲ್ಲಿನ ಬಿಜೆಪಿ ಸರ್ಕಾರ ಮುಂದಾಗಿದೆ. ಆ ಯೋಜನೆಯ ವಿರುದ್ಧದ ಮತ್ತು ಗೋವಾದ ಪ್ರಾಕೃತಿಕ ಸೌಂದರ್ಯ, ಹಳ್ಳಿಗಳ ಪರಿಸರ ವ್ಯವಸ್ಥೆಯನ್ನು ರಕ್ಷಿಸಲು ಸ್ಥಳೀಯ ಗ್ರಾಮಸ್ಥರು ಬೃಹತ್ ಹೋರಾಟ ನಡೆಸುತ್ತಿದ್ದಾರೆ. ಇದೀಗ, ಅವರ ಹೋರಾಟ ನೂರು ದಿನಗಳನ್ನು ಪೂರೈಸಿದೆ. ಪ್ರತಿಭಟನೆಯ ಕಾವು ದೆಹಲಿಯ ಜಂತರ್ಮಂತರ್‌ಅನ್ನೂ ತಲುಪಿಸಿದೆ. ಉತ್ತರ ಗೋವಾದ ಬಿಚೋಲಿಮ್ ತಾಲೂಕಿನ ಕಾರಾಪುರ–ಸರ್ವನ್ ಗ್ರಾಮದಲ್ಲಿ ಒನ್ ಗೋವಾ ಎಂಬ ಬೃಹತ್ ವಿಲಾಸಿ ಟೌನ್‌ಶಿಪ್ ನಿರ್ಮಿಸಲು ಗೋವಾ ಸರ್ಕಾರ ಯೋಜನೆ ರೂಪಿಸಿದೆ. ಈ ಯೋಜನೆಯ ನಿರ್ಮಾಣದ ಗುತ್ತಿಗೆಯನ್ನು ಹೌಸ್ ಆಫ್ ಅಭಿನಂದನ್ ಲೋಧಾ ಸಂಸ್ಥೆಗೆ ನೀಡಲಾಗಿದೆ. ಸುಮಾರು 53.5 ಹೆಕ್ಟೇರ್ (ಅಂದಾಜು 5.74 ಲಕ್ಷ ಚದರ ಮೀಟರ್) ಹರಡಿರುವ ಈ ಬೃಹತ್ ಯೋಜನೆಯ ಮೊದಲ ಹಂತದಲ್ಲಿ 1,388 ಪ್ರೀಮಿಯಂ ವಿಲ್ಲಾ ಪ್ಲಾಟ್‌ಗಳು, ಪಂಚತಾರಾ ಹೋಟೆಲ್, ಆಧುನಿಕ ಕ್ಲಬ್ ಹೌಸ್, ಜಿಮ್ ಹಾಗೂ ಒಂದು ಕೃತಕ ಬೀಚ್ ಸೇರಿದಂತೆ ಹತ್ತು ಹಲವು ಐಷಾರಾಮಿ ಸೌಲಭ್ಯಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

ಈ ಯೋಜನೆಯು ಗೋವಾದ ಪ್ರಾಕೃತಿಕ ಸೌಂದರ್ಯವನ್ನು ಮಾತ್ರವಲ್ಲದೆ, ಹಳ್ಳಿಗರ ಬದುಕನ್ನೇ ನಾಶ ಮಾಡಲಿದೆ ಎಂದು ಕಾರಾಪುರ ಮತ್ತು ಸುತ್ತಮುತ್ತಲಿನ ಗ್ರಾಮಗಳ ನಿವಾಸಿಗಳು ಆತಂಕ–ಆಕ್ರೋಶಗೊಂಡಿದ್ದಾರೆ. ಯೋಜನೆಯ ವಿರುದ್ಧ ಕಳೆದ ಮೂರು ತಿಂಗಳುಗಳಿಂದ ನಿರಂತರ ಹೋರಾಟ ನಡೆಸುತ್ತಿದ್ದಾರೆ.

ಈ ಯೋಜನೆಗಾಗಿ ಕೃಷಿ ಭೂಮಿ, ಕಾಡುಗಳು ಹಾಗೂ ಗುಡ್ಡಗಾಡು ಪ್ರದೇಶಗಳನ್ನು ನಾಶ ಮಾಡಿ, ಕಾಂಕ್ರೀಟ್ ಕಾಡನ್ನಾಗಿ ಪರಿವರ್ತಿಸಲಾಗುತ್ತಿದೆ. ಈಗಾಗಲೇ ಯೋಜನಾ ಸ್ಥಳದಲ್ಲಿ ಅಗೆಯಲಾಗಿರುವ ಬೋರ್‌ವೆಲ್‌ಗಳಿಂದಾಗಿ ಹಳ್ಳಿಯ ನೈಸರ್ಗಿಕ ನೀರಿನ ಕಾರಂಜಿಗಳು ಒಣಗಿ ಹೋಗಿವೆ. ಕೃಷಿ ಮತ್ತು ಜಾನುವಾರುಗಳಿಗೆ ತೇವಾಂಶದ ಕೊರತೆ ಉಂಟಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಕೇವಲ ಕೆಲವು ನೂರು ಕುಟುಂಬಗಳಿರುವ ಪುಟ್ಟ ಹಳ್ಳಿಯೊಳಗೆ ಸಾವಿರಕ್ಕೂ ಹೆಚ್ಚು ವಿಲಾಸಿ ಬಂಗಲೆಗಳನ್ನು ನಿರ್ಮಿಸಲಾಗುತ್ತಿದೆ. ಪರಿಣಾಮ, ಹೊರಗಿನ ಜನರು ಬಂದು ನೆಲೆಸುತ್ತಾರೆ. ಇದರಿಂದ ಸ್ಥಳೀಯ ಸಂಸ್ಕೃತಿ, ಭಾಷೆ ಹಾಗೂ ಭೌಗೋಳಿಕ ಅಸ್ಮಿತೆಗೆ ಧಕ್ಕೆಯಾಗುತ್ತದೆ ಎಂದು ಪ್ರತಿಭಟನಾಕಾರರು ಕಳವಳ ವ್ಯಕ್ತಪಡಿಸಿದ್ದಾರೆ.

ಸದ್ಯಕ್ಕೆ ಹಳ್ಳಿಯಲ್ಲಿ ಕುಡಿಯುವ ನೀರು, ವಿದ್ಯುತ್ ಮತ್ತು ಘನತ್ಯಾಜ್ಯ ನಿರ್ವಹಣೆಗೆ ಸೂಕ್ತ ಸೌಲಭ್ಯಗಳಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಇಷ್ಟು ದೊಡ್ಡ ಟೌನ್ಶಿಪ್ ತಲೆ ಎತ್ತಿದರೆ ಮೂಲಸೌಕರ್ಯಗಳ ಮೇಲೆ ಭಾರೀ ಒತ್ತಡ ಬೀಳಲಿದೆ ಎಂಬ ಆತಂಕಯೂ ಅವರಲ್ಲಿ ಸೃಷ್ಟಿಯಾಗಿದೆ. ಯೋಜನಾ ಸಂಸ್ಥೆಯು ಯಾವುದೇ ಪರಿಸರ ಅನುಮತಿ ಪಡೆಯದೆ ಕಾಮಗಾರಿ ಆರಂಭಿಸಿದೆ. ವಿವಾದಾತ್ಮಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಸೆಕ್ಷನ್ 17(2) ಮತ್ತು 39Aಅಡಿಯಲ್ಲಿ ನಿಯಮಬಾಹಿರವಾಗಿ ಈ ಯೋಜನೆಗೆ ಅನುಮತಿ ಪಡೆಯಲಾಗಿದೆ ಎಂದು ಪರಿಸರ ಕಾರ್ಯಕರ್ತರು ಆರೋಪಿಸಿದ್ದಾರೆ.

ಕಳೆದ 100 ದಿನಗಳಿಂದ ಕಾರಾಪುರದಲ್ಲಿ ಸತತವಾಗಿ ಧರಣಿ ನಡೆಸುತ್ತಿದ್ದರೂ ಗೋವಾ ಸರ್ಕಾರ ಯಾವುದೇ ಸಕಾರಾತ್ಮಕ ಪ್ರತಿಕ್ರಿಯೆ ನೀಡಿಲ್ಲ. ಹೀಗಾಗಿ, ಪ್ರತಿಭಟನಾಕಾರರು ತಮ್ಮ ಹೋರಾಟದ ಹಾದಿಯನ್ನು ಬದಲಿಸಿದ್ದಾರೆ. 100ನೇ ದಿನದ ಮೈಲಿಗಲ್ಲನ್ನು ಗುರುತಿಸಲು ಕಾರಾಪುರದ ಗ್ರಾಮಸ್ಥರು, ಪರಿಸರವಾದಿಗಳು ಹಾಗೂ ಸಾಮಾಜಿಕ ಹೋರಾಟಗಾರರ ನಿಯೋಗವು ನೇರವಾಗಿ ನವದೆಹಲಿಯ ಜಂತರ್ ಮಂತರ್ಗೆ ತೆರಳಿ ಅಲ್ಲಿ ಬೃಹತ್ ಪ್ರತಿಭಟನೆ ನಡೆಸಿದೆ. ಅಲ್ಲದೆ, ಗೋವಾದ ಪಣಜಿಯ ಆಜಾದ್ ಮೈದಾನದಲ್ಲೂ ನೂರಾರು ಜನ ಜಮಾಯಿಸಿ ಕಾರಾಪುರ ನಿವಾಸಿಗಳಿಗೆ ಬೆಂಬಲ ಘೋಷಿಸಿದ್ದಾರೆ. ಕಾಂಗ್ರೆಸ್ ಹಾಗೂ ಆಮ್ ಆದ್ಮಿ ಪಕ್ಷ ಸೇರಿದಂತೆ ಗೋವಾದ ವಿರೋಧ ಪಕ್ಷಗಳು ಈ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡಿವೆ.

ಮತ್ತೊಂದೆಡೆ, ಯೋಜನೆಯನ್ನು ಕೈಗೆತ್ತಿಕೊಂಡಿರುವ ಹೌಸ್ ಆಫ್ ಅಭಿನಂದನ್ ಲೋಧಾ ಸಂಸ್ಥೆಯು ತನ್ನ ಮೇಲಿನ ಆರೋಪಗಳನ್ನು ತಳ್ಳಿಹಾಕಿದೆ. ತಾವು ಸರ್ಕಾರದಿಂದ ಅಗತ್ಯವಿರುವ ಎಲ್ಲ ಕಾನೂನಾತ್ಮಕ ಪರವಾನಗಿಗಳನ್ನು ಪಡೆದುಕೊಂಡೇ ಈ ಯೋಜನೆಯನ್ನು

# ರಾಜಸ್ಥಾನದಲ್ಲಿ ಬೆಚ್ಚಿಬೀಳಿಸಿದ ಬಾಣಂತಿಯರ ಸರಣಿ ಸಾವು



**ಜೈಪುರ, ಜು.14:** ರಾಜಸ್ಥಾನದಲ್ಲಿ ಮೇ ತಿಂಗಳಿನಿಂದ ಈವರೆಗೆ ಹೆರಿಗೆಯ ಬಳಿಕ 18 ಬಾಣಂತಿಯರು ಮೃತಪಟ್ಟಿದ್ದು, ಕಿಡ್ನಿ ವೈಫಲ್ಯದಿಂದಾಗಿ ಇತರ ಏಳು ಮಂದಿ ಡಯಾಲಿಸಿಸ್‌ಗೆ ಒಳಗಾಗಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಸತತವಾಗಿ ನಡೆಯುತ್ತಿರುವ ಈ ಸಾವುಗಳು ತೀವ್ರ ಆತಂಕಕ್ಕೆ ಕಾರಣವಾಗಿದ್ದು, ಸಾವಿಗೆ ನಿಖರ ಕಾರಣ ಪತ್ತೆಹಚ್ಚಲು ರಾಜ್ಯ ಸರ್ಕಾರವು ಸಮಗ್ರ ತನಿಖೆಗೆ ಆದೇಶಿಸಿದೆ.

ಜುಲೈ 5ರಿಂದ 10ರ ನಡುವೆ ಭಿಲ್ವಾರ ಮತ್ತು ಬಾಂಸ್ವಾರ ಜಿಲ್ಲೆಗಳಲ್ಲಿ ಒಂಬತ್ತು ಬಾಣಂತಿಯರು ಮೃತಪಟ್ಟಿದ್ದಾರೆ. ಅದರಲ್ಲೂ ಭಿಲ್ವಾರದ ಮಹಾತ್ಮ ಗಾಂಧಿ ಆಸ್ಪತ್ರೆಯ ಹೆರಿಗೆ ವಿಭಾಗದಲ್ಲಿ ಸಿಸೇರಿಯನ್ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದ ಐವರು ಕೇವಲ ಆರು ದಿನಗಳ ಅಂತರದಲ್ಲಿ ಸಾವನ್ನಪ್ಪಿರುವುದು ಆತಂಕವನ್ನು ಇಮ್ಮಡಿಗೊಳಿಸಿದೆ. ಶಸ್ತ್ರಚಿಕಿತ್ಸೆಯ ನಂತರ ಕಾಣಿಸಿಕೊಂಡ ಆರೋಗ್ಯ ಸಮಸ್ಯೆಯಿಂದಾಗಿ ಅವರನ್ನು ತೀವ್ರ ನಿಗಾ ಘಟಕಕ್ಕೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟಿದ್ದಾರೆ ಎಂದು ಆಸ್ಪತ್ರೆಯ ದಾಖಲೆಗಳು ತಿಳಿಸಿವೆ.

ಇದಕ್ಕೂ ಮುನ್ನ ಮೇ ತಿಂಗಳಲ್ಲಿ ಕೋಟಾದ ಸರ್ಕಾರಿ ಆಸ್ಪತ್ರೆಯಲ್ಲಿ ಐವರು ಬಾಣಂತಿಯರು ಮೃತಪಟ್ಟಿದ್ದರು. ಜೂನ್ನಲ್ಲಿ ಬಿಕಾನೇರ್ನಲ್ಲಿ ಸಿಸೇರಿಯನ್ ನಂತರ ಆರು ಮಹಿಳೆಯರಿಗೆ ಕಿಡ್ನಿ ವೈಫಲ್ಯ ಕಾಣಿಸಿಕೊಂಡಿದ್ದು, ಅವರಲ್ಲಿ ಇಬ್ಬರು ಸಾವನ್ನಪ್ಪಿದ್ದರು. ಈ ಘಟನೆಗಳಿಗೆ ಸಂಬಂಧಿಸಿದ ಏಳು ಮಂದಿ ಮಹಿಳೆಯರು ಇನ್ನೂ ಡಯಾಲಿಸಿಸ್ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮೃತರ ಕುಟುಂಬಗಳು ಆಸ್ಪತ್ರೆ ಆಡಳಿತ ಮತ್ತು ವೈದ್ಯರ ನಿರ್ಲಕ್ಷ್ಯವೇ ಸಾವಿಗೆ ಕಾರಣ ಎಂದು ಆರೋಪಿಸಿ ಪ್ರತಿಭಟನೆ ನಡೆಸಿವೆ. ಭಿಲ್ವಾರ ಆಸ್ಪತ್ರೆಯಲ್ಲಿ ಪ್ರತಿದಿನ 30 ರಿಂದ 40 ಸಿಸೇರಿಯನ್ ಶಸ್ತ್ರಚಿಕಿತ್ಸೆಗಳು ನಡೆಯುತ್ತವೆ. ಆದರೆ, ಕೇವಲ 8 ಶಸ್ತ್ರಚಿಕಿತ್ಸಾ ಉಪಕರಣಗಳ ಸೆಟ್‌ಗಳಿವೆ. ಇವುಗಳನ್ನು ಮರುಬಳಕೆ ಮಾಡುವ ಮುನ್ನ ಕನಿಷ್ಠ 3 ಗಂಟೆಗಳ ಕಾಲ ಕ್ರಿಮಿನಾಶಕಗೊಳಿಸಬೇಕಾಗುತ್ತದೆ. ಒತ್ತಡದ ನಡುವೆ ಶಸ್ತ್ರಚಿಕಿತ್ಸೆಗಳು ನಡೆಯುತ್ತಿರುವುದರಿಂದ ಸೋಂಕು ಹರಡುವ ಭೀತಿ ಎದುರಾಗಿದೆ.

ಶಸ್ತ್ರಚಿಕಿತ್ಸಾ ಕೊಠಡಿಯೊಂದರ ಮಾದರಿ ಪರೀಕ್ಷೆಯಲ್ಲಿ ಸೋಂಕು ಇರುವುದು ದೃಢಪಟ್ಟಿದೆ ಎಂಬ ಆರೋಪವನ್ನು ಆಸ್ಪತ್ರೆಯ ಅಧೀಕ್ಷಕ ಡಾ. ಅರುಣ್ ಗೌರ್ ತಳ್ಳಿಹಾಕಿದ್ದಾರೆ. ಗುಣಮಟ್ಟದ ಕೊರತೆ ಕಂಡುಬಂದ ಶಸ್ತ್ರಚಿಕಿತ್ಸಾ ಕೊಠಡಿಯನ್ನು ಮೂರು ದಿನಗಳ ಕಾಲ ಮುಚ್ಚಿ ಸಂಪೂರ್ಣವಾಗಿ ಕ್ರಿಮಿನಾಶಕಗೊಳಿಸಲಾಗುತ್ತಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಭಿಲ್ವಾರ ಜಿಲ್ಲಾಧಿಕಾರಿ ಜಸ್ಮೀತ್ ಸಿಂಗ್ ಸಂಧು ಅವರು ಸಹ ಪ್ರತಿಕ್ರಿಯಿಸಿದ್ದು, ಬಾಣಂತಿಯರ ಸಾವುಗಳಿಗೂ ಆಸ್ಪತ್ರೆಯ ಸೋಂಕಿಗೂ ಯಾವುದೇ ಸಂಬಂಧವಿರುವ ಬಗ್ಗೆ ಇದುವರೆಗೆ ಪುರಾವೆಗಳಿಲ್ಲ, ವಿವಿಧ ವೈದ್ಯಕೀಯ ತೊಡಕುಗಳಿಂದ ಸಾವು ಸಂಭವಿಸಿದೆ ಎಂದು ಹೇಳಿದ್ದಾರೆ.

ಈ ವಿದ್ಯಮಾನವು ರಾಜಕೀಯ ಸ್ವರೂಪವನ್ನೂ ಪಡೆದುಕೊಂಡಿದ್ದು, ಭಜನ್ ಲಾಲ್ ಶರ್ಮಾ ನೇತೃತ್ವದ ಸರ್ಕಾರದ ವಿರುದ್ಧ ಕಾಂಗ್ರೆಸ್ ವಾಗ್ದಾಳಿ ನಡೆಸಿದೆ. ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಅವರು, ರಾಜ್ಯದಲ್ಲಿ ಬಾಣಂತಿಯರ ಸಾವು ಹೆಚ್ಚುತ್ತಿರುವುದು ಭಯಾನಕ ಮತ್ತು ಆಘಾತಕಾರಿ. ಕೇವಲ ಎರಡು ತಿಂಗಳ ಅವಧಿಯಲ್ಲಿ 18 ಸಾವುಗಳು ಸಂಭವಿಸಿರುವುದು ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ವೈಫಲ್ಯವನ್ನು ಎತ್ತಿತೋರಿಸುತ್ತದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.



ನವದೆಹಲಿಯ ಭಾರತ್ ಮಂಟಪದಲ್ಲಿ ನಡೆದ 'ಭಾರತ್ ಟೆಕ್ಸ್' ಕಾರ್ಯಕ್ರಮದ ವೇಳೆ, ಬಿಹಾರ ಪೆವಿಲಿಯನ್‌ನ ಉದ್ಘಾಟನೆಯಲ್ಲಿ ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಪಾಲ್ಗೊಂಡರು.

# ಮಂಡಹಳ್ಳಿ ಘಟನೆ ಸರ್ಕಾರದ ಪೂರ್ವ ಯೋಜಿತ ಸಂಚು: ಎಚ್‌ಡಿಕೆ ಆರೋಪ

ಒಂದನೇ ಪುಟದಿಂದ...

ಹಾಗಿದ್ದರೆ ಮಂಡಹಳ್ಳಿ ಗ್ರಾಮದಲ್ಲಿ ಭೂಮಿ ಕೊಡುತ್ತೇವೆ ಎಂದವರು ಎಷ್ಟು ಜನ? ಕೊಡುವುದಿಲ್ಲ ಎಂದು ಹೇಳಿದವರು ಎಷ್ಟು ಜನ? ಯಾರ ಯಾರ ಜಮೀನು ಎಷ್ಟೆಷ್ಟಿದೆ? ಊರಿನಲ್ಲಿ ಒಟ್ಟಾರೆ ಎಷ್ಟು ಭೂಮಿ ಇದೆ ಎಂಬ ಮಾಹಿತಿಯನ್ನು ಹೊರಗೆ ಇಡಿ. ಏನಾದ್ರೂ ಹೆಚ್ಚು ಕಡಿಮೆ ಆದರೆ ಯಾರು ಜವಾಬ್ದಾರಿ? ಇದಕ್ಕೆ ಪೊಲೀಸ್ ಇಲಾಖೆ ಉತ್ತರ ಕೊಡಬೇಕಾಗುತ್ತದೆ ಎಂದು ಸಚಿವ ಕುಮಾರಸ್ವಾಮಿ ಅವರು ನೇರ ಎಚ್ಚರಿಕೆ ನೀಡಿದರು.

**ನೈಸ್ ಕರ್ಮಕಾಂಡ ಬಿಚ್ಚಿಟ್ಟ ಎಚ್‌ಡಿಕೆ; ಗೌರಮ್ಮ, ಸುರೇಶ ಅನ್ನುವವರಿಗೆ ಎನ್‌ಓಸಿ ಕೊಟ್ಟ ನೈಸ್ ಕಂಪನಿ:** ನೈಸ್ ಯೋಜನೆಗೆ ಬಂದು 30 ವರ್ಷ ಆಯ್ತು. ಇನ್ನು ಭೂಮಿ ಕಳೆದುಕೊಂಡ ರೈತರು ಬಂದ ಬಂದ ಮುಖ್ಯಮಂತ್ರಿಗಳಿಗೆಲ್ಲ ಅರ್ಜಿ ಕೊಡುತ್ತಲೇ ಇದ್ದಾರೆ. ಭೂಮಿಯ ಅಭಿವೃದ್ಧಿಪಡಿಸಿ ನಿವೇಶನ ಕೊಡುತ್ತೇವೆ ಎಂದು ಹೇಳಿದವರು ಇವತ್ತಿನವರೆಗೂ 4,000 ರೈತ ಕುಟುಂಬಗಳಿಗೆ ನಿವೇಶನ ಕೊಟ್ಟಿಲ್ಲ. ಬಿಡದಿ ಯೋಜನೆಯಲ್ಲಿ ನೋಡಿದ್ರೆ 50 ಪರ್ಸೆಂಟ್ ಭೂಮಿ ಕೊಡುತ್ತೇವೆ ಅಂತ ಹೇಳುತ್ತಿದ್ದಾರೆ. ಇವರನ್ನು ನಂಬಿದರೆ ಮೋಸ ಹೋಗುವುದು ಖಚಿತ ಎಂದು ಜನತೆಗೆ ಕುಮಾರಸ್ವಾಮಿ ಅವರು ಎಚ್ಚರಿಕೆ ನೀಡಿದರು.

ಒಂದು ಎಕರೆ ಭೂಮಿಗೆ ಒಂದು ಲಕ್ಷ ಒಂದುವರೆ ಲಕ್ಷ ಕೊಟ್ಟು ಲಪಟಾಯಿಸಿದ್ದಾರೆ. ಕೊಳ್ಳೆ ಹೊಡೆದ ಭೂಮಿಯಲ್ಲಿ ಎಷ್ಟು ಜನಕ್ಕೆ ಸೈಟು ಕೊಟ್ಟಿದ್ದೀರಿ? ಎಷ್ಟು ಜನಕ್ಕೆ ಎನ್‌ಓಸಿ ಕೊಟ್ಟಿದ್ದೀರಿ? ಪ್ರಶ್ನಿಸಿದ ಕುಮಾರಸ್ವಾಮಿ ಅವರು; ಕೆಲವರಿಗೆ ಎನ್‌ಓಸಿ ಕೊಟ್ಟಿದ್ದಾರೆ, ಯಾರು ಯಾರಿಗೆ ಸೈಟು, ಎನ್‌ಓಸಿ ಕೊಟ್ಟಿದ್ದಾರೆ ಎಂದರೆ ಗೌರಮ್ಮ, ಸುರೇಶ ಎನ್ನುವವರಿಗೆ ಕೊಟ್ಟಿದಾರೆ. ಸಾಮಾನ್ಯ ರೈತರಿಗೆ ಏನೇನು ಕೊಟ್ಟಿಲ್ಲ. ಎನ್‌ಓಸಿ ಜಾಗದಲ್ಲಿ ದೊಡ್ಡ ಕಟ್ಟಡಗಳು ಎದ್ದು ನಿಂತಿವೆ. ಅಪಾರ್ಟ್‌ಮೆಂಟ್‌ಗಳು ಬಂದಿವೆ. ಆದರೆ ಬಡ ರೈತರ ಪರಿಸ್ಥಿತಿ ಯಾರಿಗೂ ಬೇಕಾಗಿಲ್ಲ ಎಂದು ನೈಸ್ ಕರ್ಮಕಾಂಡವನ್ನು ಸಚಿವರು ಎಳೆಎಳೆಯಾಗಿ ಬಿಚ್ಚಿಟ್ಟರು.

# ವಾಂಗ್ಚುಕ್ ಬೆಂಬಲಕ್ಕೆ 3 ಈಡಿಯಟ್ಸ್ ಚಿತ್ರದ ಚತುರ್, ನಟಿ ಜೀನತ್ ಅಮಾನ್

**ನವದೆಹಲಿ, ಜು. 14:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿಚಾರವಾಗಿ ದೆಹಲಿಯ ಜಂತರ್ ಮಂತರ್‌ನಲ್ಲಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಶಿಕ್ಷಣ ತಜ್ಞ, ಹವಾಮಾನ ಹೋರಾಟಗಾರ ಸೋನಂ ವಾಂಗ್ಚುಕ್ ಅವರಿಗೆ ಹಿರಿಯ ಬಾಲಿವುಡ್ ನಟಿ ಜೀನತ್ ಅಮಾನ್ ಮತ್ತು ನಟ ಓಮಿ ವೈದ್ಯ ಬೆಂಬಲ ವ್ಯಕ್ತಪಡಿಸಿದ್ದಾರೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ನಡೆಯುತ್ತಿರುವ ಪ್ರತಿಭಟನೆಯ ನೇತೃತ್ವವನ್ನು ಕಾಕ್ರೋಚ್ ಜನತಾ ಪಾರ್ಟಿ ವಹಿಸಿದೆ. ಸೋನಮ್ ವಾಂಗ್ಚುಕ್ ಅವರು ಉಪವಾಸ ಆರಂಭಿಸಿದ ಬಳಿಕ ಅವರ ದೇಹದ ತೂಕ ಸುಮಾರು 9 ಕೆ.ಜಿಯಷ್ಟು ಕಡಿಮೆಯಾಗಿದೆ. ಅವರ ಆರೋಗ್ಯ ಸ್ಥಿತಿ ಹದಗೆಟ್ಟಿದೆ ಎಂದು ಸಿಪಿಜೆ ಹೇಳಿದೆ. ಈ ಹೇಳಿಕೆ ಬಂದ ಕೆಲವೇ ದಿನಗಳ ಬಳಿಕ ಇಬ್ಬರು ಕಲಾವಿದರು ಸೋನಮ್ ವಾಂಗ್ಚುಕ್ ಅವರಿಗೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಮಂಗಳವಾರ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಂಚಿಕೊಂಡಿರುವ ನಟ ಓಮಿ ವೈದ್ಯ ಅವರು, 3 ಈಡಿಯಟ್ಸ್ ಚಿತ್ರದ ಫುನ್ಸುಖ್ ವಾಂಗ್ಡು ಪಾತ್ರವು ಲಡಾಖ್‌ನ ನೈಜ ಜೀವನದ ಎಂಜಿನಿಯರ್, ಆವಿಷ್ಕಾರಕ, ಶಿಕ್ಷಣ ತಜ್ಞ ಹಾಗೂ ಸುಧಾರಕ ಸೋನಮ್ ವಾಂಗ್ಚುಕ್ ಅವರ ಹೋರಾಟವನ್ನು ಆಧರಿಸಿದೆ ಎಂಬುದು ನಿಮಗೆ ಗೊತ್ತಿದೆಯೇ ನಾನು ಅವರನ್ನು ಭೇಟಿಯಾಗಿದ್ದೇನೆ. ಅವರು ಬಹಳ ಆಸಕ್ತಿದಾಯಕ ವ್ಯಕ್ತಿ ಎಂದು ಓಮಿ ವೈದ್ಯ ಹೇಳಿದ್ದಾರೆ.

ಸೋನಮ್ ವಾಂಗ್ಚುಕ್ ಅವರನ್ನು ವಿನಮ್ರ ಮತ್ತು ಅತ್ಯಂತ ಪ್ರಭಾವಶಾಲಿ ವ್ಯಕ್ತಿ ಎಂದು ಬಣ್ಣಿಸಿರುವ ಓಮಿ ವೈದ್ಯ, ಸೋನಮ್ ಅವರು ಹಲವು ಅಸಾಧಾರಣ ಸಾಧನೆಗಳನ್ನು ಮಾಡಿದ್ದಾರೆ. ಅವರ ಕುರಿತು ಜನರು ಇನ್ನಷ್ಟು ತಿಳಿದುಕೊಳ್ಳಬೇಕು ಎಂದು ಜನರಲ್ಲಿ ಮನವಿ ಮಾಡಿದ್ದಾರೆ.


### ಹೈಕೋರ್ಟ್‌ಗೆ ಸರ್ಕಾರದ ಮಾಹಿತಿ, ವಿಚಾರಣೆ ಆ.28ಕ್ಕೆ ಮುಂದೂಡಿಕೆ

## ಟರ್ಫ್ ಕ್ಲಬ್ ಜಾಗದಲ್ಲಿ ಹೈಕೋರ್ಟ್ ಕಟ್ಟಡ ನಿರ್ಮಾಣಕ್ಕೆ ಶೀಘ್ರ ಆದೇಶ

**ಬೆಂಗಳೂರು, ಜು.14:** ಸದ್ಯ ಬೆಂಗಳೂರು ಟರ್ಫ್ ಕ್ಲಬ್ ಇರುವ ಸ್ಥಳವನ್ನು ಹೊಸದಾಗಿ ಹೈಕೋರ್ಟ್ ಕಟ್ಟಡ ನಿರ್ಮಿಸಲು ಹಂಚಿಕೆ ಮಾಡುವ ಸಂಬಂಧ ಶೀಘ್ರದಲ್ಲೇ ನಿರ್ಣಯ ಹೊರಡಿಸಲಾಗುವುದು ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಸೋಮವಾರ ತಿಳಿಸಿದೆ.

ಆಧುನಿಕ ಹೈಕೋರ್ಟ್ ಕಟ್ಟಡ ನಿರ್ಮಿಸಲು 30 ಎಕರೆ ಜಮೀನು ಹಂಚಿಕೆ ಮಾಡಬೇಕು ಎಂದು ಶರಣ್ ದೇಸಾಯಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಕೆ ಎಸ್ ಹೇಮಲೇಖಾ ಅವರ ವಿಭಾಗೀಯ ಪೀಠ ನಡೆಸಿತು.

ಸರ್ಕಾರವನ್ನು ಪ್ರತಿನಿಧಿಸಿದ್ದ ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಟರ್ಫ್ ಕ್ಲಬ್ ಜಾಗವನ್ನು ಹಂಚಿಕೆ ಮಾಡುವ ಸಂಬಂಧ ನಿರ್ಣಯ ಹೊಡಿಸಲಾಗುವುದು




ಎಂದರು. ಇದನ್ನು ಆಲಿಸಿದ ಪೀಠವು ಸಂಬಂಧಿತ ದಾಖಲೆಗಳನ್ನು ಪೀಠದ ಮುಂದೆ ಇಡಲು ವಿಚಾರಣೆಯನ್ನು ಒಂದು ತಿಂಗಳು ಮುಂದೂಡಿತು. ಅಲ್ಲದೇ, ಆಗಸ್ಟ್ 28ಕ್ಕೆ ವಿಚಾರಣೆ ಮುಂದೂಡಿತು.

ಕಳೆದ ವಿಚಾರಣೆಯಲ್ಲಿ ಪೀಠವು ಮುಂದಿನ 30ರಿಂದ 50 ವರ್ಷಗಳ ನ್ಯಾಯಾಂಗ ಅಗತ್ಯತೆಗಳನ್ನು ಪೂರೈಸುವಂತೆ ಆಧುನಿಕ ಹೈಕೋರ್ಟ್ ಕಟ್ಟಡ ಇರಬೇಕು ಎಂದಿತ್ತು.

ಕಳೆದ ಫೆಬ್ರವರಿಯಲ್ಲಿ ರಾಜ್ಯ ಸಚಿವ ಸಂಪುಟವು ತುಮಕೂರಿನ ಸಮೀಪ 110 ಎಕರೆ 20 ಗುಂಟೆ ಹಂಚಿಕೆ ಮಾಡುವ ಸಂಬಂಧ ನಿರ್ಧಾರ ಮಾಡಿದೆ. ಇದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆ ಮಾಡಲಾಗಿದೆ. ಇದರಲ್ಲಿ ಸರ್ಕಾರ ಪ್ರತಿಕ್ರಿಯೆಯನ್ನು ಹೈಕೋರ್ಟ್ ಬಯಸಿದೆ.

ಕಳೆದ ವರ್ಷದ ಅಕ್ಟೋಬರ್ 26ರಂದು ಅಂದಿನ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಹೈಕೋರ್ಟ್ ಅನ್ನು ಮತ್ತಷ್ಟು ವಿಶಾಲ ಜಾಗಕ್ಕೆ ಸ್ಥಳಾಂತರಿಸುವ ವಿಚಾರ ಪ್ರಸ್ತಾಪಿಸಿದ್ದರು.



ಜೆಡಿಎಸ್ ನಾಯಕ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮಂಗಳವಾರ ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

## ಅಕ್ರಮ ಎಲ್‌ಇಡಿ ಜಾಹೀರಾತು ಪರದೆ: ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಸಚಿವ ಕೃಷ್ಣ ಬೈರೇಗೌಡ ಅಸಮಾಧಾನ

**ಬೆಂಗಳೂರು, ಜು.14:** ನಗರದಲ್ಲಿ ನಿಯಮಾವಳಿಗಳನ್ನು ಗಾಳಿಗೆ ತೂರಿ ಅಕ್ರಮವಾಗಿ ಎಲ್‌ಇಡಿ ಜಾಹೀರಾತು ಪರದೆಗಳನ್ನು ಅಳವಡಿಸುತ್ತಿರುವ ಮತ್ತು ಅನುಮತಿ ಪಡೆಯದೇ ನಿಯಮ ಉಲ್ಲಂಘಿಸುತ್ತಿರುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳದ ಅಧಿಕಾರಿಗಳ ಕಾರ್ಯವೈಖರಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇಲಾಖೆಯ ಉನ್ನತ ಮಟ್ಟದ ಸಭೆಯಲ್ಲಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಅವರು, ಜಾಹೀರಾತು ಪ್ರದರ್ಶನಕ್ಕೆ ಸಂಬಂಧಿಸಿದಂತೆ ಯಾರು ಕೂಡ ಸೂಕ್ತ ಪರವಾನಗಿ ಪಡೆದುಕೊಳ್ಳುತ್ತಿಲ್ಲ ಎಂಬ ಅಂಶವನ್ನು ಪ್ರಸ್ತಾಪಿಸಿದರು.

ನಗರದಲ್ಲಿ ಯಾರಿಗೆಲ್ಲಾ ಲೈಸೆನ್ಸ್ ನೀಡಲಾಗಿದೆ ಎಂದು ಪರಿಶೀಲಿಸಿದಾಗ, ಕಳೆದ ಎರಡು ವಾರಗಳಿಂದೀಚೆಗೆ ನನಗೆ ಲಭ್ಯವಾಗಿರುವ ಮಾಹಿತಿ ಪ್ರಕಾರ ಯಾರೊಬ್ಬರೂ ಪರವಾನಗಿ ಯನ್ನೇ ಪಡೆದಿಲ್ಲ ಎನ್ನುವುದು ಸ್ಪಷ್ಟ ವಾಗಿದೆ. ಇಲಾಖೆಯ ನಿಯಮಾವಳಿ ಪ್ರಕಾರ ಯಾರೂ ನಡೆದುಕೊಳ್ಳುತ್ತಿಲ್ಲ. ಹಳೇ ಮಾದರಿಯಲ್ಲಿ ಪ್ರತಿ ಹೋಲ್ಡಿಂಗ್ಸ್‌ಗೂ ಪ್ರತ್ಯೇಕ ಲೈಸೆನ್ಸ್ ಪಡೆಯಬೇಕಾದ ವ್ಯವಸ್ಥೆ ಇತ್ತು. ಆಗಲೂ ಕೂಡ ಯಾರೂ ಪರವಾನಗಿ ಪಡೆಯುತ್ತಿರಲಿಲ್ಲ. ನಿಯಮ ಉಲ್ಲಂಘಿಸುವುದು, ಅನಧಿಕೃತವಾಗಿ ಅಳವಡಿಸುವುದು ನಿರಂತರವಾಗಿ ನಡೆಯುತ್ತಲೇ ಬಂದಿದೆ. ಈಗಲೂ ಅದೇ ವ್ಯವಸ್ಥೆಯನ್ನು ಮುಂದುವರಿಸಿ ಕೊಂಡು ಹೋಗಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಸೆಲ್ಫ್ ಅಡ್ವರ್ಟೈಸ್ಮೆಂಟ್ (ಸ್ವಯಂ ಜಾಹೀರಾತು) ಹೆಸರಿನಲ್ಲಿ ಸಣ್ಣ ಗಾತ್ರದ ಪರದೆಗಳನ್ನು ಹಾಕಿಕೊಂಡಿದ್ದ ವರು, ಈಗ ನಿಯಮಾವಳಿಗಳು ಬಂದ ತಕ್ಷಣ ಅವುಗಳನ್ನು ತೆಗೆದು ಬೃಹತ್ ಗಾತ್ರದ ಎಲ್‌ಇಡಿ ಪರದೆಗಳನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ಕಳೆದ ಮೂರು ತಿಂಗಳಿನಿಂದೀಚೆಗೆ ನಗರದಲ್ಲಿ ಇಂತಹ ಹೊಸ ಎಲ್‌ಇಡಿ ಪರದೆಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದೆ. ಅಕ್ರಮಗಳ ವಿರುದ್ಧ ಕಠಿಣ ಕ್ರಮ ಜರುಗಿಸುವಲ್ಲಿ ವಿಫಲರಾಗಿರುವ ಅಧಿಕಾರಿಗಳನ್ನು ಪ್ರಶ್ನಿಸಿದ ಸಚಿವರು, "ನೀವು ಕ್ರಮ ಕೈಗೊಳ್ಳದಿದ್ದರೆ ಇನ್ನು ಯಾರು ಈ ಬಗ್ಗೆ ಕ್ರಮ ಜರುಗಿಸಬೇಕು, ಕಮಿಷನರ್ ಅಥವಾ ಜಂಟಿ ಕಮಿಷನರ್‌ಗಳು ಹೊಣೆ ಹೊರಬೇಕೇ" ಎಂದು ಪ್ರಶ್ನಿಸುವ ಮೂಲಕ ಅಕ್ರಮ ಎಲ್‌ಇಡಿ ಪರದೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಖಡಕ್ ಸೂಚನೆ ನೀಡಿದರು.

## ತಿರುಮಲ ಪ್ರಥಮ ಆರತಿ ಸ್ವೀಕಾರಕ್ಕೆ ಮುಖ್ಯಮಂತ್ರಿ ಶಿಷ್ಟಾಚಾರ ಪ್ರಸ್ತಾಪ ಸ್ವಾಗತಾರ್ಹ: ಟಿಟಿಡಿ ಸದಸ್ಯ ಎಸ್. ನರೇಶ್ ಕುಮಾರ್

**ಬೆಂಗಳೂರು, ಜು.14:** ತಿರುಮಲ ತಿರುಪತಿ ದೇವಸ್ಥಾನದಲ್ಲಿ ಶ್ರೀ ವೆಂಕಟೇಶ್ವರ ಸ್ವಾಮಿಗೆ ನೆರವೇರಿಸುವ ಪ್ರಥಮ ಆರತಿ ಸ್ವೀಕಾರಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಸ್ತಾಪಿಸಿರುವ ಹೊಸ ಶಿಷ್ಟಾಚಾರ ವ್ಯವಸ್ಥೆ ಐತಿಹಾಸಿಕ ಪರಂಪರೆಗೆ ಗೌರವ ಸಲ್ಲಿಸುವ ಮಹತ್ವದ ಹೆಜ್ಜೆಯಾಗಿದ್ದು, ಇದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಆದರೆ, ಈ ಗೌರವವನ್ನು ಕೇವಲ ರಾಜಕೀಯ ಪ್ರತಿನಿಧಿಗಳಿಗೆ ಮಾತ್ರ ಸೀಮಿತಗೊಳಿಸದೆ, ಆ ದಿನ ತಿರುಮಲದಲ್ಲಿ ಉಪಸ್ಥಿತರಿರುವ ಕರ್ನಾಟಕದ ಪ್ರಮುಖ ಗಣ್ಯರೊಬ್ಬರಿಗೆ ಅವಕಾಶ ಕಲ್ಪಿಸುವ ರೀತಿಯಲ್ಲಿ ಶಿಷ್ಟಾಚಾರ ರೂಪಿಸುವುದು ಸೂಕ್ತ ಎಂದು ಟಿಟಿಡಿ ಆಡಳಿತ ಮಂಡಳಿ ಸದಸ್ಯ ಎಸ್. ನರೇಶ್ ಕುಮಾರ್ ತಿಳಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ವಿಜಯನಗರ ಸಾಮ್ರಾಜ್ಯದ ನಂತರ ಮೈಸೂರು ಮಹಾರಾಜರು ತಿರುಪತಿ ದೇವಸ್ಥಾನಕ್ಕೆ ನೀಡಿದ ಸೇವೆಯ ಸ್ಮರಣಾರ್ಥ, ಸುಪ್ರಭಾತ ಸೇವೆಯ ನಂತರ ನಡೆಯುವ ಪ್ರಥಮ ಆರತಿ ಹಾಗೂ ನಿತ್ಯಾರತಿ ಸ್ವೀಕರಿಸುವ ಗೌರವವನ್ನು ಐತಿಹಾಸಿಕವಾಗಿ ಮೈಸೂರು ಮಹಾರಾಜರಿಗೆ ನೀಡಲಾಗುತ್ತಿತ್ತು. ಮೈಸೂರು ಸಂಸ್ಥಾನದ ಆಡಳಿತ ಅಂತ್ಯಗೊಂಡ ನಂತರ ಈ ಗೌರವ ಕರ್ನಾಟಕ ರಾಜ್ಯದ ಹೆಸರಿನಲ್ಲಿ ಮುಂದು ವರಿಯುತ್ತಿದ್ದು, ಇಂದಿಗೂ ದೇವರ ಆರತಿಗೆ ಬಳಸುವ ದೀಪ ಮತ್ತು ತುಪ್ಪವನ್ನು ಮೈಸೂರು ಮಹಾರಾಜರ ಹೆಸರಿನಲ್ಲೇ ಸಮರ್ಪಿಸಲಾಗುತ್ತಿದೆ ಎಂದಿದ್ದಾರೆ.

ಹಿಂದೆ ಮೈಸೂರು ಮಹಾರಾಜರು ದೇವಸ್ಥಾನಕ್ಕೆ ಆಗಮಿಸಲು ಸಾಧ್ಯವಾಗದ ಸಂದರ್ಭಗಳಲ್ಲಿ ಅವರ ಪರವಾಗಿ ದಿವಾನರು ಅಥವಾ ಸರ್ಕಾರದ ಹಿರಿಯ ಪ್ರತಿನಿಧಿಗಳು ಆರತಿಯಲ್ಲಿ ಪಾಲ್ಗೊಳ್ಳುತ್ತಿದ್ದರು. ಆದರೆ ಪ್ರಸ್ತುತ ಈ ಕುರಿತು ಯಾವುದೇ ಸ್ಪಷ್ಟ ಆಡಳಿತಾತ್ಮಕ ಶಿಷ್ಟಾಚಾರ ಇಲ್ಲದಿರುವುದರಿಂದ, ಮಹಾರಾಜರ ಅನುಪಸ್ಥಿತಿಯಲ್ಲಿ ಮುಜರಾಯಿ ಇಲಾಖೆಯ ಅಧಿಕಾರಿಗಳು ಆರತಿ ಸ್ವೀಕರಿಸುವ ವ್ಯವಸ್ಥೆ ಜಾರಿಯಲ್ಲಿದೆ.

ಈ ಹಿನ್ನೆಲೆಯಲ್ಲಿ, ಈ ಶಿಷ್ಟಾಚಾರವನ್ನು ಮರುಪರಿಶೀಲಿಸುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಪ್ರಸ್ತಾಪ ಸ್ವಾಗತಾರ್ಹವಾಗಿದೆ. ಆದರೆ, ಈ ಐತಿಹಾಸಿಕ ಗೌರವವನ್ನು ಕೇವಲ ರಾಜಕೀಯ ಹುದ್ದೆಗಳಿಗೆ ಸೀಮಿತಗೊಳಿಸದೆ, ಆ ದಿನ ತಿರುಮಲದಲ್ಲಿ ಉಪಸ್ಥಿತರಿರುವ ರಾಜ್ಯದ ಪ್ರಮುಖ ಗಣ್ಯರೊಬ್ಬರಿಗೆ ರಾಜ್ಯದ ಪರವಾಗಿ ಆರತಿ ಸ್ವೀಕರಿಸುವ ಅವಕಾಶ ಕಲ್ಪಿಸುವ ರೀತಿಯಲ್ಲಿ ನಿಯಮ ರೂಪಿಸುವುದು ಹೆಚ್ಚು ಸೂಕ್ತವಾಗಲಿದೆ ಎಂದು ನರೇಶ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ ಪಕ್ಷದ ಮುಖ್ಯ0ಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಇಂತಹ ಐತಿಹಾಸಿಕ ಸಂಪ್ರದಾಯಗಳು ಹಾಗೂ ಧಾರ್ಮಿಕ ಶಿಷ್ಟಾಚಾರಗಳ ಬಗ್ಗೆ ಆಸಕ್ತಿ ವಹಿಸಿ, ಅವುಗಳಿಗೆ ಸೂಕ್ತವಾದ ಆಡಳಿತಾತ್ಮಕ ವ್ಯವಸ್ಥೆ ಕಲ್ಪಿಸಲು ಮುಂದಾಗಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಇಂತಹ ಶಿಷ್ಟಾಚಾರದ ವ್ಯವಸ್ಥೆಯನ್ನು ಕೇವಲ ಟಿಟಿಡಿ ಅಧೀನದ ದೇವಾಲಯಗಳಿಗೆ ಮಾತ್ರ ಸೀಮಿತಗೊಳಿಸದೆ, ಕರ್ನಾಟಕದ ಪ್ರಮುಖ ದೇವಾಲಯಗಳಲ್ಲಿಯೂ ಐತಿಹಾಸಿಕ ಸಂಪ್ರದಾಯಗಳಿಗೆ ಅನುಗುಣವಾಗಿ ಸೂಕ್ತ ಶಿಷ್ಟಾಚಾರ ರೂಪಿಸುವ ಕುರಿತು ಸರ್ಕಾರ ಚಿಂತನೆ ನಡೆಸಬೇಕಾಗಿದೆ ಎಂದು ಅವರು ಸಲಹೆ ನೀಡಿದ್ದಾರೆ.

ಟಿಟಿಡಿ ಸದಸ್ಯ ಭಾನುಪ್ರಕಾಶ್ ಅವರು ಉಪಮುಖ್ಯಮಂತ್ರಿಗಳ ಹೇಳಿಕೆಯ ಹಿನ್ನೆಲೆಯನ್ನು ಸಮರ್ಪಕವಾಗಿ ಅರ್ಥೈಸಿಕೊಳ್ಳದೇ



ಪ್ರತಿಕ್ರಿಯಿಸಿರುವುದು ಸರಿಯಲ್ಲ. ಕರ್ನಾಟಕ ಸರ್ಕಾರ ಈ ಕುರಿತು ಅಧಿಕೃತ ಪ್ರಸ್ತಾವನೆಯನ್ನು ಟಿಟಿಡಿ ಆಡಳಿತ ಮಂಡಳಿಗೆ ಸಲ್ಲಿಸಿದಲ್ಲಿ, ದೇವಸ್ಥಾನದ ಸಂಪ್ರದಾಯ, ಐತಿಹಾಸಿಕ ಹಿನ್ನೆಲೆ ಹಾಗೂ ಜಾರಿಯಲ್ಲಿರುವ ನಿಯಮಾವಳಿಗಳನ್ನು ಪರಿಗಣಿಸಿ ಟಿಟಿಡಿ ಆಡಳಿತ ಮಂಡಳಿ ಸಕಾರಾತ್ಮಕವಾಗಿ ಪರಿಶೀಲಿಸಲಿದೆ ಎಂದು ಎಸ್. ನರೇಶ್ ಕುಮಾರ್ ತಿಳಿಸಿದ್ದಾರೆ.

### ಆನ್‌ಲೈನ್, ಆಫ್‌ಲೈನ್‌ನಲ್ಲಿ ಪಡೆಯಲು ಅವಕಾಶ: ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಠಾರಿಯಾ ಮಾಹಿತಿ

## ಶಾಶ್ವತ ನಿವಾಸ ಪ್ರಮಾಣಪತ್ರಕ್ಕೆ ನಾಳೆಯಿಂದ ಅರ್ಜಿ ಸಲ್ಲಿಕೆ

**ಬೆಂಗಳೂರು, ಜು.14:** ರಾಜ್ಯದ ನಾಗರಿಕರಿಗೆ ಕಂದಾಯ ಇಲಾಖೆಯು ಸಿಹಿ ಸುದ್ದಿ ನೀಡಿದ್ದು, ಇನ್ನುಮುಂದೆ ರಾಜ್ಯದಲ್ಲಿ ಶಾಶ್ವತ ನಿವಾಸ ಪ್ರಮಾಣಪತ್ರ ಪಡೆಯಲು ಬಯಸುವ ಸಾರ್ವಜನಿಕರು ಜುಲೈ 16ರಿಂದಲೇ ಅರ್ಜಿ ಸಲ್ಲಿಸಲು ಸರ್ಕಾರ ಮುಕ್ತ ಅವಕಾಶ ಕಲ್ಪಿಸಿ ಕೊಡುತ್ತಿದೆ.

ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಠಾರಿಯಾ ಅವರು ಈ ಕುರಿತು ಮಾಧ್ಯಮಗಳಿಗೆ ಅಧಿಕೃತ ಮಾಹಿತಿ ಹಂಚಿಕೊಂಡಿದ್ದು, ಅರ್ಹ ನಾಗರಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೋರಿದ್ದಾರೆ. ಈ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಕಂದಾಯ ಇಲಾಖೆಯು ಅತ್ಯಂತ ಸರಳಗೊಳಿಸಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಆನ್‌ಲೈನ್ ಮತ್ತು ಆಫ್‌ಲೈನ್ ಎರಡೂ ವಿಧಾನಗಳಲ್ಲೂ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಇದಕ್ಕಾಗಿ ಸರ್ಕಾರವು ಹೊಸದಾಗಿ ವಿಶೇಷ ಮೊಬೈಲ್ ಆಪ್ ಒಂದನ್ನು ಸಿದ್ಧಪಡಿಸಿದೆ. ಇದರ ಜೊತೆಗೆ ಸರ್ಕಾರದ ಅಧಿಕೃತ 'ಸೇವಾ ಸಿಂಧು' ವೆಬ್ ಪೋರ್ಟಲ್‌ನಲ್ಲಿಯೂ ಸಾರ್ವಜನಿಕರು ನೇರವಾಗಿ ಲಾಗಿನ್ ಆಗಿ ಪ್ರಮಾಣ ಪತ್ರಕ್ಕಾಗಿ ಸುಲಭವಾಗಿ ಅಪ್ಲೈ ಮಾಡಬಹುದಾಗಿದೆ. ಕೇವಲ ಎರಡು ದಿನಗಳಲ್ಲಿ ಈ ಹೊಸ ಯೋಜನೆಗೆ ಅಧಿಕೃತವಾಗಿ ಚಾಲನೆ ಸಿಗಲಿದ್ದು, ಕಂದಾಯ ಇಲಾಖೆಯು ಈಗಾಗಲೇ ಶಾಶ್ವತ ನಿವಾಸ ಪ್ರಮಾಣ ಪತ್ರ ವಿತರಣೆಗೆ ಸಂಬಂಧಿಸಿದಂತೆ ವ್ಯವಸ್ಥಿತವಾಗಿ ಯೋಜನೆ ರೂಪಿಸಿಕೊಂಡಿದೆ. ಇದಕ್ಕಾಗಿ ಇಲಾಖೆ ಮಟ್ಟದಲ್ಲಿ ಎಲ್ಲಾ ರೀತಿಯ ತಾಂತ್ರಿಕ ಹಾಗೂ ಆಡಳಿತಾತ್ಮಕ ಸಿದ್ಧತೆಗಳೂ ಪೂರ್ಣಗೊಂಡಿವೆ.

**ಶುಲ್ಕರಹಿತ ಸೇವೆ, ಪ್ರಮಾಣಪತ್ರ ತಲುಪಿಸಲು ಗಡುವು**

ಅತ್ಯಂತ ಪ್ರಮುಖವಾದ ವಿಷಯವೆಂದರೆ, ಈ ಶಾಶ್ವತ ನಿವಾಸ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಸಲು ಸಾರ್ವಜನಿಕರು ಯಾವುದೇ ರೀತಿಯ ಶುಲ್ಕವನ್ನು ಪಾವತಿಸಬೇಕಾಗಿಲ್ಲ. ಇಲಾಖೆಯು ಈ ಸೇವೆಯನ್ನು ಸಂಪೂರ್ಣವಾಗಿ ಉಚಿತವಾಗಿ ನೀಡುತ್ತಿದೆ.ಅರ್ಜಿಗಳು ಸಲ್ಲಿಕೆಯಾದ ನಂತರ ಅವುಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸಾರ್ವಜನಿಕರು ಸಲ್ಲಿಸಿರುವ ಅರ್ಜಿಗಳು ಸರಿಯಾದ ಕ್ರಮದಲ್ಲಿ ಸಲ್ಲಿಕೆಯಾಗಿದೆಯೇ ಹಾಗೂ ಅವರ ನಿವಾಸವನ್ನು ದೃಢೀಕರಿಸುವ ಅಗತ್ಯ ದಾಖಲೆಗಳು ಸರಿಯಾಗಿ




ಲಗತ್ತಿಸಲಾಗಿದೆಯೇ ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತವಾಗಿ ಪರಿಶೀಲನೆ ನಡೆಸಲಿದ್ದಾರೆ. ಯಾವುದೇ ಲೋಪದೋಷಗಳಿಲ್ಲದಂತೆ ಅರ್ಜಿದಾರರ ಮಾಹಿತಿ ಖಾತರಿಪಡಿಸಿಕೊಳ್ಳುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ದಾಖಲಾತಿಗಳ ಪರಿಶೀಲನೆ ಯಶಸ್ವಿಯಾಗಿ ಮುಗಿದ ನಂತರ, ನಾಗರಿಕರಿಗೆ ನಿಗದಿತ ಅವಧಿಯೊಳಗೆ ಪ್ರಮಾಣ ಪತ್ರ ತಲುಪಿಸಲು ಸರ್ಕಾರ ಗಡುವು ವಿಧಿಸಿದೆ. ಕಂದಾಯ ಇಲಾಖೆಯ ನಿಯಮಾವಳಿಗಳ ಪ್ರಕಾರ, ಅಧಿಕಾರಿ ಗಳು ಅರ್ಜಿ ಸಲ್ಲಿಕೆಯಾದ 21 ದಿನಗಳ ಒಳಗಾಗಿ ಅರ್ಹ ಫಲಾನುಭವಿ ಗಳಿಗೆ ಶಾಶ್ವತ ನಿವಾಸ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ವಿತರಿಸ ಬೇಕಾಗುತ್ತದೆ. ಕಾಲ ಮಿತಿಯೊಳಗೆ ಜನರಿಗೆ ಸೇವೆ ಒದಗಿಸುವುದು ಇಲಾಖೆಯ ಪ್ರಮುಖ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

### ಬೌದ್ಧ ಧರ್ಮದ ಹೆಸರು ಮರಳಿ ಸೇರಿಸಲು ಕ್ರಮ ಮರು ಸಂಯೋಜನೆಗೆ ವಿಶೇಷ ಸಮಿತಿ ರಚನೆ

## ನಾಡಗೀತೆಯಲ್ಲಿ ಬದಲಾವಣೆ ತರಲು ಸರ್ಕಾರ ಚಿಂತನೆ

**ಬೆಂಗಳೂರು:** ರಾಷ್ಟ್ರಕವಿ ಕುವೆಂಪು ವಿರಚಿತ ನಾಡಗೀತೆಗೆ ಶತಮಾನದ ಸಂಭ್ರಮದ ಬೆನ್ನಲ್ಲೇ ತಿರುವು ಸಿಕ್ಕಿದೆ. ಕರ್ನಾಟಕದ ಭವ್ಯ ಇತಿಹಾಸ, ಶ್ರೀಮಂತ ಪರಂಪರೆ ಹಾಗೂ ಕನ್ನಡಿಗರ ಸ್ವಾಭಿಮಾನದ ಪ್ರತೀಕ ವಾಗಿರುವ 'ಜಯ ಭಾರತ ಜನನಿಯ ತನುಜಾತೆ' ಗೀತೆಯಲ್ಲಿ ಮಹತ್ವದ ಬದಲಾವಣೆ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ. ನಾಡಗೀತೆ ಯಲ್ಲಿ ಕಣ್ಮರೆಯಾಗಿದ್ದ 'ಬೌದ್ಧ' ಧರ್ಮದ ಹೆಸರನ್ನು ಮರಳಿ ಸೇರ್ಪಡೆಗೊಳಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ನೇತೃತ್ವದ ತಜ್ಞರ ಸಮಿತಿ ಶಿಫಾರಸು ಮಾಡಿದೆ.



**'ಜೈನಬೌದ್ಧರುದ್ಯಾನ' ಎಂದು ಬದಲಾಗಲಿದೆ ಸಾಲು:** ಕುವೆಂಪು ಅವರು ಬರೆದಿದ್ದ ಮೂಲ ನಾಡಗೀತೆಯಲ್ಲಿ ಬೌದ್ಧ ಧರ್ಮದ ಉಲ್ಲೇಖವಿತ್ತು. ಆದರೆ ಕಾಲಕ್ರಮೇಣ ಗೀತೆಯಿಂದ 'ಬೌದ್ಧ' ಎಂಬ ಪದ ಕೈಬಿಟ್ಟು ಹೋಗಿತ್ತು. ಸದ್ಯದ ದಿನಗಳಲ್ಲಿ ಬೌದ್ಧ ಧರ್ಮದ ಪ್ರಚಲಿತತೆ ಹಾಗೂ ಸಾಂಸ್ಕೃತಿಕ ಮಹತ್ವ ಹೆಚ್ಚಾಗಿರುವ ಹಿನ್ನೆಲೆಯಲ್ಲಿ, ಈ ಹೆಸರನ್ನು ಮತ್ತೆ ಸೇರಿಸಲು ಸಮಿತಿ ಸಲಹೆ ನೀಡಿದೆ. ಇದರ ಪ್ರಕಾರ ಪ್ರಸ್ತುತ ಇರುವ 'ಜೈನರುದ್ಯಾನ' ಎಂಬ ಪದದ ಬದಲಿಗೆ ಇನ್ಮುಂದೆ 'ಜೈನಬೌದ್ಧರು ದ್ಯಾನ' ಎಂದು ಗೀತೆಯನ್ನು ಬದಲಾಯಿಸಲಾಗುತ್ತದೆ.

ನಾಡಗೀತೆಗೆ 'ಬೌದ್ಧರುದ್ಯಾನ' ಎಂಬ ಪದವನ್ನು ಅಧಿಕೃತವಾಗಿ ಸೇರ್ಪಡೆಗೊಳಿಸುವುದು ಮಾತ್ರವಲ್ಲದೆ, ಗಾಯನದಲ್ಲೂ ಇದನ್ನು ಅಳವಡಿಸಲು ನಿರ್ಧರಿಸಲಾಗಿದೆ. ದಿವಂಗತ ಮೈಸೂರು ಅನಂತಸ್ವಾಮಿ ಅವರು ಸಂಯೋಜಿಸಿರುವ ಜನಪ್ರಿಯ ರಾಗ ಹಾಗೂ ಧಾಟಿಯಲ್ಲೇ ಈ ಹೊಸ ಪದವನ್ನೂ ಒಳಗೊಳ್ಳುವಂತೆ ಮರು ಸಂಯೋಜನೆ ಮಾಡಲು ವಿಶೇಷ ಸಮಿತಿ ರಚಿಸಲಾಗಿದೆ. ಈ ಉನ್ನತ ಮಟ್ಟದ ಸಮಿತಿಯಲ್ಲಿ ನಾಡಿನ ಪ್ರಮುಖ ಸಾಹಿತಿಗಳು ಹಾಗೂ ಚಿಂತಕರು ಸ್ಥಾನ ಪಡೆದಿದ್ದಾರೆ.

ಹೈಕೋರ್ಟ್‌ಗೆ ಸರ್ಕಾರದ ಮಾಹಿತಿ, ವಿಚಾರಣೆ ಆ.28ಕ್ಕೆ ಮುಂದೂಡಿಕೆ

ಟರ್ಫ್ ಕ್ಲಬ್ ಜಾಗದಲ್ಲಿ ಹೈಕೋರ್ಟ್ ಕಟ್ಟಡ ನಿರ್ಮಾಣಕ್ಕೆ ಶೀಘ್ರ ಆದೇಶ

ಬೆಂಗಳೂರು, ಜು.14: ಸದ್ಯ ಬೆಂಗಳೂರು ಟರ್ಫ್ ಕ್ಲಬ್ ಇರುವ ಸ್ಥಳವನ್ನು ಹೊಸದಾಗಿ ಹೈಕೋರ್ಟ್ ಕಟ್ಟಡ ನಿರ್ಮಿಸಲು ಹಂಚಿಕೆ ಮಾಡುವ ಸಂಬಂಧ ಶೀಘ್ರದಲ್ಲೇ ನಿರ್ಣಯ ಹೊರಡಿಸಲಾಗುವುದು ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಸೋಮವಾರ ತಿಳಿಸಿದೆ.

ಆಧುನಿಕ ಹೈಕೋರ್ಟ್ ಕಟ್ಟಡ ನಿರ್ಮಿಸಲು 30 ಎಕರೆ ಜಮೀನು ಹಂಚಿಕೆ ಮಾಡಬೇಕು ಎಂದು ಶರಣ್ ದೇಸಾಯಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಕೆ ಎಸ್ ಹೇಮಲೇಖಾ ಅವರ ವಿಭಾಗೀಯ ಪೀಠ ನಡೆಸಿತು.

ಸರ್ಕಾರವನ್ನು ಪ್ರತಿನಿಧಿಸಿದ್ದ ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಟರ್ಫ್ ಕ್ಲಬ್ ಜಾಗವನ್ನು ಹಂಚಿಕೆ ಮಾಡುವ ಸಂಬಂಧ ನಿರ್ಣಯ ಹೊಡಿಸಲಾಗುವುದು ಎಂದರು. ಇದನ್ನು ಆಲಿಸಿದ ಪೀಠವು ಸಂಬಂಧಿತ ದಾಖಲೆಗಳನ್ನು ಪೀಠದ ಮುಂದೆ ಇಡಲು ವಿಚಾರಣೆಯನ್ನು ಒಂದು ತಿಂಗಳು ಮುಂದೂಡಿತು. ಅಲ್ಲದೇ, ಆಗಸ್ಟ್ 28ಕ್ಕೆ ವಿಚಾರಣೆ ಮುಂದೂಡಿತು.

## ಸಿಎಂ ಮಾಧ್ಯಮ ಕಾರ್ಯದರ್ಶಿ-3 ರಾಘವೇಂದ್ರ ಭಟ್ ನೇಮಕಾತಿ ಅಮಾನತಿನಲ್ಲಿರಿಸಿ ಸರ್ಕಾರ ಆದೇಶ

**ಬೆಂಗಳೂರು, ಜು.14:** ಮುಖ್ಯ ಮಂತ್ರಿಗಳ ಮಾಧ್ಯಮ ಕಾರ್ಯದರ್ಶಿ-3 ಹುದ್ದೆಗೆ ನೇಮಕಗೊಂಡಿದ್ದ ರಾಘವೇಂದ್ರ ಭಟ್ ಅವರ ನೇಮಕಾತಿ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತಿನಲ್ಲಿರಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ.ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹೊರಡಿಸಿರುವ ನೂತನ ಅಧಿಸೂಚನೆಯಲ್ಲಿ ಈ ನೇಮಕಾತಿ ಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಲಂಬನೆಯಲ್ಲಿರಿಸಲು ಆದೇಶಿಸಲಾಗಿದೆ.

ರಾಜ್ಯ ಸರಕಾರವು ಮುಖ್ಯಮಂತ್ರಿ ಗಳ ಸಚಿವಾಲಯಕ್ಕೆ ಮೂವರು ಮಾಧ್ಯಮ ಕಾರ್ಯದರ್ಶಿಗಳನ್ನು ನೇಮಕ ಮಾಡಿ ಜುಲೈ 8ರಂದು ಆದೇಶ ಹೊರಡಿಸಿತ್ತು. ಪಿ. ತ್ಯಾಗರಾಜ್ (ಮಾಧ್ಯಮ ಕಾರ್ಯದರ್ಶಿ-1), ಆರ್ ಜಯಪ್ರಕಾಶ್ (2ನೇ ಕಾರ್ಯ ದರ್ಶಿ) ಮತ್ತು ರಾಘವೇಂದ್ರ ಭಟ್ ಅವರನ್ನು 3ನೇ ಕಾರ್ಯದರ್ಶಿ ಯನ್ನಾಗಿ ನೇಮಕ ಮಾಡಲಾಗಿತ್ತು. ಆದರೆ, ಈ ಪೈಕಿ ರಾಘವೇಂದ್ರ ಭಟ್ ಅವರ ನೇಮಕ ತೀವ್ರ ಚರ್ಚೆಗೆ ಮತ್ತು ವಿರೋಧಾಭಾಸಕ್ಕೆ ಕಾರಣ ವಾಗಿತ್ತು. ರಾಘವೇಂದ್ರ ಭಟ್ ಅವರು 2021ರಲ್ಲಿ ತಮ್ಮ ಫೇಸ್ಬುಕ್ ಪುಟದಲ್ಲಿ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ ಎನ್ನಲಾದ ಪೋಸ್ಟ್ ವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು, ಈ ಬೆನ್ನಲ್ಲೆ ಸರಕಾರ ಅವರ ನೇಮಕಾತಿ ನಿಲಂಬನೆಯಲ್ಲಿರಿಸಿ ಆದೇಶ ಹೊರಡಿಸಿದೆ.

### ಕ್ರೀಡಾ ಆಸಕ್ತಿ, ಸಾಂಸ್ಕೃತಿಕ ಪ್ರಜ್ಞೆ, ಸಾಮಾಜಿಕ ಸಾಮರಸ್ಯ ಹೆಚ್ಚಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ

## ಭಾರತ್ ಜೋಡೋ ಯುವಸಂಘ ಸ್ಥಾಪನೆಗೆ ಅಧಿಕೃತ ಆದೇಶ

**ಬೆಂಗಳೂರು, ಜು.14:** ರಾಜ್ಯದ ಯುವ ಸಮುದಾಯದಲ್ಲಿ ಕ್ರೀಡಾ ಆಸಕ್ತಿ, ಸಾಂಸ್ಕೃತಿಕ ಪ್ರಜ್ಞೆ ಮತ್ತು ಸಾಮಾಜಿಕ ಸಾಮರಸ್ಯ ಹೆಚ್ಚಿಸುವ ಮಹತ್ವಾಕಾಂಕ್ಷೆಯೊಂದಿಗೆ ಘೋಷಿ ಸಿರುವ ಯೋಜನೆ ಅನುಷ್ಠಾನ ಸಂಬಂಧ ರಾಜ್ಯದ ಗ್ರಾಮ ಪಂಚಾಯಿತಿಗಳು ಮತ್ತು ನಗರ ಪ್ರದೇಶಗಳ ವಾರ್ಡ್‌ಗಳಲ್ಲಿ ಹತ್ತು ಸಾವಿರ 'ಭಾರತ್ ಜೋಡೋ ಯುವ ಸಂಘ'ಗಳನ್ನು ಸ್ಥಾಪಿಸಲು ಸರ್ಕಾರ ಅಧಿಕೃತ ಆದೇಶ ಹೊರಡಿಸಲಾಗಿದೆ. ಜತೆಗೆ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಕಟ್ಟುನಿಟ್ಟಿನ ಮಾರ್ಗಸೂಚಿಯನ್ನೂ ಬಿಡುಗಡೆ ಮಾಡಲಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಮುಖಾಂತರ ಜಾರಿಗೆ ಬರಲಿರುವ ಈ ಯೋಜನೆಗಾಗಿ ಸರ್ಕಾರ ಭಾರಿ ಮೊತ್ತದ ಹಣವನ್ನು ಮೀಸಲಿಟ್ಟಿದೆ.

ಒಟ್ಟಾರೆ 1,010 ಕೋಟಿ ರೂ.ಗಳ ಬಜೆಟ್‌ನಲ್ಲಿ ಈ ಯೋಜನೆ ಅನುಷ್ಠಾನಗೊಳ್ಳಲಿದ್ದು, ಪ್ರತಿ ಯುವ ಸಂಘಕ್ಕೆ ವಾರ್ಷಿಕವಾಗಿ 10 ಲಕ್ಷ ರೂಪಾಯಿ ಅನುದಾನ ಸಿಗಲಿದೆ. ಇದಲ್ಲದೆ, ಪ್ರತಿ ಸಂಘದ ಒಬ್ಬ ತರಬೇತುದಾರನಿಗೆ ವಾರ್ಷಿಕ 24 ಸಾವಿರ ರೂಪಾಯಿ ಗೌರವಧನ ನೀಡಲು ನಿರ್ಧರಿಸಲಾಗಿದೆ.

ಯೋಜನೆ ನಿರ್ವಹಣೆಗಾಗಿ ಪ್ರತಿ ವರ್ಷ ತಗಲುವ 10 ಕೋಟಿ ರೂಪಾಯಿ ಆಡಳಿತಾತ್ಮಕ ವೆಚ್ಚವನ್ನು ಕ್ರೀಡಾ ಇಲಾಖೆಯೇ ಭರಿಸಲಿದೆ. ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧ, ಕಂದಾಯ ಮತ್ತು ಶಿಕ್ಷಣ ಇಲಾಖೆಗಳು ಈ ಯೋಜನೆಯ ಜವಾಬ್ದಾರಿಯನ್ನು ಹಂಚಿಕೊಳ್ಳಲಿವೆ. ಆದರೆ, ಬೆಂಗಳೂರು ಸೇರಿದಂತೆ ಮಹಾನಗರ ಪಾಲಿಕೆಗಳು ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರಗಳು ಈ ವೆಚ್ಚವನ್ನು ತಮ್ಮ ಸ್ವಂತ ಬಜೆಟ್‌ನಿಂದಲೇ ಹೊಂದಿಸಿಕೊಳ್ಳಬೇಕಾಗುತ್ತದೆ.

**ಗ್ರಾಮೀಣ ಭಾಗದಲ್ಲಿ 6 ಸಾವಿರ ಉಳಿದೆಡೆ 4 ಸಾವಿರ ಸಂಘ:** ಈ ಹತ್ತು ಸಾವಿರ ಸಂಘಗಳಲ್ಲಿ 6,000 ಸಂಘಗಳು ಹಳ್ಳಿಗಳ ಮಟ್ಟದಲ್ಲಿ ಹಾಗೂ ಉಳಿದ 4,000 ಸಂಘಗಳು ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಸ್ಥಾಪನೆಯಾಗಲಿವೆ. ಪ್ರತಿ ಗ್ರಾಮ ಪಂಚಾಯಿತಿಗೆ ಕಡ್ಡಾಯವಾಗಿ ಒಂದು ಸಂಘ ಇರಲಿದ್ದು, ಪಟ್ಟಣ ಪಂಚಾಯಿತಿಗಳಲ್ಲಿ ಪ್ರತಿ 4 ಸಾವಿರ ಜನಸಂಖ್ಯೆಗೆ ಒಂದು, ಪುರಸಭೆಗಳಲ್ಲಿ ಪ್ರತಿ 6 ಸಾವಿರ ಜನಸಂಖ್ಯೆಗೆ ಒಂದು, ನಗರಸಭೆಗಳಲ್ಲಿ ಪ್ರತಿ 8 ಸಾವಿರ ಜನಸಂಖ್ಯೆಗೆ ಒಂದು ಹಾಗೂ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಪ್ರತಿ 10 ಸಾವಿರ ಜನಸಂಖ್ಯೆಗೆ ಒಂದರಂತೆ ಯುವ ಸಂಘಗಳನ್ನು ರಚಿಸಲಾಗುತ್ತದೆ.

**ಸದಸ್ಯರಾಗಲು ಅರ್ಹತೆ ನಿಗದಿ:** ಇನ್ನು ಈ ಸಂಘಗಳ ಸದಸ್ಯರಾಗಲು ಯುವಜನತೆಗೆ ಕೆಲವು ಪ್ರಮುಖ ಅರ್ಹತೆಗಳನ್ನು ನಿಗದಿಪಡಿಸಲಾಗಿದೆ. ಪ್ರತಿ ಸಂಘದಲ್ಲಿ ಕನಿಷ್ಠ 100 ಯುವ ಸದಸ್ಯರಿರಬೇಕು. 16ರಿಂದ 35 ವರ್ಷ ವಯೋಮಿತಿಯ ಯುವಕ-ಯುವತಿಯರಿಗೆ ಮಾತ್ರ ಇದರಲ್ಲಿ ಮುಕ್ತ ಅವಕಾಶವಿರುತ್ತದೆ. ಸದಸ್ಯತ್ವ ಪಡೆಯಲು ಇಚ್ಛಿಸುವ ಯುವಕರು ಅದೇ ಗ್ರಾಮ ಪಂಚಾಯಿತಿ ಅಥವಾ ನಗರದ ವಾರ್ಡ್‌ನ ಸ್ಥಳೀಯ ನಿವಾಸಿಗಳಾಗಿರಬೇಕು. ಅಲ್ಲದೆ, ಒಬ್ಬ ವ್ಯಕ್ತಿ ಕೇವಲ ಒಂದೇ ಒಂದು ಸಂಘದಲ್ಲಿ ಮಾತ್ರ ಸದಸ್ಯನಾಗಲು ಅರ್ಹನಾಗಿರುತ್ತಾನೆ. ಯುವಶಕ್ತಿಯನ್ನು ಸತ್ಕಾರ್ಯಗಳ ಕಡೆಗೆ ಮುನ್ನಡೆಸಲು ಈ ಯೋಜನೆ ಸಹಕಾರಿಯಾಗಲಿದೆ ಎಂದು ಸರ್ಕಾರ ಆಶಿಸಿದೆ.


### ಮುಂಬಯಿ ಮೂಲದ ಮದರಸಾ ವಿದ್ಯಾರ್ಥಿಗಳ ಪುಂಡಾಟ

## ಮಾರಕಾಸ್ತ್ರಗಳೊಂದಿಗೆ ಆಸಿಡ್ ದಾಳಿ, ಕರ್ತವ್ಯನಿರತ ಪೊಲೀಸರ ಮೇಲೂ ಹಲ್ಲೆ, 12 ಮಂದಿ ವಿರುದ್ಧ ಎಫ್‌ಐಆರ್

**ಬೆಂಗಳೂರು, ಜು.14;** ಥಣಿ ಸಂದ್ರದ ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಸ್ಕೂಲ್ ಆವರಣದಲ್ಲಿ ಮುಂಬಯಿ ಮೂಲದ ಮದರಸಾಗೆ ಸೇರಿದ 50ರಿಂದ 60ಕ್ಕೂ ಅಧಿಕ ಪುಂಡ ವಿದ್ಯಾರ್ಥಿಗಳು ಒಳಗೊಂಡಂತೆ ಹಲವು ಮಂದಿ ಸೋಮವಾರ ಸಂಜೆ ಏಕಾಏಕಿ ಮಹಿಳೆಯರು, ಪೋಲೀಸ್ ಸಿಬ್ಬಂದಿ ಮೇಲೆ ಮಾರಕಾಸ್ತ್ರಗಳಿಂದ ದಾಳಿ ನಡೆಸಿದ್ದಾರೆ. ಆಸಿಡ್ ಎರಚಿ 15 ಮಂದಿಯ ಮೇಲೆ ದಾಳಿ ಮಾಡಿ ವಿಕೃತಿ ಮೆರೆದಿದ್ದಾರೆ. ಪರಿಸ್ಥಿತಿ ನಿಯಂತ್ರಿಸಲು ಆಗಮಿಸಿದ್ದ ಕೊತ್ತನೂರು ಪೋಲೀಸರ ಮೇಲೂ ಹಲ್ಲೆ ನಡೆಸಿದ್ದು, ಶಾಲಾ ಆವರಣ ರಣಾಂಗಣವಾಗಿ ಮಾರ್ಪಟ್ಟಿತ್ತು.

ಶಾಂತಿ ಭಂಗವುಂಟು ಮಾಡಿದ ಹಾಗೂ ಕರ್ತವ್ಯಕ್ಕೆ ಅಡ್ಡಿಪಡಿಸಿದ 12 ಪುಂಡರ ವಿರುದ್ಧ ಸ್ವತಃ ಕೊತ್ತನೂರು ಠಾಣೆಯ ಎಎಸ್‌ಐ ಸತೀಶ್ ಕುಮಾರ್ ದೂರು ಸಲ್ಲಿಸಿದ್ದು, ತಪ್ಪಿತಸ್ಥರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಸಾದ್ ಇಲಿಯಾಸ್, ಮೊಹಮ್ಮದ್ ಶೋಯೆಬ್, ಮೊಹಮ್ಮದ್ ಅಲಿ, ಅಬ್ದುಲ್ ಮತೀನ್, ಸೂಫಿಯಾನ್ ಸಾಬಿರ್, ವಸೀಂ ಅಹಮ್ಮದ್, ಅಬ್ದುಲ್ ಸಮೀರ್, ನೂರ್ ಆಲಮ್, ಫೈರೋಜ್ ಖಾನ್, ಮೊಹಮ್ಮದ್ ಅಖೈರ್ ಹಾಗೂ ಮಹಿಳೆಯರಾದ ಮುಸ್ತಾರಿ. ಅಸ್ನಾತಾಜ್ ಇತರೆ ಮಹಿಳೆ ಮತ್ತು ಪುರುಷರು ಹಾಗೂ ಮದರಸಾ ಮಕ್ಕಳ ಮೇಲೆ ಪ್ರಕರಣ




ದಾಖಲಿಸಿದ್ದಾರೆ. ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರ ಹೋಬಳಿ, ಥಣಿಸಂದ್ರ ಗ್ರಾಮದ 5.19 ಎಕರೆ ಜಮೀನಿಗೆ ಸಂಬಂಧಿಸಿದಂತೆ ಗಲಾಟೆ ನಡೆಯುತ್ತಿರುವ ಕುರಿತ ಮಾಹಿತಿ ಮೇರೆಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಯಿತು. ಸದರಿ ಜಮೀನಿಗೆ ಸಂಬಂಧಿಸಿದಂತೆ ಮಸೀಹ ಅಹಮ್ಮದ್ ಪರವಾಗಿ ಇಂಜೆಕ್ಷನ್ ಆದೇಶ ಇದೇ ಜುಲೈ 28ರವರೆಗೆ ಚಾಲ್ತಿಯಲ್ಲಿದೆ. ಆದರೆ ದಿ ಅಲ್ ಜಾಮೀಯಾ ಮೊಹಮ್ಮದಿಯಾ ಎಜುಕೇಷನ್ ಸೊಸೈಟಿ ಯ ಸಿ.ಇ.ಒ ಆದ ಖಾಲೀದ್ ಮುಶ್ರಫ್ ಮತ್ತು ಅವರ ಸಹೋದರ ಅಬ್ದುಲ್ ರಕೀಬ್ ಮತ್ತು ಆಡಳಿತ ಸಿಬ್ಬಂದಿ ಮತ್ತು ಮದರಸಾ ವಿದ್ಯಾರ್ಥಿಗಳ ಜೊತೆ ಅಕ್ರಮ ಕೂಟ ಸೇರಿಕೊಂಡು ನ್ಯಾಯಾಲಯದ ಆದೇಶ ಉಲ್ಲಂಘಿಸಿ ಅಪಾಯಕಾರಿ ಆಯುಧಗಳಾದ ರಾಡ್, ಸುತ್ತಿಗೆ (ಹ್ಯಾಮರ್), ಗ್ಲಾಸ್ ಪೀಸ್‌ಗಳು, ಕಲ್ಲುಗಳನ್ನು ತೆಗೆದು ಕೊಂಡು ಬಂದು ಮಸೀಹ ಅಹಮ್ಮದ್ ಸಂಬಂಧಿಕರು ಮತ್ತು ಅವರ ಕೆಲಗಾರರಿಗೆ ಮನ ಬಂದಂತೆ ಬೈದು, ಕೊಲೆ ಬೆದರಿಕೆ ಹಾಕಿ, ತಾವುಗಳ ತಂದಿರುವ ಅಪಾಯಕಾರಿ ವಸ್ತುಗಳಿಂದ ಹೊಡೆದು ಹಲ್ಲೆ ಮಾಡಿದ್ದಾರೆ ಎಂದು ಸಹಾಯಕ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ದೂರು ದಾಖಲಿಸಿದ್ದಾರೆ.

ಇವರನ್ನು ತಡೆಯಲು ಹೋದರೆ ನಮ್ಮನ್ನು ತಳ್ಳಿ ನಮ್ಮ ಕರ್ತವ್ಯಕ್ಕೆ ಅಡ್ಡಿಪಡಿಸಿ ಮತ್ತು ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಮನ ಬಂದಂತೆ ಅಲ್ಲಿಯೇ ಇದ್ದ ಗ್ಲಾಸ್ ಚೂರು ಗಳಿಂದ, ಕಲ್ಲುಗಳಿಂದ ಮತ್ತು ತಾವು ತಂದಿರುವ ಆಯುಧಗಳಿಂದ ಮಸೀಹ ಅಹಮ್ಮದ್ ಕಡೆಯವರ ಮೇಲೆ ಹಲ್ಲೆ ಮಾಡಿದ್ದಾರೆ. ಪೊಲೀಸರು ಅವರ ಪರವಾಗಿದ್ದು, ನಿಮ್ಮನ್ನು ನಂಬಿದರೆ ನಮ್ಮ ಶಾಲೆಯ ಸ್ವತ್ತು ಅವರ ಪಾಲಾಗುತ್ತದೆ. ಅವರನ್ನು ಯಾವುದೇ ಕಾರಣಕ್ಕೆ ಇಲ್ಲಿ ಇರಲು ಬಿಡುವುದಿಲ್ಲ ಅವರೆಲ್ಲರನ್ನು ಹೊಡೆದು ಇಲ್ಲಿಂದ ಹೊರ ಓಡಿಸಬೇಕೆಂದು ಏಕಾಏಕಿ ತಾವು ತಂದಿರುವ ಕಲ್ಲು ರಾಡ್, ಸುತ್ತಿಗೆ, ಒಡೆದಿರುವ ಗ್ಲಾಸಿನ ಪೀಸ್ ಗಳಿಂದ ಅವರೆಲ್ಲರಿಗೂ ಹೊಡೆದು ರಕ್ತಗಾಯ ಮಾಡಿದ್ದಾರೆ. ಅದನ್ನು ತಡೆಯಲು ಮುಂದಾದ ಕರ್ತವ್ಯ ಪೊಲೀಸರನ್ನು ಅವಾಚ್ಯವಾಗಿ ನಿಂದಿಸಿ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆ.

ನಮ್ಮ ಸಮವಸ್ತ್ರದ ನೇಮ್ ಪ್ಲೇಟ್, ಬಟನ್ ಕಿತ್ತು ಹೋಗಿದ್ದು, ಅವರೆಲ್ಲರೂ ಕಾನೂನಿನ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ನಂತರ ಇವರೆಲ್ಲರೂ ಸೇರಿಕೊಂಡು ಹಿಂದೆ ಇರುವ ಎರಡು ಬಾಗಿಲು ಗಳನ್ನು ಮುರಿದು ಹಾಕಿದ್ದಾರೆ. ನಮ್ಮ ಸಿಬ್ಬಂದಿಗೂ ಸಣ್ಣ-ಪುಟ್ಟ ಗಾಯಗಳಾಗಿವೆ.

ದಿ ಅಲ್ ಜಾಮೀಯಾ ಮೊಹಮ್ಮದಿಯಾ ಎಜುಕೇಷನ್ ಸೊಸೈಟಿ ಆಡಳಿತಾಧಿಕಾರಿಗಳು ಜಮೀನು ವ್ಯಾಜ್ಯದ ಗಲಾಟೆಗೆ ಮದರಸಾ ಮಕ್ಕಳನ್ನು ಬಳಸಿ ಕೊಂಡಿದ್ದಾರೆ. ಸದರಿ ಮದರಸಾದ ಸಿಬ್ಬಂದಿ ಮತ್ತು ಅಲ್ಲಿ ಕೆಲಸ ಮಾಡುತ್ತಿರುವವರ ವಿರುದ್ಧ ಈ ಜಮೀನಿಗೆ ಸಂಬಂಧಿಸಿದಂತೆ ಠಾಣೆಯಲ್ಲಿ ಹಲವಾರು ಪ್ರಕರಣಗಳು ದಾಖಲಾಗಿವೆ. ಇವರಿಗೆ ಶಾಂತಿ ಭಂಗ ಮಾಡಬಾರಂದೆಂದು ಠಾಣೆಯಲ್ಲಿ ಪಿ.ಎ.ಆರ್ ಪ್ರಕರಣ ದಾಖಲಿಸಲಾಗಿದೆ. ಘಟನೆಯ ಸಮಯದಲ್ಲಿ ವಿಡಿಯೋ ಸಹ ಮಾಡಲಾಗಿದೆ ಎಂದು ಸಹಾಯಕ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಸತೀಶ್ ಕುಮಾರ್ ತಿಳಿಸಿದ್ದಾರೆ.

# ಬಿಡದಿ ಟೌನ್‌ಶಿಪ್ ವಿರೋಧಿ ಹೋರಾಟಕ್ಕೆ ಬಸನಗೌಡ ಪಾಟೀಲ್ ಯತ್ನಾಳ್ ಬೆಂಬಲ

**ವಿಜಯಪುರ, ಜು.14:** ಬಿಡದಿ ರೈತರ ವಿರೋಧದ ನಡುವೆಯೂ ಒತ್ತಾಯಪೂರ್ವಕವಾಗಿ ಅವರ ಅನುಮತಿಯಿಲ್ಲದೆ ಜಿಬಿಎ ಜಂಟಿ ಅಳತೆ ಪ್ರಮಾಣೀಕರಣ ಸಮಿತಿಯು ಮಂಡಲ ಹಳ್ಳಿಯಲ್ಲಿ ಭೇಟಿ ನೀಡಿದ ಸಂದರ್ಭದಲ್ಲಿ ರೈತರು ರೊಚ್ಚಿಗೆದ್ದು ಪ್ರತಿಭಟನೆ ಮಾಡಿದ್ದರಿಂದ ಅವರ ಮೇಲೆ ಎಫ್‌ಐಆರ್ ದಾಖಲಿಸಿದೆ. ಅನ್ನದಾತರ ಮೇಲೆ ದೌರ್ಜನ್ಯವೆಸಗುತ್ತಿರುವ ರೈತ ವಿರೋಧಿ ಕ್ರಮ ಖಂಡನೀಯ. ಕೇಸು ಹಾಕಿಸಿಕೊಂಡಿರುವ ರೈತರು ಧೃತಿಗೆಡಬೇಕಾಗಿಲ್ಲ. ನಮ್ಮ ಕಾನೂನು ತಂಡ ಅವರಿಗೆ ಉಚಿತ ಕಾನೂನು ನೆರವು ನೀಡಲಾಗುತ್ತದೆ. ನಿಮ್ಮ ನ್ಯಾಯುತವಾದ ಹೋರಾಟವನ್ನು ಯಾವುದೇ ಕಾರಣಕ್ಕೂ ಬಿಡಬೇಡಿ. ಹೋರಾಟ ತಾರ್ಕಿಕ ಅಂತ್ಯ ಕಾಣುವ ತನಕ ನಾನು ನಿಮ್ಮ ಬೆಂಬಲಕ್ಕೆ ನಿಲ್ಲುತ್ತೇನೆ ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟ್ವೀಟ್ ಮೂಲಕ ಭರವಸೆ ನೀಡಿದ್ದಾರೆ.



# ನಿರಂತರ ನೀರು ಪೂರೈಕೆ ಯೋಜನೆ 2027ರ ಜೂನ್‌ನಲ್ಲಿ ಪೂರ್ಣ: ಯತೀಂದ್ರ ಗಡುವು

**ಕಲಬುರಗಿ, ಜು. 14:** ಕಲಬುರಗಿ ಮಹಾನಗರಕ್ಕೆ ನಿರಂತರ ಕುಡಿಯುವ ನೀರು ಪೂರೈಕೆ 24*7 ಯೋಜನೆಯ ಕಾಮಗಾರಿ ಚುರುಕುಗೊಳಿಸಿ, ಜೂನ್ 2027 ರೊಳಗೆ ಕಾಮಗಾರಿ ಮುಗಿಸುವಂತೆ ಎಲ್ ಅಂಡ್ ಟಿ ಕಂಪನಿಗೆ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಅವರು ಅಧಿಕಾರಿಗಳಿಗೆ ಗಡುವು ನೀಡಿದರು.

ಉದ್ದೇಶಿತ ಯೋಜನೆ ಆಮೆಗತಿಯಲ್ಲಿ ನಡೆದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ನಾಲ್ಕು ಬಾರಿ ಯೋಜನೆ ಪೂರ್ಣಕ್ಕೆ ಕಾಲಮಿತಿ ವಿಸ್ತರಣೆ ಮಾಡಿದ್ದು, ಇನ್ನೂ ಮುಗಿದಿಲ್ಲ ಎಂದರೆ ನಾವು ಜನರಿಗೆ ನೀಡಿದ ವಾಗ್ದಾನ ಪೂರೈಸುವುದೆ ಹೇಗೆ? ಎಂದು ಪ್ರಶ್ನಿಸಿದಲ್ಲದೆ ಈ ಬಾರಿ ಮತ್ತೆ ವಿಸ್ತರಣೆ ಮಾಡಲ್ಲ. ಕಾಲಮಿತಿಯಲ್ಲಿ ಮುಗಿಸಬೇಕು ಇಲ್ಲದಿದ್ದರೆ ಕಂಪನಿ ಮತ್ತು ಮೇಲುಸ್ತುವಾರಿ ವಹಿಸಬೇಕಾದ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.



24*7 ನಿರಂತರ ಕುಡಿಯುವ ನೀರು ಯೋಜನೆ ಕಾಮಗಾರಿಯಲ್ಲಿ ನಗರದ 55 ವಾರ್ಡುಗಳಲ್ಲಿ 62,767 ಪೈಕಿ 30,907 ಮನೆಗೆ ಮಾತ್ರ ನಲ್ಲಿ ಸಂಪರ್ಕ ಕಲ್ಪಿಸಿದ್ದು, 31,860 ಬಾಕಿ ಇವೆ. ಉಳಿದ ಮನೆಗಳಿಗೂ ಬೇಗ ಸಂಪರ್ಕ ಕಲ್ಪಿಸಬೇಕಿದೆ. ಇನ್ನು ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು. ಕಳಪೆ ಕಾಮಗಾರಿಗೆ ಇಲ್ಲಿ ಅವಕಾಶ ಇಲ್ಲ ಎಂದರು.

ಮೇಯರ್ ವರ್ಷಾ ರಾಜೀವ ಜಾನೆ ಮಾತನಾಡಿ ಹೆಚ್ಚಿನ ಕಾರ್ಮಿಕರನ್ನು ನಿಯೋಜಿಸಿ ಕಾಮಗಾರಿಗೆ ವೇಗ ನೀಡಬೇಕಾದ ಎಲ್ & ಟಿ ಕಂಪನಿ ಇತ್ತೀಚೆಗೆ ಏಕಾಏಕಿ 50 ಜನ ಸಿಬ್ಬಂದಿ ತೆಗೆದು ಹಾಕಿದೆ ಎಂದು ಸಚಿವರ ಗಮನ ಸೆಳೆದರು. ಕಾರ್ಮಿಕರ ಕೊರತೆಯಿಂದಲೆ ಕಾಮಗಾರಿ ವಿಳಂಬವಾಗಿರುವಾದ ಇರುವವರನ್ನು ತೆಗೆದರೆ ಹೇಗೆ? ಏಕಾಏಕಾ ಅವರನ್ನು ತೆಗೆದರೆ ಹೇಗೆ ಎಂದು ಕೂಡಲೆ ಅವರೆಲ್ಲರನ್ನು ಕೆಲಸಕ್ಕೆ ತೆಗೆದುಕೊಳ್ಳಿ ಎಂದು ಸಚಿವರು ಕಂಪನಿ ಅಧಿಕಾರಿಗಳಿಗೆ ತಿಳಿಸಿದರು.

ಇನ್ನು ನಗರದಲ್ಲಿ 40 ವರ್ಷದ ಹಳೇ ಚರಂಡಿ ವ್ಯವಸ್ಥೆ ಇರುವುದರಿಂದ ಎಲ್ಲೆಂದರಲ್ಲಿ ಸೋರಿಕೆ ಕಂಡು ದಿನದಿಂದ ದಿನಕ್ಕೆ ನೈರ್ಮಲ್ಯ ಹದಗೆಡುತ್ತಿದೆ. ಇದಕ್ಕೆ ಪರಿಹಾರ ಕಂಡುಕೊಳ್ಳಲು ನಗರದಲ್ಲಿ 700 ಕಿ.ಮೀ ಉದ್ದದ ಹೊಸದಾಗಿ ಒಳಚರಂಡಿ ನಿರ್ಮಾಣ ಕಾಮಗಾರಿ ಕೈಗೊಳ್ಳುವ ಅವಶ್ಯಕತೆ ಇದೆ ಎಂದು ಸಚಿವರ ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಸಚಿವರು ಯಾವೆಲ್ಲ ಮೂಲಗಳಿಂದ ಅರ್ಥಿಕ ಸಂಪನ್ಮೂಲ ಕ್ರೋಢಿಕರಿಸಿ ಒಳಚರಂಡಿ ಯೋಜನೆ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಕೂಲಂಕುಷವಾಗಿ ಪ್ರಸ್ತಾವನೆ ತಯಾರಿಸುವಂತೆ ಪಾಲಿಕೆ ಆಯುಕ್ತರಿಗೆ ನಗರಾಭಿವೃದ್ಧಿ ಸಚಿವರು ಸೂಚಿಸಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ ಹಂತ 2ರಲ್ಲಿ 127.50 ಕೋಟಿ ರೂ. ಮೊತ್ತದಲ್ಲಿ ಕೈಗೊಳ್ಳುತ್ತಿರುವ 54 ಕಾಮಗಾರಿಗಳು ಮತ್ತು ಅಮೃತ್ 2.0 ನಲ್ಲಿ 9.40 ಕೋಟಿ ರೂ. ವೆಚ್ಚದಲ್ಲಿ ಐದು ಉದ್ಯಾನವನ ಸೇರಿದಂತೆ 8 ಕಾಮಗಾರಿಗಳಿಗೆ ವೇಗ ನೀಡಿ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆಯೂ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

# ಮತದಾರರ ಪಟ್ಟಿಯಲ್ಲಿ ಅಕ್ರಮ ವಲಸಿಗರ ಹೆಸರು, ಕಾಂಗ್ರೆಸ್ ಸರ್ಕಾರದಿಂದ ಅಧಿಕಾರ ದುರ್ಬಳಕೆ: ವಿಜಯೇಂದ್ರ ಆರೋಪ

**ಬೀದರ್, ಜು. 14:** ಅಕ್ರಮ ವಲಸಿಗರ ಹೆಸರು ಮತದಾರರ ಪಟ್ಟಿಗೆ ಸೇರಿಸಲು ರಾಜ್ಯದ ಕಾಂಗ್ರೆಸ್ ಸರ್ಕಾರ ಅಧಿಕಾರ ದುರ್ಬಳಕೆ ಮಾಡಿಕೊಳ್ಳುತ್ತಿದೆ ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಈ ಹಿಂದೆ ಎಲ್ಲೆಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕೆಲಸ ನಡೆದಿದೆಯೋ ಅದನ್ನು ಕಾಂಗ್ರೆಸ್ ವಿರೋಧಿಸುತ್ತ ಬಂದಿದೆ. ಆದರೆ, ರಾಜ್ಯದಲ್ಲಿ ಅಧಿಕಾರ ದುರ್ಬಳಕೆ ಮಾಡಿಕೊಂಡು, ಅಧಿಕಾರಿಗಳ ಮೇಲೆ ಒತ್ತಡ ಹಾಕಿ, ಹೆದರಿಸಿ ಅಕ್ರಮ ವಲಸಿಗರ ಹೆಸರು ಮತದಾರರ ಪಟ್ಟಿಗೆ ಸೇರಿಸಲು ಮುಂದಾಗಿದೆ ಎಂದು ನಗರದ ನೌಬಾದ್‌ನಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಎಸ್‌ಐಆರ್ ಸಭೆ ಬಳಿಕ ಪತ್ರಿಕಾಗೋಷ್ಠಿಯಲ್ಲಿ, ಚುನಾವಣಾ ಆಯೋಗವು ಉತ್ತಮ ಉದ್ದೇಶದಿಂದ ಎಸ್‌ಐಆರ್ ನಡೆಸುತ್ತಿದೆ. ಆದರೆ, ಕಾಂಗ್ರೆಸ್ ಅದನ್ನು ಬೇರೆ ರೀತಿಯಲ್ಲಿ ಮಾಡುತ್ತಿದೆ. ಅಕ್ರಮ ವಲಸಿಗರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಹಾಗೆಯೇ ಇರಬೇಕೆಂಬ ಭಾವನೆ ಕಾಂಗ್ರೆಸ್ಸಿನದು. ಹೀಗಾಗಿಯೇ ಇದನ್ನು ಬಿಜೆಪಿ ಗಂಭೀರವಾಗಿ ತೆಗೆದುಕೊಂಡಿದ್ದು, ಜಾಗೃತಿ ಮೂಡಿಸಲು ಮುಂದಾಗಿದೆ. ಇದಕ್ಕಾಗಿ ಬೀದರ್‌ನಿಂದ ಪ್ರವಾಸ ಆರಂಭಿಸಿದ್ದೇನೆ ಎಂದರು.



ಎಸ್‌ಐಆರ್ ಬಗ್ಗೆ ಖಂಡಿತವಾಗಿಯೂ ಬಿಜೆಪಿ ಬಹಳ ಗಂಭೀರವಾಗಿದೆ. ಈ ಕುರಿತು ಶಾಸಕರು, ಮುಖಂಡರ ಹಲವಾರು ಸಭೆಗಳನ್ನು ನಡೆಸಿದ್ದೇನೆ. ಆಯಾ ಕ್ಷೇತ್ರಕ್ಕೆ ಉಸ್ತುವಾರಿಗಳನ್ನು ನೇಮಕ ಮಾಡಿ, ಪಕ್ಷದ ಜಿಲ್ಲಾ ಅಧ್ಯಕ್ಷರಿಗೂ ಜವಾಬ್ದಾರಿ ವಹಿಸಲಾಗಿದೆ. ಬಿಜೆಪಿ ಪಕ್ಷದಲ್ಲಿ ಕೆಲವು ಸಂಘಟನಾತ್ಮಕ ಸಮಸ್ಯೆಗಳಿವೆ. ಇದಕ್ಕೆ ಸಂಬಂಧಿಸಿದಂತೆ ಈಗಾಗಲೇ ಪಕ್ಷದ ಕೋರ್ ಕಮಿಟಿ ಸಭೆಯಲ್ಲಿ ಕೆಲ ಶಾಸಕರು, ಮುಖಂಡರಿಗೆ ಎಚ್ಚರಿಕೆ ಕೂಡ ಕೊಡಲಾಗಿದೆ. ಪಕ್ಷದ ವರಿಷ್ಠರು ಎಲ್ಲವನ್ನೂ ಗಮನಿಸುತ್ತಿದ್ದಾರೆ. ಸಂದರ್ಭಕ್ಕೆ ತಕ್ಕಂತೆ ಅವರು ಸೂಕ್ತ ಕ್ರಮ ಕೈಗೊಳ್ಳುತ್ತಾರೆ. ಮತ್ತೊಂದು ಅವಧಿಗೆ ವಿಜಯೇಂದ್ರ ಅವರು ಬಿಜೆಪಿ ರಾಜ್ಯ ಅಧ್ಯಕ್ಷರಾಗಿ ಮುಂದುವರೆಯುತ್ತಾರಾ? ಎಂಬ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, 'ಅದಕ್ಕಾಗಿಯೇ ಪ್ರವಾಸ ಮಾಡುತ್ತಿದ್ದೇನೆ' ಎಂದು ಚುಟುಕಾಗಿ ಉತ್ತರಿಸಿದರು.

**ಎಕರೆಗೆ 50 ಸಾವಿರ ಪರಿಹಾರ :** ಮುಂಗಾರು ದುರ್ಬಲಗೊಂಡಿದೆ. ಉತ್ತರ ಕರ್ನಾಟಕ–ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ 30 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಸಾಧ್ಯವಾಗಿಲ್ಲ. ಶೇ 15ರಿಂದ 20ರಷ್ಟು ಬಿತ್ತನೆಯಷ್ಟೇ ಆಗಿದೆ. ತೊಗರಿ, ಉದ್ದು, ಸೋಯಾ ಬಿತ್ತನೆ ಮಾಡಿದ ರೈತರು ಕಂಗಾಲಾಗಿದ್ದಾರೆ. ರೈತರ ಪರಿಸ್ಥಿತಿ ಅರ್ಥ ಮಾಡಿಕೊಂಡು ರಾಜ್ಯ ಸರ್ಕಾರ ತಕ್ಷಣವೇ ಸ್ಪಂದಿಸಬೇಕು. ಪ್ರತಿ ಎಕರೆಗೆ 50 ಸಾವಿರ ಪರಿಹಾರ ಕೊಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಭೀಕರ ಬರಗಾಲದ ಪರಿಸ್ಥಿತಿಯಲ್ಲಿ ಪೂರ್ಣ ಪ್ರಮಾಣದ ಸಂಪುಟ ಅಸ್ತಿತ್ವದಲ್ಲಿ ಇಲ್ಲ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ವಿದೇಶ ಪ್ರವಾಸಿ ಮುಗಿಸಿಕೊಂಡು ಹಿಂತಿರುಗಿದ್ದಾರೆ. ಕಾಂಗ್ರೆಸ್ ಶಾಸಕರು ಪುನಃ ದೆಹಲಿಯಲ್ಲಿ ಬೀಡು ಬಿಡುವ ಸೂಚನೆಗಳಿವೆ. ಶಾಸಕರ ದಂಡು ದೆಹಲಿಯತ್ತ ಮುಖ ಮಾಡಬಹುದು. ಸರ್ಕಾರಕ್ಕೆ ರೈತರು ಆದ್ಯತೆ ಆಗಬೇಕು ಹೊರತು ರಿಯಲ್ ಎಸ್ಟೇಟ್ ಅಲ್ಲ. ಎರಡನೇ ವಿಮಾನ ನಿಲ್ದಾಣದ ಜೊತೆಗೆ ಉತ್ತರ ಕರ್ನಾಟಕದ ಅಭಿವೃದ್ಧಿಯೂ ಮುಖ್ಯಮಂತ್ರಿಯವರ ಆದ್ಯತೆ ಆಗಬೇಕು ಎಂದು ಹೇಳಿದರು.

ಮಾರ್ಕೆಟಿಂಗ್ ಸಿಕಂ: ಕಳೆದ ವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಬೀದರ್ ಜಿಲ್ಲಾ ಪ್ರವಾಸ ಕೈಗೊಂಡಿದ್ದರು. ಬಸವಕಲ್ಯಾಣದಲ್ಲಿ ನಿರ್ಮಾಣ ಹಂತದ ಅನುಭವ ಮಂಟಪದ ಕಾಮಗಾರಿ ವೀಕ್ಷಿಸಿ, ಕೈಯಲ್ಲಿ ಲಿಂಗ ಹಿಡಿದುಕೊಂಡು ಫೋಟೊ ಶೂಟ್ ಮಾಡಿಸಿಕೊಂಡಿದ್ದಾರೆ. ಮಾರ್ಕೆಟಿಂಗ್ ಮಾಡಿಕೊಳ್ಳುವ ವಿಚಾರದಲ್ಲಿ ಅವರಿಗೆ ಬೇರೆ ಯಾರೂ ಸರಿಸಾಟಿ ಇಲ್ಲ ಎಂದು ವಿಜಯೇಂದ್ರ ಟೀಕಿಸಿದರು.

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳಾಗಿಲ್ಲ. ಬೆಂಗಳೂರಿನ ಅಭಿವೃದ್ಧಿಯೇ ರಾಜ್ಯದ ಅಭಿವೃದ್ಧಿ ಎಂಬ ಧೋರಣೆ ಹಿಂದಿನ ಸಿಎಂ ಅವರದಾಗಿತ್ತು. ಅದೇ ಧೋರಣೆ ಶಿವಕುಮಾರ್ ಕೂಡ ಹೊಂದಿದ್ದಾರೆ. ಇದು ಸರಿಯಾದುದಲ್ಲ ಎಂದರು.

# ವಿಜಯಪುರ ಜಿಲ್ಲೆಯಲ್ಲಿ ನಿಖಿಲ್ ಕುಮಾರಸ್ವಾಮಿಯಿಂದ ಬರ ಅಧ್ಯಯನ

**ವಿಜಯಪುರ, ಜು.14:** ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಂಗಳವಾರ (ಜು.14) ಜಿಲ್ಲೆಯಲ್ಲಿ ಬರ ಅಧ್ಯಯನ ನಡೆಸಿದರು.

ಜೆಡಿಎಸ್ ಪಕ್ಷದ ವತಿಯಿಂದ ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ವಿಭಾಗಗಳ ನೆರೆ ಮತ್ತು ಬರ ಅಧ್ಯಯನ ಕೈಗೊಳ್ಳಲಾಗಿದೆ. ಮಂಗಳವಾರ ವಿಜಯಪುರ ಜಿಲ್ಲೆಯ ಇಂಡಿ ವಿಧಾನಸಭಾ ಕ್ಷೇತ್ರದ ಅಗಸನಾಳ, ಹೊರ್ತಿ, ಝುಳಕಿ ಹಾಗೂ ಅಂಜುಟಗಿ ಗ್ರಾಮಗಳಿಗೆ ನಿಖಿಲ್ ಕುಮಾರಸ್ವಾಮಿ ನೇತೃತ್ವದ ತಂಡ ಭೇಟಿ ನೀಡಿತು.

ವಿವಿಧ ಕೃಷಿ ಪ್ರದೇಶಗಳಿಗೆ ಭೇಟಿ ನೀಡಿದ ನಿಖಿಲ್ ರೈತರ ಅಳಲು ಆಲಿಸಿ, ಮನವಿಗಳನ್ನು ಸ್ವೀಕರಿಸಿದರು.ಜಿಲ್ಲೆಯ ಬಹುತೇಕ ಪ್ರದೇಶಗಳಲ್ಲಿ ತೀವ್ರ ಬರಗಾಲದ ಪರಿಸ್ಥಿತಿಯಿದ್ದು, ಅನ್ನದಾತನ ಬವಣೆ ದುಸ್ತರವಾಗಿದೆ. ವಾಡಿಕೆಗಿಂತ ಸುಮಾರು ಶೇ.40ಕ್ಕಿಂತಲೂ ಕಡಿಮೆ ಮಳೆಯಾಗಿದ್ದು, ಏಕದಳ, ದ್ವಿದಳ ಹಾಗೂ ಇತರೆ ಬೆಳೆಗಳಿಗೆ ತೀವ್ರ ಹಾನಿಯಾಗಿದ್ದು ರೈತರು ಸಂಕಷ್ಟದಲ್ಲಿದ್ದಾರೆ ಎಂದು ನಿಖಿಲ್ ಹೇಳಿದರು. ಮಳೆಯಿಲ್ಲದ ಕಾರಣ ರೈತರು ಬಿತ್ತನೆಯೇ ಮಾಡಿಲ್ಲ. ಬಿತ್ತನೆ ಮಾಡಿದರೂ ಮಳೆ ಅಭಾವದಿಂದ ಬೆಳೆ ಸರಿಯಾಗಿ ಬೆಳೆಯಲು ಸಾಧ್ಯವಾಗಿಲ್ಲ. ಮಳೆಯ ಕೊರತೆಯಿಂದ ಒಣಗಿ ನಿಂತಿರುವ ಬೆಳೆಯನ್ನು ನೋಡಿದಾಗ ಕರಳು ಹಿಂಡಿದಂತಾಯಿತು ಎಂದರು.




ಹಗಲಿರುಳು ಶ್ರಮಿಸಿ, ಸಾಲ ಮಾಡಿ ಬೆಳೆದ ಬೆಳೆ ಕಣ್ಣೆದುರೇ ಒಣಗುತ್ತಿರುವ ರೈತರ ನೋವನ್ನು ಹೇಳಲು ಪದಗಳೇ ಸಾಲದು. ರೈತರ ಆತಂಕ, ಅಸಹಾಯಕತೆ ಮತ್ತು ಭವಿಷ್ಯದ ಚಿಂತೆ ನಮ್ಮನ್ನು ಸಾಕಷ್ಟು ಕಾಡುತ್ತಿದೆ. ಇಂತಹ ಸಂದಿಗ್ಧ ಸಮಯದಲ್ಲಿ ರಾಜ್ಯ ಸರ್ಕಾರದ ನಿರ್ಲಕ್ಷ್ಯ ಖಂಡನೀಯ ಎಂದು ಕಿಡಿಕಾರಿದರು.

ಈ ಕೂಡಲೇ ಸರ್ಕಾರವು ಬೆಳೆ ಹಾನಿ ಸಮೀಕ್ಷೆ ನಡೆಸಿ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ಬರ ಪರಿಹಾರ ಹಣವನ್ನು ನೇರವಾಗಿ ರೈತರ ಖಾತೆಗೆ ಜಮಾ ಮಾಡಬೇಕು. ಜತೆಗೆ ಸಾಲ ಮನ್ನಾ ಮತ್ತು ಬಡ್ಡಿ ಸಡಿಲಿಕೆ ಮಾಡಬೇಕು ಎಂದು ನಿಖಿಲ್ ಒತ್ತಾಯಿಸಿದರು.ಇದೇ ವೇಳೆ, ನಮ್ಮ ತಂಡದ ಅಧ್ಯಯನ ವರದಿಯನ್ನು ಶೀಘ್ರದಲ್ಲಿಯೇ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ಸಿ.ಟಿ, ಕೋರ್ ಕಮಿಟಿ ಅಧ್ಯಕ್ಷ ಜೆ.ಕೆ. ಕೃಷ್ಣರೆಡ್ಡಿ, ಮುಖಂಡ ಬಿ.ಡಿ.ಪಾಟೀಲ್ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಮುಖಂಡರು, ರೈತರು ಹಾಗೂ ಕಾರ್ಯಕರ್ತರು ಇದ್ದರು.

# ಸಂಘದ ಕಾರ್ಯಕರ್ತನ ಮನೆಗೆ ಸರಸಂಘಚಾಲಕ ಮೋಹನ್ ಭಾಗವತ್ ಭೇಟಿ

ಬಾಗಲಕೋಟೆ, ಜು.14: ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಸರಸಂಘಚಾಲಕ ಮೋಹನ್ ಭಾಗವತ್ ಅವರು ಬಾಗಲಕೋಟೆ ತಾಲೂಕಿನ ಕಲಾದಗಿ ಗ್ರಾಮಕ್ಕೆ ಮಂಗಳವಾರ ಭೇಟಿ ನೀಡಿದ್ದರು.

ಗಡಿಭಾಗದ ಬೆಳಗಾವಿ ಯಿಂದ ವಿಜಯಪುರಕ್ಕೆ ಪ್ರಯಾಣಿಸುತ್ತಿದ್ದ ಮಾರ್ಗಮಧ್ಯೆ ಅವರು ಕಲಾದಗಿಯ ಸಂಘದ ಯುವ ಕಾರ್ಯಕರ್ತ ಡಾ. ಪ್ರವೀಣ್ ಭಜಂತ್ರಿ ಅವರ ಮನೆಗೆ ಭೇಟಿ ನೀಡಿದ್ದರು. ದೇಶದ ಅತ್ಯುನ್ನತ ಝಡ್ ಪ್ಲಸ್ ಭದ್ರತೆ ಹೊಂದಿರುವ ಮೋಹನ್ ಭಾಗವತ್ ಅವರು ಕಲಾದಗಿ ಗ್ರಾಮಕ್ಕೆ ಆಗಮಿಸುತ್ತಿದ್ದಂತೆಯೇ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಗ್ರಾಮಕ್ಕೆ ಭೇಟಿ ನೀಡಿದ ಅವರು, ನೇರವಾಗಿ ಯುವ ಕಾರ್ಯಕರ್ತ ಡಾ. ಪ್ರವೀಣ್ ಭಜಂತ್ರಿ ಅವರ ನಿವಾಸಕ್ಕೆ ತೆರಳಿದರು.



ಡಾ. ಪ್ರವೀಣ್ ಭಜಂತ್ರಿ ಅವರ ಮನೆಯಲ್ಲಿ ಸುಮಾರು 10 ನಿಮಿಷಗಳ ಕಾಲ ಕಳೆದ ಮೋಹನ್ ಭಾಗವತ್ ಪ್ರವೀಣ್ ಅವರ ಕುಟುಂಬ ಸದಸ್ಯರೊಂದಿಗೆ ಅತ್ಯಂತ ಆತ್ಮೀಯವಾಗಿ ಮಾತನಾಡಿಸಿ ಕುಶಲೋಪರಿ ವಿಚಾರಿಸಿ, ಚಹಾ ಸೇವಿಸಿದರು. ಸಂಘದ ಪರಮೋಚ್ಚ ನಾಯಕರೇ ತಮ್ಮ ಮನೆಗೆ ಭೇಟಿ ನೀಡಿದ್ದರಿಂದ ಭಜಂತ್ರಿ ಕುಟುಂಬದಲ್ಲಿ ಹರ್ಷ ವ್ಯಕ್ತವಾಗಿದೆ.

ಕಲಾದಗಿಯಲ್ಲಿ ಕೆಲಕಾಲ ಕಳೆದ ಬಳಿಕ ಮೋಹನ್ ಭಾಗವತ್ ಅವರು ಕಾರ್ಯಕ್ರಮವೊಂದರಲ್ಲಿ ಭಾಗಿಯಾಗಲು ವಿಜಯಪುರ ಜಿಲ್ಲೆಗೆ ಪ್ರಯಾಣ ಬೆಳೆಸಿದರು.

# ಕೊಲೆ ಪ್ರಕರಣದಲ್ಲಿ ಶಿಕ್ಷೆ ಅನುಭವಿಸುತ್ತಿದ್ದ ಮೂವರು ಕೈದಿಗಳು ಜೈಲಿನಿಂದ ಪರಾರಿ

ಕಲಬುರಗಿ, ಜು.14: ಕೊಲೆ ಪ್ರಕರಣಗಳಲ್ಲಿ ಶಿಕ್ಷೆ ಅನುಭವಿಸುತ್ತಿದ್ದ ಮೂವರು ಕೈದಿಗಳು ನಗರದ ಜೇವರ್ಗಿ ರಸ್ತೆಯಲ್ಲಿರುವ ಸೆಂಟ್ರಲ್ ಜೈಲಿನಿಂದ ಮಂಗಳವಾರ ನಸುಕಿನ ಜಾವ ಪರಾರಿಯಾಗಿರುವ ಘಟನೆ ನಡೆದಿದೆ.

ಪರಾರಿಯಾದ ಕೈದಿಗಳನ್ನು ಬೀದರ್ ಜಿಲ್ಲೆಯ ಬಸವ ಕಲ್ಯಾಣ ತಾಲೂಕಿನ ಇಸ್ಲಾಂಪುರದ ಮಸ್ತಾನ್, ಔರಾದ್ ತಾಲ್ಲೂಕಿನ ಸಂತಾಪುರ ಗ್ರಾಮದ ಸಂತೋಷ ಬಸಪ್ಪ ಹಾಗೂ ಬೀದರ್ ತಾಲೂಕಿನ ಬಕ್ಕಚೌಡಿ ಗ್ರಾಮದ ಸಾಗರ ಭೀಮರಾಯ ಎಂದು ಗುರುತಿಸಲಾಗಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಕೈದಿಗಳು ಜೈಲಿನ ಭದ್ರತಾ ಗೋಡೆ ಹಾರಿ ಪರಾರಿಯಾಗಿದ್ದಾರೆ ಎನ್ನಲಾಗಿದೆ. ಘಟನೆ ಬೆಳಕಿಗೆ ಬರುತ್ತಿದ್ದಂತೆ ಜೈಲು ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.




ಈ ಘಟನೆ ಫರಹತಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪರಾರಿಯಾದ ಕೈದಿಗಳ ಪತ್ತೆಗಾಗಿ ವಿಶೇಷ ತಂಡಗಳನ್ನು ರಚಿಸಿ ವ್ಯಾಪಕ ಶೋಧ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಜಿಲ್ಲೆಯಾದ್ಯಂತ ಹಾಗೂ ಗಡಿ ಭಾಗಗಳಲ್ಲಿ ಪೊಲೀಸರು ಕಟ್ಟೆಚ್ಚರ ವಹಿಸಿದ್ದು, ಕೈದಿಗಳ ಬಂಧನಕ್ಕೆ ಬಲೆ ಬೀಸಿದ್ದಾರೆ.ಸ್ವತಃ ಗೃಹ ಸಚಿವರ ತವರಿನಲ್ಲೇ ಇಂತಹ ಲೋಪ ನಡೆದಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

# ಬರಗಾಲ ಪರಿಹಾರಕ್ಕೆ ಆಗ್ರಹಿಸಿ ರೈತರಿಂದ ಬೃಹತ್ ಪ್ರತಿಭಟನೆ

**ಕಲಬುರಗಿ, ಜು. 14:** ಮುಂಗಾರು ಮಳೆ ಕೈಕೊಟ್ಟಿದ್ದು, ಬೆಳೆ ಬೆಳೆಯಲಾಗದ ಸಂಕಷ್ಟಕ್ಕೆ ಸಿಲುಕಿರುವ ರೈತವರ್ಗ ರಸ್ತೆಗಿಳಿದು ಹೋರಾಟ ನಡೆಸಿದರು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಕಾಳಗಿ ತಾಲ್ಲೂಕು ಘಟಕ ಕರೆ ನೀಡಿದ ಹೋರಾಟಕ್ಕೆ ವಿವಿಧ ಮಠಾಧೀಶರು, ಸುತ್ತಲಿನ ನೂರಾರು ರೈತರು ಪಾಲ್ಗೊಂಡಿದ್ದರು.

ಹಸಿರು ಶಾಲು ಹೆಗಲಿಗೇರಿಸಿ ಕೊಂಡು ಎತ್ತಿನಬಂಡಿ, ಟ್ರ್ಯಾಕ್ಟರ್ ಗಳೊಂದಿಗೆ ಪಟ್ಟಣದ ಮುಖ್ಯ ಬಜಾರ್ ಒಳಗಿನ ಬಸವೇಶ್ವರ ವೃತ್ತದಿಂದ ಕಲಬುರಗಿ–ಚಿಂಚೋಳಿ ಮುಖ್ಯರಸ್ತೆ ಮೂಲಕ ಡಾ.ಬಿ.ಆರ್. ಅಂಬೇಡ್ಕರ್ ವೃತ್ತಕ್ಕೆ ಮೆರವಣಿಗೆಯಲ್ಲಿ ಬಂದರು. ಸಮರ್ಪಕ ಮಳೆಯಾಗದೇ, ಬಿತ್ತನೆಯನ್ನೂ ಮಾಡದೇ ರೈತರು ಬೀಜ–ಗೊಬ್ಬರ ಖರೀದಿಸಿ ಕೈಸುಟ್ಟುಕೊಂಡಿದ್ದಾರೆ. ಕೂಡಲೇ ರೈತರಿಗೆ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.



ಜನ–ಜಾನುವಾರು ಕುಡಿಯುವ ನೀರು, ಮೇವು ಕಾಣದ ಸ್ಥಿತಿ ತಲೆದೋರಬಹುದು ಕೂಡಲೇ ಈ ತಾಲ್ಲೂಕನ್ನು ಬರಗಾಲ ಪ್ರದೇಶವನ್ನಾಗಿ ಘೋಷಣೆ ಮಾಡಬೇಕು. ಸಾಲ ಮನ್ನಾ ಮಾಡಬೇಕು. ಬೆಳೆ ವಿಮೆ ಮಂಜೂರು ಮಾಡಬೇಕು. ಜಾನುವಾರುಗಳಿಗೆ ಪೋಷಣೆ ವ್ಯವಸ್ಥೆ ಮಾಡಬೇಕು ಎಂಬ ಹಲವು ಬೇಡಿಕೆಗಳನ್ನು ರೈತರು ಸರ್ಕಾರದ ಮುಂದಿಟ್ಟರು.

ಈ ಪ್ರತಿಭಟನೆಯಿಂದಾಗಿ ಎರಡು ತಾಸಿಗೂ ಅಧಿಕ ಕಲಬುರಗಿ, ಚಿಂಚೋಳಿ ಮತ್ತು ಸೂಗೂರು ರಸ್ತೆ ಮಾರ್ಗದ ವಾಹನ ಸಂಚಾರ ಸ್ಥಗಿತಗೊಂಡಿತು. ಪ್ರತಿಭಟನಾಕಾರರು ಹೋರಾಟ ಮಾಡುತ್ತಲೇ ರೊಟ್ಟಿಪಲ್ಲೆ ಗಂಟು ಬಿಚ್ಚಿ ಊಟವನ್ನೂ ಮಾಡಿದರು.

ತಹಶೀಲ್ದಾರರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಮನವಿಪತ್ರ ಸ್ವೀಕರಿಸಿದರು. ಸ್ಥಳೀಯ ಪಿಎಸ್‌ಐ ತಿಮ್ಮಯ್ಯ ಬಿ.ಕೆ ನೇತೃತ್ವದಲ್ಲಿ ಪೊಲೀಸರು ಬಂದೋಬಸ್ತ್ ಮಾಡಿದರು. ಸೋಮವಾರ ಪಟ್ಟಣದಲ್ಲಿ ವಾರದ ಸಂತೆಯ ದಿನ. ರೈತರ ಹೋರಾಟದಿಂದ ಸಂತೆ ವಹಿವಾಟಿಗೆ ತುಸು ಹೊಡೆತ ಬಿದ್ದು, ಜನರು ಪರದಾಡಿದರು.

## ಬಳ್ಳಾರಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ

# ಶೇ.99.19ರಷ್ಟು ಗಣತಿ ನಮೂನೆಗಳ ವಿತರಣೆ ಪೂರ್ಣ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್

**ಬಳ್ಳಾರಿ,ಜು.14.** ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಮತ್ತು ಮನೆ ಮನೆ ಸಮೀಕ್ಷೆ ಕಾರ್ಯವು ಅತ್ಯಂತ ಬಿರುಸಿನಿಂದ ಸಾಗುತ್ತಿದೆ.

ಜಿಲ್ಲೆಯಾ ದ್ಯಂತ ಒಟ್ಟು 12,29,586 ಮತ ದಾರರಿದ್ದು, ಭಾನುವಾರದ ಅಂತ್ಯಕ್ಕೆ ಒಟ್ಟು 12,19,621 ಎಸ್‌ಐಆರ್ ಗಣತಿ ನಮೂನೆಗಳನ್ನು ವಿತರಿಸುವ ಮೂಲಕ ಶೇ. 99.19 ರಷ್ಟು ಪ್ರಗತಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಜಿಲ್ಲೆಯ ಒಟ್ಟು ಮತದಾರರ ಪೈಕಿ ಶೇ. 97.83 ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣ ಗೊಂಡಿದೆ. ಸಮೀಕ್ಷೆ ನಡೆಸಲಾದ ಗಣತಿ ನಮೂನೆಗಳ ಪೈಕಿ ಒಟ್ಟು 4,50,323 (ಶೇ. 36.62) ಅರ್ಜಿಗಳನ್ನು ಯಶಸ್ವಿಯಾಗಿ ಗಣಕೀಕೃತಗೊಳಿಸಲಾಗಿದ್ದು, 1,936 ಮತದಾರರು ಸ್ವತಃ ಆನ್‌ಲೈನ್ ಮೂಲಕ ನಮೂನೆಗಳನ್ನು ಸಲ್ಲಿಸಿದ್ದಾರೆ.

ಮನೆ–ಮನೆ ಭೇಟಿ ಅವಧಿಯಲ್ಲಿ ಒಟ್ಟು 9,309 ಮತದಾರರನ್ನು ಗೈರುಹಾಜರಿ, ಸ್ಥಳಾಂತರ ಹಾಗೂ ಮರಣ ಹೊಂದಿದ ವರ್ಗಕ್ಕೆ ಗುರುತಿಸಲಾಗಿದೆ.

ಅದರಲ್ಲಿ 4,648 ಮರಣ ಹೊಂದಿದ ಮತದಾರರು, 3,482 ಖಾಯಂ ಸ್ಥಳಾಂತರ ಗೊಂಡವರು, 1,008 ಈಗಾಗಲೇ ನೋಂದಾಯಿತರಾದವರು, 136 ಅಲಭ್ಯ/ಗೈರು ಹಾಜರಾದ ಮತದಾರರು ಹಾಗೂ 35 ಇತರೆ.



**ವಿಧಾನಸಭಾ ಕ್ಷೇತ್ರವಾರು ಪ್ರಗತಿ ನೋಟ:**

**ಕಂಪ್ಲಿ (91):** 242 ಮತಗಟ್ಟೆಗಳಿದ್ದು, ಒಟ್ಟು 2,28,666 ಮತದಾರರಿದ್ದಾರೆ. ಇಲ್ಲಿ 2,26,840 ಅರ್ಜಿಗಳನ್ನು ವಿತರಿಸಲಾಗಿದ್ದು, 1,15,283 ನಮೂನೆಗಳನ್ನು ಗಣಕೀಕೃತ ಗೊಳಿಸಲಾಗಿದೆ.

**ಸಿರಗುಪ್ಪ (92):** 229 ಮತಗಟ್ಟೆಗಳಿದ್ದು, ಒಟ್ಟು 2,28,277 ಮತದಾರರಿದ್ದಾರೆ. 2,27,694 ಅರ್ಜಿಗಳನ್ನು ವಿತರಿಸಿ, 99,113 ಅರ್ಜಿಗಳನ್ನು ಗಣಕೀಕರಣ ಗೊಳಿಸಲಾಗಿದೆ. ಇಲ್ಲಿ ಅತಿ ಹೆಚ್ಚು ಅಂದರೆ 1,086 ಮತದಾರರು ಸ್ಥಳಾಂತರಗೊಂಡಿದ್ದಾರೆ.

**ಬಳ್ಳಾರಿ ಗ್ರಾಮೀಣ (93):** 236 ಮತಗಟ್ಟೆಗಳಿದ್ದು, ಒಟ್ಟು 2,51,325 ಮತದಾರರಿದ್ದಾರೆ. 2,49,939 ಅರ್ಜಿಗಳನ್ನು ವಿತರಿಸಿ, 68,541 ಅರ್ಜಿಗಳನ್ನು ಗಣಕೀಕರಣ ಗೊಳಿಸಲಾಗಿದೆ. ಈ ಕ್ಷೇತ್ರದಲ್ಲಿ ಅತಿ ಹೆಚ್ಚು ಅಂದರೆ 1,707 ಮರಣ ಪ್ರಕರಣಗಳು ದಾಖಲಾಗಿವೆ.

**ಬಳ್ಳಾರಿ ನಗರ (94):** 261 ಮತಗಟ್ಟೆಗಳಿದ್ದು, ಅತಿ ಹೆಚ್ಚು ಅಂದರೆ 2,79,144 ಮತದಾರರನ್ನು ಹೊಂದಿದೆ. ಇಲ್ಲಿ 2,73,181 ಅರ್ಜಿಗಳನ್ನು ವಿತರಿಸಲಾಗಿದ್ದು, 46,647 ಅರ್ಜಿಗಳನ್ನು ಗಣಕೀಕರಣ ಗೊಳಿಸಲಾಗಿದೆ.

ಸಂಡೂರು (95): 259 ಮತಗಟ್ಟೆಗಳಿದ್ದು, ಒಟ್ಟು 2,42,174 ಮತದಾರರಿದ್ದಾರೆ. 2,41,967 ಅರ್ಜಿಗಳನ್ನು ವಿತರಿಸಿ, ಅತಿ ಹೆಚ್ಚು ಅಂದರೆ 1,20,739 ಅರ್ಜಿಗಳನ್ನು ಯಶಸ್ವಿಯಾಗಿ ಗಣಕೀಕರಣ ಗೊಳಿಸಲಾಗಿದೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಮನೆ–ಮನೆ ಭೇಟಿ ಸಮೀಕ್ಷೆ ಮತ್ತು ಗಣಕೀಕರಣ ಪ್ರಕ್ರಿಯೆಯು ಜುಲೈ 29 ರವರೆಗೆ ಮುಂದುವರೆಯಲಿದ್ದು, ಸಾರ್ವಜನಿಕರು ಹಾಗೂ ಮತದಾರರು ಯಾವುದೇ ಗೊಂದಲಗಳಿದ್ದಲ್ಲಿ ತಮ್ಮ ಹತ್ತಿರದ ಬೂತ್ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸ ಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ತಿಳಿಸಿದ್ದಾರೆ.

# ಬಾಪೂಜಿ ನಗರದಲ್ಲಿ ಎಸ್‌ಐಆರ್ ಗಣತಿ ನಮೂನೆ ಫಾರಂ ವಿತರಣೆ ಪ್ರಕ್ರಿಯೆ ವೀಕ್ಷಿಸಿದ ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್

**ಬಳ್ಳಾರಿ, ಜು.14.**ನಗರದ ಬಾಪೂಜಿ ನಗರ ಬಡಾವಣೆಗೆ ಮಂಗಳವಾರ ಭೇಟಿ ನೀಡಿದ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು, ಅಲ್ಲಿ ಸಾರ್ವಜನಿಕರಿಗೆ ವಿತರಿಸಲಾ ಗುತ್ತಿದ್ದ ಎಸ್‌ಐಆರ್ ಎನ್ಯುಮರೇಶನ್ ಫಾರಂ ವಿತರಣಾ ಪ್ರಕ್ರಿಯೆಯನ್ನು ಹತ್ತಿರದಿಂದ ವೀಕ್ಷಿಸಿದರು. ಫಾರಂ ವಿತರಣೆಯಲ್ಲಿ ಯಾವುದೇ ಗೊಂದಲಗಳಿಗೆ ಆಸ್ಪದ ನೀಡದಂತೆ ಮತ್ತು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಫಾರಂ ತಲುಪುವಂತೆ ಕ್ರಮವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



**ಶಾಲಾ ಬಿಸಿಯೂಟ ಸವಿದು ಗುಣಮಟ್ಟ ಪರಿಶೀಲಿಸಿದ ಜಿಲ್ಲಾಧಿಕಾರಿ:**

ಬಾಪೂಜಿ ನಗರದ ಭೇಟಿಯ ನಂತರ ನೇರವಾಗಿ ಅಂದ್ರಾಳ್ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿದರು. ಶಾಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಮಧ್ಯಾಹ್ನದ ಬಿಸಿಯೂಟ ಯೋಜನೆ ಯನ್ನು ಪರಿಶೀಲಿಸಿದ ಅವರು, ಮಕ್ಕಳಿಗೆ ನೀಡುತ್ತಿರುವ ಆಹಾರವನ್ನು ವೀಕ್ಷಿಸಿದರು. ಬಳಿಕ ತಾವೂ ಕೂಡ ಊಟ ಸವಿದರು. ಊಟದ ರುಚಿ ಮತ್ತು ಗುಣಮಟ್ಟವನ್ನು ಖುದ್ದಾಗಿ ಪರೀಕ್ಷಿಸಿದ ಡಿಸಿ, ಮಕ್ಕಳಿಗೆ ಪೌಷ್ಠಿಕ ಹಾಗೂ ಸ್ವಚ್ಛವಾದ ಆಹಾರವನ್ನು ನಿರಂತರವಾಗಿ ಒದಗಿಸುವಂತೆ ಶಾಲಾ ಮುಖ್ಯೋಪಾಧ್ಯಾಯರಿಗೆ ಸೂಚಿಸಿದರು.

**ಹಾಜರಾತಿ ವಹಿ ಪರಿಶೀಲನೆ ಮತ್ತು ಮೂಲಸೌಕರ್ಯ ವೀಕ್ಷಣೆ:**

ಬಿಸಿಯೂಟದ ಪರಿಶೀಲನೆಯ ನಂತರ ಶಾಲೆಯ ಆಡಳಿತಾತ್ಮಕ ಕಾರ್ಯಗಳ ಕಡೆಗೆ ಗಮನಹರಿಸಿದ ಜಿಲ್ಲಾಧಿಕಾರಿಯವರು, ಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಹಾಜರಾತಿ ಪುಸ್ತಕಗಳನ್ನು ಕೂಲಂಕುಷವಾಗಿ ಪರಿಶೀಲಿಸಿದರು. ಶಾಲೆಯ ಸುರಕ್ಷತೆಯ ದೃಷ್ಟಿಯಿಂದ ಅತ್ಯಂತ ಅಗತ್ಯವಿರುವ ತಡೆಗೋಡೆ ನಿರ್ಮಾಣದ ಕುರಿತಾಗಿ ಮಹಾನಗರ ಪಾಲಿಕೆಯ ಅಧಿಕಾರಿಗಳೊಂದಿಗೆ ಸ್ಥಳದಲ್ಲೇ ಚರ್ಚೆ ನಡೆಸಿದರು. ಕಾಮಗಾರಿಯನ್ನು ಶೀಘ್ರವಾಗಿ ಕೈಗೆತ್ತಿಕೊಳ್ಳುವಂತೆ ಸೂಚನೆ ನೀಡಿದರು. ಶಾಲಾ ಮಕ್ಕಳ ಆಟದ ಮೈದಾನವನ್ನು ವೀಕ್ಷಿಸಿದ ಅವರು, ಮೈದಾನವನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಶಾಲಾ ಮುಖ್ಯಸ್ಥರಿಗೆ ತಿಳಿಸಿದರು.

# ಕೇಂದ್ರದ ನಿಯಮಗಳ ಪ್ರಕಾರ ಬರ ಜಿಲ್ಲೆಗಳ ಘೋಷಣೆ: ಸಚಿವ ಯತೀಂದ್ರ

**ಬೀದರ, ಜು. 14:** ರಾಜ್ಯದಲ್ಲಿನ ಬರ ಪರಿಸ್ಥಿತಿ ಬಗ್ಗೆ ಮುಖ್ಯಮಂತ್ರಿಯವರು ಈಗಾಗಲೇ ವಿಭಾಗೀಯ ಮಟ್ಟದಲ್ಲಿ ಸಭೆಗಳನ್ನು ಮಾಡಿದ್ದಾರೆ. ಎಲ್ಲಾ ಸಚಿವರು ಕೂಡಾ ಆಯಾ ಜಿಲ್ಲೆಯಲ್ಲಿ ಸಭೆ ಮಾಡುತ್ತಿದ್ದಾರೆ. ಎಲ್ಲೆಲ್ಲಿ ಬರಗಾಲವಿದೆ, ಎಲ್ಲೆಲ್ಲಿ ಮಳೆ ಕಡಿಮೆಯಿದೆ, ಎಲ್ಲಿ ಬಿತ್ತನೆಯಾಗಿಲ್ಲ ಎಂದು ಪರಿಶೀಲನೆ ಮಾಡುತ್ತಿದ್ದೇವೆ. ಎಲ್ಲವನ್ನೂ ಕ್ರೋಢೀ ಕರಿಸಿ ಕೇಂದ್ರಕ್ಕೆ ವರದಿ ಸಲ್ಲಿಸಲಾಗುವುದು. ಕೇಂದ್ರದ ನಿಯಮಗಳ ಪ್ರಕಾರವೇ ಬರಗಾಳ ಜಿಕಲ್ಲೆಗಳನ್ನು ಘೋಷಣೆ ಮಾಡಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಮ್ಮೆಲೇ ಬರಗಾಲ ಜಿಲ್ಲೆ ಎಂದು ಘೋಷಣೆ ಮಾಡಲು ಆಗುವುದಿಲ್ಲ. ಅದಕ್ಕೆ ಕೆಲವು ನೀಯಮಗಳಿವೆ. ಕೇಂದ್ರ ಸರ್ಕಾರದ ನಿಯಮಗಳ ಪ್ರಕಾರ ಬರ ಜಿಲ್ಲೆಗಳೆಂದು ಘೋಷಣೆ ಮಾಡಬೇಕಾಗುತ್ತದೆ. ಮಳೆ ಮತ್ತು ಬಿತ್ತನೆಗೆ ತೊಂದರೆಯಾಗಿರುವುದು ಎಲ್ಲವನ್ನೂ ಸಮೀಕ್ಷೆಯ ನಂತರವೇ ತಿಳಿಯಲಿದೆ ಎಂದರು.



ಬಿಎಲ್‌ಒಗಳನ್ನು ಸರ್ಕಾರ ದುರುಪಯೋಗ ಮಾಡಿಕೊಳ್ಳುತ್ತಿದೆ ಎಂಬ ವಿಪಕ್ಷಗಳ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಬಿಎಲ್‌ಒಗಳನ್ನ ದುರುಪಯೋಗ ಮಾಡಿಕೊಳ್ಳಲು ಹೇಗೆ ಆಗುತ್ತದೆ? ಎಸ್‌ಐಆರ್ ಮೂಲಕ ಮತದಾರ ಹಕ್ಕನ್ನು ಕಸದುಕೊಳ್ಳಬೇಕೆಂದು ಹೊರಟಿರು ವವರು ಅವರು. ಅರ್ಹರಿಗೆ ಮತದಾನ ಹಕ್ಕನ್ನು ಕೊಡಿಸಬೇಕೆಂದು ಹೊರಟಿರುವವರು ನಾವು. ಬೇಕಂತಲೇ ಬಿಜೆಪಿಯರು ನಮ್ಮ ವಿರುದ್ಧ ಟೀಕೆ ಮಾಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಚಿವರನ್ನು ಭೇಟಿಯಗಿ, ಬೀದರ್ ಜಿಲ್ಲೆಯನ್ನು ಬರಗಾಲ ಪೀಡಿತ ಎಂದು ಘೋಷಣೆ ಮಾಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕುವಂತೆ ಮಾಜಿ ಸಚಿವ ರಾಜಶೇಖರ ಪಾಟೀಲ ಮತ್ತು ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ, ಭೀಮರಾವ್ ಪಾಟೀಲ ಒತ್ತಾಯಿಸಿದರು.

ಹುಮನಾಬಾದ್ ವಿಧಾನಸಭಾ ಕ್ಷೇತ್ರ ಸೇರಿದಂತೆ ಜಿಲ್ಲೆಯಾದ್ಯಂತ ಮಳೆಯ ಕೊರತೆ ಆಗಿದೆ. ರೈತರು ಆತಂಕಕ್ಕೆ ಒಳಗಾಗಿದ್ದಾರೆ. ರೈತರು, ಕಾರ್ಮಿಕರ ಹಿತದೃಷ್ಟಿಯಿಂದ ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸಬೇಕು ಎಂದು ಕೋರಿದರು.

ಬೀದರ್ ಜಿಲ್ಲೆಯಲ್ಲಿನ ಸಹಕಾರ ಸಕ್ಕರೆ ಕಾರ್ಖಾನೆ ಮುಚ್ಚಿರುವ ಕಾರಣದಿಂದಾಗಿ ಕಬ್ಬು ಬೆಳೆಗಾರರು ಹಾಗೂ ಕಾರ್ಖಾನೆ ಕಾರ್ಮಿಕರು ಅನೇಕ ಸಮಸ್ಯೆಗಳು ಎದುರಿಸುತ್ತಿದ್ದಾರೆ. ಈ ಭಾಗದ ಕಬ್ಬು ಬೆಳೆಗಾರರ ಹಾಗೂ ಕಾರ್ಖಾನೆ ಕಾರ್ಮಿಕರ ಹಿತದೃಷ್ಟಿಯಿಂದ ಶೀಘ್ರದಲ್ಲೇ ಕಾರ್ಖಾನೆ ಪುನಶ್ಚೇತನ ಮಾಡಬೇಕು. ಇದರ ಹೊರತಾಗಿ ಕಾರ್ಖಾನೆ ಲೀಜ್ ಕೊಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು.

# ಮತದಾರರ ವಿಶೇಷ ಪರಿಷ್ಕರಣೆ, ಶೇ.100ರಷ್ಟು ಗಣತಿ ನಮೂನೆ ವಿತರಣೆ ಮಾಡಿ: ವಿ.ಅನ್ಬುಕುಮಾರ್

**ಕಲಬುರಗಿ, ಜು. 14:** ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಬಿ.ಎಲ್.ಓ.ಗಳು ತಮ್ಮ ಬಳಿ ಒಂದೇ ಒಂದೇ ಗಣತಿ ನಮೂನೆ ಇಟ್ಟುಕೊಳ್ಳದೆ, ಶೇ.100ರಷ್ಟು ಗಣತಿ ನಮೂನೆಗಳನ್ನು ಮತದಾರರಿಗೆ ವಿತರಣೆ ಮಾಡುವ ಮೂಲಕ ಮತದಾರರ ಪಟ್ಟಿ ಶುದ್ಧೀಕರಣಕ್ಕೆ ಸಹಕರಿಸಬೇಕೆಂದು ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿ ವಿ. ಅನ್ಬುಕುಮಾರ ಹೇಳಿದರು.



ಜಿಲ್ಲೆಯಲ್ಲಿ ಶೇ.97.64ರಷ್ಟು ಗಣತಿ ನಮೂನೆ ವಿತರಿಸಿದಕ್ಕೆ ತೃಪ್ತಿ ವ್ಯಕ್ತಪಡಿಸಿದ ಅವರು, ಆದರೂ ಇನ್ನು ಜಿಲ್ಲೆಯಾದ್ಯಂತ 56,021 ಗಣತಿ ನಮೂನೆಗಳು ವಿತರಣೆಗೆ ಬಾಕಿ ಇವೆ. ನಮ್ಮಿಂದ ನಮೂನೆ ಕೊಡೋದೆ ತಡವಾದಾಗ ಅವರಿಂದ ಸಂಗ್ರಹಿಸಿ ಡಿಜಿಟೈಸ್ ಮಾಡೋದು ಯಾವಾಗ? ಎಂದು ಮತದಾರರ ನೋಂದಣಾಧಿಕಾರಿಗಳನ್ನು ಪ್ರಶ್ನಿಸಿದ ಅವರು, ಇನ್ನೆರಡು ದಿನದಲ್ಲಿ ಉಳಿದ ಗಣತಿ ನಮೂನೆ ನೀಡುವ ಮೂಲಕ ಶೇ.100ರಷ್ಟು ಗಣತಿ ನಮೂನೆ ವಿತರಣೆ ಕಾರ್ಯ ಪೂರ್ಣಗೊಳಿಸಬೇಕೆಂದರು.

ಇನ್ನು ಮತದಾರರಿಂದ ಭರ್ತಿ ಮಾಡಿದ ಗಣತಿ ನಮೂನೆ ಪಡೆದು ಡಿಜಿಟೈಸ್ ಮಾಡುವುದು ನಮ್ಮ ಮುಂದಿನ ಸವಾಲಾಗಿದೆ. ತಂತ್ರಾಂಶದಲ್ಲಿ ಅರ್ಜಿ ಸಲ್ಲಿಕೆಗೆ ಜುಲೈ 29 ನಮಗೆ ಕೊನೆ ದಿನವಾಗಿದೆ. ಕೊನೆ ದಿನದ ವರೆಗೆ ಕಾಯದೆ ಡಿಜಿಟೈಸ್ ಕಾರ್ಯಕ್ಕೆ ವೇಗ ನೀಡಬೇಕಿದೆ. ಇಲ್ಲದೆ ಹೋದಲ್ಲಿ ಕೊನೆ ಗಳಿಗೆಯಲ್ಲಿ ಒತ್ತಡಕ್ಕೆ ಒಳಗಾಗಿ ಅನಾವಶ್ಯಕ ಸಮಸ್ಯೆಗಳಿಗೆ ದಾರಿ ಮಾಡಿಕೊಡಬಾರದು ಎಂದರು.

ಜಿಲ್ಲೆಯ 2,400 ಬಿ.ಎಲ್.ಓಗಳ ಪೈಕಿ 435 ಜನ ಬಿ.ಎಲ್.ಓ.ಗಳು ಶೇ. 0–10ರ ಡಿಜಿಟೈಸ್ ಪೂರ್ಣಗೊಳಿಸದವರಲ್ಲಿದ್ದಾರೆ. ಇದರಲ್ಲಿ ಕಲಬುರಗಿ ದಕ್ಷಿಣ ಮತ್ತು ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರದ ಕ್ರಮವಾಗಿ 150 ಮತ್ತು 144 ಬಿ.ಎಲ್.ಓ. ಗಳೆ ಇದ್ದಾರೆ. ಅಧಿಕಾರಿಗಳು ಇಲ್ಲಿ ಹೆಚ್ಚು ಗಮನಹರಿಸಬೇಕಿದೆ. ಜಿಲ್ಲೆಯ ಶೇಕಡಾವಾರು ಡಿಜಿಟೈಸ್ ಪ್ರಮಾಣಕ್ಕೆ ಅನುಗುಣವಾಗಿ ಈ ಬಿ.ಎಲ್.ಓ.ಗಳು ಕಾರ್ಯನಿರ್ವಹಿಸಿದಲ್ಲಿ ಡಿಜಿಟೈಸ್ ಪ್ರಮಾಣ ಹೆಚ್ಚಲಿದೆ. ನಿಗಧಿತ ಅವಧಿ ನಂತರ ಯಾವುದೇ ಕಾರಣಕ್ಕೂ ತಂತ್ರಾಂಶದಲ್ಲಿ ಅರ್ಜಿ ಪರಿಗಣಿಸುವುದಿಲ್ಲ. ಇದನ್ನು ಬಿ.ಎಲ್.ಓ. ಗಳಿಗೆ ಮನದಟ್ಟಾಗಿಸಿ ಅವರಿಗೆ ತಾಂತ್ರಿಕ ನೆರವು ನೀಡಿ ಉದ್ದೇಶಿತ ಕಾರ್ಯಕ್ಕೆ ವೇಗ ಹೆಚ್ಚಿಸಬೇಕೆಂದು ವಿ.ಅನ್ಬುಕುಮಾರ ಸ್ಪಷ್ಟಪಡಿಸಿದರು.

ಎಸ್.ಐ.ಆರ್. ಪ್ರಕ್ರಿಯೆಯಲ್ಲಿ ಕಾರ್ಯ ನಿರ್ವಹಿಸುವ ಬಿ.ಎಲ್.ಓ. ಗಳಿಗೆ 8,000 ರೂ. ಗೌರವ ಧನ ನೀಡಲು ಈಗಾಗಲೆ ಆದೇಶ ಮಾಡಿ ಮಂಜೂರಾತಿ ನೀಡಿದ್ದು, ಆಯಾ ತಾಲೂಕಿನ ತಹಶೀಲ್ದಾರರು ಬಿ.ಎಲ್.ಓ. ಗಳಿಗೆ ಕೂಡಲೆ ಅನುದಾನ ಬಿಡುಗಡೆ ಮಾಡಬೇಕು ಅವರಿಗೆ ಉತ್ತಮ ಪ್ರಗತಿ ಸಾಧಿಸಲು ಪ್ರೋತ್ಸಾಹಿಸಬೇಕು. ರಾಜಕೀಯ ಪಕ್ಷಗಳಿಗೆ ಮಾಹಿತಿ ಕೊಡಿ: ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಮತದಾರರ ನೋಂದಣಾಧಿಕಾರಿಗಳು ಎಸ್.ಐ.ಆರ್. ಪ್ರಕ್ರಿಯೆ ಕುರಿತು ವಾರಕ್ಕೊಮ್ಮೆ ರಾಜಕೀಯ ಪಕ್ಷಗಳ ಸಭೆ ಕರೆದು ಪ್ರತಿಯೊಂದು ಮಾಹಿತಿ ನೀಡಬೇಕು. ಪ್ರತಿದಿನ ಮಾಧ್ಯಮಗಳಿಗೆ ಸುದ್ದಿ ಬಿಡುಗಡೆ ಮಾಡಬೇಕು.

ನಾಳೆ ಯಾವುದೇ ರಾಜಕೀಯ ಪಕ್ಷಗಳು ನಮಗೆ ಮಾಹಿತಿ ನೀಡಿಲ್ಲ ಎಂಬ ದೂರು ಬಾರದಂತೆ ಮತ್ತು ಭಾರರ ಚುಣಾವಣಾ ಆಯೋಗದ ಮಾರ್ಗಸೂಚಿ ಕಡ್ಡಾಯವಾಗಿ ಪಾಲಿಸುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸ ಬೇಕು. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿ ಜಿಲ್ಲೆಯಲ್ಲಿ ಇದೂವರೆಗೆ 23,71,542 ಮತದಾರರ ಪೈಕಿ 23,15,521 (ಶೇ.97.64) ಜನರಿಗೆ ಗಣತಿ ನಮೂನೆ ವಿತರಿಸಿದ್ದು, 5,48,736 ಜನರ ಅರ್ಜಿ ತಂತ್ರಾಂಶದಲ್ಲಿ ಡಿಜಿಟೈಸ್ ಮಾಡಿ ಶೇ.23.14 ಪ್ರಗತಿ ಸಾಧಿಸಿದೆ. ಮುಂದಿನ 10 ದಿನದಲ್ಲಿ ಡಿಜಿಟೈಸ್ ಕಾರ್ಯಕ್ಕೆ ವೇಗ ನೀಡಿ ಕಾಲಮಿತಿಯಲ್ಲಿಯೇ ಶೇ.100ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಳಿಸಲಾಗುವುದು ಎಂದರು.

# ಬರಗಾಲ ನಿರ್ವಹಣೆಯಲ್ಲಿ ಸರ್ಕಾರ ಸಂಪೂರ್ಣ ವಿಫಲ: ಬಿ.ವೈ. ವಿಜಯೇಂದ್ರ

**ಕಲಬುರಗಿ, ಜು. 14:** ರಾಜ್ಯದಲ್ಲಿ ತಲೆದೋರಿರುವ ಭೀಕರ ಬರಗಾಲ ಪರಿಸ್ಥಿತಿ ನಿರ್ವಹಣೆಯಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಸರ್ಕಾರ ಆದ್ಯತೆಯಿಲ್ಲದ ವಿಷಯಗಳಲ್ಲಿ ತೊಡಗಿಕೊಂಡಿದ್ದು, ಕೂಡಲೇ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ಬರ ಪರಿಹಾರ ಘೋಷಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ, ಮುಂಗಾರು ಮಳೆ ಕೊರತೆಯಿಂದ ರಾಜ್ಯದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಉತ್ತರ ಕರ್ನಾಟಕದಲ್ಲಿ 30 ಲಕ್ಷ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಬಿತ್ತನೆ ಕಾರ್ಯ ಕುಂಠಿತಗೊಂಡಿದ್ದು, ಕಲ್ಯಾಣ ಕರ್ನಾಟಕದ ತೊಗರಿ, ಉದ್ದು, ಸೋಯಾಬೀನ್ ಸೇರಿದಂತೆ ಪ್ರಮುಖ ಬೆಳೆಗಳು ಹಾನಿಗೊಳಗಾಗಿವೆ. ಇಂತಹ ಸಂಕಷ್ಟದ ಸಂದರ್ಭದಲ್ಲಿಯೂ ರಾಜ್ಯಕ್ಕೆ ಪೂರ್ಣ ಪ್ರಮಾಣದ ಕೃಷಿ ಸಚಿವರೇ ಇಲ್ಲದಿರುವುದು ಸರ್ಕಾರದ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಕಟುವಾಗಿ ಟೀಕಿಸಿದರು.

ರಾಜ್ಯದ ಮುಖ್ಯಮಂತ್ರಿಗಳು ರೈತರ ಹಿತಾಸಕ್ತಿಗಿಂತ ಬಂಡವಾಳ ಶಾಹಿಗಳ ಪರವಾಗಿ ನಿಂತಿದ್ದಾರೆ. ರೈತರು ಬೀದಿಗಿಳಿದು ಹೋರಾಟ ನಡೆಸುವ ಪರಿಸ್ಥಿತಿಯನ್ನು ಸರ್ಕಾರವೇ ನಿರ್ಮಿಸಿದೆ. ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸುವ ಬದಲು ಕಾಟಾಚಾರಕ್ಕಾಗಿ ಅಧಿಕಾರಿಗಳ ಸಭೆ ನಡೆಸಲಾಗುತ್ತಿದ. ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕದ ಅಭಿವೃದ್ಧಿಯನ್ನು ಸರ್ಕಾರ ಸಂಪೂರ್ಣ ಕಡೆಗಣಿಸಿದೆ. ಮೂರು ವರ್ಷಗಳಿಂದ ಈ ಭಾಗದ ಅಭಿವೃದ್ಧಿಗೆ ಯಾವುದೇ ವಿಶೇಷ ಯೋಜನೆ ರೂಪಿಸಿಲ್ಲ. ಅಭಿವೃದ್ಧಿ ಕೇವಲ ಬೆಂಗಳೂರಿಗೆ ಸೀಮಿತವಾಗ ಬಾರದು. ಬಿಡದಿ ಯೋಜನೆ ಹಾಗೂ ಎರಡನೇ ವಿಮಾನ ನಿಲ್ದಾಣದಂತಹ ವಿಷಯಗಳಿಗೆ ಆದ್ಯತೆ ನೀಡುತ್ತಿರುವ ಸರ್ಕಾರ, ಉತ್ತರ ಕರ್ನಾಟಕದ ಮೂಲಭೂತ ಸಮಸ್ಯೆಗಳ ಕಡೆ ಗಮನ ಹರಿಸುತ್ತಿಲ್ಲ ಎಂದು ಹೇಳಿದರು.

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಕ್ಷೇತ್ರದಲ್ಲೇ ವಸತಿ ನಿಲಯದಲ್ಲಿ ವಿದ್ಯಾರ್ಥಿಗಳ ವಿಷಾಹಾರ ಸೇವನೆಯ ಪ್ರಕರಣಗಳು ನಡೆದಿದ್ದು, ಹಾಸ್ಟೆಲ್‌ಗಳಲ್ಲಿ ಕಳಪೆ ಆಹಾರ ಧಾನ್ಯಗಳನ್ನು



ಪೂರೈಸಲಗುತ್ತಿದೆ. ಕಲಬುರಗಿ ಜೈಲಿನಿಂದ ಮೂವರು ಕೈದಿಗಳು ಪರಾರಿಯಾಗಿದ್ದಾರೆ. ಗೃಹ ಸಚಿವರು ಏನ್ಮಾಡ್ತಿದ್ದಾರೆ? ತಮ್ಮ ಜಿಲ್ಲೆಯ ಕಡೆಗೆ ಗಮನಹರಿಸುವ ಬದಲು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಬೆಳವಣಿಗೆಗಳ ಬಗ್ಗೆ ಹೆಚ್ಚು ಗಮನ ಹರಿಸುತ್ತ, ಈ ಬಗ್ಗೆ ಹೇಳಿಕೆಗಳನ್ನು ನೀಡುವ ಮೂಲಕ ಪ್ರಚಾರ ಮಂತ್ರಿಯಾಗಿದ್ದಾರೆ ಎಂದು ಟೀಕಿಸಿದರು.

ಅನುಭವ ಮಂಟಪ ನಿರ್ಮಾಣಕ್ಕೆ 500 ಕೋಟಿ ರೂ. ನೀಡುವುದಾಗಿ ಸರ್ಕಾರ ಘೋಷಿಸಿದ್ದರೂ, ಇದುವರೆಗೆ ಹಣ ಬಿಡುಗಡೆ ಮಾಡಿಲ್ಲ. ಕೂಡಲೇ ಅನುದಾನ ಬಿಡುಗಡೆ ಮಾಡಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಆಗ್ರಹಿಸಿದರು.

ದೇಶದ ಹಲವು ಭಾಗಗಳಲ್ಲಿ ಮಳೆ ಕೊರತೆಯಿದ್ದು, ರೈತರು ಬಿತ್ತನೆ ನಡೆಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ರೈತರಿಗೆ ಸೂಕ್ತ ನೆರವು ನೀಡುವ ಮೂಲಕ ಅವರ ಬದುಕು ಉಳಿಸಬೇಕೇ ಹೊರತು, ಕೇವಲ ಹೇಳಿಕೆಗಳಿಂದ ಸಮಸ್ಯೆ ಪರಿಹಾರವಾಗುವುದಿಲ್ಲ ಎಂದು ಅವರು ಹೇಳಿದರು.

# ಬೀದರ್ ಜೈಲಿನಲ್ಲಿ ಜಾನಪದ ಸಾಂಸ್ಕೃತಿಕ ಸಂಭ್ರಮ

**ಬೀದರ್, ಜು. 14:** ನಗರದ ಜಿಲ್ಲಾ ಕಾರಾಗೃಹದಲ್ಲಿ 'ಜೈಲಲ್ಲಿ ಜಾನಪದ' ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ ಸಂಭ್ರಮದಿಂದ ನಡೆಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಜಾನಪದ ಅಕಾಡೆಮಿ, ಜಾನಪದ ಕಲಾವಿದರ ಬಳಗ ಹಾಗೂ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸಹಯೋಗದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಉದ್ಘಾಟಿಸಿದರು.

ಜಾನಪದ ಕಲೆ ಮತ್ತು ಸಂಸ್ಕೃತಿಯ ಮೂಲಕ ಕೈದಿಗಳಲ್ಲಿ ಆತ್ಮಾವಲೋಕನ, ಮನಃ ಪರಿವರ್ತನೆ ಹಾಗೂ ಸಮಾಜಮುಖಿ ಚಿಂತನೆ ಬೆಳೆಸುವ ಕೆಲಸ ಶ್ಲಾಘನಾರ್ಹವಾದುದು. ಅಪರಾಧ ಒಬ್ಬ ವ್ಯಕ್ತಿಯ ಜೀವನವನ್ನಷ್ಟೇ ಅಲ್ಲ, ಆತನ ಕುಟುಂಬ, ಸಮಾಜ ಹಾಗೂ ಮುಂದಿನ ಪೀಳಿಗೆಯ ಮೇಲೂ ದುಷ್ಪರಿಣಾಮ ಬೀರುತ್ತದೆ. ಕ್ಷಣಿಕ ಕೋಪ, ದುಸ್ಸಾಹಸ ಅಥವಾ ತಪ್ಪು ನಿರ್ಧಾರದಿಂದ ಜೀವನವಿಡೀ ಶಿಕ್ಷೆ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಯಾವುದೇ ತಪ್ಪು ಹೆಜ್ಜೆ ಇಡುವ ಮುನ್ನ ಸಾವಿರ ಬಾರಿ ಯೋಚಿಸಬೇಕು ಎಂದು ಕಿವಿಮಾತು ಹೇಳಿದರು.



ಕೈದಿಗಳು ಶಿಕ್ಷೆಯನ್ನು ಕೇವಲ ದಂಡನೆಯಾಗಿ ಪರಿಗಣಿಸದೆ, ತಮ್ಮ ಬದುಕನ್ನು ತಿದ್ದಿಕೊಳ್ಳುವ ಅವಕಾಶವನ್ನಾಗಿ ಸ್ವೀಕರಿಸಬೇಕು. ಮನಃ ಸಾಕ್ಷಿಯೊಂದಿಗೆ ಆತ್ಮಾವಲೋಕನ ಮಾಡಿಕೊಂಡು ಸಮಾಜದ ಮುಖ್ಯವಾಹಿನಿಗೆ ಮರಳಬೇಕು. ಜೀವನದಲ್ಲಿ ಪ್ರತಿಯೊಬ್ಬರಿಗೂ ಮತ್ತೊಂದು ಅವಕಾಶ ಸಿಗುತ್ತದೆ. ಅದನ್ನು ಸದುಪಯೋಗ ಪಡೆದುಕೊಂಡು ಹೊಸ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ಮಾತನಾಡಿ, ಯಾರೂ ಅಪರಾಧಿಯಾಗಿ ಅಥವಾ ಆಯುಧ ಹಿಡಿದು ಹುಟ್ಟುವುದಿಲ್ಲ. ಸಂದರ್ಭ, ಪರಿಸ್ಥಿತಿ, ತಪ್ಪು ಸಂಗಡಿಗರು ಹಾಗೂ ತಪ್ಪು ನಿರ್ಧಾರಗಳಿಂದ ಕೆಲವರು ಅಪರಾಧದ ದಾರಿಯನ್ನು ಹಿಡಿಯುತ್ತಾರೆ. ಆದರೆ, ಮನುಷ್ಯನ ಬದುಕಿನಲ್ಲಿ ಪರಿವರ್ತನೆಗೆ ಯಾವಾಗಲೂ ಅವಕಾಶವಿದೆ ಎಂದು ಹೇಳಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ವಿಜಯಕುಮಾರ ಸೋನಾರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಜಿಲ್ಲಾ ಕಾರಾಗೃಹ ಕೇಂದ್ರದ ಅಧೀಕ್ಷಕ ದತ್ತಾತ್ರಿ ಮೇಧಾ, ಲೋಕೋಪಯೋಗಿ ಇಲಾಖೆ ಉಪವಿಭಾಗದ ಸಹಾಯಕ ಎಂಜಿನಿಯರ್ ಸುನೀಲ ಆರ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ ಉಪಸ್ಥಿತರಿದ್ದರು. ಚಂದ್ರಕಾಂತ ಹಳ್ಳಿಖೇಡಕರ್ ನಿರೂಪಿಸಿದರು. ಸುನೀಲ ಭಾವಿಕಟ್ಟಿ ವಂದಿಸಿದರು.

# ಬಿಡದಿ ಟೌನ್‌ಶಿಪ್ ಹೋರಾಟ: ಹಲವು ಗ್ರಾಮಗಳಲ್ಲಿ ಉದ್ವಿಗ್ನ ಸ್ಥಿತಿ, ಮಂಡಲಹಳ್ಳಿಯಲ್ಲಿ ಪೋಲೀಸರ ಮೊಕ್ಕಾಂ

**ರಾಮನಗರ, ಜು.14:** ಬಿಡದಿ ಟೌನ್ಶಿಪ್ ಯೋಜನೆಯ ವ್ಯಾಪ್ತಿಗೆ ಬರುವ ಹಲವು ಗ್ರಾಮಗಳಲ್ಲಿ ಉದ್ವಿಗ್ನ ವಾತಾವರಣ ಉಂಟಾಗಿದ್ದು, ಬಿಗಿಯಾದ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಹಿರಿಯ ಪೊಲೀಸ್ ಅಧಿಕಾರಿಗಳು ಮಂಡಲಹಳ್ಳಿ ಗ್ರಾಮದಲ್ಲಿ ಮೊಕ್ಕಾಂ ಹೂಡಿದ್ದಾರೆ. ಮಂಡಲಹಳ್ಳಿಯಲ್ಲಿ ನಿನ್ನೆ ಉಂಟಾದ ಅಹಿಕರ ಘಟನೆಗಳ ಹಿನ್ನೆಲೆಯಲ್ಲಿ ಸರ್ವೆ ಕಾರ್ಯವನ್ನು ಅಧಿಕಾರಿಗಳು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದಾರೆ.ನಿನ್ನೆ ಮಂಡಲಹಳ್ಳಿಯಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಬಿಡದಿ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದು, ಕೆಲವು ರೈತರನ್ನು ಪೊಲೀಸರು ವಶಕ್ಕೆ ತೆಗೆದುಕೊಂಡಿದ್ದಾರೆ. ಪ್ರಕರಣದಲ್ಲಿ ಭಾಗಿಯಾಗಿದ್ದು, ತಲೆಮರೆಸಿಕೊಂಡಿರುವ ರೈತರಿಗಾಗಿ ರಾಮನಗರ ಜಿಲ್ಲಾ ಪೊಲೀಸರು ಶೋಧ ನಡೆಸುತ್ತಿದ್ದಾರೆ.

ಅಧಿಕಾರಿಗಳು ಮತ್ತೆ ಸರ್ವೆಯನ್ನು ಮಾಡಲು ಮುಂದಾದರೆ, ಅದನ್ನು ತಡೆದು ತೀವ್ರ ಪ್ರತಿಭಟನೆ ನಡೆಸಲು ರೈತರು ಸಕಲ ಸಿದ್ಧತೆ ಮಾಡಿಕೊಂಡಿದ್ದಾರೆ



ಎಂಬುದು ತಿಳಿದು ಬಂದಿದೆ. ಟೌನ್‌ಶಿಪ್ ಯೋಜನೆಗಾಗಿ ಸರ್ವೆ ನಡೆಸಲು ತೆರಳಿದ್ದ ಅಧಿಕಾರಿಗಳಿಗೆ ರೈತ ಮಹಿಳೆಯರು ಪೊರಕೆಯಿಂದ ಹೊಡೆದು, ಕಲ್ಲು ತೂರಾಟದಿಂದ ಕಾರುಗಳನ್ನು ಜಖಂಗೊಳಿಸಿ ಆಕ್ರೋಶ ವ್ಯಕ್ತಪಡಿಸಿದ್ದರು. ಇದರಿಂದ ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಉದ್ವಿಗ್ನ ವಾತಾವರಣ ಉಂಟಾಗಿತ್ತು. ಅಧಿಕಾರಿಗಳು ಏಕಾಏಕಿ ಸರ್ವೇ ಮಾಡಲು ಮುಂದಾಗಿದ್ದಾರೆ ಎಂದು ಆರೋಪಿಸಿ ರೈತರು ಪ್ರತಿಭಟನೆ ನಡೆಸಿದ್ದರು. ಘಟನೆಯ ಹಿನ್ನೆಲೆಯಲ್ಲಿ ಮಂಡಲಹಳ್ಳಿ ಗ್ರಾಮದ ಸುತ್ತಮುತ್ತ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳದಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದಾರೆ.

# ವಾಲ್ಮೀಕಿ ವಿವಿ ಕುಲಪತಿ, ಶಿವಾನಂದ ಕೆಳಗಿನಮನಿ ಅವರಿಗೆ ನಮ್ಮ ಹೆಮ್ಮೆಯ ಸಾಧಕರು ಪ್ರಶಸ್ತಿ



**ರಾಯಚೂರಿನ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಅವರಿಗೆ ಮೇಘಾಲದ ಶಿಲ್ಲಾಂಗ ಲೋಕಭವನದಲ್ಲಿ ರಾಜ್ಯಪಾಲ ಸಿ.ಎಚ್.ವಿಜಯಶಂಕರ ಅವರು 'ನಮ್ಮ ಹೆಮ್ಮೆಯ ಸಾಧಕರು ಪ್ರಶಸ್ತಿ' ನೀಡಿ ಗೌರವಿಸಿದರು.**

**ರಾಯಚೂರು, ಜು. 14:** ಜನಶಕ್ತಿ ವಿಶ್ವಸ್ಥ ಮಂಡಳಿ 'ಲೋಕಧ್ವನಿ'ಯ 'ನಮ್ಮ ಹೆಮ್ಮೆಯ ಸಾಧಕರು ಪ್ರಶಸ್ತಿ'ಗೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ಶಿವಾನಂದ ಕೆಳಗಿನಮನಿ ಅವರಿಗೆ ಶಿಲ್ಲಾಂಗ್ ಲೋಕಭವನದಲ್ಲಿ ಮೇಘಾಲಯ ರಾಜ್ಯಪಾಲರಾದ ಸಿ.ಎಚ್. ವಿಜಯಶಂಕರ್ ಅವರು ಕುಲಪತಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಎ. ಚನ್ನಪ್ಪ, ಕುಲಸಚಿವರು (ಮೌಲ್ಯಮಾಪನ) ಜ್ಯೋತಿ ಧಮ್ಮ ಪ್ರಕಾಶ್, ಹಣಕಾಸು ಅಧಿಕಾರಿ, ಉಪ ಕುಲಸಚಿವರು, ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕರು, ವಿವಿಧ ವಿಭಾಗಗಳ ನಿಕಾಯ ಡೀನರು, ಬೋಧಕ–ಬೋಧಕೇತರ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡುವಂತೆ ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್ ಸೂಚನೆ

**ರಾಯಚೂರು, ಜು. 14:** ಜಿಲ್ಲೆಯಲ್ಲಿ ಕುಡಿಯುವ ನೀರು, ಘನತ್ಯಾಜ್ಯ ನಿರ್ವಹಣೆ, ಕೆರೆಗಳ ಸಂರಕ್ಷಣೆ ಸೇರಿದಂತೆ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಜಿಲ್ಲೆಯ ಅಧಿಕಾರಿಗಳು ಒತ್ತುಕೊಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಸಾರ್ವಜನಿಕರಿಗೆ ಅಗತ್ಯ ಮೂಲ ಸೌಕರ್ಯ ಒದಗಿಸಬೇಕು. ಈ ಮೂಲಕ ಅವರ ಜೀವನ ಮಟ್ಟ ಎತ್ತರಿಸಲು ನೆರವಾಗಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಮರಳುಗಾರಿಕೆ, ಅರಣ್ಯ ಸಂರಕ್ಷಣೆ ಹಾಗೂ ಗ್ರಾಮೀಣ



ಭಾಗದ ಅಂಗಡಿ ಹಾಗೂ ಪಾನ್ ಬೀಡಾ ಅಂಗಡಿಗಳಲ್ಲಿ ಮದ್ಯ ಮಾರಾಟದ ಕುರಿತು ನಿಗಾ ನಿರ್ವಹಿಸಬೇಕು. ಅಕ್ರಮ ಮದ್ಯ ಮಾರಾಟ ತಡೆಯಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಈ ಹಿಂದೆ ಸರ್ಕಾರದಿಂದ ಮಹತ್ವ ಯೋಜನೆ ಕೈಗೊಳ್ಳಲಾಗಿದೆ. ಮಳೆ ಬರದೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಆರ್.ಓ. ಪ್ಲಾಂಟ್ಸ್ ಸಲುವಾಗಿ ಕೋಟ್ಯಂತರ ರೂಪಾಯಿ ಖರ್ಚು ಮಾಡಲಾಗಿದೆ. ಪ್ರಸ್ತುತ ಶೇ 50ರಷ್ಟು ಆರ್.ಓ. ಪ್ಲಾಂಟ್‌ಗಳು ಸರಿಯಾಗಿ ನಿರ್ವಹಣೆ ಇಲ್ಲದೆ ಹಾಳಾಗಿವೆ. ಅವುಗಳನ್ನು ಸರಿಪಡಿಸಬೇಕು. ಜಿಲ್ಲೆಯ 811 ಹಳ್ಳಿಗಳ ಪೈಕಿ ಸುಮಾರು 700 ಹಳ್ಳಿಗಳಲ್ಲಿ ಶುದ್ಧ ನೀರಿನ ಘಟಕಗಳು ಇವೆ. ದೇವದುರ್ಗ ಹಾಗೂ ಮಾನ್ವಿ ತಾಲ್ಲೂಕಿನ ಹಳ್ಳಿಗಳಲ್ಲಿ ಜನರಿಗೆ ಶುದ್ಧ ನೀರು ಸಿಗದ ಕಾರಣ ಆರೋಗ್ಯದ ಸಮಸ್ಯೆ ಎದುರಾದ ಕಾರಣ ಲೋಕಾಯುಕ್ತರಿಂದ ಸ್ವಯಂ ಪ್ರಕರಣಗಳು ದಾಖಲಿಸಲಾಗಿದೆ. ಜಿಲ್ಲೆಯಲ್ಲಿ 319 ಕೆರೆಗಳಿವೆ. ಎರಡು ಕೆರೆಗಳನ್ನು ಹೊರತುಪಡಿಸಿ ಎಲ್ಲ ಕೆರೆಗಳ ಸಮೀಕ್ಷೆ ನಡೆಸಲಾಗಿದೆ. ಕೆರೆಯ ಅಭಿವೃದ್ಧಿ ಕುರಿತು ಯೋಜನೆಗಳನ್ನು ರೂಪಿಸಬೇಕು. ಕೆರೆಗಳನ್ನು ಅಭಿವೃದ್ಧಿ ಪಡಿಸಿ ಸಾರ್ವಜನಿಕರ ಉಪಯೋಗಕ್ಕೆ ನೀಡಬೇಕು ಎಂದು ಅಧಿಕಾರಿಗಳಿಗೆ ಲೋಕಾಯುಕ್ತರು ಸೂಚಿಸಿದರು.

ನಗರದ ಸ್ವಚ್ಛತೆ ಕುರಿತು ಪ್ರತಿಯೊಬ್ಬ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಬೇಕು. ಮನೆಯ ಸ್ವಚ್ಛತೆಯಂತೆಯೇ, ನಗರ ಸ್ವಚ್ಛತೆಗೂ ಆದ್ಯತೆಯ ಮೇಲೆ ಪ್ರಾಮುಖ್ಯತೆ ನೀಡಲು ಅಧಿಕಾರಿಗಳು ಸೇರಿದಂತೆ ಪ್ರತಿಯೊಬ್ಬ ನಾಗರಿಕರು ಈ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದರು.

## ಭತ್ತದಲ್ಲಿ ನೂತನ 'ಟಾಪ್ ಗ್ರೇನ್' ತಂತ್ರಜ್ಞಾನ ಬಿಡುಗಡೆ

# ಗುಣಮಟ್ಟದ ಇಳುವರಿ ಮೂಲಕ ರೈತರ ಆದಾಯ ಹೆಚ್ಚಳಕ್ಕೆ ಹೊಸಹೆಜ್ಜೆ

**ಕಂಪ್ಲಿ, ಜು.14:** ಭತ್ತದ ಬೆಳೆಯಲ್ಲಿ ಕಾಳು ಸಂಪೂರ್ಣವಾಗಿ ತುಂಬಿಕೊಂಡು ಉತ್ತಮ ಗುಣಮಟ್ಟದ ಧಾನ್ಯ ಉತ್ಪಾದನೆಯಾಗುವ ಮೂಲಕ ರೈತರ ಇಳುವರಿ ಹಾಗೂ ಆದಾಯವನ್ನು ಹೆಚ್ಚಿಸುವ ಉದ್ದೇಶದಿಂದ ಸುಮಿಟೊಮೊ ಕೆಮಿಕಲ್ ಇಂಡಿಯಾ ಕಂಪನಿಯು ಅಭಿವೃದ್ಧಿಪಡಿಸಿರುವ ನೂತನ 'ಟಾಪ್ ಗ್ರೇನ್' ತಂತ್ರಜ್ಞಾನವನ್ನು ಸೋಮವಾರ ಕಂಪ್ಲಿ ನಗರದ ಸತ್ಯನಾರಾಯಣ ಕಲ್ಯಾಣ ಮಂಟಪದಲ್ಲಿ ರೈತರ ಸಮಾವೇಶದಲ್ಲಿ ಅಧಿಕೃತವಾಗಿ ಬಿಡುಗಡೆಗೊಳಿಸಲಾಯಿತು.




ಕಾರ್ಯಕ್ರಮದಲ್ಲಿ ಮಾತನಾಡಿದ ಕಂಪನಿಯ ಕರ್ನಾಟಕ ಜೋನಲ್ ಮ್ಯಾನೇಜರ್ ಟಿ.ಈರಣ್ಣ, ಕಾಳು ತುಂಬುವ ಹಂತವು ಅತ್ಯಂತ ಮಹತ್ವದ್ದಾಗಿದ್ದು, ಈ ಹಂತದಲ್ಲಿ ಸಸ್ಯಕ್ಕೆ ಸೂಕ್ತ ಪೋಷಣೆ ಹಾಗೂ ತಾಂತ್ರಿಕ ನಿರ್ವಹಣೆ ದೊರೆತರೆ ಉತ್ತಮ ಗುಣಮಟ್ಟದ ಧಾನ್ಯ ಉತ್ಪಾದನೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

'ಟಾಪ್ ಗ್ರೇನ್' ಬಳಕೆಯಿಂದ ಕಾಳುಗಳು ಸಂಪೂರ್ಣವಾಗಿ ತುಂಬಿಕೊಳ್ಳುವುದರ ಜೊತೆಗೆ ಜೊಳ್ಳು ಕಾಳುಗಳ ಪ್ರಮಾಣ ಕಡಿಮೆಯಾಗುತ್ತದೆ. ಇದರಿಂದ ಹೆಚ್ಚಿನ ಇಳುವರಿ ದೊರೆಯುವುದಲ್ಲದೆ, ಉತ್ತಮ ಗುಣಮಟ್ಟದ ಧಾನ್ಯಕ್ಕೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೆಲೆ ಸಿಗುವ ಮೂಲಕ ರೈತರ ಆದಾಯವೂ ಹೆಚ್ಚಲಿದೆ ಎಂದು ಹೇಳಿದರು.

ಕೃಷಿಯಲ್ಲಿ ನೂತನ ತಂತ್ರಜ್ಞಾನಗಳ ಅಳವಡಿಕೆ ಇಂದಿನ ಅವಶ್ಯಕತೆಯಾಗಿದ್ದು, ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅನುಸರಿಸಿದಾಗ ಮಾತ್ರ ಉತ್ಪಾದನಾ ವೆಚ್ಚವನ್ನು ನಿಯಂತ್ರಿಸಿ ಹೆಚ್ಚು ಲಾಭ ಗಳಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ರೈತರಿಗೆ ತಾಂತ್ರಿಕ ಮಾರ್ಗದರ್ಶನ ನೀಡುವುದು ಹಾಗೂ ಹೊಸ ಉತ್ಪನ್ನಗಳನ್ನು ಪರಿಚಯಿಸುವ ಕಾರ್ಯವನ್ನು ಕಂಪನಿ ನಿರಂತರವಾಗಿ ಕೈಗೊಳ್ಳುತ್ತಿದೆ ಎಂದು ತಿಳಿಸಿದರು. ಮಾರ್ಕೆಟಿಂಗ್ ಮ್ಯಾನೇಜರ್ ಕೆ ಎಸ್ ನವೀನ್ ಕಾರ್ಯಕ್ರಮ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಕಂಪನಿಯ ಬಯೋರೇಷನಲ್ ಪ್ರಾಡಕ್ಟ್ ಮ್ಯಾನೇಜರ್ *ಸಾಗರ್ ಜಾಧವ್, ಆರ್‌ಬಿಎಂ ಲೀಡ್ ಬಸನಗೌಡ*, ಮತ್ತು ಬಳ್ಳಾರಿ ಜಿಲ್ಲಾ ಅಗ್ರಿ ಅಸೋಸಿಯೇಷನ್ ಗೌರವ ಅಧ್ಯಕ್ಷರಾದ *ಗಣಪಲ್ ಐನಾಥ ರೆಡ್ಡಿ ಪ್ರಭಾಕರ್ ಆಗ್ರೋ ಗಂಗಾವತಿ ಶ್ರೀಧರ ಆಗ್ರೋ ಮಾಲೀಕರು ಸಿಂಧನೂರ್ ಮಂಜುನಾಥ ರಾಮಸಾಗರ* ಕಂಪನಿಯ (ಬೇಸಿಕ್?2) ಮಾರ್ಕೆಟಿಂಗ್ ಮ್ಯಾನೇಜರ್ ಪ್ರದೀಪ್ (ಆರ್ & ಡಿ) ವಿಭಾಗದ ಅಕ್ಷಯ್ ( ಬೇಸಿಕ್ 1) ಆರ್ ಎಂ ಕಿಶೋರ್ ಮತ್ತು ಸಿಂಧನೂರು ಬಳ್ಳಾರಿ ಸಿಬ್ಬಂದಿ ವರ್ಗದವರು ಇದ್ದರು.

ಕಾರ್ಯಕ್ರಮದಲ್ಲಿ 'ಟಾಪ್ ಗ್ರೇನ್' ಉತ್ಪನ್ನದ ವೈಶಿಷ್ಟ್ಯಗಳು, ಬಳಕೆಯ ವಿಧಾನ, ಕಾಳು ತುಂಬುವ ಹಂತದಲ್ಲಿ ಅನುಸರಿಸಬೇಕಾದ ತಾಂತ್ರಿಕ ಕ್ರಮಗಳು ಹಾಗೂ ಉತ್ತಮ ಇಳುವರಿ ಪಡೆಯಲು ರೈತರು ಗಮನಿಸಬೇಕಾದ ಅಂಶಗಳ ಕುರಿತು ತಜ್ಞರು ಮಾಹಿತಿ ನೀಡಿದರು. ರೈತರ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ತಾಂತ್ರಿಕ ಸಂದೇಹಗಳನ್ನು ನಿವಾರಿಸಲಾಯಿತು.

ಸುಮಾರು 6,000 ಎಕರೆ ಪ್ರದೇಶವನ್ನು ಪ್ರತಿನಿಧಿಸುವ 400ಕ್ಕೂ ಹೆಚ್ಚು ರೈತರು ಹಾಗೂ 18 ಪ್ರಮುಖ ಕೃಷಿ ಪರಿಕರಗಳ ಮಾರಾಟಗಾರರು ಕಾರ್ಯಕ್ರಮದಲ್ಲಿ ಭಾಗವಹಿಸಿ ನೂತನ ತಂತ್ರಜ್ಞಾನದ ಕುರಿತು ಮಾಹಿತಿ ಪಡೆದುಕೊಂಡರು. ರೈತರು ಹೊಸ ತಂತ್ರಜ್ಞಾನಕ್ಕೆ ಉತ್ತಮ ಸ್ಪಂದನೆ ವ್ಯಕ್ತಪಡಿಸಿ, ತಮ್ಮ ಬೆಳೆಗಳಲ್ಲಿ ಅಳವಡಿಸಿಕೊಳ್ಳುವ ಆಸಕ್ತಿ ತೋರಿದರು.

# ಎಚ್.ಐ.ವಿ. – ಏಡ್ಸ್‌ಮುಕ್ತ ಸಮಾಜ ನಿರ್ಮಾಣಕ್ಕಾಗಿ ನಿರಂತರ ಜಾಗೃತಿ ಅಗತ್ಯ: ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್

**ಬಳ್ಳಾರಿ,ಜು.14.**ಹೆಚ್.ಐ.ವಿ. ಮತ್ತು ಏಡ್ಸ್ ಮುಕ್ತ ಜಿಲ್ಲೆಯನ್ನಾಗಿಸಲು ಸಾರ್ವಜನಿಕರಲ್ಲಿ ನಿರಂತರವಾಗಿ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಅವರು ತಿಳಿಸಿದರು.

ಆರ್ಥಿಕವಾಗಿ ಸ್ವಾವಲಂಬಿಗಳಾದಾಗ ಮಾತ್ರ ಇಂತಹ ರೋಗಗಳ ಭೀತಿಯಿಂದ ಮತ್ತು ದುರ್ಬಲತೆಯಿಂದ ಹೊರಬರಲು ಸಾಧ್ಯ. ಈ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಸೂಕ್ತ ಯೋಜನೆಗಳನ್ನು ಹಮ್ಮಿಕೊಂಡು ಪ್ರಬಂಧ ಸ್ಪರ್ಧೆ, ಜಾನಪದ ನೃತ್ಯ, ಬೀದಿ ನಾಟಕ ಹಾಗೂ ಫ್ಲಾಶ್ ಮಾಬ್‌ಗಳ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಹೆಚ್.ಐ.ವಿ ಏಡ್ಸ್ ನಿಯಂತ್ರಣ ಘಟಕದ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ ವಿ. ಅವರು ಮಾತನಾಡಿ, ಜಿಲ್ಲೆಯ ಪ್ರಮುಖ ರಕ್ತನಿಧಿ ಕೇಂದ್ರಗಳಲ್ಲಿ 2019 ರಿಂದ 2026 ರವರೆಗಿನ ಅವಧಿಯಲ್ಲಿ ಸಂಗ್ರಹಿಸಲಾದ ರಕ್ತದ ಮಾದರಿಗಳ ತಪಾಸಣೆಯಿಂದ ಒಟ್ಟು 115 ಎಚ್‌ಐವಿ ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿವೆ. ಪತ್ತೆಯಾದ ಒಟ್ಟು 115 ಪ್ರಕರಣಗಳ ಪೈಕಿ 37 ಜನರನ್ನು ಹೆಚ್ಚಿನ ತಪಾಸಣೆ ಮತ್ತು ಕೌನ್ಸೆಲಿಂಗ್‌ಗಾಗಿ ಐಸಿಟಿಸಿ ಕೇಂದ್ರಗಳಿಗೆ ಶಿಫಾರಸ್ಸು ಮಾಡಲಾಗಿದೆ. ಬಾಕಿ ಉಳಿದಿರುವ 78 ಪ್ರಕರಣಗಳ ವ್ಯಕ್ತಿಗಳನ್ನು ಪತ್ತೆಹಚ್ಚಿ ಅವರಿಗೆ ಸೂಕ್ತ ವೈದ್ಯಕೀಯ ಮಾರ್ಗದರ್ಶನ ನೀಡುವುದು ಆರೋಗ್ಯ ಇಲಾಖೆಯ ಮುಂದಿರುವ ಮುಖ್ಯ ಗುರಿಯಾಗಿದೆ. ಇದಕ್ಕಾಗಿ ?ಮೈಕ್ರೋ ಲೆವೆಲ್ ಪ್ಲಾನ್' ರೂಪಿಸಲಾಗಿದೆ ಎಂದು ಅವರು ತಿಳಿಸಿದರು.



ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 'ಮಿಷನ್ ಏಡ್ಸ್ ಸುರಕ್ಷಾ' ಅಭಿಯಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಏಡ್ಸ್ ರೋಗಕ್ಕೆ ಸಂಪೂರ್ಣ ಗುಣಮುಖ ಮಾಡುವ ಔಷಧ ಇನ್ನೂ ಲಭ್ಯವಿಲ್ಲದ ಕಾರಣ, ಮುನ್ನೆಚ್ಚರಿಕೆ ಮತ್ತು ಜಾಗೃತಿಯೇ ಇದಕ್ಕೆ ಅತ್ಯುತ್ತಮ ಪರಿಹಾರವಾಗಿದೆ ಎಂದು ಹೇಳಿದರು.

ಲೈಂಗಿಕ ಕಾರ್ಯಕರ್ತೆಯರು ಅನುಷ್ಠಾನಗೊಳಿಸಬೇಕು ಎಂದರು.

ಜಿಲ್ಲೆಯ ಪ್ರತಿಯೊಂದು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಬೇಕು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಶಾ ಕಾರ್ಯಕರ್ತೆಯರ ಸೇವೆಯನ್ನು ಸಮರ್ಥವಾಗಿ ಬಳಸಿಕೊಳ್ಳಬೇಕು. ಅವರಿಗೆ ಸೂಕ್ತ ತರಬೇತಿ ನೀಡಿ, ಈ ಅಭಿಯಾನದಲ್ಲಿ ತೊಡಗಿಸಿಕೊಳ್ಳಲು ಸೂಚಿಸಿದರು.

ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಹೆಚ್.ಐ.ವಿ ಕುರಿತಾದ ಮುಜುಗರವನ್ನು ಹೋಗಲಾಡಿಸಲು

ಇದಕ್ಕೆ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿಗಳು, ರಕ್ತದಾನ ಮಾಡುವವರು ಸಾಮಾನ್ಯವಾಗಿ ಯುವಕರಾಗಿರುತ್ತಾರೆ.

ಈ 78 ಯುವಕರಿಗೆ ತಮಗೆ ಸೋಂಕು ಇರುವುದು ತಿಳಿಯದೇ ಹೋದರೆ ಅಥವಾ ಅವರು ಮುನ್ನೆಚ್ಚರಿಕೆ ವಹಿಸದಿದ್ದರೆ, ಸಮಾಜದಲ್ಲಿ ಸೋಂಕು ಮತ್ತಷ್ಟು ವೇಗವಾಗಿ ಹರಡುವ ಸಾಧ್ಯತೆ ಇರುತ್ತದೆ. ಸೋಂಕಿತರು ತಪ್ಪು ಫೋನ್ ನಂಬರ್ ನೀಡಿರುವುದು ಇವರನ್ನು ಪತ್ತೆ ಹಚ್ಚಲು ಹಿನ್ನಡೆಯಾಗಿದೆ ಎಂದರು.

# ಕಡಲ ವ್ಯವಸ್ಥೆ ರಕ್ಷಣೆ, ನಾವಿಕರ ಸುರಕ್ಷತೆ ಖಾತ್ರಿಗೆ ಭಾರತ ಬದ್ಧ: ವಿದೇಶಾಂಗ ಸಚಿವ ಜೈಶಂಕರ್

**ನವದೆಹಲಿಮ ಜು.14:** ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ನಿಯಮ ಆಧಾರಿತ ಕಡಲ ವ್ಯವಸ್ಥೆಯನ್ನು ಕಾಪಾಡಲು ಮತ್ತು ಜಾಗತಿಕ ಸಮುದ್ರ ಮಾರ್ಗಗಳಲ್ಲಿ ನಾವಿಕರ ಸುರಕ್ಷತೆಯನ್ನು ಖಚಿತಪಡಿಸಲು ಭಾರತ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ತಿಳಿಸಿದ್ದಾರೆ.

ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ 2028–29ರ ಅವಧಿಗೆ ಭಾರತದ ತಾತ್ಕಾಲಿಕ ಸದಸ್ಯತ್ವದ ಅಧಿಕೃತ ಜಾಗತಿಕ ಪ್ರಚಾರಕ್ಕೆ ಚಾಲನೆ ನೀಡಿ ಜೈಶಂಕರ್ ಮಾತನಾಡಿದರು.

ಸಮುದ್ರ ಮಾರ್ಗಗಳ ಭದ್ರತೆ, ನಾವಿಕರ ಸುರಕ್ಷತೆ, ಭಯೋತ್ಪಾದನೆಗೆ ಹಣಕಾಸು ಪೂರೈಕೆ ತಡೆ ಹಾಗೂ ಜಾಗತಿಕ ದಕ್ಷಿಣದ ಧ್ವನಿಗೆ ಆದ್ಯತೆ ನೀಡುವುದಾಗಿ ಘೋಷಿಸಿದರು.

ಸೋಮವಾರ ವಿಶ್ವಸಂಸ್ಥೆಯ ರಾಯಭಾರಿಗಳು, ರಾಜತಾಂತ್ರಿಕರು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಶ್ವಸಂಸ್ಥೆಯಲ್ಲಿ ಭಾರತದ ಕಾರ್ಯತಂತ್ರ 'ಶಾಂತಿ' ಎಂಬ ಪರಿಕಲ್ಪನೆಯ ಮೇಲೆ ಆಧಾರಿತವಾಗಿದ್ದು, ಇದೇ ಮಾರ್ಗಸೂಚಿಯಡಿ ಭಾರತ ತನ್ನ ಆದ್ಯತೆಗಳನ್ನು ಮುಂದಿರಿಸಲಿದೆ ಎಂದು ಹೇಳಿದರು.

ಭಾರತವು ತನ್ನ ಪ್ರಚಾರದಲ್ಲಿ ಜಾಗತಿಕ ದಕ್ಷಿಣದ ಧ್ವನಿಯಾಗುವುದು, ಬಹುಪಕ್ಷೀಯ ವ್ಯವಸ್ಥೆಯಲ್ಲಿ ಸುಧಾರಣೆ, ಭವಿಷ್ಯಕ್ಕೆ ಸಜ್ಜಾದ ಶಾಂತಿಪಾಲನಾ ಕಾರ್ಯಾಚರಣೆ, ಕೃತಕ ಬುದ್ಧಿಮತ್ತೆ ದುರುಪಯೋಗದಿಂದ ಉಂಟಾಗುವ ಅಪಾಯಗಳನ್ನು ಎದುರಿಸುವುದು, ಸಮುದ್ರ ಮಾರ್ಗಗಳ ಭದ್ರತೆ ಹಾಗೂ ಭಯೋತ್ಪಾದನೆಗೆ ಹಣಕಾಸು ಪೂರೈಕೆ ತಡೆ ಸೇರಿದಂತೆ ಹಲವು ಪ್ರಮುಖ ವಿಷಯಗಳಿಗೆ ಒತ್ತು ನೀಡಲಿದೆ ಎಂದು ತಿಳಿಸಿದರು.

**ಸಮುದ್ರ ಮಾರ್ಗಗಳ ಭದ್ರತೆಗೆ ಆದ್ಯತೆ**

ಇತ್ತೀಚಿನ ಜಾಗತಿಕ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಸಮುದ್ರ ಮಾರ್ಗಗಳ ಭದ್ರತೆ ಅತ್ಯಂತ ಮಹತ್ವ ಪಡೆದಿದೆ. ಜಾಗತಿಕ ಆರ್ಥಿಕತೆ ಇಂದು ಸಮುದ್ರ ವ್ಯಾಪಾರ ಮತ್ತು ಪೂರೈಕೆ ಸರಪಳಿಗಳ ಮೇಲೆ ಅವಲಂಬಿತವಾಗಿದೆ. ಆದ್ದರಿಂದ ಸಮುದ್ರ ಮಾರ್ಗಗಳು ಮುಕ್ತ, ಸುರಕ್ಷಿತ ಹಾಗೂ ನಿಯಮಾಧಾರಿತವಾಗಿರಬೇಕು. ವಿಶ್ವಸಂಸ್ಥೆಯ ಸಮುದ್ರ ಕಾನೂನು ಒಪ್ಪಂದ ಕಟ್ಟುನಿಟ್ಟಾಗಿ ಪಾಲನೆಯಾಗಬೇಕು" ಎಂದು ಹೇಳಿದರು.

ಜಾಗತಿಕ ವ್ಯಾಪಾರ ನಿರಾತಂಕವಾಗಿ ಸಾಗಬೇಕಾದರೆ ಸಮುದ್ರ ಮಾರ್ಗಗಳ ಸುರಕ್ಷತೆ ಅತ್ಯಗತ್ಯ. ಕಡಲ್ಗಳ್ಳತನ, ಮಾದಕವಸ್ತು ಕಳ್ಳಸಾಗಣೆ ಹಾಗೂ ಮಾನವ ಕಳ್ಳಸಾಗಣೆಯನ್ನು ತಡೆಯಲು ರಾಷ್ಟ್ರಗಳು ಪರಸ್ಪರ ಸಹಕರಿಸಬೇಕಿದೆ ಎಂದು ತಿಳಿಸಿದರು.

**ಗಲ್ಫ್ ಸಂಘರ್ಷದಿಂದ ನಾವಿಕರ ಸುರಕ್ಷತೆಗೆ ಸವಾಲು**

ಇದೇ ವೇಳೆ ಮಧ್ಯಪ್ರಾಚ್ಯದಲ್ಲಿನ ಉದ್ವಿಗ್ನ ಪರಿಸ್ಥಿತಿಯಿಂದ ನಾವಿಕರ ಸುರಕ್ಷತೆ ಗಂಭೀರ ಸವಾಲಾಗಿ ಪರಿಣಮಿಸಿದೆ ಎಂದು ಕಳವಳ ವ್ಯಕ್ತಪಡಿಸಿದರು.



"ಗಲ್ಫ್ ಪ್ರದೇಶದಲ್ಲಿ ನಡೆದ ಬೆಳವಣಿಗೆಗಳಿಂದ ನಾವಿಕರ ಜೀವಕ್ಕೆ ಅಪಾಯ ಎದುರಾಗಿದೆ.

ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳು, ಮಾನವೀಯ ನೆರವು, ವಿಪತ್ತು ಪರಿಹಾರ ಹಾಗೂ ಸಾಮರ್ಥ್ಯ ವೃದ್ಧಿಯಲ್ಲಿ ಭಾರತ ದೀರ್ಘಕಾಲದಿಂದ ಸಕ್ರಿಯ ಪಾತ್ರ ವಹಿಸಿದೆ. ಈ ಎಲ್ಲ ವಿಷಯಗಳಿಗೆ ವಿಶ್ವಸಂಸ್ಥೆ ಭದ್ರತಾ ಮಂಡಳಿಯಲ್ಲಿ ಅಗತ್ಯ ಪ್ರಾಮುಖ್ಯ ಸಿಗುವಂತೆ ಭಾರತ ಪ್ರಯತ್ನಿಸಲಿದೆ" ಎಂದು ಹೇಳಿದರು.

ಭಾರತದ ನೌಕಾಪಡೆ ಇಂಡೋ–ಪೆಸಿಫಿಕ್‌ನಾದ್ಯಂತ, ವಿಶೇಷವಾಗಿ ಉತ್ತರ ಮತ್ತು ದಕ್ಷಿಣ ಅರೇಬಿಯನ್ ಸಮುದ್ರ, ಏಡೆನ್ ಕೊಲ್ಲಿ, ಮಲಕ್ಕಾ ಜಲಸಂಧಿಗಳು ಮತ್ತು ಗಿನಿಯಾ ಕೊಲ್ಲಿಯಲ್ಲಿ ಸಮುದ್ರ ಮಾರ್ಗಗಳ ಭದ್ರತೆಗೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

**ಹಾರ್ಮುಜ್ ಉದ್ವಿಗ್ನತೆ ಕುರಿತು ಪರೋಕ್ಷ ಉಲ್ಲೇಖ**

ಅಮೆರಿಕ–ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದ ಹಿನ್ನೆಲೆಯಲ್ಲಿ ಹಾರ್ಮುಜ್ ಜಲಸಂಧಿಯಲ್ಲಿ ಉಂಟಾಗಿರುವ ಉದ್ವಿಗ್ನತೆ ಜಾಗತಿಕ ಇಂಧನ ಪೂರೈಕೆ, ಸರಕು ಸಾಗಣೆ ಹಾಗೂ ನಾವಿಕರ ಸುರಕ್ಷತೆಯ ಮೇಲೆ ಗಂಭೀರ ಪರಿಣಾಮ ಬೀರಿದೆ. ಈ ಸಂಘರ್ಷದ ನಡುವೆ 11 ಭಾರತೀಯರು ಮೃತಪಟ್ಟಿದ್ದು, ಹಲವು ಭಾರತೀಯ ನಾವಿಕರನ್ನು ರಕ್ಷಿಸಲಾಗಿದೆ. ಹಡಗುಗಳು ಮತ್ತು ತೈಲ ಟ್ಯಾಂಕರ್‌ಗಳ ಮೇಲೆ ದಾಳಿಗಳು ನಡೆದಿರುವುದು ಜಾಗತಿಕ ಮಟ್ಟದಲ್ಲಿ ಆತಂಕ ಸೃಷ್ಟಿಸಿದೆ.

**ಭಯೋತ್ಪಾದನೆಗೆ ಹಣಕಾಸು ಪೂರೈಕೆ ತಡೆಗೂ ಒತ್ತು**

ಭಾರತದ ಮತ್ತೊಂದು ಪ್ರಮುಖ ಆದ್ಯತೆ ಭಯೋತ್ಪಾದನೆಗೆ ಹಣಕಾಸು ಪೂರೈಕೆಯನ್ನು ತಡೆಯುವುದಾಗಿದೆ ಎಂದು ಜೈಶಂಕರ್ ಹೇಳಿದರು. "ಭಯೋತ್ಪಾದನೆಯ ಪರಿಣಾಮಗಳನ್ನು ಎದುರಿಸುವುದಷ್ಟೇ ಸಾಕಾಗುವುದಿಲ್ಲ. ಅದರ ಮೂಲ ಸಂಪನ್ಮೂಲಗಳನ್ನು ಕಡಿತಗೊಳಿಸುವತ್ತ ಜಗತ್ತು ಗಮನ ಹರಿಸಬೇಕು. ಭಯೋತ್ಪಾದಕ ಸಂಘಟನೆಗಳನ್ನು ಗುರುತಿಸುವಲ್ಲಿ ವಸ್ತುನಿಷ್ಠ ಹಾಗೂ ಸಾಕ್ಷ್ಯಾಧಾರಿತ ಕ್ರಮಗಳನ್ನು ಭಾರತ ಬೆಂಬಲಿಸಲಿದೆ ಎಂದು ಹೇಳಿದರು.

**ಸಂವಾದ,ರಾಜತಾಂತ್ರಿಕತೆಗೆ ಆದ್ಯತೆ**

ಇಂದಿನ ಜಗತ್ತು ಅನೇಕ ಸಂಘರ್ಷಗಳು ಮತ್ತು ಉದ್ವಿಗ್ನತೆಗಳನ್ನು ಎದುರಿಸುತ್ತಿದೆ. ಇಂತಹ ಸಂದರ್ಭದಲ್ಲಿ ಭಾರತ ಸದಾ ಸಂವಾದ ಮತ್ತು ರಾಜತಾಂತ್ರಿಕ ಮಾರ್ಗವನ್ನೇ ಅನುಸರಿಸಿದೆ. ಭಿನ್ನಾಭಿಪ್ರಾಯಗಳನ್ನು ಕಡಿಮೆ ಮಾಡಿ ಸಾಮಾನ್ಯ ನೆಲೆಯನ್ನು ಹುಡುಕಲು ನಾವು ನಿರಂತರ ಪ್ರಯತ್ನಿಸಿದ್ದೇವೆ. ವಿಶೇಷವಾಗಿ ಜಾಗತಿಕ ದಕ್ಷಿಣದ ರಾಷ್ಟ್ರಗಳ ಹಿತಾಸಕ್ತಿಗಳನ್ನು ಕಾಪಾಡುವುದು ನಮ್ಮ ಆದ್ಯತೆಯಾಗಿದೆ" ಎಂದು ಜೈಶಂಕರ್ ಹೇಳಿದರು.

2028–29ರ ವಿಶ್ವಸಂಸ್ಥೆ ಭದ್ರತಾ ಮಂಡಳಿಯ ತಾತ್ಕಾಲಿಕ ಸದಸ್ಯತ್ವಕ್ಕಾಗಿ ನಡೆಯಲಿರುವ ಚುನಾವಣೆಯಲ್ಲಿ ಭಾರತ ಏಷ್ಯಾ–ಪೆಸಿಫಿಕ್ ವಿಭಾಗದ ಏಕೈಕ ಸ್ಥಾನಕ್ಕಾಗಿ ತಜಿಕಿಸ್ತಾನದೊಂದಿಗೆ ಸ್ಪರ್ಧಿಸಲಿದೆ. ಈ ಚುನಾವಣೆ ಮುಂದಿನ ವರ್ಷದ ಜೂನ್‌ನಲ್ಲಿ ನಡೆಯಲಿದೆ.

ಕೃತಕ ಬುದ್ಧಿಮತ್ತೆಯ ದುರುಪಯೋಗದಿಂದ ಎದುರಾಗುವ ಅಪಾಯಗಳನ್ನು ತಡೆಯುವ ಜೊತೆಗೆ, ಮಾನವ ಕೇಂದ್ರಿತ ಎಐ ಬಳಕೆಗೆ ಭಾರತ ಬದ್ಧವಾಗಿದೆ.

ಪ್ರಸ್ತುತ ವಿಶ್ವಸಂಸ್ಥೆಯ 11 ಸಕ್ರಿಯ ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ 10 ಕಾರ್ಯಾಚರಣೆಗಳಿಗೆ ಭಾರತ ಸುಮಾರು 4,300 ಯೋಧರನ್ನು ನಿಯೋಜಿಸಿದ್ದು, ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಭಾರತಕ್ಕೆ ಅಪಾರ ಅನುಭವವಿದೆ ಎಂದು ಜೈಶಂಕರ್ ತಿಳಿಸಿದರು.

# ಶೇ.20 ಸುಂಕ ವಿಧಿಸುವ ಪ್ರಸ್ತಾವನೆಯಿಂದ ಹಿಂದೆ ಸರಿದ ಟ್ರಂಪ್

**ವಾಷಿಂಗ್ಟನ್, ಜು.14:** ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವ ಸರಕುಗಳ ಮೇಲೆ ಶೇ.20ರಷ್ಟು ಮರುಪಾವತಿ ಶುಲ್ಕವನ್ನು ವಿಧಿಸುವ ತಮ್ಮ ಪ್ರಸ್ತಾವನೆಯಿಂದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹಿಂದೆ ಸರಿದಿದ್ದಾರೆ. ಈ ಶುಲ್ಕದ ಬದಲಿಗೆ ಗಲ್ಫ್ ರಾಷ್ಟ್ರಗಳಿಂದ ಹೂಡಿಕೆ ಬದ್ಧತೆಗಳನ್ನು ಪಡೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ.

ಕಾರ್ಯತಂತ್ರದ ದೃಷ್ಟಿಯಿಂದ ಅತ್ಯಂತ ಪ್ರಮುಖವಾಗಿರುವ ಈ ಜಲಮಾರ್ಗದಲ್ಲಿ ಅಮೆರಿಕ ಒದಗಿಸುವ ಭದ್ರತೆಯ ವೆಚ್ಚವನ್ನು ಸರಿದೂಗಿಸಲು ಈ ಶುಲ್ಕ ಸಹಾಯ ಮಾಡುತ್ತದೆ ಎಂದು ವಾದಿಸಿ ಟ್ರಂಪ್ ಸೋಮವಾರವಷ್ಟೇ ಈ ಶುಲ್ಕವನ್ನು ಘೋಷಿಸಿದ್ದರು.

ಮಧ್ಯಪ್ರಾಚ್ಯದ ನಾಯಕರೊಂದಿಗೆ ನಡೆದ ಅತ್ಯಂತ ಫಲಪ್ರದ ಮಾತುಕತೆಗಳ ಆಧಾರದ ಮೇಲೆ, ನಾನು ಶೇ.20ರಷ್ಟು ಅಮೆರಿಕ ಮರುಪಾವತಿ ಶುಲ್ಕದ ನಿರ್ಧಾರವನ್ನು ಕೈಬಿಡಲು ನಿರ್ಧರಿಸಿದ್ದೇನೆ. ಇದರ ಬದಲಿಗೆ



ವಿವಿಧ ಗಲ್ಫ್ ರಾಷ್ಟ್ರಗಳು ಅಮೆರಿಕದಲ್ಲಿ ಮಾಡಲಿರುವ ವ್ಯಾಪಾರ ಮತ್ತು ಹೂಡಿಕೆ ಒಪ್ಪಂದಗಳನ್ನು ಜಾರಿಗೆ ತರಲಾಗುವುದು," ಎಂದು ಟ್ರಂಪ್ ವೈಟ್‌ಹೌಸ್‌ನಲ್ಲಿ ಇರಾಕ್ ಪ್ರಧಾನಿಯವರೊಂದಿಗೆ ನಿಗದಿಯಾಗಿದ್ದ ಸಭೆಗೆ ಕೆಲವೇ ನಿಮಿಷಗಳ ಮೊದಲು ತಮ್ಮ 'ಟ್ರುತ್ ಸೋಷಿಯಲ್ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

ಈ ಪ್ರಸ್ತಾವನೆಯು ಈಗಾಗಲೇ ಹಡಗು ಕಂಪನಿಗಳು, ಸಮುದ್ರ ವಿಶ್ಲೇಷಕರು ಮತ್ತು ಕಾನೂನು ತಜ್ಞರಿಂದ ತೀವ್ರ ಟೀಕೆಗೆ ಒಳಗಾಗಿತ್ತು. ಅಂತರರಾಷ್ಟ್ರೀಯ ಜಲಮಾರ್ಗವನ್ನು ಬಳಸುವ ಹಡಗುಗಳ ಮೇಲೆ ಶುಲ್ಕವನ್ನು ವಿಧಿಸುವ ಪ್ರಾಯೋಗಿಕತೆ ಮತ್ತು ಕಾನೂನುಬದ್ಧತೆಯ ಬಗ್ಗೆ ಟ್ರಂಪ್ ಆಡಳಿತದ ಅಧಿಕಾರಿಗಳೇ ಈ ಹಿಂದೆ ಕಳವಳ ವ್ಯಕ್ತಪಡಿಸಿದ್ದರು.

ಇದು ಅಂತರರಾಷ್ಟ್ರೀಯ ಜಲಮಾರ್ಗವಾಗಿದೆ. ಯಾವುದೇ ದೇಶಕ್ಕೂ ಅಂತರರಾಷ್ಟ್ರೀಯ ಜಲಮಾರ್ಗದಲ್ಲಿ ಶುಲ್ಕವನ್ನು ವಿಧಿಸಲು ಅನುಮತಿಯಿಲ್ಲ. ಇದು ಚಾಲ್ತಿಯಲ್ಲಿರುವ ಅಂತರರಾಷ್ಟ್ರೀಯ ಕಾನೂನು," ಎಂದು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಕಳೆದ ತಿಂಗಳು ಹೇಳಿದ್ದರು.

ಉಪ ಅಧ್ಯಕ್ಷ ಜೆ.ಡಿ. ವ್ಯಾನ್ಸ್ ಕೂಡ, "ಅಂತರರಾಷ್ಟ್ರೀಯ ಜಲಮಾರ್ಗಗಳು ಟೋಲ್ ಮುಕ್ತವಾಗಿರಬೇಕು" ಎಂಬುದೇ ತಮ್ಮ ಸರ್ಕಾರದ ನಿಲುವು ಎಂದು ಒತ್ತಿಹೇಳಿದ್ದರು.

ಖುದ್ದು ಟ್ರಂಪ್ ಕೂಡ ಈ ಹಿಂದೆ ಜಲಸಂಧಿಯನ್ನು ಬಳಸುವ ಹಡಗುಗಳ ಮೇಲೆ ಶುಲ್ಕ ವಿಧಿಸುವುದರ ವಿರುದ್ಧ ವಾದಿಸಿದ್ದರು. "ನಾವು ಇದು ಮುಕ್ತವಾಗಿರಬೇಕೆಂದು ಬಯಸುತ್ತೇವೆ. ಯಾವುದೇ ಟೋಲ್ ಇರಬಾರದು ಎಂದು ನಾವು ಬಯಸುತ್ತೇವೆ. ಇದು ಅಂತರರಾಷ್ಟ್ರೀಯ ಜಲಮಾರ್ಗವಾಗಿದೆ," ಎಂದು ಅವರು ಮೇ ತಿಂಗಳಲ್ಲಿ ಹೇಳಿದ್ದರು.

ಈ ಪ್ರಸ್ತಾವನೆಯು ಅಪ್ರಾಯೋಗಿಕ ವಾಗಿದ್ದರಿಂದ ಇದು ಇರಾನ್ ಜಲಸಂಧಿಯ ಬಗ್ಗೆ ಹೊಂದಿದ್ದ ನಿಲುವನ್ನು ಮತ್ತಷ್ಟು ಸಮರ್ಥಿಸುವಂತೆ ಮಾಡಿತ್ತು, ಏಕೆಂದರೆ ಇರಾನ್ ವಿಧಿಸುತ್ತಿದ್ದ ಶುಲ್ಕಗಳು ಇದಕ್ಕಿಂತ ಗಣನೀಯವಾಗಿ ಕಡಿಮೆಯಾಗಿದ್ದವು ಎಂದೂ ವಾದಿಸಲಾಗಿತ್ತು.

ಮಧ್ಯಪ್ರಾಚ್ಯ ಸಂಘರ್ಷದಲ್ಲಿ ಇದೂವರೆಗೆ 11 ಭಾರತೀಯರು ಮೃತಪಟ್ಟಿದ್ದಾರೆ. ಹಡಗುಗಳು ಮತ್ತು ಟ್ಯಾಂಕರ್‌ಗಳ ಮೇಲೆ ನಡೆದ ದಾಳಿಗಳ ಬಳಿಕ ಹಲವು ನಾವಿಕರನ್ನು ರಕ್ಷಿಸಲಾಗಿದೆ. ಕಳೆದ ತಿಂಗಳು ಅಮೆರಿಕ ನಡೆಸಿದ ದಾಳಿಯಲ್ಲಿ ಪಲಾವ್ ಧ್ವಜ ಹೊಂದಿದ್ದ ಎಂಟಿ ಸೆಟ್ಟೆಲ್ಲೊ ಟ್ಯಾಂಕರ್‌ನಲ್ಲಿದ್ದ ಮೂವರು ಭಾರತೀಯ ನಾವಿಕರು ಮೃತಪಟ್ಟಿದ್ದರು.

# ಯುಎಇ ಹಡಗುಗಳ ಮೇಲೆ ದಾಳಿ ಭಾರತೀಯ ನಾವಿಕ ಸಾವು

**ನವದೆಹಲಿ, ಜು.14:** ಹಾರ್ಮುಜ್ ಜಲಸಂಧಿಯಲ್ಲಿ ಯುಎಇಗೆ ಸೇರಿದ ಎರಡು ತೈಲ ಸಾಗಣೆ ಹಡಗುಗಳ ಮೇಲೆ ಇರಾನ್ ನಡೆಸಿದ ಕ್ಷಿಪಣಿ ದಾಳಿಯಲ್ಲಿ ಭಾರತೀಯ ನಾವಿಕ ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ ಭಾರತ ತೀವ್ರ ಖಂಡನೆ ವ್ಯಕ್ತಪಡಿಸಿದೆ. ಈ ಸಂಬಂಧ ಇರಾನ್‌ನ ಹಿರಿಯ ರಾಜತಾಂತ್ರಿಕ ಅಧಿಕಾರಿಗಳಿಗೆ ಸಮನ್ಸ್ ಜಾರಿ ಮಾಡಿದೆ.

ಇರಾನ್‌ನ ಉಪ ರಾಯಭಾರಿ ಮೊಹಮ್ಮದ್ ಜವಾದ್ ಹೊಸೇನಿ ಸೇರಿದಂತೆ ಹಿರಿಯ ರಾಜತಾಂತ್ರಿಕರನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ ಕರೆಸಲಾಗಿದ್ದು, ಇತ್ತೀಚಿನ ಸಮುದ್ರ ದಾಳಿಯ ಕುರಿತು ಭಾರತದ ಕಳವಳವನ್ನು ವ್ಯಕ್ತಪಡಿಸಲಾಗಿದೆ. ಮಂಗಳವಾರ ನಡೆದ ಉನ್ನತ ಮಟ್ಟದ ಸಭೆಯ ಬಳಿಕ ಇರಾನ್ ರಾಜತಾಂತ್ರಿಕ ಅಧಿಕಾರಿಗಳು ನವದೆಹಲಿಯಲ್ಲಿರುವ ವಿದೇಶಾಂಗ ಸಚಿವಾಲಯದ ಕಚೇರಿಯಿಂದ ಹೊರಬರುತ್ತಿರುವುದು ಕಂಡುಬಂದಿತು.

ಯುಎಇ ರಕ್ಷಣಾ ಸಚಿವಾಲಯದ ಅಧಿಕೃತ ಹೇಳಿಕೆಯ ಪ್ರಕಾರ, ಹಾರ್ಮುಜ್ ಜಲಸಂಧಿಯ ದಕ್ಷಿಣ ಭಾಗದಲ್ಲಿ ಒಮಾನ್‌ನ ಪ್ರಾದೇಶಿಕ ಸಮುದ್ರ ವ್ಯಾಪ್ತಿಯಲ್ಲಿ ಸಂಚರಿಸುತ್ತಿದ್ದ ಯುಎಇ ಧ್ವಜ ಹೊಂದಿದ್ದ 'ಮೊಂಬಾಸಾ' ತೈಲ ಟ್ಯಾಂಕರ್ ಹಾಗೂ 'ಬಹಿಯಾ' ಎಲ್‌ಎನ್ಜಿ ಸಾಗಣೆ ಹಡಗುಗಳ ಮೇಲೆ ಇರಾನ್ ಕ್ರೂಸ್ ಕ್ಷಿಪಣಿಗಳಿಂದ ದಾಳಿ ನಡೆಸಲಾಗಿದೆ.

ಈ ದಾಳಿಯಲ್ಲಿ ಮೊಂಬಾಸಾ ಹಡಗಿನಲ್ಲಿದ್ದ ಓರ್ವ ಭಾರತೀಯ ಪ್ರಜೆ ಮೃತಪಟ್ಟಿದ್ದು, ಎಂಟು ನಾವಿಕರು ಗಾಯಗೊಂಡಿದ್ದಾರೆ. ಗಾಯಾಳುಗಳಲ್ಲಿ ಆರು ಮಂದಿ ಭಾರತೀಯರು ಹಾಗೂ ಇಬ್ಬರು ಉಕ್ರೇನ್ ಪ್ರಜೆಗಳಾಗಿದ್ದಾರೆ. ಇವರಲ್ಲಿ ನಾಲ್ವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗುತ್ತಿದೆ.

ಕ್ಷಿಪಣಿ ದಾಳಿಯಿಂದ ಎರಡೂ ವಾಣಿಜ್ಯ ಹಡಗುಗಳಲ್ಲಿ ಭಾರೀ ಬೆಂಕಿ ಕಾಣಿಸಿಕೊಂಡಿದ್ದು, ತುರ್ತು ರಕ್ಷಣಾ ತಂಡಗಳ ಕಾರ್ಯಾಚರಣೆಯಿಂದ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ. ಆದರೆ, ಹಡಗುಗಳಿಗೆ ಭಾರಿ ಪ್ರಮಾಣದ ಹಾನಿಯಾಗಿದೆ. ಈ ದಾಳಿಯನ್ನು ಯುಎಇ ತೀವ್ರವಾಗಿ ಖಂಡಿಸಿದ್ದು, ಇದನ್ನು "ಅಂತರರಾಷ್ಟ್ರೀಯ ಕಾನೂನಿನ ಗಂಭೀರ ಉಲ್ಲಂಘನೆ" ಎಂದು ಬಣ್ಣಿಸಿದೆ.

# ನೇಪಾಳ ಪಿಎಂ ಬಾಲೇನ್ ಶಾ ವಿರುದ್ಧ ಭುಗಿಲೆದ್ದ ಆಕ್ರೋಶ

**ಕಠ್ಮಂಡು, ಜು 14:** ಕೆಲವು ತಿಂಗಳ ಹಿಂದಷ್ಟೇ ಭಾರಿ ಬಹುಮತದೊಂದಿಗೆ ಆಯ್ಕೆಯಾದ ಪ್ರಧಾನಿ ಬಾಲೇಂದ್ರ (ಬಾಲೇನ್) ಶಾ ನೇತೃತ್ವದ ನೇಪಾಳದ ಕಠ್ಮಂಡು ಮೆಟ್ರೋಪಾಲಿಟನ್ ಆಡಳಿತದ ವಿರುದ್ಧ ಅಲ್ಲಿನ ಯುವಜನತೆ, ಪ್ರಮುಖವಾಗಿ ಜೆನ್–ಝೀ ಯುವಕರು ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ. 25 ವರ್ಷದ ಯುವಕನೊಬ್ಬ ಆತ್ಮಹತ್ಯೆ ಮಾಡಿಕೊಂಡ ಘಟನೆಯು ಸರ್ಕಾರ ಮತ್ತು ಸ್ಥಳೀಯ ಆಡಳಿತದ ವಿರುದ್ಧದ ಸಾರ್ವಜನಿಕ ಆಕ್ರೋಶವನ್ನು ಮತ್ತಷ್ಟು ಹೆಚ್ಚಿಸಿದೆ. ನೇಪಾಳದ ಕಠ್ಮಂಡು ಬೀದಿಯಲ್ಲಿ ಗ್ರಾಹಕರಿಗಾಗಿ ಕಾಯುತ್ತಿದ್ದ ಗಣೇಶ್ ನೇಪಾಳಿ ಎಂಬ ರೈಡ್–ಶೇರಿಂಗ್ ಚಾಲಕನ ಬೈಕಿಗೆ ಕಠ್ಮಂಡು ನಗರ ಪಾಲಿಕೆಯ ಪೊಲೀಸರು ಏಕಾಏಕಿ ವೀಲ್–ಲಾಕ್ (ಚಕ್ರಕ್ಕೆ ಬೀಗ) ಹಾಕಿದರು. ಈ ಅನಿರೀಕ್ಷಿತ ಕ್ರಮದಿಂದ ನೊಂದ ಗಣೇಶ್, ಪ್ರತಿಭಟನೆಯ ಸಂಕೇತವಾಗಿ ತನ್ನ ಮೈಮೇಲೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡರು. ತೀವ್ರವಾಗಿ ಗಾಯಗೊಂಡಿದ್ದ ಅವರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟರು. ಈ ದುರಂತವು ಜನಸಾಮಾನ್ಯರು ರೊಚ್ಚಿಗೇಳುವಂತೆ ಮಾಡಿದೆ. ಕಠ್ಮಂಡುವಿನ ಸಿಂಗ್ದರ್ಬಾರ್ ಸಚಿವಾಲಯದ ಹೊರಗೆ ನೂರಾರು ಜನರು ಜಮಾಯಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಡವರ ಮೇಲಿನ ದೌರ್ಜನ್ಯ ನಿಲ್ಲಿಸಿ, ಮಾನವ ಹಕ್ಕುಗಳನ್ನು ಗೌರವಿಸಿ ಎಂಬ ಫಲಕಗಳನ್ನು ಹಿಡಿದು ಯುವಕರು ಪ್ರತಿಭಟಿಸಿದ್ದಾರೆ. ಅಕ್ರಮ ಬಂಧನಗಳನ್ನು ತಡೆಯಬೇಕು ಮತ್ತು ಅತಿಕ್ರಮಣ ತೆರವು ಹೆಸರಿನಲ್ಲಿ ಬೀದಿಪಾಲಾಗುತ್ತಿರುವ ಬಡವರಿಗೆ ಆಶ್ರಯ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.




2022ರಲ್ಲಿ ಬಾಲೇಂದ್ರ ಶಾ ಮೇಯರ್ ಆಗಿ ಆಯ್ಕೆಯಾದ ನಂತರ, ಕಠ್ಮಂಡು ಮೆಟ್ರೋಪಾಲಿಟನ್ ಪೊಲೀಸರ ವರ್ತನೆ ಅತ್ಯಂತ ಆಕ್ರಮಣಕಾರಿಯಾಗಿದೆ ಎಂದು ವರದಿಯಾಗಿದೆ.

ಪಾದಾಚಾರಿ ಮಾರ್ಗಗಳು ಮತ್ತು ಅಸಂಘಟಿತ ಬೀದಿ ಬದಿ ವ್ಯಾಪಾರಗಳನ್ನು ತೆರವುಗೊಳಿಸುವ ನೆಪದಲ್ಲಿ ಪಾಲಿಕೆ ಕೈಗೊಂಡ ಕ್ರಮಗಳು ಸಾರ್ವಜನಿಕರಲ್ಲಿ ಭೀತಿ ಹುಟ್ಟುಹಾಕಿವೆ. ನದಿ ತೀರದ ಬಡವರ ವಸತಿಗಳನ್ನು ತೆರವುಗೊಳಿಸುವ ಪಾಲಿಕೆಯ ಕ್ರಮಗಳು ಕೂಡ ಹಲವು ಬಾರಿ ಹಿಂಸಾತ್ಮಕ ತಿರುವು ಪಡೆದಿವೆ ಎಂದು ಮೇಲಿಂದ ಮೇಲೆ ವರದಿಗಳು ಬಿತ್ತರವಾಗಿವೆ. ಪಾಲಿಕೆ ಪೊಲೀಸರ ಈ ಕ್ರಮಗಳು ಸಾಂವಿಧಾನಿಕವಾಗಿ ಕಾನೂನು ಬಾಹಿರ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ನಗರ ಪಾಲಿಕೆಯ ಪೊಲೀಸರು ದೈಹಿಕ ಬಲಪ್ರಯೋಗ ಅಥವಾ ಗಲಭೆ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಅಧಿಕಾರ ಹೊಂದಿಲ್ಲ. ಅವರು ಕೇವಲ ಆಡಳಿತಾತ್ಮಕ ಕಾರ್ಯಗಳಿಗೆ ನೆರವಾಗುವ ಒಂದು ಸೌಲಭ್ಯ ಒದಗಿಸುವ ಸಂಸ್ಥೆಯಷ್ಟೇ? ಎಂದು ಹಿರಿಯ ವಕೀಲ ರಾಜು ಚಪಗೈನ್ ಹೇಳಿದ್ದಾರೆ.

ನೇಪಾಳದ ಸಂವಿಧಾನ ಮತ್ತು ಕಠ್ಮಂಡು ಮೆಟ್ರೋಪಾಲಿಟನ್ ಸಿಟಿ ಮುನ್ಸಿಪಲ್ ಪೊಲೀಸ್ ಆಕ್ಟ್ 2023 ಪ್ರಕಾರ, ಪಾಲಿಕೆ ಪೊಲೀಸರಿಗೆ ಲಾಠಿ ಚಾರ್ಜ್ ಮಾಡುವ ಅಥವಾ ಸಾರ್ವಜನಿಕರನ್ನು ಬಂಧಿಸುವ ಅಧಿಕಾರವಿಲ್ಲ. ಅವರು ಪಾಲಿಕೆಯ ಆಸ್ತಿ ರಕ್ಷಣೆ, ಉದ್ಯಾನವನಗಳ ರಕ್ಷಣೆ ಮತ್ತು ನೈರ್ಮಲ್ಯ ನಿರ್ವಹಣೆಗೆ ಮಾತ್ರ ಸೀಮಿತರಾಗಿರಬೇಕು. ಯಾವುದೇ ಪರಿಸ್ಥಿತಿ ನಿಯಂತ್ರಣ ಮೀರಿ ಹೋದರೆ, ಸ್ಥಳೀಯ ಆಡಳಿತವು ನೇಪಾಳದ ಫೆಡರಲ್ ಪೊಲೀಸರ ಸಹಾಯ ಪಡೆಯಬೇಕೇ ಹೊರತು, ಸ್ವಂತವಾಗಿ ಬಲಪ್ರಯೋಗಿಸುವಂತಿಲ್ಲ ಎಂದು ನಿವೃತ್ತ ಡಿಐಜಿ ಪೂರ್ಣಚಂದ್ರ ಜೋಷಿ ಸ್ಪಷ್ಟಪಡಿಸಿದ್ದಾರೆ.


ಒಂದು ಕಾಲದಲ್ಲಿ ಶಾ ಅವರು ಸಾಮಾಜಿಕ ಜಾಲತಾಣಗಳನ್ನು ಬಳಸಿ ಜನರ ಬೆಂಬಲ ಗಳಿಸಿದ್ದರು. ಈಗ ಅದೇ ಡಿಜಿಟಲ್ ಪೀಳಿಗೆ (ಜೆನ್–ಝೀ), ಅವರ ಅಕ್ರಮಗಳ ವಿಡಿಯೋಗಳನ್ನು ವೈರಲ್ ಮಾಡಿ, ಡಿಜಿಟಲ್ ವೇದಿಕೆಯನ್ನು ಅವರ ವಿರುದ್ಧವೇ ಶಸ್ತ್ರವನ್ನಾಗಿಸಿಕೊಂಡಿದೆ. ಹ್ಯಾಶ್‌ಟ್ಯಾಗ್ ಮೂಲಕ ಗೆದ್ದವರು ಈಗ ಅದೇ ಹ್ಯಾಶ್‌ಟ್ಯಾಗ್ ನಡಿ ಟ್ರೋಲ್ ಆಗುತ್ತಿದ್ದಾರೆ.

ಪ್ರಧಾನಿ ಶಾ ಅವರದ್ದು ಹಾರ್ಡ್‌ವೇರ್ ಅಭಿವೃದ್ಧಿ (ರಸ್ತೆ, ಅತಿಕ್ರಮಣ ತೆರವು). ಆದರೆ ಜನರಿಗೆ ಬೇಕಾಗಿದ್ದು ಸಾಫ್ಟ್‌ವೇರ್ (ಮಾನವೀಯತೆ ಮತ್ತು ಆಡಳಿತದಲ್ಲಿ ಸಂವೇದನೆ). ಕೇವಲ ಕಟ್ಟಡಗಳನ್ನು ಅಥವಾ ಬೀದಿಗಳನ್ನು ಅಂದಗೊಳಿಸಿದರೆ ಸಾಲದು, ಅಲ್ಲಿ ಬದುಕುವ ಜನರ ಬದುಕನ್ನೂ ಅಂದಗೊಳಿಸಬೇಕು ಎಂಬುದನ್ನು ಶಾ ಮರೆತಂತಿದೆ ಜನರ ಅಭಿಪ್ರಾಯ. ನಗರದ ಪಾಲಿಕೆ ದೃಷ್ಟಿಯಲ್ಲಿ ಬಡವರ ಅಸ್ತಿತ್ವವೇ ಒಂದು ಅತಿಕ್ರಮಣ ಎನ್ನುವಂತಾಗಿದೆ. ಗದ್ದುಗೆ ಏರಿದ ತಕ್ಷಣ, ಆಡಳಿತಗಾರರು ಜನರ ಸಮಸ್ಯೆಗಳನ್ನು ಕಸ ಎಂದು ಪರಿಗಣಿಸಲು ಶುರು ಮಾಡುತ್ತಾರೆ ಎಂಬುದಕ್ಕೆ ಇದು ಉತ್ತಮ ನಿದರ್ಶನ ಎನ್ನುತ್ತಿದ್ದಾರೆ ಯುವಕರು. ಬಾಲೇನ್ ಶಾ ಅವರು ಅಧಿಕಾರಕ್ಕೆ ಬರುವಾಗ ನಾನು ವ್ಯವಸ್ಥೆ ಬದಲಾಯಿಸಲು ಬಂದಿದ್ದೇನೆ ಎಂದಿದ್ದರು. ಆದರೆ, ನೀವು ಕೂಡ ವ್ಯವಸ್ಥೆ ಆಗಿಬಿಟ್ಟಿದ್ದೀರಿ, ಅದೂ ಕೂಡ ವ್ಯವಸ್ಥೆಯ ಭಾಗವೇ ಆಗಿರುವ ಅಮಾನವೀಯ ವ್ಯವಸ್ಥೆ ಎಂದು ಹರಿಹಾಯುತ್ತಿದ್ದಾರೆ.

ಯುವ ನಾಯಕರಾಗಿ ಬಂದ ಶಾ, ಪ್ರಧಾನಿ ಎನ್ನುವುದಕ್ಕಿಂತ ಮುನ್ಸಿಪಲ್ ಪೊಲೀಸ್ ಕಮಾಂಡರ್‌ನಂತೆ ಗುರುತಿಸಿಕೊಳ್ಳುತ್ತಿದ್ದಾರೆ. ಇವರಂತಹ ಯೂತ್ ಐಕಾನ್ ಒಬ್ಬರು, ತಮ್ಮಂತ ಯುವಕರ ಬೆಂಬಲದ ಮೇಲೆ ಅಧಿಕಾರ ಹಿಡಿದು, ಈಗ ಆ ಅಧಿಕಾರದ ಸುರುಳಿಯಡಿ ಸಿಲುಕಿ ನಲುಗುತ್ತಿರುವುದು ವಿಪರ್ಯಾಸ.

# ಬಾಹ್ಯಾಕಾಶ ಯಾತ್ರೆ ಆರಂಭಿಸಿದ ಭಾರತೀಯ ಅನಿಲ್ ಮೆನನ್





**ಕಝಾಕಿಸ್ತಾನ್, ಜು.14:** ಭಾರತೀಯ ಮೂಲದ ಗಗನಯಾತ್ರಿ ಅನಿಲ್ ಮೆನನ್ ತಮ್ಮ ಮೊದಲ ಬಾಹ್ಯಾಕಾಶ ಯಾತ್ರೆಯನ್ನು ಕೈಗೊಂಡಿದ್ದಾರೆ. ರಷ್ಯಾದ 'ಸೋಯುಜ್ ಎಂಎಸ್–29' ರಾಕೆಟ್ ಮೂಲಕ ಬಾಹ್ಯಾಕಾಶ ಯಾನ ಆರಂಭಿಸಿದ್ದಾರೆ.

ರಷ್ಯಾದ ಗಗನಯಾತ್ರಿಗಳಾದ ಪಯೋಟರ್ ಡುಬ್ರೊವ್ ಮತ್ತು ಅನ್ನಾ ಕಿಕಿನಾ ಅವರೊಂದಿಗೆ ಕಝಾಕಿಸ್ತಾನ್ನ ಬೈಕೊನೂರ್ ಕಾಸ್ಮೊಡ್ರೋಮ್ನಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣ ಬೆಳೆಸಿದ್ದಾರೆ. ಪಯೋಟರ್ ಡುಬ್ರೊವ್ ಮತ್ತು ಅನ್ನಾ ಕಿಕಿನಾ ಅವರಿಗೆ ಇದು ಎರಡನೇ ಅಭಿಯಾನ ಆಗಿದೆ. ಈ ಮೂವರ ತಂಡ ಸುಮಾರು 8 ತಿಂಗಳ ಕಾಲ ಬಾಹ್ಯಾಕಾಶ ನಿಲ್ದಾಣದಲ್ಲಿ ವಾಸ್ತವ್ಯ ಹೂಡಲಿದ್ದು, ಅಲ್ಲಿ ಅವರು ಹಲವು ಪ್ರಮುಖ ಸಂಶೋಧನೆಗಳಲ್ಲಿ ತೊಡಗಿಸಿಕೊಳ್ಳಲಿದ್ದು, 2027 ರ ಆರಂಭದಲ್ಲಿ ಭೂಮಿಗೆ ಮರಳಲಿದ್ದಾರೆ. ಇಂದು ಭಾರತೀಯ ಕಾಲಮಾನ ರಾತ್ರಿ 8:17ಕ್ಕೆ ಸೂಯೆಜ್ ರಾಕೆಟ್ ಉಡಾವಣೆಯಾಗಿದೆ. ಕೇವಲ ಮೂರು ಗಂಟೆಗಳ ಪ್ರಯಾಣದ ನಂತರ ಅಂದರೆ ರಾತ್ರಿ ಸುಮಾರು 11:26ಕ್ಕೆ ಇವರು ಬಾಹ್ಯಾಕಾಶ ನಿಲ್ದಾಣ ತಲುಪಲಿದ್ದಾರೆ. ಬಾಹ್ಯಾಕಾಶದಲ್ಲಿ ರಕ್ತ ಪರಿಚಲನೆ ಹೇಗೆ ಬದಲಾಗುತ್ತದೆ ಮತ್ತು ಅಂಗಾಂಶಗಳ ದುರಸ್ತಿಗೆ ಸಂಬಂಧಿಸಿದ ಬಯೋ ಪ್ರಿಂಟಿಂಗ್ ತಂತ್ರಜ್ಞಾನದ ಬಗ್ಗೆಯೂ ಅವರು ಅಧ್ಯಯನ ನಡೆಸಲಿದ್ದಾರೆ.

# ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಬುಮ್ರಾ ತ್ರಿವಳಿ ಸಾಧನೆ

**ಎಡ್ಜ್‌ಬಾಸ್ಟನ್, ಜು.14:** ಭಾರತದ ವೇಗದ ಬೌಲರ್ ಜಸ್ಪ್ರೀತ್ ಬುಮ್ರಾ ಎಡ್ಜ್‌ಬಾಸ್ಟನ್‌ನಲ್ಲಿ ಇಂಗ್ಲೆಂಡ್ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿ ಇತಿಹಾಸ ನಿರ್ಮಿಸಿದರು. ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಐತಿಹಾಸಿಕ ತ್ರಿವಳಿ ಸಾಧನೆ ಮಾಡಿದ ಮೊದಲ ಭಾರತೀಯ ಕ್ರಿಕೆಟಿಗ ಎನಿಸಿಕೊಂಡಿದ್ದಾರೆ. ಬುಮ್ರಾ ಈಗ ಟೆಸ್ಟ್‌ನಲ್ಲಿ 200+ ವಿಕೆಟ್‌ಗಳು, ಏಕದಿನಗಳಲ್ಲಿ 150+ ವಿಕೆಟ್‌ಗಳು ಮತ್ತು ಟಿ20 ಅಂತರರಾಷ್ಟ್ರೀಯ ಪಂದ್ಯಗಳಲ್ಲಿ 100+ ವಿಕೆಟ್‌ಗಳೊಂದಿಗೆ ಆಯ್ದ ಬೌಲರ್‌ಗಳ ಗುಂಪಿಗೆ ಸೇರಿದ್ದಾರೆ.ಈ ಪಂದ್ಯದ ಮೊದಲು, ಬುಮ್ರಾ ಟಿ20 ಅಂತರರಾಷ್ಟ್ರೀಯ ಪಂದ್ಯಗಳಲ್ಲಿ 121 ಮತ್ತು ಟೆಸ್ಟ್ ಕ್ರಿಕೆಟ್‌ನಲ್ಲಿ 234 ವಿಕೆಟ್‌ಗಳನ್ನು ಹೊಂದಿದ್ದರು. ಇಂಗ್ಲೆಂಡ್ ಇನ್ನಿಂಗ್ಸ್‌ನ 14 ನೇ ಓವರ್‌ನಲ್ಲಿ ಆತಿಥೇಯ ತಂಡದ ನಾಯಕ ಹ್ಯಾರಿ ಬ್ರೂಕ್ ಅವರನ್ನು ಔಟ್ ಮಾಡುವ ಮೂಲಕ ಏಕದಿನ ಪಂದ್ಯಗಳಲ್ಲಿ 150 ವಿಕೆಟ್‌ಗಳ ಮೈಲಿಗಲ್ಲನ್ನು ತಲುಪಿದರು.




ವಿಶ್ವ ಕ್ರಿಕೆಟ್‌ನ ಈ ವಿಶೇಷ ಗಣ್ಯ ಕ್ಲಬ್ ಸೇರಿದ ಬೌಲರ್‌ಗಳ ಪೈಕಿ ಜಸ್ಪ್ರೀತ್ ಬುಮ್ರಾ ಮೂರನೇ ಬೌಲರ್ ಎನಿಸಿಕೊಂಡರು. ಈ ಸಾಧನೆಯನ್ನು ಇತರ ಇಬ್ಬರು ಆಟಗಾರರೆಂದರೆ, ಟಿಮ್ ಸೌಥಿ (ನ್ಯೂಜಿಲೆಂಡ್): 164 ಟಿ20ಐ ವಿಕೆಟ್‌ಗಳು, 221 ಏಕದಿನ ವಿಕೆಟ್‌ಗಳು ಮತ್ತು 391 ಟೆಸ್ಟ್ ವಿಕೆಟ್‌ಗಳು. ಹಾಗೂ ಶಕೀಬ್ ಅಲ್ ಹಸನ್ (ಬಾಂಗ್ಲಾದೇಶ): 149 ಟಿ20ಐ ವಿಕೆಟ್‌ಗಳು, 317 ಏಕದಿನ ವಿಕೆಟ್‌ಗಳು ಮತ್ತು 246 ಟೆಸ್ಟ್ ವಿಕೆಟ್‌ಗಳು. ಈಗ ಮೂರನೆಯವರಾಗಿ ಜಸ್ಪ್ರೀತ್ ಬುಮ್ರಾ (ಭಾರತ): 121 ಟಿ20ಐ ವಿಕೆಟ್‌ಗಳು, 150 ಏಕದಿನ ವಿಕೆಟ್‌ಗಳು ಮತ್ತು 234 ಟೆಸ್ಟ್ ವಿಕೆಟ್‌ಗಳು.

**ದೀರ್ಘ ವಿರಾಮದ ನಂತರ ಅದ್ಭುತ ಪುನರಾಗಮನ**

2023ರ ಆಸ್ಟ್ರೇಲಿಯಾ ವಿರುದ್ಧ ಅಹಮದಾಬಾದ್‌ನಲ್ಲಿ ನಡೆದ ಏಕದಿನ ವಿಶ್ವಕಪ್ ಫೈನಲ್ ನಂತರ ಬುಮ್ರಾ ಭಾರತ ಪರ ಒಂದೇ ಒಂದು ಏಕದಿನ ಪಂದ್ಯವನ್ನು ಆಡಿಲ್ಲ. ಈ ಸ್ವರೂಪದಲ್ಲಿ ಭಾರತೀಯ ತಂಡ ಅವರನ್ನು ತಪ್ಪಿಸಿಕೊಂಡಿತು. ಆದರೆ ಮುಂಬರುವ 2027ರ ಏಕದಿನ ವಿಶ್ವಕಪ್ ಅನ್ನು ಗಮನದಲ್ಲಿಟ್ಟುಕೊಂಡು ಬಿಸಿಸಿಐ ಅವರ ಕೆಲಸದ ಹೊರೆ ನಿರ್ವಹಣೆಯ ಬಗ್ಗೆ ಅತ್ಯಂತ ಜಾಗರೂಕವಾಗಿತ್ತು. ಈಗ, ಏಕದಿನ ವಿಶ್ವಕಪ್‌ಗೆ ಕೇವಲ 15 ತಿಂಗಳುಗಳು ಬಾಕಿ ಇರುವಾಗ, ಬುಮ್ರಾ ಅವರನ್ನು ಏಕದಿನ ತಂಡಕ್ಕೆ ಮರಳಿ ಕರೆತರಲಾಗಿದೆ. ಎಡ್ಜ್‌ಬಾಸ್ಟನ್‌ನಲ್ಲಿ ಅವರ ಮೊದಲ ಅವಧಿಯು ಅವರು ಸ್ವರೂಪದಿಂದ ದೀರ್ಘಕಾಲ ಅನುಪಸ್ಥಿತಿಯಲ್ಲಿದ್ದರೂ ವಿಶ್ವದ ಅತ್ಯಂತ ಅಪಾಯಕಾರಿ ಬೌಲರ್‌ಗಳಲ್ಲಿ ಒಬ್ಬರಾಗಿ ಏಕೆ ಉಳಿದಿದ್ದಾರೆ ಎಂಬುದನ್ನು ಸಾಬೀತುಪಡಿಸಿತು.

# ಪಾಸ್‌ಪೋರ್ಟ್ ಇಲ್ಲದೆ ನೇಪಾಳ ಗಡಿಯಲ್ಲಿ ಸಿಕ್ಕಿಬಿದ್ದ ಅಮೆರಿಕ ಪ್ರಜೆ

**ನವದೆಹಲಿ, ಜು.14:** ಸೂಕ್ತ ಪ್ರಯಾಣ ದಾಖಲೆಗಳಿಲ್ಲದೆ ಭಾರತದಿಂದ ನೇಪಾಳಕ್ಕೆ ನುಸುಳಲು ಯತ್ನಿಸುತ್ತಿದ್ದ 36 ವರ್ಷದ ಅಮೆರಿಕ ಪ್ರಜೆಯೊಬ್ಬನನ್ನು ಉತ್ತರ ಪ್ರದೇಶದ ಮಹಾರಾಜ್‌ಗಂಜ್ ಜಿಲ್ಲೆಯಲ್ಲಿ ಸಶಸ್ತ್ರ ಸೀಮಾ ಬಲದ (ಎಸ್‌ಎಸ್ಬಿ) ಯೋಧರು ಬಂಧಿಸಿದ್ದಾರೆ. ಬಂಧಿತನನ್ನು ಕ್ಯಾಲಿಫೋರ್ನಿಯಾ ನಿವಾಸಿ ಜೋರ್ಡನ್ ಬ್ರೌನ್ ಎಂದು ಗುರುತಿಸಲಾಗಿದ್ದು, ವಿಚಾರಣೆ ವೇಳೆ ಆತ ತಾನು ಅಮೆರಿಕ ನೌಕಾಪಡೆಯ (ಯುಎಸ್ ನೇವಿ) ಮಾಜಿ ಅಧಿಕಾರಿ ಎಂದು ಹೇಳಿಕೊಂಡಿದ್ದಾನೆ.

ಭಾನುವಾರ ಸೋನೌಲಿ ಪೊಲೀಸ್ ಠಾಣಾ ವ್ಯಾಪ್ತಿಯ ಮೈನಿಹ್ವಾ ಪ್ರದೇಶದ ಗಡಿ ಪಿಲ್ಲರ್ ಸಂಖ್ಯೆ 516ರ ಬಳಿ ಎಸ್‌ಎಸ್ಬಿಯ 22ನೇ ಬೆಟಾಲಿಯನ್ ಯೋಧರು ಗಸ್ತು ತಿರುಗುತ್ತಿದ್ದಾಗ ಈತ ಸಿಕ್ಕಿಬಿದ್ದಿದ್ದಾನೆ. ಗಡಿಯಲ್ಲಿ ನಿಲ್ಲುವಂತೆ ಸೂಚಿಸಿದಾಗ ಆರೋಪಿ ಪರಾರಿಯಾಗಲು ಯತ್ನಿಸಿದ್ದಾನೆ. ಆದರೆ, ಭದ್ರತಾ ಪಡೆಗಳು ಆತನನ್ನು ಬೆನ್ನಟ್ಟಿ ಹಿಡಿಯುವಲ್ಲಿ ಯಶಸ್ವಿಯಾದವು. ಈ ವೇಳೆ ಆತನ ಬಳಿ ಯಾವುದೇ ಪಾಸ್ಪೋರ್ಟ್ ಅಥವಾ ವೀಸಾ ಇರಲಿಲ್ಲ ಎಂದು ಮಹಾರಾಜ್‌ಗಂಜ್ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ್ ತಿಳಿಸಿದ್ದಾರೆ.

**7 ತಿಂಗಳಿಂದ ಭಾರತದಲ್ಲಿ ಅಕ್ರಮ ವಾಸ್ತವ್ಯ: ವಿಚಾರಣೆ**

ವೇಳೆ ಆರೋಪಿಯು ತನ್ನ ಪ್ರಯಾಣದ ಬಗ್ಗೆ ಅಚ್ಚರಿಯ ಮಾಹಿತಿ ನೀಡಿದ್ದಾನೆ. ಪ್ರವಾಸಿ ವೀಸಾದ ಮೇಲೆ ಥೈಲ್ಯಾಂಡ್‌ಗೆ ತೆರಳಿದ್ದಾಗ ಅಲ್ಲಿ ತನ್ನ ಪಾಸ್‌ಪೋರ್ಟ್ ಕಳೆದುಹೋಗಿತ್ತು. ಬಳಿಕ ಸಮುದ್ರ ಮಾರ್ಗದ ಮೂಲಕ ಶ್ರೀಲಂಕಾಗೆ ತಲುಪಿ, ಅಲ್ಲಿಂದ 2025ರ ನವೆಂಬರ್ 2ರಂದು ಸಮುದ್ರ ಮಾರ್ಗವಾಗಿಯೇ ಭಾರತದ ಗೋವಾಕ್ಕೆ ಬಂದಿದ್ದಾಗಿ ಆತ ತಿಳಿಸಿದ್ದಾನೆ. ಅಂದಿನಿಂದ ಆತ ಗೋವಾದಲ್ಲೇ ನೆಲೆಸಿದ್ದ. ಪಾಸ್ಪೋರ್ಟ್ ಇಲ್ಲದೆ ಆತ ಸುಮಾರು ಏಳು ತಿಂಗಳ ಕಾಲ ಭಾರತದಲ್ಲಿ ಅಕ್ರಮವಾಗಿ ವಾಸ್ತವ್ಯ ಹೂಡಿದ್ದ ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಗೋವಾದಿಂದ ಬೆಂಗಳೂರಿಗೆ ಬಂದಿದ್ದ ಬ್ರೌನ್, ಅಲ್ಲಿಂದ ನೇಪಾಳ ಪ್ರವೇಶಿಸುವ ಉದ್ದೇಶದಿಂದ ಸೋನೌಲಿ ಗಡಿಗೆ ಬಂದಿದ್ದ ಎಂದು ಅಧಿಕಾರಿಗಳು ವಿವರಿಸಿದ್ದಾರೆ. ತಪಾಸಣೆ ವೇಳೆ ಆತನ ಬಳಿ 31,460 ನಗದು ಹಾಗೂ ಎರಡು ಮೊಬೈಲ್ ಫೋನ್‌ಗಳು ಪತ್ತೆಯಾಗಿವೆ. ಆದರೆ, ಆತ ಯಾವುದೇ ಅಧಿಕೃತ ಪ್ರಯಾಣ ದಾಖಲೆಗಳನ್ನು ಒದಗಿಸುವಲ್ಲಿ ವಿಫಲನಾಗಿದ್ದಾನೆ.

ಎಸ್‌ಎಸ್‌ಬಿ ಮತ್ತು ಇತರ ಭದ್ರತಾ ಸಂಸ್ಥೆಗಳು ಆರೋಪಿಯನ್ನು ವಿಚಾರಣೆ ನಡೆಸಿದ ಬಳಿಕ, ಮುಂದಿನ ಕಾನೂನು ಕ್ರಮಕ್ಕಾಗಿ ಸೋನೌಲಿಯ ಸ್ಥಳೀಯ ಪೊಲೀಸರಿಗೆ ಹಸ್ತಾಂತರಿಸಿವೆ ಎಂದು ಎಸ್‌ಎಸ್ಬಿ ಸಹಾಯಕ ಕಮಾಂಡೆಂಟ್ ಪ್ರಿಯಾ ಯಾದವ್ ತಿಳಿಸಿದ್ದಾರೆ. ಆರೋಪಿಯ ಹೇಳಿಕೆಗಳ ಸತ್ಯಾಸತ್ಯತೆಯನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಸೂಕ್ತ ದಾಖಲೆಗಳಿಲ್ಲದೆ ಭಾರತದ ಗಡಿ ಪ್ರವೇಶಿಸಿದ ಆರೋಪದ ಮೇಲೆ ವಲಸೆ ಮತ್ತು ವಿದೇಶಿಯರ ಕಾಯ್ದೆಯ ಸೆಕ್ಷನ್ 21 ಮತ್ತು 23 ರ ಅಡಿಯಲ್ಲಿ ಸೋನೌಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಇದೇ ವೇಳೆ ವರದಿಯಾಗಿರುವ ಮತ್ತೊಂದು ಪ್ರತ್ಯೇಕ ಪ್ರಕರಣದಲ್ಲಿ, ಮ್ಯಾನ್ಮಾರ್‌ನಲ್ಲಿ ಜನಾಂಗೀಯ ಸಶಸ್ತ್ರ ಗುಂಪುಗಳಿಗೆ ಡ್ರೋನ್ ಯುದ್ಧ ಹಾಗೂ ಸೇನಾ ತರಬೇತಿ ನೀಡಿದ ಆರೋಪದ ಮೇಲೆ ಐವರು ಉಕ್ರೇನ್ ಪ್ರಜೆಗಳು ಮತ್ತು ಓರ್ವ ಅಮೆರಿಕನ್ ಪ್ರಜೆಯನ್ನು ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ಬಂಧಿಸಿದೆ.

ಪ್ರವಾಸಿ ವೀಸಾದಡಿ ಭಾರತಕ್ಕೆ ಬಂದಿದ್ದ ಇವರು, ಮಿಜೋರಾಂ ಮೂಲಕ ಮ್ಯಾನ್ಮಾರ್ಗೆ ನುಸುಳಿದ್ದರು. ಭಾರತದ ರಾಷ್ಟ್ರೀಯ ಭದ್ರತೆಗೆ ಆತಂಕ ಒಡ್ಡುವಂತಹ ಈ ಕೃತ್ಯದ ಹಿನ್ನೆಲೆಯಲ್ಲಿ ಬಂಧಿತರಾಗಿರುವ ಆರೋಪಿಗಳನ್ನು ಜುಲೈ 3ರಂದು ಪಟಿಯಾಲ ಹೌಸ್ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ ಹಾಗೂ ತನಿಖೆ ಮುಂದುವರಿದಿದೆ.